ಸಂಪುಟ: 05 ಸಂಚಿಕೆ: 110 ಪುಟಗಳು: 08 ಗುರುವಾರ 03 ಜುಲೈ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ದೇಶ ಪ್ರೇಮದ ದಾರಿಯಲ್ಲಿ ಸಾಗೋಣ. ದೇಶವನ್ನು ಇನ್ನಷ್ಟು ಉತ್ತುಂಗದತ್ತ ಕೊಂಡೊಯ್ಯೋಣ...

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## 40 ಶಾಸಕರಿಂದ ಅಭಿಪ್ರಾಯ ಸಂಗ್ರಹದ ಜೊತೆಗೆ ಚರ್ಚೆ

• ಉದಯವಾಹಿನಿ, ಬೆಂಗಳೂರು



ಪಕ್ಷ ಸಂಘಟನೆ ಮತ್ತು ಕ್ಷೇತ್ರದ ಅಭಿವೃದ್ಧಿಗೆ ಸಂಬಂಧಿಸಿದಂತೆ ಮೂರು ದಿನಗಳಿಂದ ಬೆಂಗಳೂರು ಮತ್ತು ಮೈಸೂರು ವಿಭಾಗದ 40 ಶಾಸಕರಿಂದ ಅಭಿಪ್ರಾಯ ಸಂಗ್ರಹಿಸಿದ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಬುಧವಾರ ದೆಹಲಿಗೆ ವಾಪಾಸಾದರು. ಬೆಳಗಾವಿ ವಿಭಾಗದ ಪಕ್ಷದ ಶಾಸಕರಿಂದ ಅಭಿಪ್ರಾಯ ಪಡೆಯಲು ಇದೇ 7ರಂದು ಮತ್ತೆ ರಾಜ್ಯಕ್ಕೆ ಬರಲಿದ್ದಾರೆ.

ಶಾಸಕರ ಭೇಟಿಗೆ ನಿಗದಿಪಡಿಸಿದ್ದ ವೇಳಾಪಟ್ಟಿಯ ಪ್ರಕಾರ 42 ಶಾಸಕರ ಜೊತೆ ಸುರ್ಜೇವಾಲಾ ಅವರ ಚರ್ಚೆ ನಡೆಸಬೇಕಿತ್ತು. ಆದರೆ, ಪಿ.ಎಂ. ನರೇಂದ್ರಸ್ವಾಮಿ ಮತ್ತು ಕಾಂಗ್ರೆಸ್ ಸಹ ಸದಸ್ಯರಾಗಿರುವ ಸರ್ವೋದಯ ಪಕ್ಷದ ದರ್ಶನ್ ಪುಟ್ಟಣ್ಣಯ್ಯ ಅವರು ವಿದೇಶ ಪ್ರವೇಶದಲ್ಲಿರುವುದರಿಂದ ಭೇಟಿ ಸಾಧ್ಯವಾಗಲಿಲ್ಲ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ. ಶಾಸಕರಾದ ಗಣೇಶ್ ಹುಕ್ಕೇರಿ, ನಯನಾ ಮೋಟಮ್ಮ, ಕೆ.ಎಂ. ಶಿವಲಿಂಗೇಗೌಡ, ಜಿ.ಎಚ್. ಶ್ರೀನಿವಾಸ್, ಕೆ.ಎಸ್. ಆನಂದ್, ಎ.ಎಸ್. ಪೊನ್ನಣ್ಣ, ಕದಲೂರು ಉದಯ್ ಮುಂತಾದವರ ಜೊತೆ ಸುರ್ಜೇವಾಲಾ ಅವರು ಬುಧವಾರ ಪ್ರತ್ಯೇಕವಾಗಿ ಚರ್ಚೆ ನಡೆಸಿದರು. ನನ್ನ ಕ್ಷೇತ್ರಕ್ಕೆ ಅನುದಾನದ ಸಮಸ್ಯೆ ಸ್ವಲ್ಪ ಇದೆ. ಗ್ಯಾರಂಟಿಗಳ ಅನುಷ್ಠಾನ ಚೆನ್ನಾಗಿಯೇ ಆಗಿದೆ' ಎಂದು ಅಭಿಪ್ರಾಯ ಹಂಚಿಕೊಂಡ ಶಿವಲಿಂಗೇಗೌಡ, ಶಾಸಕರ ಗೊಂದಲದ ಹೇಳಿಕೆಗಳಿಗೆ ಕಡಿವಾಣ ಹಾಕುವಂತೆ ಮನವಿ ಮಾಡಿದ್ದಾರೆ ಎಂದು ಗೊತ್ತಾಗಿದೆ.

## ಬಿಬಿಎಂಪಿ ಶಾಲೆ: ಗುತ್ತಿಗೆ ಶಿಕ್ಷಕರ ಕಾಯಂಗೆ ಒತ್ತಾಯ

• ಉದಯವಾಹಿನಿ, ಬೆಂಗಳೂರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಶಿಕ್ಷಣ ವಿಭಾಗದಲ್ಲಿ ಖಾಲಿ ಇರುವ 284 ಹುದ್ದೆಗಳಿಗೆ ಹಾಲಿ ಕೆಲಸ ಮಾಡುತ್ತಿರುವ ಗುತ್ತಿಗೆ ಶಿಕ್ಷಕರನ್ನೇ ಕಾಯಂ ಮಾಡಬೇಕು ಎಂದು ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ ಒತ್ತಾಯಿಸಿದೆ. ಬಿಬಿಎಂಪಿ ಶಿಕ್ಷಣ ವಿಭಾಗದಲ್ಲಿ ಮಂಜೂರಾದ 872 ಹುದ್ದೆಗಳಿದ್ದು, 736 ಹುದ್ದೆಗಳು ಖಾಲಿ ಇದ್ದವು. 2020ರ ಸಿಪಿಆರ್ ನಿಯಮದ ಪ್ರಕಾರ ಅಗತ್ಯ ಇರುವ ಹುದ್ದೆಗಳ ಸಂಖ್ಯೆಯನ್ನು 420ಕ್ಕೆ ಸೀಮಿತಗೊಳಿಸಲಾಯಿತು. ಖಾಲಿ ಇರುವ 284 ಹುದ್ದೆಗಳ ಭರ್ತಿಗೆ 2021ರಲ್ಲಿ ವಿಶೇಷ ನಿಯಮ ರಚಿಸಿ, ಸರ್ಕಾರದ ಅನುಮೋದನೆಗೆ ಕಳುಹಿಸಲಾಗಿತ್ತು. ಆದರೆ, ಇದುವರೆಗೂ ಅನುಮೋದನೆ ದೊರೆತಿಲ್ಲ ಎಂದು ಸಂಘದ ಖಜಾಂಚಿ ಎನ್.ಎಸ್. ಸೋಮಶೇಖರ್ ದೂರಿದ್ದಾರೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ನರ್ಸರಿ, ಪ್ರಾಥಮಿಕ, ಪ್ರೌಢಶಾಲೆಗಳಲ್ಲಿ 725 ಗುತ್ತಿಗೆ ಶಿಕ್ಷಕರು ಕೆಲಸ ಮಾಡುತ್ತಿದ್ದಾರೆ. ಖಾಲಿ ಹುದ್ದೆಗಳಿಗೆ ಅವರನ್ನೇ ನೇಮಕ ಮಾಡಿಕೊಳ್ಳಲು ವಿಶೇಷ ನೇಮಕಾತಿ ನಿಯಮ ರೂಪಿಸಬೇಕು. ಹಲವು ವರ್ಷಗಳಿಂದ ಕಡಿಮೆ ಸಂಬಳಕ್ಕೆ ದುಡಿಯುತ್ತಿರುವ ಶಿಕ್ಷಕರಿಗೆ ಸೇವಾ ಭದ್ರತೆ ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ.

# ಐದು ವರ್ಷ ನಾನೇ ರಾಜಾಧಿರಾಜ

### ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ

### ಭೋಗ ನಂದೀಶ್ವರ ದೇವಸ್ಥಾನಕ್ಕೆ ಭೇಟಿ ನೀಡಿದ ಸಿಎಂ, ಸಚಿವ ಸಂಪುಟದ ಸದಸ್ಯರು

### ನಾಯಕತ್ವ ಬದಲಾವಣೆ ಹೈಕಮಾಂಡ್ ನಿರ್ಧಾರ ಎಂದಿದ್ದ ಸಿದ್ದರಾಮಯ್ಯ

## ಸಿದ್ದರಾಮಯ್ಯ ಸಿಎಂ ಇದ್ದಾಗ ಯಾರೂ ಅಪಸ್ವರ ಎತ್ತಬಾರದು

• ಉದಯವಾಹಿನಿ, ಬೆಂಗಳೂರು

ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಸಂಪೂರ್ಣ 5 ವರ್ಷ ನಾನೇ ಸಿಎಂ ಆಗಿರ್ತೇನೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ಐತಿಹಾಸಿಕ ನಂದಿಗಿರಿಧಾಮದಲ್ಲಿ ಸಚಿವ ಸಂಪುಟ ಸಭೆ ನಡೆಯಲ್ಲಿದ್ದು, ಇದಕ್ಕೂ ಮುನ್ನ ಸಿದ್ದರಾಮಯ್ಯ ಮತ್ತು ಸಚಿವ ಸಂಪುಟದ ಸದಸ್ಯರು ಭೋಗ ನಂದೀಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದರು. ದೇವಸ್ಥಾನದ ಮುಂಭಾಗ ಸಚಿವ ಸಂಪುಟ ಸದಸ್ಯರ ಫೋಟೋ ಶೂಟ್ ಸಹ ನಡೆಯಿತು. ಈ ಸಂದರ್ಭದಲ್ಲಿ ಮಾಧ್ಯಮದೊಂದಿಗೆ ಮಾತನಾಡಿದ ಸಿಎಂ, ಸೆಪ್ಟೆಂಬರ್‌ನಲ್ಲಿ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ ಎಂಬ ಬಿಜೆಪಿಗರ ಮಾತುಗಳಿಗೆ ಉತ್ತರಿಸುತ್ತಾ, ಬಿಜೆಪಿಯವರು ಶುದ್ಧ ಸುಳ್ಳು ಹೇಳುತ್ತಾರೆ. ನಾನು ಈಗಾಗಲೇ ಮೈಸೂರಿನಲ್ಲಿ ಹೇಳಿದ್ದೇನೆ. ನಮ್ಮ ಸರ್ಕಾರ ಬಂಡೆಯಂತೆ ದೃಢವಾಗಿ ಇರಲಿದೆ. ನಾವೆಲ್ಲರೂ ಒಗ್ಗಟ್ಟಿನಲ್ಲಿ ಇದ್ದೇವೆ. ನಮ್ಮಲ್ಲಿ ಯಾವುದೇ ಗೊಂದಲಗಳಿಲ್ಲ. ಅವರು ಅಧಿಕಾರದಲ್ಲಿದ್ದಾಗ ರಾಜ್ಯಕ್ಕೆ ಅವರ ಸೇವೆ ಏನೆಂಬುದನ್ನು ಅವರೇ ತಿಳಿಸಲಿ. ಮೊದಲು ಬಿಜೆಪಿಯವರು ಹಗಲು ಕನಸು ಕಾಣುವುದನ್ನು ಬಿಡಲಿ ಎಂದರು.

ರಾಜ್ಯದ ಪ್ರತೀ ಡಿವಿಷನ್‌ಗಳಲ್ಲಿ ಸಚಿವ ಸಂಪುಟ ಸಭೆ ನಡೆಸುತ್ತಿದ್ದೇವೆ. ಬೆಂಗಳೂರು ವಿಭಾಗದ ಸಚಿವ ಸಂಪುಟ ಸಭೆ ನಡೆಸುತ್ತಿದ್ದೇವೆ. ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರಕ್ಕೆ ಸೀಮಿತವಲ್ಲ. ಬೆಂಗಳೂರು ವಿಭಾಗದ ಎಲ್ಲಾ ಪ್ರದೇಶಗಳ ಅಭಿವೃದ್ಧಿ ಬಗ್ಗೆ ಸಚಿವರೊಂದಿಗೆ ಚರ್ಚಿಸಲಾಗುವುದು ಎಂದು ತಿಳಿಸಿದರು.

**ಸ್ಥಳೀಯರಿಗೆ ವಿಶೇಷ ಪ್ಯಾಕೇಜ್ ಘೋಷಣೆ ಇದೆಯೇ...:** ಸಚಿವ ಸಂಪುಟದಲ್ಲಿ ಹೊಸದಾಗಿ ಯಾವುದೇ ಘೋಷಣೆ ಇಲ್ಲ. ನಮ್ಮ ಬಜೆಟ್‌ನಲ್ಲಿ ಹೇಳಿರುವ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಸಚಿವ ಸಂಪುಟ ಶ್ರಮಿಸಲಿದೆ. ಅಲ್ಲದೇ ಸಣ್ಣಪುಟ್ಟ ಅಭಿವೃದ್ಧಿ ಕಾರ್ಯಗಳಿದ್ದರೆ ಮಾಡಲಾಗುವುದು ಎಂದು ಹೇಳಿದರು. ಒಳ ಮೀಸಲಾತಿ ಸಮೀಕ್ಷೆ ಕುರಿತು ಮಾತನಾಡಿ, ಜಾತಿ ಸಮೀಕ್ಷೆಯನ್ನು ಪರಿಶಿಷ್ಟ ಸಮುದಾಯಕ್ಕೆ ಸಹಕಾರಿಯಾಗುವಂತೆ 3 ಹಂತಗಳಲ್ಲಿ ಮಾಡಲಾಗುತ್ತಿದೆ. ಮನೆಬಾಗಿಲಿಗೆ ಅಧಿಕಾರಿಗಳ ಮೂಲಕ ಇಲ್ಲವೇ ಬೂತ್ ಮಟ್ಟದ ಸಭೆಗಳ ಮೂಲಕ ಅಲ್ಲದೆ ಆನ್ ಲೈನ್‌ನಲ್ಲೂ ಸಮೀಕ್ಷೆ ನಡೆಸುತ್ತಿದ್ದು ಜನರಿಗೆ ಯಾವುದು ಅನುಕೂಲವೋ ಆ ಮಾರ್ಗದಲ್ಲಿ ತಮ್ಮ ಜಾತಿ ನೋಂದಣಿ ಮಾಡಿಸಲಿ ಎಂದರು.

**ನನಗೆ ಬೇರೆ ಆಯ್ಕೆ ಇಲ್ಲ, ಸಿದ್ದರಾಮಯ್ಯನವರ ಬೆಂಬಲಕ್ಕೆ ನಿಲ್ಲುವೆ: ಡಿಕೆಶಿ :** ಸಿದ್ದರಾಮಯ್ಯ ಐದು ವರ್ಷ ಕರ್ನಾಟಕದ ಮುಖ್ಯಮಂತ್ರಿಯಾಗಿರುವುದಕ್ಕೆ ನನ್ನ ಯಾವುದೇ ಅಭ್ಯಂತರವಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಇದಕ್ಕೆ ನನ್ನ ಅಭ್ಯಂತರವೂ ಇಲ್ಲ, ಆಕ್ಷೇಪವೂ ಇಲ್ಲ. ನನಗೂ ಬೇರೆ ಆಯ್ಕೆಯೂ ಇಲ್ಲ. ಕಾಂಗ್ರೆಸ್ ಹೈಕಮಾಂಡ್ ಏನು ಹೇಳುತ್ತದೋ ಅದನ್ನು ಪಾಲಿಸುವುದು ನನ್ನ ಕರ್ತವ್ಯ. ಅವರ ಬೆಂಬಲಕ್ಕೆ ನಿಲ್ಲುತ್ತೇನೆ ಎಂದರು. ಕೆಲವರು ನಿಮ್ಮನ್ನು ಮುಖ್ಯಮಂತ್ರಿಯಾಗಬೇಕೆಂದು ಒತ್ತಾಯಿಸುತ್ತಿದ್ದಾರಲ್ಲಾ ಎಂಬ ಪ್ರಶ್ನೆಗೆ, ನಾನು ಏನನ್ನೂ ಚರ್ಚಿಸಲು ಬಯಸುವುದಿಲ್ಲ.

**ನಮ್ಮ ಸರ್ಕಾರ ಬಂಡೆ ತರ ಇರುತ್ತೆ**



**ದಿಢೀರ್ ಯಾಕಿ ನಡೆ...**

ನಾಯಕತ್ವ ಬದಲಾವಣೆ ಆಗಲಿದ್ಯಾ ಎಂಬ ಪ್ರತಕರ್ತರ ಪ್ರಶ್ನೆಗೆ ಸಿದ್ದರಾಮಯ್ಯ ಅದಕ್ಕೆ ಹೈಕಮಾಂಡ್ ಉತ್ತರ ನೀಡಲಿದೆ ಎನ್ನುತ್ತಿದ್ದರು. ಪ್ರತಿ ಬಾರಿ ಪ್ರಶ್ನೆ ಕೇಳಿದ ಸಂದರ್ಭದಲ್ಲಿ ಸಿದ್ದರಾಮಯ್ಯ ಅವರು ನೇರವಾಗಿ ಇದೇ ಉತ್ತರ ಕೊಡುತ್ತಿದ್ದರು. ಸಿದ್ದರಾಮಯ್ಯ ಅವರ ಬೆಂಬಲಿಗರು 5 ವರ್ಷ ಸಿದ್ದರಾಮಯ್ಯ ಅವರೇ ಸಿಎಂ ಎಂದು ಹೇಳುತ್ತಿದ್ದರೂ, ಸಿದ್ದರಾಮಯ್ಯ ಮಾತ್ರ ಇದಕ್ಕೆ ಸಮ್ಮತಿ ಸೂಚಿಸಿರಲಿಲ್ಲ. ಸದ್ಯ ನಾನು ಸಿಎಂ ಇದ್ದೇನೆ. ಮುಂದಿನ ನಿರ್ಧಾರ ಹೈಕಮಾಂಡ್ ಎಂದು ದೆಹಲಿಯತ್ತ ಬೆರಳು ತೋರಿಸುತ್ತಿದ್ದರು. ಆದರೆ ಇದೀಗ ಸಿದ್ದರಾಮಯ್ಯ ದಿಢೀರ್ ಆಗಿ ವರಸೆ ಬದಲಾಯಿಸಿದ್ದಾರೆ.

**ಒಗ್ಗಟ್ಟು ಪ್ರದರ್ಶನದ ಜೊತೆಗೆ ಸಂದೇಶ**

ರಾಜ್ಯ ಕಾಂಗ್ರೆಸ್ ನಲ್ಲಿ ಭಿನ್ನಮತೀಯ ಚಟುವಟಿಕೆಗಳಿಗೆ ಬ್ರೇಕ್ ಹಾಕುವ ನಿಟ್ಟಿನಲ್ಲಿ ಹೈಕಮಾಂಡ್ ಸೂಚನೆಯಂತೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಆಗಮಿಸಿದ್ದಾರೆ. ಶಾಸಕರ ಜೊತೆಗೆ ಒನ್ ಟು ಒನ್ ಸಭೆ ನಡೆಸುತ್ತಿದ್ದಾರೆ. ಒಂದು ಕಡೆಯಲ್ಲಿ ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ಪರವಾಗಿ ಹೇಳಿಕೆ ನೀಡುತ್ತಿದ್ದಾರೆ. ಆದರೆ ಇದಕ್ಕೆ ಮೌನವಾಗಿದ್ದ ಸಿದ್ದರಾಮಯ್ಯ ದಿಢೀರ್ ಆಗಿ ನನ್ನ ನಿಲುವನ್ನು ಬಹಿರಂಗಗೊಳಿಸಿದ್ದಾರೆ.

**ಸಿದ್ದರಾಮಯ್ಯಗೆ ಸಿಕ್ಕಿದ್ಯಾ ಸುಳಿವು..**

ಮಂಗಳವಾರವಷ್ಟೇ ಡಿಕೆ ಶಿವಕುಮಾರ್ ಅವರ ಪರವಾಗಿ ಶಾಸಕ ಇಕ್ಬಾಲ್ ಹುಸೇನ್ ಹೇಳಿಕೆ ನೀಡಿದ್ದರು. ಸಿಎಂ ಸ್ಥಾನ ಬದಲಾವಣೆ ಆಗಬೇಕು ಎಂದಿದ್ದರು. ಇಕ್ಬಾಲ್ ಹುಸೇನ್ ಡಿಕೆ ಶಿವಕುಮಾರ್ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡವರು. ಸಹಜವಾಗಿ ಇದು ಸಿದ್ದರಾಮಯ್ಯ ಬೆಂಬಲಿಗರನ್ನು ಕೆರಳಿಸಿತ್ತು. ಈ ನಡುವೆ ಬಸವರಾಜ ರಾಯರೆಡ್ಡಿ ಸಿದ್ದರಾಮಯ್ಯ ಪರವಾಗಿ ಬ್ಯಾಟಿಂಗ್ ಮಾಡಿದ್ದರು. ವಿಜಯ ಕರ್ನಾಟಕದ ಜೊತೆಗಿನ ಸಂದರ್ಶನದಲ್ಲೂ ಸಿದ್ದರಾಮಯ್ಯ 5 ವರ್ಷ ಸಿಎಂ ಸ್ಥಾನ ಫಿಕ್ಸ್ ಎಂದಿದ್ದರು. ಈ ಎಲ್ಲಾ ಬೆಳವಣಿಗೆ ನಡೆವೆ ಸಿದ್ದರಾಮಯ್ಯ ನಾನೇ 5 ವರ್ಷ ಸಿಎಂ ಎಂದು ಹೇಳಿರುವುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಅದರ ಬೆನ್ನಲ್ಲೇ ಡಿಕೆಶಿ ಐ ಹ್ಯಾವ್ ನೋ ಆಪ್ಷನ್ ಎಂದಿರುವುದು ಕಾಂಗ್ರೆಸ್ ಪಾಳಯದಲ್ಲಿ ಚರ್ಚೆಗೆ ಗ್ರಾಸವಾಗುತ್ತಿದೆ.

ಲಕ್ಷಾಂತರ ಕಾರ್ಯಕರ್ತರು ಕಾಂಗ್ರೆಸ್ ಸರ್ಕಾರ ತರಲು ಶ್ರಮ ಪಟ್ಟಿದ್ದಾರೆ. ಡಿ.ಕೆ.ಶಿವಕುಮಾರ್ ಮಾತ್ರ ಕಷ್ಟಪಟ್ಟಿಲ್ಲ ಅವರ ಬಗ್ಗೆಯೂ ಯೋಚಿಸಬೇಕಿದೆ ಎಂದು ಮಾರ್ಮಿಕವಾಗಿ ನುಡಿದರು.

ಐತಿಹಾಸಿಕ ನಂದಿಗಿರಿಧಾಮದಲ್ಲಿ ಇಂದು ನಡೆದ ಸಚಿವ ಸಂಪುಟ ಸಭೆಗೂ ಮುನ್ನ ಮಾಧ್ಯಮದೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ, ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಸಂಪೂರ್ಣ 5 ವರ್ಷ ನಾನೇ ಸಿಎಂ ಆಗಿರ್ತೇನೆ ಎಂದು ಹೇಳಿದ್ದರು.

## ಸಿದ್ದರಾಮಯ್ಯಗೆ ತಕ್ಕ ಉತ್ತರ ಕೊಟ್ಟ ವಿ ಸೋಮಣ್ಣ

• ಉದಯವಾಹಿನಿ, ಬೆಂಗಳೂರು



ರೈಲ್ವೆ ದರ ಏರಿಕೆ ಪ್ರಶ್ನಿಸಿದ ಸಿಎಂ ಸಿದ್ದರಾಮಯ್ಯ ಅವರಿಗೆ ನಂದಿನಿ ಹಾಲು, ಮೆಟ್ರೋ ದರ ಏರಿಕೆ ತೋರಿಸಿ ಕೇಂದ್ರ ಸಚಿವ ವಿ ಸೋಮಣ್ಣ ತಿರುಗೇಟು ನೀಡಿದ್ದಾರೆ. ಮಾತ್ರವಲ್ಲದೇ, ದರ ಏರಿಕೆ ಯಾಕೆ ಮಾಡಿದ್ದು, ಎಂಬ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ. ಈ ಬಗ್ಗೆ ವಿ ಸೋಮಣ್ಣ ಅವರು ಟ್ವೀಟ್ ಮಾಡಿದ್ದು, ಕರ್ನಾಟಕದ ಮುಖ್ಯಮಂತ್ರಿಗಳೇ, ಬುರುಡೆ ಬಿಡುವುದನ್ನು ಯಾವಾಗ ನಿಲ್ಲಿಸುತ್ತೀರಿ ಬೆಲೆ ಹೆಚ್ಚಳದ ಬಗ್ಗೆ ನಿಮ್ಮ ಮಾತು ಕೇಳಿ ಭೂತದ ಬಾಯಲ್ಲಿ ಭಗವದ್ಗೀತೆ ಎನ್ನುವ ಗಾದೆ ನೆನಪಾಗುತ್ತಿದೆ ಎಂದಿದ್ದಾರೆ. ತಾವು ರಾಜ್ಯದ ಸಿಎಂ ಆದ ಕ್ಷಣದಿಂದಲೇ ಕನ್ನಡಿಗರು ನಿಮ್ಮ ಬೆಲೆ ಏರಿಕೆಯ ಹೊಡೆತಕ್ಕೆ ಬಳಲಿ ಬೆಂಡಾಗಿದ್ದಾರೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ನಾನು ಸಿಎಂ ಆಗಿದ್ದರೆ ಪೆಟ್ರೋಲ್, ಡೀಸೆಲ್ ಬೆಲೆ 10 ರೂ. ಕಡಿಮೆ ಮಾಡುತ್ತೇನೆ ಎಂದು ಬೊಬ್ಬಿರಿದು, ನಿಮ್ಮ ಸರದಿ ಬಂದಾಗ ಪೆಟ್ರೋಲ್ ಮೇಲೆ ಒಟ್ಟು 3 ರೂ., ಡೀಸೆಲ್ ಮೇಲೆ ಒಟ್ಟು 5 ರೂ. ಬೆಲೆ ಹೆಚ್ಚಳ ಮಾಡಿದ್ದನ್ನು ಇಡೀ ರಾಜ್ಯವೇ ಕಂಡಿದೆ ಎಂದು ಪ್ರಸ್ತಾಪಿಸಿದ್ದಾರೆ.

**ನಿಮ್ಮ ಆಡಳಿತದಲ್ಲಿ ಬೆಲೆ ಹೆಚ್ಚಳ**

**• ನಂದಿನಿ ಹಾಲು 9 ರೂ. ಹೆಚ್ಚಳ • ನಮ್ಮ ಮೆಟ್ರೋ : ಶೇ. 70 ರಷ್ಟು ಬೆಲೆ ಹೆಚ್ಚಳ • ಸರ್ಕಾರಿ ಬಸ್ ಪ್ರಯಾಣ ದರ : ಶೇ. 15-20 ರಷ್ಟು ಹೆಚ್ಚಳ • ಸ್ಟ್ಯಾಂಪ್ ಡ್ಯೂಟಿ, ನೋಂದಣಿ ಮತ್ತು ಮುದ್ರಾಂಕ ಶುಲ್ಕ : ಶೇ. 300 ರಿಂದ ಶೇ. 400 ರಷ್ಟು ಹೆಚ್ಚಳ • ವಿದ್ಯುತ್ ಪ್ರತಿ ಯೂನಿಟ್‌ಗೆ 1.06 ರೂ. ಹೆಚ್ಚಳ**



2012-13 ರಲ್ಲಿ ನಿಮ್ಮದೇ ಯುಪಿಎ ಸರ್ಕಾರ ಒಂದೇ ಬಾರಿಗೆ ಪ್ರತಿ ಕಿ.ಮೀ.ಗೆ 10 ಪೈಸೆ (10 ಪಟ್ಟು ಹೆಚ್ಚು) ಬೆಲೆ ಹೆಚ್ಚಳ ಮಾಡಿತ್ತು. ಆದರೆ, ನಮ್ಮ ಸರ್ಕಾರ 11 ವರ್ಷಗಳ ನಂತರ ಕೇವಲ 1 ಪೈಸೆ (ಪ್ರತಿ ಕಿ.ಮೀ) ಬೆಲೆ ಹೆಚ್ಚಳ ಮಾಡಿದೆ ಎಂದು ಸೋಮಣ್ಣ ತಿಳಿಸಿದ್ದಾರೆ.

## ಮತ್ತೆ ನಾಲಿಗೆ ಹರಿಬಿಟ್ಟ ಬಿಜೆಪಿ ಎಂಎಲ್‌ಸಿ ರವಿಕುಮಾರ್

• ಉದಯವಾಹಿನಿ, ಬೆಂಗಳೂರು



ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ವಿರುದ್ಧ ಅಸಂಸದೀಯ ಪದ ಬಳಕೆ ಮಾಡಿದ ಆರೋಪ ಮೇಲೆ ಬಿಜೆಪಿ ಪರಿಷತ್ ಸದಸ್ಯ ಎನ್. ರವಿಕುಮಾರ್ ವಿರುದ್ಧ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್.ಮನೋಹರ್ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಎನ್ ರವಿಕುಮಾರ್ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದ್ದಾರೆ.

**ಸಿಎಸ್ ವಿರುದ್ಧ ಆಕ್ಷೇಪಾರ್ಹ ಪದ ಬಳಕೆ**

**ದೂರು ನೀಡಲು ಕಾರಣ**

ಕಳೆದ ದಿನಗಳಲ್ಲಿ ವಿಧಾನಸೌಧದಲ್ಲಿ ನಡೆದ ಪ್ರತಿಭಟನೆಯ ಸಂದರ್ಭದಲ್ಲಿ ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್ ರವಿಕುಮಾರ್ ಅವರು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ಅವರು ರಾತ್ರಿಯಿಡೀ ರಾಜ್ಯ ಸರ್ಕಾರಕ್ಕಾಗಿ ಮತ್ತು ಇಡೀ ದಿನ ಮುಖ್ಯಮಂತ್ರಿಗಾಗಿ ಕೆಲಸ ಮಾಡುತ್ತಾರೆ ಎಂದು ಇಂಡಿಯಾ ಟುಡೆ ವರದಿ ಮಾಡಿದೆ.

ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ವಿಧಾನಸೌಧದ ಗಾಂಧಿ ಪ್ರತಿಮೆಯ ಬಳಿ ಪ್ರತಿಭಟಿಸುತ್ತಿರುವ ವೇಳೆ ಉಪ ಪೊಲೀಸ್ ಆಯುಕ್ತ ಎಂ ಎನ್ ಕರಿಬಸವನಗೌಡ ಅವರೊಂದಿಗೆ ಮಾತನಾಡುತ್ತಿರುವಾಗ ರವಿಕುಮಾರ್ ಈ ಹೇಳಿಕೆ ನೀಡಿದ್ದಾರೆ ಎಂದು ವರದಿಯಾಗಿದೆ.

## ರಾಷ್ಟ್ರೀಯ ಮಾಧ್ಯಮಗಳು ಭಾಷಾ ಹೇರಿಕೆಯ ವಿರುದ್ಧ ತುಟಿ ಬಿಚ್ಚುತ್ತಿಲ್ಲ

• ಉದಯವಾಹಿನಿ, ಬೆಂಗಳೂರು

ಕಾರ್ಪೊರೇಟ್ ಸಂಸ್ಥೆಗಳ ಕಪಿಮುಷ್ಠಿಯಲ್ಲಿ ಸಿಲುಕಿರುವ ರಾಷ್ಟ್ರೀಯ ಮಾಧ್ಯಮಗಳು ಭಾಷಾ ಹೇರಿಕೆಯ ವಿರುದ್ಧ ತುಟಿ ಬಿಚ್ಚುತ್ತಿಲ್ಲ ಎಂದು ಪತ್ರಕರ್ತ ಪಿ. ಸಾಯಿನಾಥ್ ಹೇಳಿದರು. ಕರ್ನಾಟಕ ಮಾಧ್ಯಮ ಅಕಾಡೆಮಿ, ವಾರ್ತಾ ಇಲಾಖೆ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ನಿಜ ಸುದ್ದಿಗಾಗಿ ಸಮರ ವಿಷಯ ಕುರಿತು ಅವರು ಮಾತನಾಡಿದರು.

ಕಾರ್ಪೊರೇಟ್ ಹಿಡಿತದಲ್ಲಿರುವ ಮಾಧ್ಯಮಗಳಿಗೆ ಪ್ರಜಾಪ್ರಭುತ್ವ ಉಳಿಸುವ ಉದ್ದೇಶವಿಲ್ಲ. ಲಾಭ ಗಳಿಕೆಗಷ್ಟೇ ಅವುಗಳ ಚಿತ್ತ ಇರುತ್ತದೆ. ವೈವಿಧ್ಯತೆಯನ್ನೂ ವಿರೋಧಿಸುವ ಪರಿಪಾಟ ಆರಂಭವಾಗಿದೆ. ಅದಕ್ಕಾಗಿಯೇ ಏಕರೀತಿಯ ಚಿಂತನೆ ಬಿತ್ತುವ ಕೆಲಸವನ್ನು ಮಾಧ್ಯಮಗಳು ವ್ಯವಸ್ಥಿತವಾಗಿ ಮಾಡುತ್ತಿವೆ. ಇಂತಹ ನಡೆಯೂ ಕಾರ್ಪೊರೇಟ್ ಸಂಸ್ಕೃತಿಯ



ಒಂದು ಭಾಗವಾಗಿದೆ ಎಂದರು. ದೇಶದ ಶೇ 25ರಷ್ಟು ಜಿಡಿಪಿ 211 ಶ್ರೀಮಂತರ ಬಳಿ ಇದೆ. ಇವರು ಮಾಧ್ಯಮಗಳನ್ನೂ ತಮ್ಮ ಹಿಡಿತಕ್ಕೆ ತೆಗೆದುಕೊಳ್ಳುತ್ತಿದ್ದಾರೆ. ಮಾಧ್ಯಮ ಸಂಸ್ಥೆಗಳು ಶ್ರೀಮಂತವಾದಷ್ಟು ವರದಿಗಳು ಬಡವಾಗುತ್ತಿವೆ. ಅಧಿಕಾರಸ್ಥರಿಗೆ ಈ ಎಲ್ಲಾ ಸತ್ಯವೂ ಗೊತ್ತಿದೆ. ಮಾಧ್ಯಮಗಳು ಅವರಿಗೆ ಸತ್ಯ ಹೇಳಬೇಕಿಲ್ಲ. ಮಾಧ್ಯಮಗಳಿಗೇ ಅಧಿಕಾರ ಶಕ್ತಿಯ ಅರಿವು ಮೂಡಿಸುವ ತುರ್ತು ಅಗತ್ಯವಿದೆ ಎಂದು ಪ್ರತಿಪಾದಿಸಿದರು.

ಲೇಖಕ ರಹಮತ್ ತರೀಕೆರೆ ಮಾತನಾಡಿ, ಮಾಧ್ಯಮಗಳು ಈಚಿನ ದಿನಗಳಲ್ಲಿ ಕೊಲೆಗಡುಕ ಭಾಷೆಯನ್ನು ಹೆಚ್ಚಾಗಿ ಬಳಕೆ ಮಾಡುತ್ತಿರುವುದು ಅತ್ಯಂತ ಕಳವಳಕಾರಿ ವಿಚಾರ. ಭಾಷೆಯನ್ನು ದ್ವೇಷಕ್ಕಾಗಿ ಬಳಕೆ ಮಾಡಬಾರದು, ಅದು ಕ್ರೌರ್ಯಕ್ಕೆ ಸಮಾನ. ಭಾಷಾ ಶುದ್ಧತೆಗೆ ಮಾಧ್ಯಗಳು ಮೊದಲ ಆದ್ಯತೆ ನೀಡಬೇಕು ಎಂದು ಕಿವಿಮಾತು ಹೇಳಿದರು.

ಭಾರತ ಸೇರಿದಂತೆ ವಿಶ್ವದ ಹಲವು ರಾಷ್ಟ್ರಗಳಲ್ಲಿ ಪತ್ರಕರ್ತರು, ಬರಹಗಾರರ ಮೇಲಿನ ದೌರ್ಜನ್ಯ ಪ್ರಕರಣಗಳು ನಡೆಯುತ್ತಿವೆ. ಆಡಳಿತ ನಡೆಸುವ ಸರ್ಕಾರಗಳೇ ಬಹುತ್ವದ ವಿರೋಧಿ ನೀತಿ ಪ್ರದರ್ಶಿಸುತ್ತಿವೆ. ಇಂತಹ ನಡೆಯನ್ನು ಎಲ್ಲರೂ ಒಕ್ಕೊರಲಿನಿಂದ ಖಂಡಿಸಿದಾಗ ಪ್ರಜಾಪ್ರಭುತ್ವದ ಉಳಿವು ಸಾಧ್ಯ ಎಂದರು. ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಶಾ ಖಾನಂ ಪ್ರಾಸ್ತಾವಿಕ ಮಾತನಾಡಿದರು.

**ಸುಳ್ಳು ಸುದ್ದಿಗಳು ವಿಜೃಂಭಿಸುತ್ತಿವೆ**

**ನೈಜ ಸುದ್ದಿಗಾಗಿ ಹೋರಾಟ ನಡೆಸುವ ಸ್ಥಿತಿ ಎದುರಾಗಿದೆ. ಸುಳ್ಳು ಸುದ್ದಿಗಳು ವಿಜೃಂಭಿಸುತ್ತಿವೆ. ಊಹಾ ಪತ್ರಿಕೋದ್ಯಮ ಸಮಾಜ ಹಾಗೂ ಪತ್ರಿಕೋದ್ಯಮಕ್ಕೆ ಅಪಾಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ನಿಜ ಸುದ್ದಿಗಾಗಿ ಸಮರ ಸಂವಾದಕ್ಕೆ ಚಾಲನೆ ಆರೋಗ್ಯ ಸಂಜೀವಿನಿ ಯೋಜನೆ ಉದ್ಘಾಟಿಸಿ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್‌ಪಾಸ್ ವಿತರಿಸಿದರು.**

## ಸಿದ್ದರಾಮಯ್ಯ ಬದಲಿಸಿದರೆ ಸರ್ಕಾರ ಬೀಳುತ್ತೆ - ಸಿದ್ದು ಬಣದವರ ಎಚ್ಚರಿಕೆ

### ■ ಡಿಕೆಶಿಯವರ ಸಿಎಂ ಆಸೆಗೆ ಹಿನ್ನಡೆ ಎಂದು ಬಿಜೆಪಿ ಆರೋಪ ■ ಸಿಎಂ ಬದಲಾವಣೆಯ ಚರ್ಚೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಯಾದರೆ ಸರ್ಕಾರವೇ ಉರುಳುತ್ತೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನ ಬೆಂಬಲಿಗರು ಹೈಕಮಾಂಡಿಗೆ ಸೂಚನೆ ನೀಡಿದ್ದಾರೆ.

ಅದೇ ಕಾರಣಕ್ಕಾಗಿಯೇ ಕಾಂಗ್ರೆಸ್ ಹೈಕಮಾಂಡ್, ಈ ಮೊದಲೇ ನಿರ್ಧಾರವಾಗಿದ್ದ ಎರಡೂವರೆ ವರ್ಷ ಅವಧಿಯ ಸಿಎಂ ಗಾದಿಯ ಸೂತ್ರವನ್ನು ಸದ್ಯಕ್ಕೆ ಜಾರಿ ಮಾಡಲು ಹಿಂದೇಟು ಹಾಕುತ್ತಿದ್ದಾರೆ ಎಂದು ಕರ್ನಾಟಕ ಬಿಜೆಪಿ ಆರೋಪಿಸಿದೆ.

ಈ ಕುರಿತಂತೆ ಟ್ವೀಟ್ ಮಾಡಿರುವ ಬಿಜೆಪಿ, ಕಾಂಗ್ರೆಸ್ ಸರ್ಕಾರದಲ್ಲಿ ನಡೆಯಲಿರುವ ಸೆಪ್ಟೆಂಬರ್ ಕ್ರಾಂತಿಗೆ ಪೂರಕವಾಗಿ ಕಾಂಗ್ರೆಸ್ ಪಾಳಯದಲ್ಲಿ ಬಿರುಸಿನ ಬೆಳವಣಿಗೆಗಳಾಗುತ್ತಿವೆ. ಶೀಘ್ರವೇ ಸಿಎಂ ಆಗುವ ಕನಸು ಕಾಣುತ್ತಿರುವ ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ಸಿದ್ದರಾಮಯ್ಯನವರ ಪರವಾಗಿರುವ ಶಾಸಕರು ಗುನ್ನಾ ಇಟ್ಟಿದ್ದಾರೆ ಎಂದು ಹೇಳಿದೆ.

ಶತಾಯಗತಾಯ ಮುಖ್ಯಮಂತ್ರಿ ಆಗಲೇಬೇಕೆಂದು ಪಣ ತೊಟ್ಟಿರುವ ಡಿಕೆಶಿಯವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಣದ ಶಾಸಕರು ಗುನ್ನಾ ಇಟ್ಟಿದ್ದಾರೆ. ಸಿದ್ದರಾಮಯ್ಯ ಅವರನ್ನು ಬದಲಿಸಿದರೆ ಸರ್ಕಾರ ಪತನವಾಗಲಿದೆ ಎಂಬ ಎಚ್ಚರಿಕೆಯ ಸಂದೇಶವನ್ನು ಕಾಂಗ್ರೆಸ್ ಹೈಕಮಾಂಡ್‌ಗೆ ತಲುಪಿಸಿದ್ದಾರೆ.

**ಒಳಗುಟ್ಟು ಪತ್ತೆ ಹಚ್ಚಿತೇ ಬಿಜೆಪಿ**



ಹಾಗಾಗಿಯೇ, ಕಾಂಗ್ರೆಸ್ ಹೈಕಮಾಂಡ್ ಮೀನಮೇಷ ಎಣಿಸುತ್ತಿದೆ ಎಂದು ಹೇಳಿದೆ.

ಅಧಿಕಾರ ಹಂಚಿಕೆಯ ಸೂತ್ರದಡಿ ಮುಖ್ಯಮಂತ್ರಿ ಆಗಿರುವ ಸಿದ್ದರಾಮಯ್ಯನವರು ಸೆಪ್ಟೆಂಬರ್ ವೇಳೆಗೆ ಡಿಕೆಶಿ ಅವರಿಗೆ ಕುರ್ಚಿ ಬಿಟ್ಟುಕೊಡಬೇಕಿತ್ತು. ಆದರೆ ಅಧಿಕಾರದ ಆಸೆ ಸಿದ್ದರಾಮಯ್ಯ ಅವರನ್ನು ಸೀಟು ಬಿಟ್ಟುಕೊಡದಂತೆ ಮಾಡುತ್ತಿದೆ.

ಇದೇ ರೀತಿಯ ಸಂಘರ್ಷ ಮುಂದುವರೆದಲ್ಲಿ ವರ್ಷಾಂತ್ಯದಲ್ಲಿ ಸರ್ಕಾರ ಪತನವಾಗುವುದು ನಿಶ್ಚಿತ ಎಂದು ಬಿಜೆಪಿ ಭವಿಷ್ಯ ನುಡಿದಿದೆ.

ಸಿದ್ದರಾಮಯ್ಯ ಮತ್ತು ಡಿಕೆಶಿ ಕುರ್ಚಿ ಜಗಳದಲ್ಲಿ ರಾಜ್ಯ ಬರಿದಾಗುತ್ತಿದೆ. ಗ್ಯಾರಂಟಿ ಯೋಜನೆಗಳಲ್ಲೇ 2 ವರ್ಷ ತಳ್ಳಿದ ಸಿಎಂ ಸಿದ್ದರಾಮಯ್ಯ ಅವರು ಇನ್ನೂ ಕೂಡಾ ಗ್ಯಾರಂಟಿಗಳನ್ನೇ ಪಂಚವಾರ್ಷಿಕ ಯೋಜನೆಯ ರೀತಿಯಲ್ಲಿ ಮುಂದೆಳೆಯುತ್ತಿದ್ದಾರೆ, ಯಾವುದೇ ಹೊಸ ಯೋಜನೆಗಳನ್ನು ಕರ್ನಾಟಕ ಕಾಂಗ್ರೆಸ್ ಸರ್ಕಾರ ಘೋಷಿಸುತ್ತಿಲ್ಲ ಎಂದು ಹೇಳಿದೆ.

**ಏನಿದು ಬಿಜೆಪಿ ಪದೇಪದೇ ಹೇಳುತ್ತಿರುವ ಸೆಪ್ಟೆಂಬರ್ ಕ್ರಾಂತಿ**

**ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ಕುರಿತ ಚರ್ಚೆಗಳು ತೀವ್ರಗೊಂಡಿರುವ ಬೆನ್ನಲ್ಲೇ, ಎಐಸಿಸಿ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರು ಕಳೆದ ಮೂರು ದಿನಗಳಿಂದ ಶಾಸಕರನ್ನು ಭೇಟಿ ಮಾಡಿ ಅಭಿಪ್ರಾಯ ಸಂಗ್ರಹಿಸಿದ್ದಾರೆ. ಹಲವು ಶಾಸಕರು ಮುಕ್ತವಾಗಿ ತಮ್ಮ ಅನಿಸಿಕೆಗಳನ್ನು ಸುರ್ಜೇವಾಲ ಅವರೊಂದಿಗೆ ಹಂಚಿಕೊಂಡಿದ್ದಾರೆ ಎನ್ನಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುಂದಿನ ಐದು ವರ್ಷಗಳ ಕಾಲ ತಾವೇ ಮುಖ್ಯಮಂತ್ರಿಯಾಗಿ ಮುಂದುವರಿಯುವುದಾಗಿ ಹೇಳಿಕೆ ನೀಡಿದ್ದರೂ, ಬಿಜೆಪಿ ಸೆಪ್ಟೆಂಬರ್ ಕ್ರಾಂತಿ ಎಂಬ ಹೇಳಿಕೆಯ ಮೂಲಕ ರಾಜ್ಯ ರಾಜಕೀಯದಲ್ಲಿ ಸಂಚಲನ ಮೂಡಿಸಿದೆ. ಇದು ರಾಜ್ಯ ಕಾಂಗ್ರೆಸ್‌ನಲ್ಲಿ ಗುಂಪುಗಾರಿಕೆ ಹಾಗೂ ನಾಯಕತ್ವ ಬದಲಾವಣೆ ಕುರಿತ ಊಹಾಪೋಹಗಳಿಗೆ ಮತ್ತಷ್ಟು ಪುಷ್ಟಿ ನೀಡಿದೆ.**

**ಐದು ವರ್ಷಗಳ ಕಾಲ ನಾನೇ ಮುಖ್ಯಮಂತ್ರಿ - ಸಿದ್ದರಾಮಯ್ಯ**

ಕರ್ನಾಟಕ ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ನಾಯಕತ್ವ ಬದಲಾವಣೆ ಚರ್ಚೆಗಳು ತೀವ್ರಗೊಂಡಿವೆ. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಂದಿಬೆಟ್ಟದಲ್ಲಿ ನಡೆದ ಸಚಿವ ಸಂಪುಟ ಸಭೆಗೂ ಮುನ್ನ ಸ್ಪಷ್ಟನೆ ನೀಡಿದ್ದಾರೆ. ಮುಂದಿನ ಐದು ವರ್ಷಗಳ ಕಾಲ ತಾವೇ ಮುಖ್ಯಮಂತ್ರಿಯಾಗಿರುತ್ತೇನೆ ಎಂದು ಹೇಳುವ ಮೂಲಕ ಬಿಜೆಪಿಯ ಟೀಕೆಗಳಿಗೆ ತಿರುಗೇಟು ನೀಡಿದ್ದಾರೆ.

ಮುಖ್ಯಮಂತ್ರಿ ಸ್ಥಾನದ ಬಗ್ಗೆ ಹೈಕಮಾಂಡ್ ಅಂತಿಮ ನಿರ್ಧಾರ ಕೈಗೊಳ್ಳಲಿದೆ ಎಂದೂ ಅವರು ತಿಳಿಸಿದ್ದಾರೆ. ಇದೇ ವೇಳೆ, ಶಾಸಕ ಇಕ್ಬಾಲ್ ಹುಸೇನ್ ಅವರು ಡಿಸಿಎಂ ಡಿ.ಕೆ. ಶಿವಕುಮಾರ್ ಪರವಾಗಿ ಹೇಳಿಕೆ ನೀಡಿದ್ದು, ಸಿದ್ದರಾಮಯ್ಯ ಬೆಂಬಲಿಗರಿಂದ ತೀವ್ರ ವಿರೋಧ ವ್ಯಕ್ತವಾಗಿದೆ.

**ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ, ಪಕ್ಷದಲ್ಲಿ ಅಸಮಾಧಾನವಿಲ್ಲ:** ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ಅವರೇ ಇರುವಾಗ ಬೇರೆ ಹೆಸರು ಪ್ರಸ್ತಾಪಿಸುವ ಅಗತ್ಯವಿಲ್ಲ, ಪಕ್ಷದಲ್ಲಿ ಯಾವುದೇ ಅಸಮಾಧಾನವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಶಾಸಕ ಇಕ್ಬಾಲ್ ಹುಸೇನ್‌ಗೆ ನೋಟಿಸ್ ಕುರಿತು, ಪಕ್ಷದಲ್ಲಿ ಶಿಸ್ತು ಮುಖ್ಯ ಎಂದು ಪುನರುಚ್ಚರಿಸಿದ ಡಿ.ಕೆ.ಶಿವಕುಮಾರ್, ಬೆಂಗಳೂರು ಗ್ರಾಮಾಂತರ ಜಿಲ್ಲೆ ಮರುನಾಮಕರಣದ ಬಗ್ಗೆ ಸಭೆಯಲ್ಲಿ ಎಲ್ಲ ಶಾಸಕರು ಹಾಗೂ ಸಚಿವರೊಂದಿಗೆ ಚರ್ಚಿಸುವುದಾಗಿ ತಿಳಿಸಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,889/Gram24ct ₹9,065/Gram22ct | ಬೆಳ್ಳಿ: ₹110.00/Gram

## ಬೆಂಗಳೂರು | ನಿಗದಿಗಿಂತ ಹೆಚ್ಚು ವಸೂಲಿ: 56 ಆಟೋಗಳ ಜಪ್ತಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಸರ್ಕಾರ ನಿಗದಿಪಡಿಸಿದ ಪ್ರಯಾಣ ದರಕ್ಕಿಂತ ಅಧಿಕ ದರ ವಸೂಲಿ ಮಾಡುತ್ತಿರುವ ಆಟೋಗಳನ್ನು ಪತ್ತೆ ಹಚ್ಚುವ ಕಾರ್ಯಾಚರಣೆಯನ್ನು ಮಂಗಳವಾರವೂ ಮುಂದುವರೆಸಿರುವ ಸಾರಿಗೆ ಕಚೇರಿ ಅಧಿಕಾರಿಗಳು 183 ಪ್ರಕರಣಗಳನ್ನು ದಾಖಲಿಸಿಕೊಂಡಿದ್ದಾರೆ. ಅಲ್ಲದೆ 56 ಆಟೋಗಳನ್ನು ಜಪ್ತಿ ಮಾಡಿದ್ದಾರೆ.

ಬೆಂಗಳೂರು ಕೇಂದ್ರ, ಬೆಂಗಳೂರು ಪಶ್ಚಿಮ, ಬೆಂಗಳೂರು ಪೂರ್ವ, ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಜ್ಞಾನಭಾರತಿ, ದೇವನಹಳ್ಳಿ, ಯಲಹಂಕ, ಎಲೆಕ್ಟ್ರಾನಿಕ್ ಸಿಟಿ, ಕೆ.ಆರ್. ಪುರ, ಚಂದಾಪುರ, ನೆಲಮಂಗಲ, ರಾಮನಗರ ಪ್ರಾದೇಶಿಕ ಸಾರಿಗೆ ಕಚೇರಿಯ ಅಧಿಕಾರಿಗಳು ಕಾರ್ಯಾಚರಣೆ ನಡೆಸಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಬೈಕ್ ಟ್ಯಾಕ್ಸಿ ಪ್ರಯಾಣ: ಹೊಸ ಮಾರ್ಗಸೂಚಿ ಪ್ರಕಟ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯು ಮೋಟಾರು ವಾಹನಗಳ ಅಗ್ರಿಗೇಟರ್ ಮಾರ್ಗಸೂಚಿ ಪ್ರಕಟಿಸಿದೆ. ಈ ಮಾರ್ಗಸೂಚಿಯನ್ನು ಎಲ್ಲಾ ರಾಜ್ಯ ಸರ್ಕಾರಗಳ ಮುಖ್ಯ ಕಾರ್ಯದರ್ಶಿಗಳಿಗೆ ಕಳುಹಿಸಲಾಗಿದೆ. ಮಾರ್ಗಸೂಚಿಯ 23ನೇ ಅಂಶದಲ್ಲಿ ಸಾಮಾನ್ಯ ಬೈಕ್‌ಗಳಲ್ಲಿ ಪ್ರಯಾಣಿಕರನ್ನು ಕರೆದೊಯ್ಯುವುದರಿಂದ ಆಗುವ ಅನುಕೂಲಗಳ ಬಗ್ಗೆ ವಿವರಿಸಲಾಗಿದೆ. ಬೈಕ್ ಟ್ಯಾಕ್ಸಿಗಳಿಗೆ ಅವಕಾಶ ನೀಡುವುದರಿಂದ ವಾಯು ಮಾಲಿನ್ಯ ತಗ್ಗಲಿದೆ. ದಟ್ಟಣೆ ಕಡಿಮೆ ಆಗಲಿದೆ ಎಂದು ವಿವರಿಸಲಾಗಿದೆ. ರಾಜ್ಯ ಸರ್ಕಾರವು ತನಗಿರುವ ಅಧಿಕಾರ ಚಲಾಯಿಸಿ ಸಂಬಂಧಿಸಿದ ಸೆಕ್ಷನ್‌ಗಳ ಅಡಿ ಸಾಮಾನ್ಯ ಬೈಕ್‌ಗಳಲ್ಲಿ ಪ್ರಯಾಣಿಕರನ್ನು ಕರೆದೊಯ್ಯಲು ಅವಕಾಶ ಕಲ್ಪಿಸಬಹುದು. ಅಲ್ಲದೇ, ಪ್ರಯಾಣಿಕರು, ಪ್ರತಿನಿತ್ಯ, ವಾರಕ್ಕೆ ಒಮ್ಮೆ ಅಥವಾ ಹದಿನೈದು ದಿನಕ್ಕೊಮ್ಮೆ ಪ್ರಯಾಣದ ದರ ಪಡೆದುಕೊಳ್ಳಬಹುದು ಎಂದು ಮಾರ್ಗಸೂಚಿಯಲ್ಲಿ ಹೇಳಲಾಗಿದೆ. ಬಸ್‌ಗಳ ಸೌಲಭ್ಯ ಇತರೆ ಸಾರ್ವಜನಿಕ ಸಾರಿಗೆ ವ್ಯವಸ್ಥೆ ತಲುಪದ ಸ್ಥಳಗಳಿಗೆ ಈ ಬೈಕ್ ಟ್ಯಾಕ್ಸಿಗಳು ತಲುಪಲಿವೆ. ಕಡಿಮೆ ದೂರದ ಪ್ರಯಾಣಕ್ಕೆ ಸಹಾಯ ಆಗಲಿದೆ. ಗಿಗ್ ಕೆಲಸಗಾರರಿಗೆ ಹಣ ಗಳಿಸಲು ಹೊಸ ಕೆಲಸ ಸಿಗಲಿದೆ ಎಂದು ಸಂಘದ ಪ್ರತಿನಿಧಿಗಳು ತಿಳಿಸಿದ್ದಾರೆ.

## ಶೌಚಾಲಯದಲ್ಲಿ ಮಹಿಳಾ ಸಹೋದ್ಯೋಗಿ ವೀಡಿಯೋ ರೆಕಾರ್ಡ್: ಟೆಕ್ಕಿ ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ರಹಸ್ಯವಾಗಿ ಶೌಚಾಲಯದಲ್ಲಿ ಮಹಿಳಾ ಉದ್ಯೋಗಿ ವಿಡಿಯೋ ರೆಕಾರ್ಡ್ ಮಾಡುತ್ತಿದ್ದ ಟೆಕ್ಕಿಯನ್ನು ಎಲೆಕ್ಟ್ರಾನಿಕ್ ಸಿಟಿ ಪೊಲೀಸರು ಬಂಧಿಸಿದ್ದಾರೆ. ಖಾಸಗಿ ಕಂಪನಿಯ ಉದ್ಯೋಗಿಯಾಗಿದ್ದ ಆಂಧ್ರಪ್ರದೇಶ ಮೂಲದ ಸ್ವಪ್ನಿಲ್ ನಾಗೇಶ್ ಮಲಿ (28) ಬಂಧಿತ ಟೆಕ್ಕಿ. ಆರೋಪಿಯು ಕಂಪನಿಯ ಪಕ್ಕದ ಶೌಚಾಲಯದ ಕಮೋಡ್ ಮೇಲೆ ನಿಂತು ರಹಸ್ಯವಾಗಿ ಮೊಬೈಲ್‌ನಲ್ಲಿ ಮಹಿಳೆಯ ವೀಡಿಯೋ ಮಾಡುತ್ತಿದ್ದು, ಅದರ ಪ್ರತಿಬಿಂಬ ಎದುರುಗಡೆಯ ಬಾಗಿಲು ಮೇಲೆ ಕಾಣಿಸಿತ್ತು. ಇದನ್ನು ಕಂಡ ಮಹಿಳೆ ಕೂಡಲೇ ಹೊರಬಂದು ನೋಡಿದಾಗ ಇನ್ನೋರ್ವ ಮಹಿಳಾ ಸಿಬ್ಬಂದಿ ಮಾತ್ರ ಕಾಣಿಸಿದ್ದರು. ಬಳಿಕ ಶೌಚಾಲಯದ ಒಳ ಹೋಗಿ ಪರಿಶೀಲಿಸಿದಾಗ ಆರೋಪಿಯು ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದ. ಈ ವೇಳೆ ಮಹಿಳೆಯು ಕಿರುಚಾಡಿದಾಗ ಆರೋಪಿಯು ಕ್ಷಮೆಯಾಚಿಸಿದ್ದ. ಬಳಿಕ ಕಂಪನಿಯ ಹೆಚ್.ಆರ್ ಸಿಬ್ಬಂದಿ ಆರೋಪಿಯ ಮೊಬೈಲ್ ಪರಿಶೀಲನೆ ಮಾಡಿದಾಗ ಸುಮಾರು 30ಕ್ಕೂ ಅಧಿಕ ಮಹಿಳೆಯರ ವಿಡಿಯೋ ಪತ್ತೆಯಾಗಿತ್ತು. ಇಷ್ಟಾದರೂ ಕಂಪನಿಯ ಆಡಳಿತ ಮಂಡಳಿಯು ಆರೋಪಿಯಿಂದ ಕ್ಷಮೆ ಕೇಳಿಸಿ ಸುಮ್ಮನಾಗಿತ್ತು. ಈ ವಿಚಾರ ತಿಳಿದ ಮಹಿಳಾ ಉದ್ಯೋಗಿಯ ಪತಿ, ಕಂಪನಿ ವಿರುದ್ಧ ಆಕ್ರೋಶ ಹೊರಹಾಕಿ, ಗಲಾಟೆ ಮಾಡಿದ್ದರು. ಅಲ್ಲದೇ ಮಂಗಳವಾರ ಎಲೆಕ್ಟ್ರಾನಿಕ್ ಸಿಟಿ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಇದೀಗ ಪೊಲೀಸರು ದೂರನ್ನಾಧರಿಸಿ ಆರೋಪಿಯನ್ನು ಬಂಧಿಸಿದ್ದಾರೆ.

## 5.5 ವರ್ಷಗಳಲ್ಲಿ 82 ಹುಲಿಗಳ ಸಾವು: ಸಮಗ್ರ ವರದಿಗೆ ಸಚಿವ ಈಶ್ವರ್ ಖಂಡ್ರೆ ಸೂಚನೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಕಳೆದ ಐದೂವರೆ ವರ್ಷಗಳಲ್ಲಿ 82 ಹುಲಿಗಳು ಮೃತಪಟ್ಟಿರುವುದಕ್ಕೆ ಆಘಾತ ವ್ಯಕ್ತಪಡಿಸಿರುವ ಸಚಿವ ಈಶ್ವರ್ ಖಂಡ್ರೆ ಅವರು, ಈ ಎಲ್ಲಾ ಹುಲಿಗಳ ಸಾವಿನ ಬಗ್ಗೆ ವರದಿ ಸಲ್ಲಿಸುವಂತೆ ಅರಣ್ಯಾಧಿಕಾರಿಗಳಿಗೆ ಮಂಗಳವಾರ ಸೂಚನೆ ನೀಡಿದ್ದಾರೆ. ಅಪರ ಮುಖ್ಯ ಕಾರ್ಯದರ್ಶಿಗಳು, ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಈ ಸಂಬಂಧ ಸೂಚನೆ ನೀಡಿರುವ ಸಚಿವರು, ಸಾವನ್ನಪ್ಪಿರುವ 82 ಹುಲಿಗಳ ಪೈಕಿ ಎಷ್ಟು ಹುಲಿಗಳು ಸಹಜವಾಗಿ ಸಾವನ್ನಪ್ಪಿವೆ ಎಷ್ಟು ಹುಲಿಗಳು ಅಸಹಜವಾಗಿ ಮೃತಪಟ್ಟಿವೆ ಅಸಹಜವಾಗಿ ಮೃತಪಟ್ಟ ಹುಲಿಗಳ ಸಾವಿಗೆ ಕಾರಣವೇನು ಎಂಬ ಬಗ್ಗೆ ತನಿಖೆ ನಡೆದು ವರದಿ ಬಂದಿದೆಯೇ ಎಂದು ಪ್ರಶ್ನಿಸಿದ್ದಾರೆ. ಮೃತಪಟ್ಟ ಯಾವುದಾದರೂ ಹುಲಿಗಳ ಅಂಗಾಂಗ ಅಂದರೆ ಉಗುರು, ಹಲ್ಲು ಇತ್ಯಾದಿ ತೆಗೆಯಲಾಗಿತ್ತೆ ಹುಲಿಗಳ ಹತ್ಯೆ ಆಗಿದ್ದಲ್ಲಿ ನಿರ್ಲಕ್ಷ್ಯ ತೋರಿದ ಸಿಬ್ಬಂದಿ, ಅಧಿಕಾರಿಗಳ ವಿರುದ್ಧ ಕ್ರಮ ಆಗಿದೆಯೇ ಎಷ್ಟು ಹುಲಿ ಹತ್ಯೆ ಪ್ರಕರಣದಲ್ಲಿ ಆರೋಪಿಗಳನ್ನು ಬಂಧಿಸಲಾಗಿದೆ ಎಂಬ ವಿವರವನ್ನೂ ಕೇಳಿದ್ದಾರೆ. ಈವರೆಗೆ ಹುಲಿ ಹತ್ಯೆ ಪ್ರಕರಣಗಳಲ್ಲಿ ಎಷ್ಟು ಜನರಿಗೆ ಶಿಕ್ಷೆ ಆಗಿದೆ ಎಷ್ಟು ಪ್ರಕರಣಗಳು ತನಿಖಾ ಹಂತದಲ್ಲಿದೆ. ಯಾವ ಕಾರಣಕ್ಕೆ ತನಿಖೆ ವಿಳಂಬವಾಗಿದೆ ಎಂಬ ಸಂಪೂರ್ಣ ವಿವರವನ್ನು 10 ದಿನಗಳ ಒಳಗಾಗಿ ಸಲ್ಲಿಸಲು ಸೂಚಿಸಿದ್ದಾರೆ. ಸಚಿವರ ಸೂಚನೆ ಕುರಿತು ಪ್ರತಿಕ್ರಿಯೆ ನೀಡಿರುವ ಅರಣ್ಯಾಧಿಕಾರಿಗಳು, ಇದು ಸಚಿವರ ನಿಯಮಿತ ವಿಚಾರಣೆಯಾಗಿದೆ ಎಂದು ಮಾಹಿತಿ ನೀಡಿದ್ದಾರೆ.

## ನಕಲಿ ಕೀ ಬಳಸಿ ಕಳ್ಳತನ; 75 ಲಕ್ಷ ರೂ ಮೌಲ್ಯದ ವಸ್ತುಗಳು ವಶಕ್ಕೆ

• ಉದಯವಾಹಿನಿ, ಬೆಂಗಳೂರು

ಬೀದಿ-ಬೀದಿಗಳಲ್ಲಿ ಚಿಂದಿ ಆಯುತ್ತಾ ನಗರದಲ್ಲಿ ತನ್ನ ಪಯಣವನ್ನು ಆರಂಭಿಸಿದ್ದ ವ್ಯಕ್ತಿಯೊಬ್ಬ ಕುಖ್ಯಾತ ಕಳ್ಳನಾಗಿ ಬದಲಾಗಿದ್ದು, ಈತನನ್ನು ಮಡಿವಾಳ ಠಾಣೆ ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ. ಬಾಲಾಜಿ ಅಲಿಯಾಸ್ ಪ್ರಕಾಶ್ (43) ಬಂಧಿತ ಆರೋಪಿ. ಈತ ಅತ್ತಿಬೆಲೆ ಬಳಿಯ ಯಡವನಹಳ್ಳಿ ನಿವಾಸಿ. ಕದ್ದ ಚಿನ್ನಾಭರಣಗಳನ್ನು ಮಾರಾಟ ಮಾಡಲು ಸಹಕರಿಸುತ್ತಿದ್ದ ಪ್ರಕಾಶ್ ಸ್ನೇಹಿತ ರಾಜೇಂದ್ರ (40)ನನ್ನೂ ಪೊಲೀಸರು ಬಂಧಿಸಿದ್ದಾರೆ. ಈತ ಟೈಲರಿಂಗ್ ಕೆಲಸ ಮಾಡುತ್ತಿದ್ದ. ಆರೋಪಿಗಳಿಂದ 75 ಲಕ್ಷ ರೂ. ಮೌಲ್ಯದ 779 ಗ್ರಾಂ ಚಿನ್ನಾಭರಣ, 100 ಗ್ರಾಂ ಬೆಳ್ಳಿ, ನಕಲಿ ಕೀಗಳನ್ನು ತಯಾರಿಸುವ ಉಪಕರಣ 138 ನಕಲಿ ಕೀಗಳನ್ನು ವಶಪಡಿಸಿಕೊಳ್ಳಲಾಗಿದೆ.

ಆರೋಪಿ ಅಪ್ರಾಪ್ತ ವಯಸ್ಸಿನಿಂದಲೇ ಕಳ್ಳತನ ಆರಂಭಿಸಿರುವುದು ತನಿಖೆಯಿಂದ ತಿಳಿದುಬಂದಿದೆ. ಬೀದಿಗಳಲ್ಲಿ ಚಿಂದಿ ಆಯುತ್ತಾ ನಗರದಲ್ಲಿ ತನ್ನ ಪಯಣ ಆರಂಭಿಸಿದ್ದ ಆರೋಪಿ, ನಂತರ ತನ್ನ ಮಾದಕ ದ್ರವ್ಯ, ಮದ್ಯ, ಬೆಟ್ಟಿಂಗ್ ಚಟಗಳ ನೀಗಿಸಿಕೊಳ್ಳಲು ಕಳ್ಳತನಕ್ಕಿಳಿದಿದ್ದ ಎಂದು ತಿಳಿದುಬಂದಿದೆ. ಆರೋಪಿ ಮಾರಾಟಕ್ಕಿರುವ ಫ್ಲ್ಯಾಟ್‌ಗಳು ಅಥವಾ ಕಟ್ಟಡಗಳನ್ನು ಹುಡುಕಿ, ಖರೀದಿದಾರನ ಸೋಗಿನಲ್ಲಿ ಮಾಲೀಕರ ವಿಶ್ವಾಸಗಳಿಸುತ್ತಿದ್ದ. ಬಳಿಕ ಅವರ ಗಮನಕ್ಕೆ ಬಾರದೆ ಬಾಗಿಲಿನ ಕೀಲಿಗಳನ್ನು ಕದಿಯುತ್ತಿದ್ದ. ಸಾಧ್ಯವಾಗದಿದ್ದರೆ, ತನ್ನ ಮೊಬೈಲ್‌ನಲ್ಲಿ ಕೀಲಿಗಳ ಚಿತ್ರವನ್ನು ತೆಗೆದುಕೊಳ್ಳುತ್ತಿದ್ದ.

# ಬೆಂಗಳೂರಲ್ಲೂ ಮುಗಿಯದ ಇ-ಖಾತಾ ಸಂಕಷ್ಟ

### ಸರ್ವರ್ ಸಮಸ್ಯೆ ಬಗೆಹರಿದಿಲ್ಲ, ಈವರೆಗೆ ಕೇವಲ 5 ಲಕ್ಷ ಆಸ್ತಿಗಳಿಗೆ ಖಾತಾ ವಿತರಣೆ

• ಉದಯವಾಹಿನಿ, ಬೆಂಗಳೂರು




ಉದಯವಾಹಿನಿ ಚಿತ್ರ

ಮಹಾನಗರದಲ್ಲಿ ಸ್ವತ್ತುಗಳ ಮಾರಾಟ, ಖರೀದಿ ಹಾಗೂ ಕಟ್ಟಡ ನಕ್ಷೆ ಮಂಜೂರಾತಿಗೆ ಇ-ಖಾತಾ ಕಡ್ಡಾಯಗೊಳಿಸಲಾಗಿದೆ. ಆದರೆ, ಸರ್ವರ್ ಸಮಸ್ಯೆ, ದಾಖಲೆಗಳ ಅಲಭ್ಯತೆಯಿಂದಾಗಿ ಆಸ್ತಿ ಮಾಲೀಕರು ಇ-ಖಾತಾ ಪಡೆಯಲು ಇನ್ನಿಲ್ಲದ ಪಡಿಪಾಟಲು ಬೀಳುವಂತಾಗಿದೆ.

ಬಿಬಿಎಂಪಿ ವ್ಯಾಪ್ತಿಯಲ್ಲಿ ಇ-ಖಾತಾ ವ್ಯವಸ್ಥೆಯನ್ನು 2024ರ ಅ.1 ರಿಂದ ಜಾರಿಗೊಳಿಸಲಾಯಿತು. ಇದಾಗಿ 9 ತಿಂಗಳು ಕಳೆದರೂ ಗೊಂದಲ ಬಗೆಹರಿದಿಲ್ಲ. ಬಿಬಿಎಂಪಿ ಕಚೇರಿ, ಬೆಂಗಳೂರು ಒನ್ ಕೇಂದ್ರಗಳಲ್ಲೂ ಇ-ಖಾತಾಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅಲ್ಲದೆ, ಸಾರ್ವಜನಿಕರು ಸ್ವಯಂ ಆಗಿ ಅರ್ಜಿ ಸಲ್ಲಿಸಬಹುದು. ಜತೆಗೆ ಇ-ಖಾತಾ ಮೇಳಗಳನ್ನೂ ಆಯೋಜಿಸಲಾಗುತ್ತಿದೆ. ಆದಾಗ್ಯೂ, ಇ-ಖಾತಾ ವಿತರಣೆಯಲ್ಲಿ ನಿರೀಕ್ಷಿತ ಪ್ರಗತಿ ಸಾಧ್ಯವಾಗಿಲ್ಲ. ನಗರದಲ್ಲಿ ಸುಮಾರು 25 ಲಕ್ಷ ಸ್ವತ್ತುಗಳ ಕರಡು ಇ-ಖಾತಾಗಳು ಆನ್‌ಲೈನ್‌ನಲ್ಲಿ ಲಭ್ಯ ಇವೆ. ಆದರೆ, ಈವರೆಗೆ ಅಂತಿಮ ಖಾತಾ ವಿತರಿಸಿರುವುದು ಕೇವಲ 5.34 ಲಕ್ಷ ಆಸ್ತಿಗಳಿಗೆ ಮಾತ್ರ. ವಂಚನೆಗೆ ಬ್ರೇಕ್ ಹಾಕುವುದು, ಒಂದೇ ಆಸ್ತಿಯನ್ನು ಹಲವರಿಗೆ ಮಾರಾಟ ಮಾಡುವಂತಹ ಅಕ್ರಮಗಳಿಗೆ ಕಡಿವಾಣ ಹಾಕಿ ಆಸ್ತಿ ಮಾಲೀಕರಿಗೆ ಸುಲಭವಾಗಿ ಮತ್ತು ಉಚಿತವಾಗಿ ಇ-ಖಾತಾ ಒದಗಿಸಬೇಕೆಂಬ ಸದುದ್ದೇಶದಿಂದಲೇ ಇ-ಖಾತಾ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಲಾಗಿದೆ. ಸಾರ್ವಜನಿಕರು ಇ-ಖಾತಾ ಕೋರಿ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದ ಬಳಿಕ ಅಧಿಕಾರಿಗಳು ಪರಿಶೀಲಿಸಿ ಅನುಮೋದನೆ ನೀಡಬೇಕು. ಮಾಹಿತಿ ಲಭ್ಯವಿಲ್ಲದಿದ್ದಾಗ ಅಥವಾ ಪಾಲಿಕೆ ದಾಖಲೆಗಳೊಂದಿಗೆ ಹೊಂದಿಕೆಯಾಗದಿದ್ದರೆ ಮಾತ್ರ ಪ್ರಕರಣವನ್ನು ಸಹಾಯಕ ಕಂದಾಯ ಅಧಿಕಾರಿಗೆ ವರ್ಗಾಯಿಸಲಾಗುತ್ತದೆ. ಆದರೆ, ಸಹಾಯಕ ಕಂದಾಯ ಅಧಿಕಾರಿಗಳಿಗೆ ತಿದ್ದುಪಡಿ ಅಧಿಕಾರ ನೀಡಿಲ್ಲ. ಕೇಸ್ ವರ್ಕರ್‌ಗಳು ವರ್ಗಾಯಿಸುವ ಅರ್ಜಿಗಳನ್ನು ತಿರಸ್ಕರಿಸಬೇಕು ಅಥವಾ ಅನುಮೋದಿಸಬೇಕಿದೆ. ಇದರಿಂದಲೂ ಸಾಕಷ್ಟು ಸಮಸ್ಯೆಯಾಗುತ್ತಿದೆ.

**ಸರ್ವರ್ ಸಮಸ್ಯೆ ಮತ್ತು ದಾಖಲೆಗಳ ಕೊರತೆ**

**ಕಟ್ಟಡ ನಿರ್ಮಾಣ, ವಹಿವಾಟಿಗೆ ತೊಡಕು:** ಪಾಲಿಕೆ ವ್ಯಾಪ್ತಿಯಲ್ಲಿರುವ ನಿವೇಶನಗಳಿಗೆ ಇ-ಖಾತಾ ಇಲ್ಲದಿದ್ದರೆ ಜು.1ರಿಂದ ಕಟ್ಟಡ ನಕ್ಷೆ ಮಂಜೂರಾತಿ ಮತ್ತು ಕಟ್ಟಡ ಪ್ರಾರಂಭಿಕ ಪ್ರಮಾಣಪತ್ರ (ಸಿಸಿ) ಸಿಗುತ್ತಿಲ್ಲ. ನಗರದಲ್ಲಿನ ಎಲ್ಲ ನಿವೇಶನ ಹಾಗೂ ಕಟ್ಟಡಗಳ ಮಾಲೀಕರು ಇ-ಖಾತಾ ಪಡೆದುಕೊಳ್ಳಬೇಕು. ಆದರೆ, ಇ-ಖಾತಾ ಪಡೆಯಲು ಯಾವುದೇ ಗಡುವು ನೀಡಿಲ್ಲ.

ಲಕ್ಷಾಂತರ ಮಾಲೀಕರು ಇನ್ನೂ ಕರಡು ಇ-ಖಾತಾವನ್ನೇ ಪಡೆದುಕೊಂಡಿಲ್ಲ. ಅಂತಿಮ ಇ-ಖಾತೆಗೂ ದಾಖಲೆಗಳನ್ನು ಸಲ್ಲಿಸಿಲ್ಲ. ಮೊದಲ ಹಂತದಲ್ಲಿ ಕಟ್ಟಡ ನಕ್ಷೆ, ಸಿಸಿ ಪಡೆಯಲು ಇ-ಖಾತಾ ಕಡ್ಡಾಯಗೊಳಿಸಲಾಗಿದೆ. ಅಲ್ಲದೆ, ಈಗಾಗಲೇ ನಿರ್ಮಾಣ ಹಂತದಲ್ಲಿರುವ ಕಟ್ಟಡಗಳು ಸ್ವಾಧೀನಾನುಭವ ಪ್ರಮಾಣಪತ್ರ (ಒಸಿ) ಪಡೆಯಲು ಇ-ಖಾತಾ ಸಲ್ಲಿಕೆ ಕಡ್ಡಾಯಗೊಳಿಸಲು ಉದ್ದೇಶಿಸಲಾಗಿದೆ. ಇದರಿಂದಾಗಿ ಕಟ್ಟಡ ನಿರ್ಮಾಣ, ಆಸ್ತಿ ಮಾರಾಟ, ಖರೀದಿ ಪ್ರಕ್ರಿಯೆಗೂ ತೊಡಕುಂಟಾಗಿದೆ. ಅಲ್ಲದೆ, ಸಾಲ ಸೌಲಭ್ಯ ಪಡೆಯಲಾಗದೆ ಪರಿತಪಿಸುತ್ತಿದ್ದಾರೆ.

**ಅರ್ಜಿ ಸಲ್ಲಿಕೆಯೇ ಸವಾಲು**


**ಇತ್ತ ಆಸ್ತಿ ದಾಖಲೆಗಳು ಸರಿಯಿದ್ದರೆ, ಅತ್ತ ಸರ್ವರ್ ಇರುವುದಿಲ್ಲ. ಅರ್ಜಿ ಸಲ್ಲಿಸಲು ತಾಸುಗಟ್ಟಲೆ ಕಾಯಬೇಕು. ದಾಖಲೆಗಳನ್ನು ಅಪ್‌ಲೋಡ್ ಮಾಡಲಾಗದೆ ಪರದಾಡುವಂತಾಗಿದೆ. ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಂಡರೆ, ಕೆಲವೊಂದು ದೋಷಗಳಿಂದಾಗಿ ದೃಢೀಕರಣ ಸಾಧ್ಯವಾಗುತ್ತಿಲ್ಲ. ಇ-ಖಾತಾದಲ್ಲಿ ತಪ್ಪುಗಳಿದ್ದರೆ, ತಿದ್ದುಪಡಿ ಸಾಧ್ಯವಾಗುತ್ತಿಲ್ಲ. ಇಂಥ ಸಂದಿಗ್ಧ ಪರಿಸ್ಥಿತಿಗೆ ಸಿಲುಕಿರುವ ಜನರು ಇ-ಖಾತಾ ಪಡೆಯಲು ಪರದಾಡುತ್ತಿದ್ದಾರೆ. ಹೀಗಾಗಿಯೇ, 25 ಆಸ್ತಿ ಮಾಲೀಕರ ಪೈಕಿ ಶೇ 25ರಷ್ಟು ಮಂದಿ ಕೂಡ ಅರ್ಜಿ ಸಲ್ಲಿಸಲು ಸಾಧ್ಯವಾಗಿಲ್ಲ.**

**ಮುಖ್ಯಾಂಶಗಳು**

- ನಗರದಲ್ಲಿರುವ ಆಸ್ತಿಗಳ ಸಂಖ್ಯೆ 25 ಲಕ್ಷ
- 25 ಲಕ್ಷ ಆಸ್ತಿಗಳು ಕರಡು ಇ-ಖಾತಾ ಆನ್‌ಲೈನ್‌ನಲ್ಲಿ ಲಭ್ಯ
- 9 ತಿಂಗಳಲ್ಲಿ 5.34 ಲಕ್ಷ ಇ-ಖಾತಾ ವಿತರಣೆ
- ಸರ್ವರ್ ಸಮಸ್ಯೆಯಿಂದ ಅರ್ಜಿ ಸಲ್ಲಿಸಲು ಪರದಾಟ

## ಗುಡ್ಡದಹಳ್ಳಿ ರಸ್ತೆಯ ಇಕ್ಕೆಲಗಳಲ್ಲಿ ಕಸದ ರಾಶಿ

• ಉದಯವಾಹಿನಿ, ಬೆಂಗಳೂರು



ನಗರದ ಗುಡ್ಡದಹಳ್ಳಿಯಲ್ಲಿರುವ ಹಲವು ರಸ್ತೆಗಳಲ್ಲಿ ಎಲ್ಲೆಂದರಲ್ಲಿ ಕಸದ ರಾಶಿಗಳು ಕಂಡು ಬರುತ್ತಿದ್ದು, ಈ ಪ್ರದೇಶವೆಲ್ಲ ಗಬ್ಬೆದ್ದು ನಾರುತ್ತಿದೆ. ಕಳೆದ ಮೂರು ವರ್ಷಗಳಿಂದಲೂ ಇಲ್ಲಿನ ನಿವಾಸಿಗಳು ಸಂಕಷ್ಟ ಅನುಭವಿಸುತ್ತಿದ್ದು, ಬಿಬಿಎಂಪಿ ಕಾರ್ಯವೈಖರಿಗೆ ಹಿಡಿಶಾಪ ಹಾಕುತ್ತಿದ್ದಾರೆ.

ಇಲ್ಲಿನ ಕಸದ ಸಮಸ್ಯೆ ದೂರಾಗುವ ಯಾವುದೇ ಲಕ್ಷಣಗಳು ಕಾಣಿಸುತ್ತಿಲ್ಲ. ಖಾಲಿ ಸ್ಥಳಗಳನ್ನು ಕಸ ಸುರಿಯುವ ಜಾಗವಾಗಿ ಮಾರ್ಪಡಿಸಲಾಗಿದೆ. ದೈನಂದಿನ ತ್ಯಾಜ್ಯವನ್ನು ಅನಿಯಂತ್ರಿತವಾಗಿ ಸುರಿಯಲಾಗುತ್ತಿದೆ. ಇಲ್ಲಿನ ಹಲವು ಸ್ಥಳಗಳಲ್ಲಿ ಒಂದು ನಿಮಿಷ ಕೂಡ ನಿಲ್ಲಲು ಸಾಧ್ಯವಾಗುವುದಿಲ್ಲ. ದುರ್ನಾತ ಬರುತ್ತದೆ. ಅದು ವಾಕರಿಕೆ ಬರುತ್ತದೆ ಎಂದು ಸ್ಥಳದಲ್ಲಿ ರಟ್ಟಿನ ಪೆಟ್ಟಿಗೆ ವ್ಯಾಪಾರ ನಡೆಸುತ್ತಿರುವ ಫಯಾಜುಲ್ಲಾ ಖಾನ್ ಅವರು ಹೇಳಿದ್ದಾರೆ. ಈ ಪ್ರದೇಶದಲ್ಲಿ ಕಸ ಸುರಿಯುವುದು ದೊಡ್ಡ ಸಮಸ್ಯೆಯಾಗಿ ಮಾರ್ಪಟ್ಟಿದೆ. ಅಸಾಧ್ಯ ಪರಿಸ್ಥಿತಿಗಳಲ್ಲಿ ನಾವು ಕೆಲಸ ಮಾಡುವಂತಾಗಿದೆ ಎಂದು ಮತ್ತೊಬ್ಬ ಅಂಗಡಿ ಮಾಲೀಕ ಅನಿಲ್ ಜೈನ್ ಅವರು ಹೇಳಿದ್ದಾರೆ. ದ್ವಿಚಕ್ರ ವಾಹನಗಳಲ್ಲಿ ಬರುವ ಜನರು ಕಸವನ್ನು ಎಸೆದು ವೇಗವಾಗಿ ಹೋಗಿ ಬಿಡುತ್ತಾರೆ. ಅವರನ್ನು ತಡೆಯಲು ಯತ್ನಿಸಿದರೆ, ಬೆದರಿಕೆ ಹಾಕುತ್ತಾರೆ. ಇದರಿಂದ ಸ್ಥಳದಲ್ಲಿ ಸಂಚಾರ ವ್ಯವಸ್ಥೆಗಳ ಮೇಲೂ ಪರಿಣಾಮ ಬೀರಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ಸ್ಥಳಕ್ಕೆ ಬರುವ ಅಧಿಕಾರಿಗಳು ಕಸವನ್ನು ತೆರವುಗೊಳಿಸುತ್ತಾರೆ. ಆದರೆ, ಅದು ಸಮಸ್ಯೆಗೆ ಕ್ಷಣಿಕ ಪರಿಹಾರವಷ್ಟೇ. ನಂತರ ಮತ್ತೆ ಜನರು ಇಲ್ಲಿಗೆ ಬಂದು ಕಸ ಸುರಿದು ಹೋಗುತ್ತಾರೆಂದು ತಿಳಿಸಿದ್ದಾರೆ.

**ಪ್ರತೀನಿತ್ಯ ಕಾಲೇಜಿಗೆ ಹೋಗುವಾಗ ಗುಡ್ಡದಹಳ್ಳಿ ರಸ್ತೆಯನ್ನೇ ಬಳಸುತ್ತೇನೆ. ಸ್ಥಳವು ಕಸಮಯವಾಗಿರುತ್ತದೆ. ಕೆಲವೊಮ್ಮೆ ಆ ರಸ್ತೆ ತಪ್ಪಿಸಲು ಮುಂದಾದರೆ ಕಾಲೇಜಿಗೆ ಹೋಗಲು 30-1 ಗಂಟೆ ಸಮಯ ಬೇಕಾಗುತ್ತದೆ ಎಂದು ವಿದ್ಯಾರ್ಥಿನಿ ಗರೀಮಾ ಜೈನ್ ಅವರು ಹೇಳಿದ್ದಾರೆ. ಸ್ಥಳದಲ್ಲಿನ ಪರಿಸ್ಥಿತಿ ಗಂಭೀರವಾಗಿದ್ದು, ನಮ್ಮ ಜೀವನೋಪಾಯದ ಮೇಲೂ ನೇರ ಪರಿಣಾಮ ಬೀರುತ್ತಿದೆ. ಈ ಸ್ಥಳದಲ್ಲಿ ಕೆಲಸ ಮಾಡಲು ಕಾರ್ಮಿಕರು ನಿರಾಕರಿಸುತ್ತಾರೆ. ಬಿಬಿಎಂಪಿಗೆ ಹಲವಾರು ದೂರುಗಳನ್ನು ನೀಡಿದ್ದರೂ, ಯಾವುದೇ ಪ್ರತಿಕ್ರಿಯೆ ನೀಡಿಲ್ಲ ಎಂದು ಸ್ಥಳೀಯ ನಿವಾಸಿಗಳು ಬೇಸರ ವ್ಯಕ್ತಪಡಿಸಿದ್ದಾರೆ.**

## ಸಿಎಂ ಸಂಬಂಧ ಹಾಳು ಮಾಡಲು ಕೆಲವರಿಂದ ಪ್ರಯತ್ನ

• ಉದಯವಾಹಿನಿ, ಬೆಂಗಳೂರು



ಸಿದ್ದರಾಮಯ್ಯ ನನ್ನ ನಡುವಿನ ಆತ್ಮೀಯ ಸಂಬಂಧವನ್ನು ಹಾಳು ಮಾಡಲು ಕೆಲವರು ಉದ್ದೇಶಪೂರ್ವಕವಾಗಿ ಪ್ರಯತ್ನಿಸುತ್ತಿದ್ದಾರೆ' ಎಂದು ಆಳಂದ ಶಾಸಕ ಬಿ.ಆರ್. ಪಾಟೀಲ ಹೇಳಿದ್ದಾರೆ. ವಿಡಿಯೋ ಹೇಳಿಕೆ ನೀಡಿರುವ ಅವರು, ಎಲೆಕ್ಟ್ರಾನಿಕ್ ಮತ್ತು ಸೋಷಿಯಲ್ ಮೀಡಿಯಾಗಳಲ್ಲಿ ನನ್ನ ಹೇಳಿಕೆಯನ್ನು ತಿರುಚಿ, ತೇಜೋವಧೆ ಮಾಡುವಂತಹ ಕೆಲಸ ಮಾಡುತ್ತಿರುವುದು ಸರಿಯಲ್ಲ ಎಂದಿದ್ದಾರೆ. ನಾನು ಕೆ.ಆರ್. ಪೇಟೆಯಲ್ಲಿ ಆತ್ಮೀಯರ ಜೊತೆ ಮಾತನಾಡುವಾಗ ಸಿದ್ದರಾಮಯ್ಯ ಅವರ ವಿಷಯ ಪ್ರಸ್ತಾಪ ಆದಾಗ, ನಾನು ಅವರ ಬಗ್ಗೆ ಮಾತನಾಡಿದ್ದೇನೆ.

ಅವರಿಗೆ ಲಕ್ಕಿ. ಲಾಟರಿ ಹೊಡೆದು ಸಿಎಂ ಆದರು ಎಂದಿದ್ದೆ. ನಾನು ಸೋನಿಯಾ ಗಾಂಧಿಯನ್ನು ಭೇಟಿ ಮಾಡಿಸಿದ್ದೇನೆ ಎಂದು ಹೇಳಿರುವುದು ಸಂಪೂರ್ಣ ತಪ್ಪು. ಸೋನಿಯಾ ಗಾಂಧಿಯನ್ನು ಭೇಟಿ ಮಾಡುವಾಗ ನಾನು ಜೊತೆಗಿದ್ದೆ. ಈ ಸರಿ ಭೇಟಿ ಬೇಡ ಅಂದಿದ್ದಾಗ, ನಾನೇ ಒತ್ತಾಯ ಮಾಡಿಸಿ ಭೇಟಿ ಮಾಡಿ ಎಂದಾಗ ಅವರು ಹೋಗಿದ್ದರು ಎಂದಿದ್ದಾರೆ. ವಸತಿ ಯೋಜನೆಗಳಲ್ಲಿ ಲಂಚದ ವ್ಯವಹಾರ ನಡೆಯುತ್ತಿದೆ ಎಂದು ಶಾಸಕ ಬಿ.ಆರ್ ಪಾಟೀಲ ಅವರು ಹೇಳಿದ್ದ ಆಡಿಯೊ ಬಹಿರಂಗವಾಗಿತ್ತು. ಮತ್ತೆ ಅವರು 'ಸಿದ್ದರಾಮಯ್ಯ ಲಕ್ಕಿ. ಲಾಟರಿ ಹೊಡೆದುಬಿಟ್ಟರು. ನಾನೇ ಜತೆಗೆ ಹೋಗಿ ಸೋನಿಯಾ ಗಾಂಧಿ ಭೇಟಿ ಮಾಡಿಸಿದ್ದೆ. ಹಣೆಬರಹ ಚೆನ್ನಾಗಿತ್ತು, ಸಿಎಂ ಆದರು. ನನ್ನ ಗ್ರಹಚಾರ. ಗಾಡ್ ಇಲ್ಲ, ಪಾದರ್ರೂ ಇಲ್ಲ. ಎಂದು ಅವರು ಹೇಳಿದ್ದ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಮಂಗಳವಾರ ಹರಿದಾಡಿತ್ತು. ಕೆ.ಆರ್.ಪೇಟೆಯ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿದ ಸಂದರ್ಭದಲ್ಲಿ ಕೊಠಡಿಯೊಂದರಲ್ಲಿ ಕುಳಿತು ಪಾಟೀಲ್ ಅವರು ಮೊಬೈಲ್‌ನಲ್ಲಿ ಮಾತನಾಡುವುದು ಆ ವಿಡಿಯೋದಲ್ಲಿದೆ. ಇದಕ್ಕೆ ಪ್ರತಿಕ್ರಿಯಿಸಿರುವ ಸಿದ್ದರಾಮಯ್ಯ ಹೌದು ನಾನು. ಅದೃಷ್ಟದ ಮುಖ್ಯಮಂತ್ರಿ. ನಾನು ಮತ್ತು ಪಾಟೀಲ್ ಒಟ್ಟಿಗೆ ಶಾಸಕರಾಗಿದ್ದು, ಅದಕ್ಕೇ ಹೇಳಿರಬಹುದು ಗೊತ್ತಿಲ್ಲ. ಅವರನ್ನು ಕರೆಸಿ ಮಾತಾಡುತ್ತೇನೆ' ಎಂದು ಹೇಳಿದ್ದರು.

**'ಸಿದ್ದರಾಮಯ್ಯ ಅವರು ಮಾಸ್ ಲೀಡರ್. ಅವರನ್ನು ಮುಖ್ಯಮಂತ್ರಿ ಮಾಡುವ ಶಕ್ತಿ ನನಗಿಲ್ಲ. ನಾವು ಒಂಬತ್ತು ಜನ ಶಾಸಕರು ಜೆಡಿಎಸ್ ಬಿಟ್ಟು ಅವರ ನಾಯಕತ್ವದಲ್ಲಿ ಕಾಂಗ್ರೆಸ್ ಸೇರಿದ್ದೆವು. ಕಾಂಗ್ರೆಸ್ ಕೂಡಾ ಅವರ ಜನಬೆಂಬಲ ನೋಡಿ ಅವರನ್ನು ಮುಖ್ಯಮಂತ್ರಿ ಮಾಡಿದೆ. ಹೊರತಾಗಿ ನಾವು ಹೇಳಿದ್ರಿಂದ ಮಾಡಿಲ್ಲ' ಎಂದು ತಿಳಿಸಿದ್ದಾರೆ.**

## ಬಿಬಿಎಂಪಿ ನೌಕರ ಮಾಯಣ್ಣ, ರಮೇಶ್ ಸದರಿ ರವರ ವಿರುದ್ಧ ಕಾನೂನು ರೀತಿ ಕ್ರಮ

• ಉದಯವಾಹಿನಿ, ಬೆಂಗಳೂರು

ಹಾಲಿ ಅಮಾನತ್ತಿನಲ್ಲಿರುವ ರಮೇಶ್ ಗ್ಯಾಂಗ್‌ಮೆನ್ ಮತ್ತು ಮಾಯಣ್ಣ ಪ್ರಥಮ ದರ್ಜೆ ಗುಮಾಸ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರ ವಿರುದ್ಧ ಪೊಲೀಸ್ ಠಾಣೆಗಳಲ್ಲಿ, ಸರ್ಕಾರಕ್ಕೆ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಪೂರ್ವ ನಿಯೋಜಿತ ವ್ಯವಸ್ಥಿತ ಪಿತೂರಿ ಮಾಡಿ, ಸುಳ್ಳು ದೂರುಗಳನ್ನು ದಾಖಲಿಸುತ್ತಿದ್ದು, ಸದರಿ ದೂರುಗಳನ್ನು ವಿಚಾರಣೆ ಮಾಡಿ, ಸದರಿ ದೂರುಗಳು ಸುಳ್ಳೆಂದು ಪೊಲೀಸ್ ಇಲಾಖೆಯ ತನಿಖೆ ಮತ್ತು ಮುಖ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ವಿಚಾರಣೆಯಲ್ಲಿ ಸಾಭೀತಾದ ಹಿನ್ನೆಲೆಯಲ್ಲಿ ಸದರಿರವರಿಗೆ ನೀವು ದಾಖಲಿಸಿರುವ ದೂರುಗಳು ಸುಳ್ಳೆಂದು ಮಾನ್ಯ ಮುಖ್ಯ ಆಯುಕ್ತರು ಬಿಬಿಎಂಪಿ ರವರು ಹಿಂಬರಹ ನೀಡಲಾಗಿರುತ್ತದೆ. ಸಹಾಯಕ ಪೊಲೀಸ್ ಆಯುಕ್ತರು ಯಶವಂತಪುರ ಠಾಣೆ, ಸಹಾಯಕ ಪೊಲೀಸ್ ಆಯುಕ್ತರು ಹಲಸೂರುಗೇಟ್ ಪೊಲೀಸ್ ಠಾಣೆ ಮತ್ತು ಸಿ.ಸಿ.ಬಿ ಪೊಲೀಸ್ ರವರು ಸಹ ಮಾಯಣ್ಣ ರಮೇಶ್ ದಾಖಲಿಸಿರುವ ದೂರುಗಳು ಸುಳ್ಳು ದೂರುಗಳೆಂದು ಹಿಂಬರಹ ನೀಡಲಾಗಿರುತ್ತದೆ. ಸದರಿ ಹಿಂಬರಹದ ಆಧಾರದ ಮೇಲೆ ಹಾಲಿ ಅಮಾನತ್ತಿನಲ್ಲಿರುವ ಮಾಯಣ್ಣ, ಗ್ಯಾಂಗ್‌ಮೆನ್ ರಮೇಶ್ ರವರ ವಿರುದ್ಧ ಉಲ್ಲೇಖ 3 ರಿಂದ 6 ರಂತೆ ಮಾನ್ಯ ಸಿಟಿ ಸಿವಿಲ್ ನ್ಯಾಯಾಲಯದಲ್ಲಿ ಮಾನ ನಷ್ಟಮೊಕದ್ದಮೆ ದಾವೆ ಸಂಖ್ಯೆ: OS/6225/2022 ಹೂಡಲಾಗಿದ್ದು, ರೂ.10,00,000/-ಗಳನ್ನು ಪಾವತಿಸುವಂತೆ ಮಾನ್ಯ ನ್ಯಾಯಾಲಯವು ಆದೇಶಿಸಿರುತ್ತದೆ.



**ಮಾನ್ಯ ಸಿಟಿ ಸಿವಿಲ್ ನ್ಯಾಯಾಲಯದಲ್ಲಿ ಔಖ/1351/2022 ರಂತೆ ಮಾಯಣ್ಣ ಮತ್ತು ರಮೇಶ್ ರವರು ಬಿಬಿಎಂಪಿ ನೌಕರರ ಸಂಘದ ಪದಾಧಿಕಾರಿಗಳ ವಿರುದ್ಧ ಯಾವುದೇ ರೀತಿ ಸಾಮಾಜಿಕ ಜಾಲತಾಣ, ಪತ್ರಿಕಾ/ದೃಶ್ಯ ಮಾಧ್ಯಮದಲ್ಲಿ ತೇಜೋವಧೆ ಮಾಡಬಾರದೆಂದು ತಡೆಯಾಜ್ಞೆ (Injuction Order) ಇದ್ದರೂ ಸಹ ಹಾಲಿ ಅಮಾನತ್ತಿನಲ್ಲಿರುವ ಗ್ಯಾಂಗ್‌ಮೆನ್ ರಮೇಶ ಮತ್ತು ಮಾಯಣ್ಣ ಪ್ರಥ.ಗು ರವರು ಸರ್ಕಾರಕ್ಕೆ, ಪೊಲೀಸ್ ಇಲಾಖೆಗೆ, ಬಿ.ಬಿ.ಎಂ.ಪಿಗೆ ಸುಳ್ಳು ದೂರುಗಳನ್ನು ನೀಡಿ, ದಿಕ್ಕು ತಪ್ಪಿಸಿ ವಂಚನೆ/ದ್ರೋಹ ಮಾಡುತ್ತಿರುವುದರಿಂದ, ಸದರಿ ರವರ ವಿರುದ್ಧ ಕಾನೂನು ರೀತಿ ಶಿಸ್ತು ಕ್ರಮ ಜರುಗಿಸಲು ಎ.ಅಮೃತ್ ರಾಜ್ ರವರು ಅಪರ ಮುಖ್ಯ ಕಾರ್ಯದರ್ಶಿಗಳು ನಗರಾಭಿವೃದ್ಧಿ ಇಲಾಖೆಗೆ ಮನವಿ ಮಾಡಿದ್ದಾರೆ.**

## ಹೆಸರು ಬದಲಾವಣೆಗೆ ಸಚಿವ ಸಂಪುಟ ಅನುಮೋದನೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರಾಮನಗರ ನಂತರ ಮತ್ತೊಂದು ಜಿಲ್ಲೆಯ ಹೆಸರು ಬದಲಾವಣೆಗೆ ನಿರ್ಧರಿಸಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲೆಯನ್ನು ಬೆಂಗಳೂರು ಉತ್ತರ ಜಿಲ್ಲೆ ಎಂದು ಮರು ನಾಮಕರಣ ಮಾಡಲು ಬುಧವಾರ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ.

ನಂದಿ ಗಿರಿಧಾಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯನ್ನು ಬೆಂಗಳೂರು ಉತ್ತರ ಜಿಲ್ಲೆ ಎಂದು, ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿಯನ್ನು ಭಾಗ್ಯನಗರ ಎಂದು ಮರು ನಾಮಕರಣ ಮಾಡಲು ಅನುಮೋದನೆ ನೀಡಲಾಗಿದೆ. ಈಗಾಗಲೇ ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಎಂದು ಮರುನಾಮಕರಣ ಮಾಡಲಾಗಿದೆ. ಇದೀಗ ನೆಲಮಂಗಲ, ದೊಡ್ಡಬಳ್ಳಾಪುರ, ದೇವನಹಳ್ಳಿ ಹೊಸಕೋಟೆ ತಾಲ್ಲೂಕುಗಳನ್ನೊಳಗೊಂಡ ಬೆಂಗಳೂರು ಗ್ರಾಮಾಂತರ ಜಿಲ್ಲೆಯನ್ನು ಬೆಂಗಳೂರು ಉತ್ತರ ಜಿಲ್ಲೆ ಎಂದು ಮರು ನಾಮಕರಣ ಮಾಡಲಾಗಿದೆ.

ಇನ್ನು ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಪಟ್ಟಣಕ್ಕೆ ಭಾಗ್ಯನಗರ ಎಂದು ಹೆಸರಿಡಬೇಕು ಎಂದು ಸ್ಥಳೀಯ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರು. ಈ ಬಗ್ಗೆ ಇಂದು ಸಂಪುಟದಲ್ಲಿ ಚರ್ಚಿಸಿ, ಅನುಮೋದನೆ ನೀಡಿದ್ದು, ಬಾಗೇಪಲ್ಲಿ ಇನ್ಮುಂದೆ 'ಭಾಗ್ಯನಗರ' ಎಂದು ಬದಲಾಗಲಿದೆ. ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳ ಜೊತೆಗೆ ಚಿತ್ರದುರ್ಗ, ಶಿವಮೊಗ್ಗ, ವಿಜಯನಗರ, ಕೊಪ್ಪಳ, ಬೆಳಗಾವಿ ಸೇರಿದಂತೆ ವಿವಿಧ ಜಿಲ್ಲೆಗಳ ಅಭಿವೃದ್ಧಿ ಕಾರ್ಯಗಳ ಕುರಿತು ಸಂಪುಟ ಸಭೆಯಲ್ಲಿ ಚರ್ಚೆ ನಡೆಸಲಾಗಿದೆ.

## ಪೌರ ಕಾರ್ಮಿಕರಿಂದ ಮನೆಗೆ ಸ್ಟಿಕ್ಕರ್!

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಕರ್ನಾಟಕ ಸರ್ಕಾರ ಬಿಬಿಎಂಪಿ ಸಹಯೋಗದೊಂದಿಗೆ, ಬೆಂಗಳೂರು ನಗರದಾದ್ಯಂತ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆಯನ್ನು ನಡೆಸುತ್ತಿದೆ. ಆದರೆ ನಗರದ ಅನೇಕ ಕಡೆ ಇದು ಕಾಟಚಾರಕ್ಕೆ ಮಾಡುತ್ತಿರುವ ಸಮೀಕ್ಷೆ ಎಂಬ ಆರೋಪ ಕೇಳಿ ಬಂದಿತ್ತು. ಈ ಬೆನ್ನಲ್ಲೇ ಪಬ್ಲಿಕ್ ಟಿವಿ ಕೂಡ ರಿಯಾಲಿಟಿ ಚೆಕ್ ಮಾಡಿದಾಗ ಸಮೀಕ್ಷೆಯ ಕಳ್ಳಾಟ ಬಯಲಾಗಿದೆ.


ನಗರದ ಹಲವು ಕಡೆ ಸಮೀಕ್ಷೆ ಹೋದವರು, ಮನೆಗಳಿಗೆ ಕೇವಲ ಚೀಟಿ ಅಂಟಿಸಿ ಹೋಗುತ್ತಿದ್ದು, ನಿವಾಸಿಗಳ ಬಳಿ ಯಾವುದೇ ದಾಖಲೆ, ಮಾಹಿತಿ ಕೇಳುತ್ತಿಲ್ಲ. ಇನ್ನು ಕೆಲವು ಕಡೆ ಪೌರ ಕಾರ್ಮಿಕರು ಮನೆಯ ಗೋಡೆಗಳಿಗೆ ಚೀಟಿ ಅಂಟಿಸಿ ಹೋಗುತ್ತಿದ್ದಾರೆ. ಈ ಸಂಬಂಧ ನಗರದ ಹಲವು ಕಡೆ ನಿಮ್ಮ ಪಬ್ಲಿಕ್ ಟಿವಿ ರಿಯಾಲಿಟಿ ಚೆಕ್ ಮೂಲಕ ಸತ್ಯ ಸತ್ಯತೆಯನ್ನ ಹೊರಗೆಳೆದಿದೆ. ಕಾಟಚಾರದ ಸಮೀಕ್ಷೆ ಹೇಗಿದೆ ಎನ್ನುವುದಕ್ಕೆ ಸಿಸಿಟಿವಿ ಸಾಕ್ಷ್ಯ ಲಭ್ಯವಾಗಿದೆ. ನಗರದ ಹೆಚ್‌ಬಿಆರ್ ಲೇಔಟ್‌ನಲ್ಲಿ ಮನೆಯಲ್ಲಿದ್ದ ಯಾರನ್ನೂ ಸಂಪರ್ಕ ಮಾಡದೇ ಮನೆಗೆ ಬಂದವರೇ ಗೋಡೆಗೆ ಸ್ಟಿಕ್ಕರ್ ಅಂಟಿಸಿ ಹೋಗಿದ್ದಾರೆ.

ಬಿಬಿಎಂಪಿ ಅಧಿಕಾರಿ ಸಿಬ್ಬಂದಿಗಳ ಕಳ್ಳಾಟದ ವಿಡಿಯೋವನ್ನು ಕೂಡ ಬೆಂಗಳೂರಿಗರು ಬಿಡುಗಡೆ ಮಾಡಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ರೈಲ್ವೆ ಟಿಕೆಟ್ ದರ ಏರಿಕೆಯನ್ನು ತಕ್ಷಣವೇ ಹಿಂಪಡೆಯಬೇಕು

### ಸರ್ಕಾರದ ಬೆಲೆಯೇರಿಕೆಗೆ ರಾಜ್ಯದ ಬಿಜೆಪಿ ನಾಯಕರ ಮೌನ ಖಂಡನೀಯ ಎಂದು ಸಿಎಂ ಆಗ್ರಹ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ರೈಲ್ವೇ ಟಿಕೆಟ್ ದರ ಏರಿಕೆಯನ್ನು ತಕ್ಷಣವೇ ಹಿಂಪಡೆಯಬೇಕು. ಕೇಂದ್ರ ಸರ್ಕಾರದ ಬೆಲೆಯೇರಿಕೆಗೆ ರಾಜ್ಯದ ಬಿಜೆಪಿ ನಾಯಕರ ಮೌನ ಖಂಡನೀಯ ಎಂದು ಸಿಎಂ ಸಿದ್ದರಾಮಯ್ಯ ಆಗ್ರಹಿಸಿದ್ದಾರೆ.

ರೈಲ್ವೆ ಟಿಕೆಟ್ ದರ ಏರಿಕೆ ಕುರಿತು ಮಾಧ್ಯಮ ಪ್ರಕಟಣೆ ಹೊರಡಿಸಿದ ಅವರು, ಸಾಮಾನ್ಯ ಜನರ ಸಾರಿಗೆಯಾಗಿಯೇ ಜನಪ್ರಿಯವಾಗಿರುವ ರೈಲುಗಳ ಪ್ರಯಾಣ ದರವನ್ನು ಹೆಚ್ಚಿಸುವ ಮೂಲಕ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ ದೇಶದ ಕೋಟ್ಯಂತರ ಮಧ್ಯಮ ಮತ್ತು ಬಡವರ್ಗದ ಬದುಕಿನ ಮೇಲೆ ಬರೆ ಎಳೆದಿದೆ. ಈ ಬೆಲೆ ಏರಿಕೆಯನ್ನು ತಕ್ಷಣ ಹಿಂತೆಗೆದುಕೊಳ್ಳಬೇಕೆಂದು ಪ್ರಧಾನಿ ನರೇಂದ್ರ ಮೋದಿಯವರನ್ನು ಒತ್ತಾಯಿಸಿದರು.

ಏರುತ್ತಲೇ ಇರುವ ಪೆಟ್ರೋಲ್, ಡೀಸೆಲ್. ಅಡುಗೆ ಅನಿಲದ ದರಗಳ ಭಾರದಿಂದ ಜನರು ಈಗಾಗಲೇ ತತ್ತರಿಸಿಹೋಗಿದ್ದಾರೆ.

ಹಾಲು, ಮೊಸರು, ಚಹಾ ಪುಡಿಯಿಂದ ಹಿಡಿದು ಪಾಪ್ ಕಾರ್ನ್‌ವರೆಗೆ ಎಲ್ಲದರ ಮೇಲೆ ಜಿಎಸ್‌ಟಿ ಹೇರಿಕೆಯಿಂದಾಗಿ ಪ್ರತಿಯೊಂದು ಕುಟುಂಬದ ಬಜೆಟ್ ಏರುಪೇರಾಗಿದೆ. ಇದೇ ವೇಳೆ ರೈಲು ಪ್ರಯಾಣದ ದರ ಹೆಚ್ಚಿಸುವ ಮೂಲಕ ನರೇಂದ್ರ ಮೋದಿ ಸರ್ಕಾರ ಜನರ ಜೇಬು ಖಾಲಿ ಮಾಡಲು ಹೊರಟಿದೆ ಎಂದು ಕಿಡಿಕಾರಿದರು.

ನಮ್ಮ ಸರ್ಕಾರ ರೈತರಿಗೆ ನೆರವಾಗುವ ಉದ್ದೇಶದಿಂದ ಹಾಲಿನ ದರ ಏರಿಕೆ ಮಾಡಿದಾಗ ಜನವಿರೋಧಿ ಎಂದು ಬೊಬ್ಬಿಟ್ಟಿದ್ದ ಬಿಜೆಪಿ ನಾಯಕರು ತಮ್ಮದೇ ಸರ್ಕಾರ ರೈಲು ಪ್ರಯಾಣ ಹೆಚ್ಚಿಸಿದಾಗ ಸದ್ದಿಲ್ಲದೆ ಬಿಲ ಸೇರಿಕೊಂಡಿದ್ದಾರೆ.

ಬೆಂಗಳೂರು ಮೆಟ್ರೊ ರೈಲಿನ ಪ್ರಯಾಣ ದರ ಏರಿಕೆಯಾದಾಗ ಬೀದಿಗಿಳಿದಿದ್ದ ಬಿಜೆಪಿ ನಾಯಕರು ಕೇಂದ್ರ ಸರ್ಕಾರದ ಪ್ರತಿನಿಧಿಗಳನ್ನು ಹೊಂದಿರುವ ದರ ನಿರ್ಣಯ ಸಮಿತಿಯೇ ಆ ಏರಿಕೆಯ ನಿರ್ಧಾರ ಕೈಗೊಂಡಿರುವುದನ್ನು ಬಚ್ಚಿಟ್ಟು ನಮ್ಮ ಸರ್ಕಾರದ ವಿರುದ್ಧ ಜನರನ್ನು ಎತ್ತಿಕಟ್ಟುವ ವಿಫಲ ಪ್ರಯತ್ನ ನಡೆಸಿದ್ದರು ಎಂದು ಹರಿಹಾಯ್ದರು. ರೈಲ್ವೆ ಇಲಾಖೆ ಸಂಪೂರ್ಣವಾಗಿ ಕೇಂದ್ರ ಸರ್ಕಾರದ ಸ್ವಾಮ್ಯದಲ್ಲಿದ್ದು, ಪ್ರಪಂಚದಲ್ಲಿಯೇ ಅತ್ಯಂತ ಹೆಚ್ಚು ಪ್ರಯಾಣಿಕರು ಸಂಚರಿಸುವ ಈ ಸಾರಿಗೆ ವ್ಯವಸ್ಥೆ ಈಗಲೂ ಲಾಭದಾಯಕವಾಗಿದೆ.

**ರೈಲ್ವೆ ಇಲಾಖೆಗೆ ಸಂಬಂಧಿಸಿದ ಪ್ರತ್ಯೇಕ ಬಜೆಟ್ ಮಂಡನೆಯ ಪದ್ಧತಿಯನ್ನು ನರೇಂದ್ರ ಮೋದಿ ಸರ್ಕಾರ ಕೈಬಿಟ್ಟಿರುವ ಕಾರಣ ಇಲಾಖೆಯ ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆಯೇ ಇಲ್ಲದಂತಾಗಿದೆ. ಈ ಹಿನ್ನೆಲೆಯಲ್ಲಿ ರೈಲುಗಳ ಪ್ರಯಾಣ ದರವನ್ನು ಹೆಚ್ಚಿಸುವ ಮೊದಲು ಇಲಾಖೆಯ ಕಾರ್ಯನಿರ್ವಹಣೆಯ ಬಗ್ಗೆ ಶ್ವೇತಪತ್ರವನ್ನು ದೇಶದ ಜನತೆಯ ಮುಂದಿಡಬೇಕೆಂದು ಪ್ರಧಾನಿ ನರೇಂದ್ರ ಮೋದಿಯವರನ್ನು ಒತ್ತಾಯಿಸುತ್ತೇನೆ ಎಂದರು**

# ಟ್ರಾಮಾ ಕೇರ್‌ನಲ್ಲಿ ತಾಂತ್ರಿಕ ಪರಿಣತರ ಕೊರತೆ

## ಸರಕಾರ ಕಾಯಂ ವೈದ್ಯರು, ನರ್ಸ್ ಹಾಗೂ ಕೌಶಲ ಸಿಬ್ಬಂದಿಯನ್ನು ನೇಮಕ ಮಾಡಿಲ್ಲ

• ಉದಯವಾಹಿನಿ, ಮೈಸೂರು

ಅಪಘಾತಕ್ಕೆ ಒಳಗಾದವರಿಗೆ ತುರ್ತು ಚಿಕಿತ್ಸೆ ನೀಡುವ ಮೈಸೂರಿನ ಕೆಆರ್‌ಎಸ್ ರಸ್ತೆಯ ಪ್ರಿನ್ಸಸ್ ಕೃಷ್ಣರಾಜಮ್ಮಣ್ಣಿ ಟ್ರಾಮಾಕೇರ್ ಆಸ್ಪತ್ರೆಗೆ ಯಂತ್ರೋಪಕರಣ ನಿರ್ವಹಣೆ ಸೇರಿದಂತೆ ಇನ್ನಿತರ ಟೆಕ್ನಿಕಲ್ ಕೆಲಸ ಮಾಡುವ ಸಿಬ್ಬಂದಿ ಕೊರತೆ ಎದುರಾಗಿದೆ. ಇದರಿಂದ ರೋಗಿಗಳಿಗೆ ಸಮರ್ಪಕ ಚಿಕಿತ್ಸೆ ನೀಡಲು ಹಿನ್ನಡೆಯಾಗಿದೆ. ಬಡ ರೋಗಿಗಳು ಆಸ್ಪತ್ರೆಗೆ ಬರಲು ಪೂರಕ ಸಾರಿಗೆ ವ್ಯವಸ್ಥೆ ಇಲ್ಲ. ಟ್ರಾಮಾಕೇರ್ ಆಸ್ಪತ್ರೆ ಬಗ್ಗೆ ಮಾಹಿತಿ ಕೊರತೆಯಿಂದ ಅಪಘಾತದಿಂದ ಗಂಭೀರ ಸ್ಥಿತಿಯಲ್ಲಿರುವ ರೋಗಿಗಳ ಚಿಕಿತ್ಸೆ ವಿಳಂಬವಾಗುತ್ತಿದೆ. ಎಲ್ಲಾ ರೀತಿಯ ಅಪಘಾತಕ್ಕೆ ಒಳಗಾದವರಿಗೆ ತುರ್ತು ಚಿಕಿತ್ಸೆ, ಸರ್ಜರಿ ಮಾಡಲೆಂದೇ ಟ್ರಾಮಾಕೇರ್ ಆಸ್ಪತ್ರೆ ಆರಂಭಿಸಲಾಗಿದೆ. ಈ ಆಸ್ಪತ್ರೆಯು 140 ಹಾಸಿಗೆ ಸೌಲಭ್ಯ ಹೊಂದಿದೆ.

ಈ ಮೊದಲು ಅಪಘಾತಕ್ಕೆ ಒಳಗಾದವರನ್ನು ಬೆಂಗಳೂರಿನ ನಿಮ್ಹಾನ್ಸ್‌ಗೆ ಕರೆದುಕೊಂಡು ಹೋಗಬೇಕಾಗಿತ್ತು. ಇದರಿಂದ ಚಿಕಿತ್ಸೆ ವಿಳಂಬವಾಗಿ ಎಷ್ಟೋ ಜನ ಮಾರ್ಗಮಧ್ಯೆ ಮೃತಪಡುತ್ತಿದ್ದರು. ಇದನ್ನು ತಡೆಗಟ್ಟುವ ಉದ್ದೇಶದಿಂದ ಮೈಸೂರಿನಲ್ಲಿ ಟ್ರಾಮಾಕೇರ್ ಆಸ್ಪತ್ರೆ ನಿರ್ಮಾಣ ಮಾಡಲಾಯಿತು. ಮೈಸೂರು ಅಷ್ಟೇ ಅಲ್ಲದೆ ಅಕ್ಕಪಕ್ಕದ ಜಿಲ್ಲೆಯ ರೋಗಿಗಳು ಇಲ್ಲಿನ ಸೇವೆ ಪಡೆಯುತ್ತಿದ್ದಾರೆ. ಪ್ಲಾಸ್ಟಿಕ್ ಸರ್ಜರಿಯಿಂದ ಹಿಡಿದು ಜನರಲ್ ಸರ್ಜರಿವರೆಗೂ ಇಲ್ಲಿ ನಡೆಯುತ್ತಿವೆ.



ಉದಯವಾಹಿನಿ ಚಿತ್ರ

**ಆಸ್ಪತ್ರೆಗೆ ಬರಲು ಸಾರಿಗೆ ವ್ಯವಸ್ಥೆ ಇಲ್ಲ**

**ಸಿಬ್ಬಂದಿ ಕೊರತೆ:** ಸರಕಾರ ಕಾಯಂ ವೈದ್ಯರು, ನರ್ಸ್ ಹಾಗೂ ಕೌಶಲ ಸಿಬ್ಬಂದಿಯನ್ನು ನೇಮಕ ಮಾಡಿಲ್ಲ. ಪರಿಣಾಮ ಆಡಳಿತ ವ್ಯವಸ್ಥೆ ಇರುವ ಇತಿಮಿತಿಯಲ್ಲೇ ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಲು ಪ್ರಯತ್ನಿಸುತ್ತಿದೆ. ಇದರೊಂದಿಗೆ ಕ್ಯಾಂಟೀನ್ ಹಾಗೂ ರೋಗಿಗಳ ಸಂಬಂಧಿಕರು ಉಳಿಯಲು ಡಾರ್ಮೆಟರಿ ವ್ಯವಸ್ಥೆಯೂ ಆಗಬೇಕಿದೆ. ಎಷ್ಟೋ ಜನರಿಗೆ ಟ್ರಾಮಾಕೇರ್ ಆಸ್ಪತ್ರೆ ಬಗ್ಗೆ ಮಾಹಿತಿ ಇಲ್ಲದ್ದರಿಂದ ಹೆಚ್ಚು ಪ್ರಚಾರಪಡಿಸಬೇಕಿದೆ.

**ಸಾರಿಗೆ ಸಂಪರ್ಕ ಬೇಕು**

**ಕೆ.ಆರ್.ಆಸ್ಪತ್ರೆಯಿಂದ ಟ್ರಾಮಾಕೇರ್ ಆಸ್ಪತ್ರೆಗೆ ಬರಲು ನೇರ ಬಸ್ ಬೇಕೆಂಬ ಆಗ್ರಹವೂ ಇಧಿದೆ. ಕೆಆರ್‌ಎಸ್ ರಸ್ತೆಯಲ್ಲಿ ಟ್ರಾಮಾಕೇರ್ ಆಸ್ಪತ್ರೆ, ಜಯದೇವ ಹೃದ್ರೋಗ ಆಸ್ಪತ್ರೆ, ಜಿಲ್ಲಾಸ್ಪತ್ರೆ, ಪಿ.ಕೆ. ಸ್ಯಾನಿಟೋರಿಯಂ ಆಸ್ಪತ್ರೆ, ಆಯುರ್ವೇದ ಪಂಚಕರ್ಮ ಆಸ್ಪತ್ರೆ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಬರುವುದರಿಂದ ಹೆಚ್ಚು ಬಸ್ ಸೌಲಭ್ಯ ಒದಗಿಸಿದರೆ ರೋಗಿಗಳು, ಅವರ ಕಡೆಯವರಿಗೆ ಅನುಕೂಲವಾಗುತ್ತದೆ ಎಂಬ ಅಭಿಪ್ರಾಯವೂ ಕೇಳಿ ಬಂದಿದೆ.**

**ಟ್ರಾಮಾಕೇರ್ ಆಸ್ಪತ್ರೆಯಲ್ಲಿ ಸಿಬ್ಬಂದಿ ಕೊರತೆ ಇದೆ. ಆದರೆ, ಸರಕಾರ ಸರ್ವಿಸ್ ಕಾಂಟ್ರ್ಯಾಕ್ಟ್‌ನಲ್ಲಿ ಸಿಬ್ಬಂದಿ ನೇಮಕ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದೆ. ಹಾಗಾಗಿ ಗುತ್ತಿಗೆ ಆಧಾರದಲ್ಲಿ ಸಿಬ್ಬಂದಿಯನ್ನು ಹಂತಹಂತವಾಗಿ ನೇಮಕ ಮಾಡಿಕೊಳ್ಳಲಾಗುತ್ತಿದೆ.**

**– ಡಾ.ಕೆ.ಆರ್.ದ್ರಾಕ್ಷಾಯಿಣಿ, ಡೀನ್, ನಿರ್ದೇಶಕಿ, ಮೈಸೂರು ವೈದ್ಯಕೀಯ ಮತ್ತು ಸಂಶೋಧನಾ ಸಂಸ್ಥೆ.**

**ಏನಿದು ಟ್ರಾಮಾ ಕೇರ್?:** ಅಪಘಾತಗಳು ಸಂಭವಿಸಿದ ಸಂದರ್ಭದಲ್ಲಿ ತಲೆಗೆ ಆಗುವ ಗಾಯದಿಂದ ಉಂಟಾಗುವ ಪ್ರಾಣಾಪಾಯವನ್ನು ತಪ್ಪಿಸುವುದು, ಚಿಕಿತ್ಸೆಯ ವಿಳಂಬದ ಕಾರಣಕ್ಕೆ ವಿಶೇಷಚೇತನರಾಗುವುದನ್ನು ತಪ್ಪಿಸುವುದು ಟ್ರಾಮಾ ಕೇರ್ ಸೇವೆಯ ಮೂಲ ಉದ್ದೇಶವಾಗಿದೆ.

ಒಂದು ಸಣ್ಣ ಮೂಳೆ ಮುರಿತಕ್ಕೂ ಖಾಸಗಿ ಆಸ್ಪತ್ರೆಯಲ್ಲಿ ಲಕ್ಷಾಂತರ ರೂ. ವ್ಯಯಿಸಬೇಕು. ಆದರೆ, ಇಲ್ಲಿ ಬಿಪಿಎಲ್ ಕಾರ್ಡ್ ಇರುವವರಿಗೆ ಉಚಿತ ಹಾಗೂ ಬಿಪಿಎಲ್ ಇಲ್ಲದವರಿಗೆ 10 ರಿಂದ 15 ಸಾವಿರ ರೂ. ನಲ್ಲಿ ಉತ್ತಮ ಚಿಕಿತ್ಸೆ ನೀಡಲಾಗುತ್ತದೆ. ಟ್ರಾಮಾ ಕೇರ್ ಆಸ್ಪತ್ರೆಯಲ್ಲಿ ಮೂರು ಬಗೆಯ ಐಸಿಯು ಸೇವೆ, ತಲೆಗೆ ಆದ ಗಾಯ, ಮೂಳೆ ಮುರಿತ, ರಕ್ತ ಹೆಪ್ಪುಗಟ್ಟಿರುವುದು ನ್ಯೂರೊ ಸರ್ಜರಿಯಂತಹ ಚಿಕಿತ್ಸೆ ದೊರೆಯುತ್ತದೆ. 12ಕ್ಕೂ ಹೆಚ್ಚು ಐಸಿಯು ಬೆಡ್ ಸೌಲಭ್ಯವಿದೆ.

# ಶೇಂಗಾ ಬಿತ್ತನೆ ಪ್ರದೇಶ ಮತ್ತಷ್ಟು ಕುಗ್ಗುವ ಸಾಧ್ಯತೆ

• ಉದಯವಾಹಿನಿ, ಶಿರಾ

ತಾಲ್ಲೂಕಿನಲ್ಲಿ ಸಮರ್ಪಕವಾಗಿ ಮಳೆಯಾಗದ ಕಾರಣ ಬಿತ್ತನೆ ಕುಂಠಿತಗೊಂಡಿದೆ. ಮುಂಗಾರು ಹಂಗಾಮಿನಲ್ಲಿ ತಾಲ್ಲೂಕಿನಲ್ಲಿ 44,500 ಹೆಕ್ಟೇರ್ ಬಿತ್ತನೆ ಗುರಿಯಿದ್ದು, ಈವರೆಗೆ 8,965 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡಲಾಗಿದೆ. ಶೇ 20.15ರಷ್ಟು ಮಾತ್ರ ಬಿತ್ತನೆಯಾಗಿದೆ. ಶೇ 60ರಿಂದ 70 ಭಾಗದಷ್ಟು ಉಳುಮೆ ಮಾಡಲಾಗಿದೆ. ಮೋಡದ ವಾತಾವರಣ ಇದ್ದು, ಮಳೆ ಬಾರದೆ ರೈತರು ಬಿತ್ತನೆ ಮಾಡಲು ಸಾಧ್ಯವಾಗಿಲ್ಲ, ಮತ್ತೊಂದು ಕಡೆ ಮಳೆ ಇಲ್ಲದೆ ಬೆಳೆ ಬಾಡುತ್ತಿದೆ.

**ಬಿತ್ತನೆ ಬೀಜ:** ಭತ್ತ, ರಾಗಿ, ಮುಸುಕಿನ ಜೋಳ, ತೊಗರಿ, ಅಲಸಂದೆ, ಹೆಸರು ಮತ್ತು ಶೇಂಗಾ ಬಿತ್ತನೆ ಬೀಜವನ್ನು ಐದು ರೈತ ಸಂಪರ್ಕ ಕೇಂದ್ರಗಳು ಹಾಗೂ ಎರಡು ಹೆಚ್ಚುವರಿ ಮಾರಾಟ ಕೇಂದ್ರಗಳಲ್ಲಿ ರಿಯಾಯಿತಿ ದರದಲ್ಲಿ ರೈತರಿಗೆ ವಿತರಿಸಲಾಗುತ್ತಿದೆ. ಇದರ ಜೊತೆಗೆ ತಾಲ್ಲೂಕಿನಲ್ಲಿ ಈವರೆಗೆ 3,546 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಇದ್ದು, ಅದರಲ್ಲಿ 1,285 ಮೆಟ್ರಿಕ್ ಟನ್ ರಸಗೊಬ್ಬರ ವಿತರಿಸಲಾಗಿದೆ.



ಉದಯವಾಹಿನಿ ಚಿತ್ರ

**ಶೇಂಗಾದಿಂದ ಹಿಮ್ಮುಖ:** ತಾಲ್ಲೂಕಿನಲ್ಲಿ ಶೇಂಗಾ ಪ್ರಮುಖ ಬೆಳೆಯಾಗಿದ್ದು, 23,200 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ. ಆದರೆ ಇತ್ತೀಚಿನ ದಿನಗಳಲ್ಲಿ ರೈತರು ಶೇಂಗಾ ಬೆಳೆಯಿಂದ ಹಿಮ್ಮುಖರಾಗುತ್ತಿದ್ದು, ಅಡಿಕೆಗೆ ಒತ್ತು ನೀಡಿದ್ದಾರೆ. ಇದರ ಜೊತೆಗೆ ಕೆಲವು ರೈತರು ಹತ್ತಿ ಬಿತ್ತನೆ ಮಾಡಿದ್ದಾರೆ.

**ಕೆಲವೆಡೆ ಶೇಂಗಾವನ್ನು ಈಗಾಗಲೇ ಬಿತ್ತನೆ ಮಾಡಿದ್ದು, ಹೂವು ಬಿಡುವ ಹಂತದಲ್ಲಿದೆ. ಮಳೆ ಇಲ್ಲದೆ ಗಿಡ ಬಾಡುತ್ತಿವೆ. ಈ ಬಾರಿ ಉತ್ತಮ ಮಳೆಯಾಗುವುದು ಎಂದು ಹವಾಮಾನ ಇಲಾಖೆ ವರದಿಗಳನ್ನು ನಂಬಿ ಸಾಲ ಮಾಡಿ ಶೇಂಗಾ ಬಿತ್ತನೆ ಮಾಡಿದ್ದು, ಈಗ ನೋಡಿದರೆ ಮಳೆ ಇಲ್ಲ ಮುಂದೆ ಏನಾಗಬಹುದು ಎನ್ನುವ ಚಿಂತೆ ಮೂಡಿದೆ**

**–ರಾಮಕೃಷ್ಣಪ್ಪ, ರೈತ**

ಶೇಂಗಾಗೆ ಖರ್ಚು ಹೆಚ್ಚು ಬರುತ್ತಿದ್ದು ಖರ್ಚು ಮಾಡಿದಷ್ಟೂ ಆದಾಯ ಬರದಿರುವುದರಿಂದ ರೈತರು ಶೇಂಗಾ ಬಿಟ್ಟು ಪರ್ಯಾಯ ಬೆಳೆಗಳ ಕಡೆ ಮುಖ ಮಾಡಿದ್ದಾರೆ. ಈಗ ಮಳೆ ಕೊರತೆಯೂ ಎದುರಾಗಿರುವುದರಿಂದ ಈ ಬಾರಿ ಶೇಂಗಾ ಬಿತ್ತನೆ ಮತ್ತಷ್ಟು ಕಡಿಮೆಯಾಗುವ ಸಾಧ್ಯತೆ ಇದೆ.

# ಬೀದಿಯಲ್ಲಿ ಕಾನ್‌ಸ್ಟೇಬಲ್‌ಗಳ ಮಾತಿನ ಚಕಮಕಿ

• ಉದಯವಾಹಿನಿ, ರಾಮನಗರ

ಸಂಚಾರ ನಿಯಮ ಉಲ್ಲಂಘಿಸಿ ಏಕಮುಖ ರಸ್ತೆಯಲ್ಲಿ ವಿರುದ್ಧ ದಿಕ್ಕಿನಲ್ಲಿ ಬಂದ ಮಹಿಳಾ ಕಾನ್‌ಸ್ಟೇಬಲ್, ಅದನ್ನು ಪ್ರಶ್ನಿಸಿದ ಸಂಚಾರ ಠಾಣೆ ಕಾನ್‌ಸ್ಟೇಬಲ್ ನಡುವೆ ಬೀದಿಯಲ್ಲೇ ಮಾತಿನ ಚಕಮಕಿ ನಡೆಯಿತು. ಐಜೂರು ವೃತ್ತದಲ್ಲಿ ಇಬ್ಬರೂ ಸಾರ್ವಜನಿಕವಾಗಿ ಏಕವಚನದಲ್ಲಿ ಬೈದಾಡಿಕೊಂಡರು. ಕಡೆಗೆ ಸಹೋದ್ಯೋಗಿಗಳು ಮತ್ತು ಸಾರ್ವಜನಿಕರು ಇಬ್ಬರನ್ನೂ ಸಮಾಧಾನಪಡಿಸಿ ಕಳಿಸಿದರು. ಕರಗದ ಹಿನ್ನೆಲೆಯಲ್ಲಿ ನಗರದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಶ್ರೀನಿವಾಸ ಗೌಡ ಅವರು ಕರಗ ಸಂಚರಿಸುವ ಮಾರ್ಗಗಳಲ್ಲಿ ಪೊಲೀಸ್ ಬಂದೋಬಸ್ತ್ ಕುರಿತು ಪರಿಶೀಲನೆ ನಡೆಸುತ್ತಿದ್ದರು. ಇದೇ ಸಂದರ್ಭದಲ್ಲಿ ಐಜೂರು ವೃತ್ತದಲ್ಲಿ ಕನ್ನಡ ಚಳವಳಿ ಪಕ್ಷದ ವಾಟಾಳ್ ನಾಗರಾಜ್ ಸಹ ಪ್ರತಿಭಟನೆ ಹಮ್ಮಿಕೊಂಡಿದ್ದರು. ಹಾಗಾಗಿ, ಸಂಚಾರ ಠಾಣೆ ಸಿಬ್ಬಂದಿ ಅಲರ್ಟ್ ಆಗಿ ಕಾರ್ಯನಿರ್ವಹಿಸುತ್ತಿದ್ದರು. ಇದೇ ಸಂದರ್ಭದಲ್ಲಿ ಐಜೂರು ಠಾಣೆ ಕಾನ್‌ಸ್ಟೇಬಲ್ ರುಕ್ಮಿಣಿ ಪಾಟೀಲ ಅವರು, ವೃತ್ತದಲ್ಲಿರುವ ಮೆಡಿಕಲ್ ಬಳಿ ವಿರುದ್ಧ ದಿಕ್ಕಿನಲ್ಲಿ ಬಂದು ತಮ್ಮ ಬೈಕ್ ನಿಲ್ಲಿಸಲು ಮುಂದಾದರು.



ಉದಯವಾಹಿನಿ ಚಿತ್ರ

ಆಗ ಸ್ಥಳದಲ್ಲಿ ಕರ್ತವ್ಯದಲ್ಲಿದ್ದ ಸಂಚಾರ ಠಾಣೆ ಕಾನ್‌ಸ್ಟೇಬಲ್ ಮೋಹನ್ ಆಕ್ಷೇಪ ವ್ಯಕ್ತಪಡಿಸಿದರು. ಈ ವೇಳೆ, ಇಬ್ಬರ ನಡುವೆ ಶುರುವಾದ ಮಾತಿನ ಚಕಮಕಿ ಏಕವಚನಕ್ಕೆ ತಿರುಗಿ, ಪರಸ್ಪರ ಬೈದಾಡಿಕೊಂಡರು.

ಸ್ಥಳದಲ್ಲಿದ್ದ ಐಜೂರು ಠಾಣೆಯ ಎಎಸ್ಐ ನಾಗರಾಜು, ಇತರ ಸಿಬ್ಬಂದಿ ಇಬ್ಬರನ್ನೂ ಸಮಾಧಾನಪಡಿಸಿದರು. ಜೊತೆಗೆ ಸಾರ್ವಜನಿಕರು ಸಹ ಬುದ್ಧಿ ಹೇಳಿದರು. ಆದರೂ, ಮಾತಿನ ಚಕಮಕಿ ಜೋರಾಯಿತು. ಕಡೆಗೆ ಸಿಬ್ಬಂದಿ ಇಬ್ಬರನ್ನೂ ಸ್ಥಳದಿಂದ ಬೇರೆಡೆ ಕರೆದೊಯ್ದರು. ಕಾನ್‌ಸ್ಟೇಬಲ್‌ಗಳ ವಾಗ್ವಾದವನ್ನು ಸಾರ್ವಜನಿಕರು ಮೂಕಪ್ರೇಕ್ಷಕರಂತೆ ವೀಕ್ಷಿಸಿದರು. ಕೆಲವರು ವಿಡಿಯೋ ಚಿತ್ರೀಕರಿಸಿ ವಾಟ್ಸ್ಆ್ಯಪ್‌ಗಳಲ್ಲಿ ಸಹ ಹರಿಬಿಟ್ಟರು.

# ಸಿಎಂ ಭೇಟಿಗೆ ನಿಯೋಗ ಕರೆದೊಯ್ಯುವ ಭರವಸೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಸಚಿವ ಸಂಪುಟ ಸಭೆಗಾಗಿ ನಂದಿ ಗಿರಿಧಾಮಕ್ಕೆ ಬರುತ್ತಿರುವ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಬೇಕು ಎಂದು ಪಟ್ಟು ಹಿಡಿದು ನಗರದ ಜಿಲ್ಲಾಡಳಿತ ಭವನದ ಮುಂಭಾಗ ಅಹೋರಾತ್ರಿ ಪ್ರತಿಭಟನೆ ನಡೆಸುತ್ತಿದ್ದ ರೈತರ ಮನವೊಲಿಸುವಲ್ಲಿ ಜಿಲ್ಲಾಡಳಿತ ಯಶಸ್ವಿಯಾಗಿದೆ. ಶಿಡ್ಲಘಟ್ಟ ತಾಲ್ಲೂಕಿನ ಜಂಗಮ ಕೋಟೆ ಹೋಬಳಿಯ 13 ಹಳ್ಳಿಗಳ 2,823 ಎಕರೆ ಕೃಷಿ ಭೂಮಿಯನ್ನು ಕೈಗಾರಿಕೀಕರಣಕ್ಕೆ ವಶಪಡಿಸಿಕೊಳ್ಳಲು ಸರ್ಕಾರ ಮುಂದಾಗಿದೆ. ಭೂ ಸ್ವಾಧೀನ ವಿರೋಧಿಸಿ ರೈತ ಸಂಘದ ನೇತೃತ್ವದಲ್ಲಿ ಪ್ರತಿಭಟನೆಗಳು ನಡೆಯುತ್ತಿವೆ.

ಬುಧವಾರ ಸಚಿವ ಸಂಪುಟ ಸಭೆ ನಡೆಯುವ ಹಿನ್ನೆಲೆಯಲ್ಲಿ ಸರ್ಕಾರದ ಗಮನ ಸೆಳೆಯಲು ರೈತ ಹೋರಾಟಗಾರರು ಮುಂದಾಗಿದ್ದರು. ಜಿಲ್ಲಾಡಳಿತ ಭವನದ ಮುಂಭಾಗ ಅಹೋರಾತ್ರಿ ಧರಣಿ ಆರಂಭಿಸಿದ್ದರು. ರಾತ್ರಿ ನಡುರಾತ್ರಿ ಸ್ಥಳಕ್ಕೆ ಬಂದ ಅಧಿಕಾರಿಗಳು ನಂದಿಗಿರಿಧಾಮದಲ್ಲಿ ಸಿ.ಎಂ ಭೇಟಿ ಸಾಧ್ಯವಾಗುವುದಿಲ್ಲ. ಗುರುವಾರ ನಾವೇ ನಿಮ್ಮನ್ನು ಮುಖ್ಯಮಂತ್ರಿ ಅವರ ಬಳಿಗೆ ಕರೆದೊಯ್ಯುತ್ತೇವೆ ಎಂದು ಭರವಸೆ ನೀಡಿದರು. ಧರಣಿನಿರತ ರೈತರು ರಾತ್ರೋರಾತ್ರಿ ವಾಪಸ್ಸಾಗಿದ್ದಾರೆ. ಸಂಪುಟ ಸಭೆ ಕಾರಣದಿಂದ ನಂದಿಗಿರಿಧಾಮದಲ್ಲಿ ಸಿಎಂ ಭೇಟಿ ಸಾಧ್ಯವಿಲ್ಲ. ಜುಲೈ 4ರಂದು ನಿಯೋಗ ಕರೆದೊಯ್ಯುತ್ತೇವೆ ಎಂದು ಜಿಲ್ಲಾಡಳಿತ, ಪೊಲೀಸ್ ಇಲಾಖೆ ಭರವಸೆ ನೀಡಿದೆ. ಆ ಕಾರಣದಿಂದ ಪ್ರತಿಭಟನೆ ವಾಪಸ್ ಪಡೆದಿದ್ದೇವೆ ಎಂದು ರೈತ ಸಂಘದ ರಾಜ್ಯ ಕಾರ್ಯಾಧ್ಯಕ್ಷ ಭಕ್ತರಹಳ್ಳಿ ಬೈರೇಗೌಡ ತಿಳಿಸಿದರು. ನೆರೆಯ ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣ ಹೋಬಳಿ ಯಲ್ಲಿ ಕೈಗಾರಿಕೆಗಾಗಿ ಭೂ ಸ್ವಾಧೀನ ವಿರೋಧಿಸಿ ಅಲ್ಲಿನ ರೈತರು ಸಹ ಮೂರು ವರ್ಷಗಳಿಂದ ಪ್ರತಿಭಟನೆ ನಡೆಸುತ್ತಿದ್ದಾರೆ.



ಉದಯವಾಹಿನಿ ಚಿತ್ರ

**ಡಿಸಿ ಕಚೇರಿಯಿಂದ ವಾಪಸ್ಸಾದ ರೈತರು**

# ಕನ್ನಂಬಾಡಿಯಲ್ಲಿ ಶಿಲಾನ್ಯಾಸ ಯಾವ ಪುರುಷಾರ್ಥಕ್ಕೆ?

• ಉದಯವಾಹಿನಿ, ಮಂಡ್ಯ

ಕನ್ನಂಬಾಡಿ ಅಣೆಕಟ್ಟೆ ವ್ಯಾಪ್ತಿಯ ಜಮೀನುಗಳಲ್ಲಿ ಬೆಳೆದು ನಿಂತಿರುವ ಬೆಳೆಗಳ ರಕ್ಷಣೆಗೆ ನೀರು ಹರಿಸಲು ಸರ್ಕಾರ ವಿಫಲವಾಗಿದೆ. ಆದರೆ, ಜೂನ್ ತಿಂಗಳಲ್ಲಿ ಬಾಗಿನ ಅರ್ಪಣೆಯ ಶಿಲಾನ್ಯಾಸ ನೆರವೇರಿಸಲು ಮುಂದಾಗಿರುವುದು ಯಾವ ಪುರುಷಾರ್ಥಕ್ಕೆ’ ಎಂದು ಮಾಜಿ ಶಾಸಕ ಎ.ಎಸ್.ರವೀಂದ್ರ ಶ್ರೀಕಂಠಯ್ಯ ಆಕ್ರೋಶ ಹೊರ ಹಾಕಿದರು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಮೇ ತಿಂಗಳಲ್ಲಿ ಅಣೆಕಟ್ಟೆಯಲ್ಲಿ ಸುಮಾರು 95 ಅಡಿ ನೀರು ಶೇಖರಣೆ ಆಗಿದ್ದರೂ ಒಂದು ಕಟ್ಟು ನೀರು ಹರಿಸದೇ ಭತ್ತದ ಇಳುವರಿ ಕುಂಠಿತವಾಗಲು ಕಾರಣವಾದ ಕೃಷಿ ಸಚಿವರು ಈ ಬಗ್ಗೆ ಮೌನವಾಗಿ ರುವುದು ಸರಿಯೇ ಎಂದು ಪ್ರಶ್ನಿಸಿದರು.

ಕೃಷಿ ಸಚಿವರ ತವರಿನಲ್ಲೇ ರೈತ ಪರಿತಪಿಸಬೇಕಾದ ಸ್ಥಿತಿ ನಿರ್ಮಾಣವಾಗಿದೆ. ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳ ನಿರ್ಲಕ್ಷ್ಯದಿಂದ ಶೇ 30ರಷ್ಟು ಭತ್ತದ ಇಳುವರಿ ಕಡಿಮೆಯಾಗಿದೆ. ಕಬ್ಬು ಸೇರಿ ಇತರೆ ಬೆಳೆಗಳು ಒಣಗುತ್ತಿದ್ದರೂ ನೀರು ಹರಿಸದಿರುವುದು ಬೇಸರದ ಸಂಗತಿ ಎಂದು ಅಸಮಾಧಾನ ಹೊರ ಹಾಕಿದರು.



ಉದಯವಾಹಿನಿ ಚಿತ್ರ

**ಬೆಳೆಗಳ ರಕ್ಷಣೆಗೆ ನೀರು ಹರಿಸಿ**

ಭತ್ತ ಖರೀದಿ ಕೇಂದ್ರ ತೆರೆಯಲು ರಾಜ್ಯ ಸರ್ಕಾರ ನಿರಾಸಕ್ತಿ ತೋರಿರುವುದು ಸರಿಯಲ್ಲ. ಬೆಲೆ ಕುಸಿತ ಹಾಗೂ ಇಳುವರಿ ನಷ್ಟದಿಂದ ರೈತರು ಪರಿತಪಿಸುತ್ತಿದ್ದಾರೆ. ಕೇಂದ್ರ ಸರ್ಕಾರ 2300 ಬೆಂಬಲ ಬೆಲೆ ನೀಡಿ ಭತ್ತ ಖರೀದಿಗೆ ಆದೇಶ ಹೊರಡಿಸಿದೆ. ರಾಜ್ಯ ಸರ್ಕಾರ ಖರೀದಿ ಕೇಂದ್ರ ತೆರೆಯದೇ ಕ್ವಿಂಟಲ್ ಭತ್ತ ಕೇವಲ 1800ರಿಂದ 1900ಗೆ ಮಾರಾಟವಾಗುತ್ತಿದ್ದು, ನಷ್ಟಕ್ಕೆ ಹೊಣೆ ಯಾರು ಎಂದು ಪ್ರಶ್ನಿಸಿದರು.

**ದುಬಾರಿ ವೆಚ್ಚದ ಆರತಿಗೆ ವಿರೋಧವಿದೆ**

**ಕಾವೇರಿ ಆರತಿಗೆ ನನ್ನ ವಿರೋಧವಿಲ್ಲ. ಆದರೆ, 92 ಕೋಟಿ ವೆಚ್ಚದಲ್ಲಿ ಅಣೆಕಟ್ಟೆಯ ಸನಿಹದಲ್ಲಿ ಕಾವೇರಿ ಆರತಿ ಮಾಡಲು ಹೊರಟಿರುವುದು ಯಾರನ್ನು ಮೆಚ್ಚಿಸಲು ಎಂದು ರವೀಂದ್ರ ಶ್ರೀಕಂಠಯ್ಯ ಅತೃಪ್ತಿ ಹೊರ ಹಾಕಿದರು. ಕಾವೇರಿ ಆರತಿಗೆ ಶ್ರೀರಂಗಪಟ್ಟಣ ಬಳಿ ಇರುವ ಸ್ನಾನಘಟ್ಟ ಸೂಕ್ತ ಪ್ರದೇಶವಾಗಿದ್ದು ನಾನು ಶಾಸಕನಾಗಿದ್ದ ವೇಳೆ 8 ಕೋಟಿ ಅನುದಾನದಲ್ಲಿ ಮೆಟ್ಟಿಲುಗಳ ನವೀಕರಣ ಮಾಡಲಾಗಿದೆ. ಆ ಸ್ಥಳದಲ್ಲಿ ಕಡಿಮೆ ವೆಚ್ಚದಲ್ಲಿ ಕಾವೇರಿ ಆರತಿ ಧಾರ್ಮಿಕ ಕಾರ್ಯ ಮಾಡಿದರೆ ಅಣೆಕಟ್ಟೆಯ ಸುರಕ್ಷತೆ ಜೊತೆಗೆ ಶ್ರೀರಂಗಪಟ್ಟಣ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದರು.**

# ಕಾಡುಪ್ರಾಣಿ ಹಾವಳಿ; ಅರಣ್ಯಾಧಿಕಾರಿಗೆ ದಿಗ್ಬಂಧನ

• ಉದಯವಾಹಿನಿ, ಗುಂಡ್ಲುಪೇಟೆ

ಕಾಡು ಪ್ರಾಣಿಗಳ ಉಪಟಳವನ್ನು ತಡೆಯುವಂತೆ ಆಗ್ರಹಿಸಿ ಓಂಕಾರ ವಲಯ ಅರಣ್ಯ ವ್ಯಾಪ್ತಿಯ ರೈತರು ತಾಲ್ಲೂಕಿನ ಕುರುಬರಹುಂಡಿ ಗ್ರಾಮದ ಸಮೀಪ ಬುಧವಾರ ಅರಣ್ಯಾಧಿಕಾರಿಗಳಿಗೆ ದಿಗ್ಬಂಧನ ಹಾಕಿ ಪ್ರತಿಭಟಿಸಿದರು. ಗ್ರಾಮದ ರೇಚಪ್ಪ ಅವರ ಸರ್ವೇ ನಂ–367ರ ಜಮೀನಿನ ಮೇಲೆ ಮಂಗಳವಾರ ತಡರಾತ್ರಿ ಕಾಡಾನೆ ದಾಳಿ ನಡೆಸಿ ಟೊಮೆಟೊ, ಬೀನ್ಸ್ ಫಸಲು ನಾಶ ಪಡಿಸಿ, ಶೀಟ್‌ನಿಂದ ನಿರ್ಮಿಸಿದ್ದ ಶೆಡ್ ಮತ್ತು ಬೈಕ್ ಅನ್ನು ತುಳಿದು ಜಖಂಗೊಳಿಸಿದೆ. ಜತೆಗೆ ಮಾಲೀಕರನ್ನು ಅಟ್ಟಾಡಿಸಿದ್ದು, ರೇಚಪ್ಪ ಓಡಿ ಹೋಗಿ ಪ್ರಾಣ ಉಳಿಸಿಕೊಂಡಿದ್ದಾರೆ. ಪಕ್ಕದ ಜಮೀನಿನ ಕುಮಾರ್ ಅವರ ಸೋಲಾರ್ ತಂತಿ ಬೇಲಿಯನ್ನೂ ತುಳಿದು ಹಾಕಿತ್ತು. ವಿಚಾರ ತಿಳಿದು ಸ್ಥಳಕ್ಕೆ ಧಾವಿಸಿ ಪರಿಶೀಲನೆಗೆ ಮುಂದಾದ ಡಿಆರ್‌ಎಫ್‌ಒ ಶಶಿಕುಮಾರ್‌ಗೆ ರೈತರು ದಿಗ್ಬಂಧನ ಹಾಕಿ, ಬಂಡೀಪುರ ಅರಣ್ಯ ಸಂರಕ್ಷಣಾಧಿಕಾರಿ ಸ್ಥಳಕ್ಕೆ ಆಗಮಿಸಬೇಕೆಂದು ಪಟ್ಟು ಹಿಡಿದಿದರು. ನಂತರ ಆಗಮಿಸಿದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಸುರೇಶ್ ಅವರನ್ನು ತರಾಟೆಗೆ ತೆಗೆದುಕೊಂಡ ರೈತರು, ಓಂಕಾರ ವಲಯ ವ್ಯಾಪ್ತಿಯ ಮಂಚಹಳ್ಳಿ, ದೇಶಿಪುರ, ಕುರುಬರಹುಂಡಿ, ಕೋಟೆಕೆರೆ, ಹೊಸಪುರ ಗ್ರಾಮಗಳಲ್ಲಿ ಕಾಡಾನೆಗಳ ಉಪಟಳ ಹೆಚ್ಚಿದೆ. ಜಮೀನುಗಳಲ್ಲಿ ಬೆಳೆದ ಫಸಲುಗಳನ್ನು, ಸೋಲಾರ್ ತಂತಿ ಬೇಲಿ ತುಳಿದು ನಾಶಪಡಿಸುತ್ತಿವೆ. ಹೀಗಿದ್ದರೂ ಅರಣ್ಯ ಇಲಾಖೆ ಕಾಡಾನೆಗಳಿಗೆ ಕಡಿವಾಣ ಹಾಕಲು ಮುಂದಾಗಿಲ್ಲ. ಇದರಿಂದ ರೈತರಿಗೆ ಅಪಾರ ನಷ್ಟ ಉಂಟಾಗುತ್ತಿದೆ. ಆದ್ದರಿಂದ ರೈಲ್ವೆ ಬ್ಯಾರಿಕೇಡ್ ನಿರ್ಮಾಣ ಮಾಡುವ ಮೂಲಕ ಶಾಶ್ವತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು. ರೈತರ ಸಮಸ್ಯೆ ಆಲಿಸಿ ಮಾತನಾಡಿದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಸುರೇಶ್, ಕಾಡಾನೆಗಳು ಅರಣ್ಯದಿಂದ ಹೊರಬರದಂತೆ ತಡೆಯಲು ಗಸ್ತು ತಿರುಗಲಾಗುವುದು. ಜೊತೆಗೆ ರೈಲ್ವೆ ಬ್ಯಾರಿಕೇಡ್ ನಿರ್ಮಾಣಕ್ಕೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು. ಇದಕ್ಕೆ ಒಪ್ಪದ ರೈತರು ಈಗಾಗಲೇ ಹಲವು ಬಾರಿ ಭರವಸೆ ನೀಡಿದ್ದೀರಾ, ಆದರೂ ಕಾಡಾನೆ ಹಾವಳಿ ನಿಂತಿಲ್ಲ. ಅರಣ್ಯ ಸಂರಕ್ಷಣಾಧಿಕಾರಿ ಸ್ಥಳಕ್ಕೆ ಬರಬೇಕು ಎಂದು ಪಟ್ಟು ಹಿಡಿದರು.



ಉದಯವಾಹಿನಿ ಚಿತ್ರ

**ಪರಿಹಾರಕ್ಕೆ ರೈತರ ಆಗ್ರಹ**

# ಅಂಗಾಂಗ ದಾನ: ಸಾವಿನಲ್ಲೂ ಸಾರ್ಥಕತೆ

• ಉದಯವಾಹಿನಿ, ಕೆ.ಆರ್.ಪೇಟೆ

ಇತ್ತೀಚೆಗೆ ಸಂಭವಿಸಿದ ಅಪಘಾತದಲ್ಲಿ ಗಾಯಗೊಂಡು ಮೃತಪಟ್ಟ ತಾಲ್ಲೂಕಿನ ಹರಳಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನೀತಮಂಗಲ ಗ್ರಾಮದ ನಂಜುಂಡಯ್ಯ ಅವರ ಪುತ್ರ ಎನ್. ರಘು (36) ಅವರ ಅಂಗಾಂಗಗಳನ್ನು ಕುಟುಂಬ ದಾನ ನೀಡಿದೆ. ಅಂಗಾಂಗ ದಾನ ಮೂಲಕ ರಘು ಸಾವಿನಲ್ಲಿ ಸಾರ್ಥಕತೆ ಮೆರೆದಿದ್ದಾರೆ. ಅವರ ಕುಟುಂಬ ಕೂಡ ಮಾನವೀಯತೆ ಮೆರೆಯುವ ಮೂಲಕ ಮಾದರಿ ಕೆಲಸ ಮಾಡಿದೆ. ಜೂನ್ 26ರಂದು ರಘು ನೀತಮಂಗಲ ಗ್ರಾಮದಲ್ಲಿ ನಡೆದು ಹೋಗುವಾಗ ಹಿಂದಿನಿಂದ ಬಂದ ಬೈಕ್ ಗುದ್ದಿ ಗಾಯಗೊಂಡು, ಕೋಮಾ ತಲುಪಿದ್ದರು. ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ, ನಂತರ ಮೈಸೂರಿನ ಕೆ.ಆರ್. ಆಸ್ಪತ್ರೆಯಲ್ಲಿ ಹೆಚ್ಚಿನ ಚಿಕಿತ್ಸೆ ಕೊಡಿಸಿದ್ದರೂ ಅವರು ಚಿಕಿತ್ಸೆಗೆ ಸ್ಪಂದಿಸಿರಲಿಲ್ಲ. ಪ್ರಜ್ಞೆ ಕೂಡ ಮರಳಿರಲಿಲ್ಲ. ರಘು ಅವರ ಮಿದುಳು ನಿಷ್ಕ್ರಿಯಗೊಂಡಿರುವುದಾಗಿ ವೈದ್ಯರು ಘೋಷಿಸಿದ್ದರು. ಇದರಿಂದ ಕುಟುಂಬದವರು ರಘು ಅವರ ಅಂಗಾಂಗಗಳನ್ನು ದಾನ ನೀಡಿದರು. ರಘು ಮೊದಲಿನಿಂದಲೂ ಸಮಾಜಮುಖಿ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದ. ಅಕಾಲಿಕ ಸಾವಿಗೆ ತುತ್ತಾಗಿದ್ದರಿಂದ ಆತನ ದೇಹದ ಅಂಗಾಂಗಗಳನ್ನು ದಾನ ಮಾಡಲು ನಿಶ್ಚಯಿಸಿದೆವು. ರಘು ಹೃದಯ, ಹೃದಯದ ವಾಲ್ವ್‌ಗಳು, ಶ್ವಾಸಕೋಶ, ಯಕೃತ್ತು, ಮೂತ್ರಪಿಂಡ ಮತ್ತಿತರ ಅಂಗಾಗಗಳನ್ನು ಅಪೊಲೊ ಆಸ್ಪತ್ರೆಗೆ ದಾನ ನೀಡಲಾಯಿತೆಂದು ರಘು ಅವರ ತಂದೆ ನಂಜುಂಡಯ್ಯ, ತಾಯಿ ಬೋರಮ್ಮ, ಪತ್ನಿ ಆಶಾ ರಾಣಿ, ರಘು ಸಹೋದರ ಪ್ರದೀಪ ಅವರು ತಿಳಿಸಿದರು. ರಘು ಅವರಿಗೆ ಅಕ್ಷಯ್ ಮೌರ್ಯ (8) ಸಿದ್ದಾರ್ಥ ಮೌರ್ಯ (5) ಎಂಬ ಇಬ್ಬರು ಪುತ್ರರಿದ್ದಾರೆ. ಮೃತರ ಅಂತ್ಯಸಂಸ್ಕಾರ ಸ್ವಗ್ರಾಮದಲ್ಲಿ ನಡೆಯಿತು. ನೂರಾರು ಮಂದಿ ಭಾಗವಹಿಸಿ ಅಂತಿಮ ದರ್ಶನ ಪಡೆದರಲ್ಲದೆ, ಅಂಗಾಂಗ ದಾನ ಮಾಡಿ ಮಾನವೀಯತೆ ಮೆರೆದ ರಘು, ಆತನ ಕುಟುಂಬದವರನ್ನು ಪ್ರಶಂಸಿಸಿದರು.



## ಕೆಎಂಎಫ್ ಅಧ್ಯಕ್ಷ ಸ್ಥಾನ ಕೊಟ್ಟರೆ ಎಸ್.ಎನ್.ನಾರಾಯಣಸ್ವಾಮಿಗೆ ಕೋಮುಲ್ ಪಟ್ಟಕ್ಕೆ ಓಕೆ

# ನಂಜೇಗೌಡ ಹೊಸ ದಾಳ; ‘ಕೈ’ ವರಿಷ್ಠರಿಗೆ ಸಂಕಟ

• ಉದಯವಾಹಿನಿ, ಕೋಲಾರ

ಕೋಲಾರ ಜಿಲ್ಲಾ ಹಾಲು ಒಕ್ಕೂಟದ ಅಧ್ಯಕ್ಷ ಸ್ಥಾನದ ಚುನಾವಣೆಗೆ ಕೇವಲ ಮೂರು ದಿನಗಳು ಬಾಕಿ ಇದ್ದು, ಅಧ್ಯಕ್ಷ ಸ್ಥಾನದ ವಿಚಾರ ಜಿಲ್ಲಾ ಕಾಂಗ್ರೆಸ್‌ನ ಬಿಕ್ಕಟ್ಟನ್ನು ಮತ್ತಷ್ಟು ಹೆಚ್ಚಿಸಿದೆ. ಈ ಜಗಳ ‘ಕೈ’ ವರಿಷ್ಠರಿಗೆ ಸಂಕಟ ತಂದೊಡ್ಡಿದೆ. ಒಕ್ಕೂಟದ ಆಡಳಿತ ಮಂಡಳಿಯ ನಿರ್ದೇಶಕ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತರು ಮೇಲುಗೈ ಸಾಧಿಸಿದ್ದು, ಅಧ್ಯಕ್ಷ ಗಾದಿ ಹಿಡಿಯಲು ಮುಂದಾಗಿದ್ದಾರೆ. ಜುಲೈ 5ರಂದು ಈ ಸ್ಥಾನಕ್ಕೆ ಚುನಾವಣೆ ನಡೆಯಲಿದೆ.

ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿರುವ ಬಂಗಾರಪೇಟೆ ಕಾಂಗ್ರೆಸ್ ಶಾಸಕ ಎಸ್.ಎನ್.ನಾರಾಯಣಸ್ವಾಮಿ, ಮಾಲೂರು ಕಾಂಗ್ರೆಸ್ ಶಾಸಕ ಕೆ.ವೈ.ನಂಜೇಗೌಡ ದೊಡ್ಡಮಟ್ಟದಲ್ಲಿ ಲಾಬಿ ಆರಂಭಿಸಿದ್ದಾರೆ. ಪರಸ್ಪರ ವಾಗ್ದಾಳಿ ನಡೆಸುತ್ತಾ, ವರಿಷ್ಠರಿಗೆ ದೂರು ನೀಡುತ್ತಿದ್ದಾರೆ. ಅಧ್ಯಕ್ಷ ಸ್ಥಾನ ಗಿಟ್ಟಿಸಲು ಎಸ್.ಎನ್.ನಾರಾಯಣಸ್ವಾಮಿ ದೊಡ್ಡ ಮಟ್ಟದಲ್ಲಿ ಪ್ರಯತ್ನ ನಡೆಸುತ್ತಿರುವ ಬೆನ್ನಲೇ, ಕೆ.ವೈ.ನಂಜೇಗೌಡ ಹೊಸ ದಾಳ ಉರುಳಿಸಿದ್ದಾರೆ. ಕರ್ನಾಟಕ ಹಾಲು ಒಕ್ಕೂಟದ ಅಧ್ಯಕ್ಷ ಸ್ಥಾನ ನೀಡಿದರೆ ಕೋಮುಲ್ ಅಧ್ಯಕ್ಷ ಸ್ಥಾನದ ಸ್ಪರ್ಧೆಯಿಂದ ಹಿಂದೆ ಸರಿಯುವುದಾಗಿ ಅವರು ಕಾಂಗ್ರೆಸ್ ವರಿಷ್ಠರಿಗೆ ಮನವರಿಕೆ ಮಾಡಲು ಪ್ರಯತ್ನಿಸಿದ್ದಾರೆ ಎಂಬುದು ಗೊತ್ತಾಗಿದೆ.

ಕೋಮುಲ್ ಅಧ್ಯಕ್ಷರಾಗಿ ಈಗಾಗಲೇ ಐದು ವರ್ಷ ಕಾರ್ಯ ನಿರ್ವಹಿಸಿರುವ ನಂಜೇಗೌಡ, ಈ ಬಾರಿ ಕೆಎಂಎಫ್ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿರುವುದಾಗಿ ಹಲವಾರು ಬಾರಿ ಹೇಳಿದ್ದಾರೆ. ಈ ಸಂಬಂಧ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಜೊತೆ ಚರ್ಚೆ ನಡೆದಿದ್ದು, ಭರವಸೆ ಕೂಡ ಸಿಕ್ಕಿದೆ ಎಂದಿದ್ದಾರೆ. ಆದರೆ, ಬಮೂಲ್ ಅಧ್ಯಕ್ಷರಾಗಿರುವ ಡಿ.ಕೆ.ಸುರೇಶ್, ಕೆಎಂಎಫ್ ಮಾಜಿ ಅಧ್ಯಕ್ಷ ಹಾಗೂ ಶಾಸಕ ಭೀಮಾ ನಾಯ್ಕ ಕೂಡ ಕೆಎಂಎಫ್ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿದ್ದಾರೆ. ಹೀಗಾಗಿ, ನಂಜೇಗೌಡರ ಹಾದಿ ಅಷ್ಟು ಸುಲಭವಾಗಿಲ್ಲ. ಇದೇ ಕಾರಣಕ್ಕೆ ಅವರು ಬೆಂಗಳೂರಿನಲ್ಲಿ ಕೆಎಂಎಫ್ ಅಧ್ಯಕ್ಷ ಸ್ಥಾನದ ವಿಚಾರ ಮತ್ತೆ ಪ್ರಸ್ತಾಪಿಸಿದ್ದಾರೆ. ಆ ಅವಕಾಶ ಮಾಡಿಕೊಟ್ಟರೆ ಕೋಮುಲ್ ಅಧ್ಯಕ್ಷ ಸ್ಥಾನದ ಆಕಾಂಕ್ಷಿ ಎಸ್.ಎನ್.ನಾರಾಯಣಸ್ವಾಮಿ ಅವರ ಹಾದಿಗೆ ಅಡ್ಡಬರುವುದಿಲ್ಲ ಎಂಬುದಾಗಿ ಹೇಳಿರುವುದನ್ನು ಮೂಲಗಳು ತಿಳಿಸಿವೆ. ಈ ಮೂಲಕ ಅವರು ಒತ್ತಡದ ತಂತ್ರಗಾರಿಗೆ ರೂಪಿಸುತ್ತಿದ್ದಾರೆ. ಕೆಎಂಎಫ್ ಅಧ್ಯಕ್ಷ ಸ್ಥಾನ ಸಿಗುವುದು ಅಸಾಧ್ಯವಾದರೆ ಕೋಮುಲ್ ಅಧ್ಯಕ್ಷ ಸ್ಥಾನಕ್ಕೆ ತಮಗೆ ಅವಕಾಶ ಮಾಡಿಕೊಡಬೇಕೆಂದೂ ಪಟ್ಟು ಹಿಡಿದಿದ್ದಾರೆ. ಒಟ್ಟು 13 ಚುನಾಯಿತ ನಿರ್ದೇಶಕರ ಪೈಕಿ ತಮ್ಮ ಬೆಂಬಲಿಗ 7 ನಿರ್ದೇಶಕರು ಗೆದ್ದಿರುವುದನ್ನು ಹೇಳಿದ್ದಾರೆ. ನಾರಾಯಣಸ್ವಾಮಿ ಕಾಂಗ್ರೆಸ್ ಬೆಂಬಲಿತರ ವಿರುದ್ಧವೇ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದರು ಎಂದು ದೂರಿದ್ದಾರೆ.


ಈಗಾಗಲೇ ಕೆಎಂಎಫ್ ಅಧ್ಯಕ್ಷ ಸ್ಥಾನಕ್ಕೆ ಡಿ.ಕೆ.ಸುರೇಶ್ ಕೂಡ ಆಕಾಂಕ್ಷಿಯಾಗಿರುವ ಕಾರಣ ಕಾಂಗ್ರೆಸ್ ವರಿಷ್ಠರು ಅಡಗತ್ತರಿಯಲ್ಲಿ ಸಿಲುಕಿಕೊಂಡಿದ್ದಾರೆ. ಸ್ಪಷ್ಟವಾಗಿ ಭರವಸೆ ನೀಡುವ ಪರಿಸ್ಥಿತಿಯಲ್ಲಿ ಅವರು ಇಲ್ಲ. ಬದಲಾಗಿ ಕಾದು ನೋಡುವ ತಂತ್ರ ಅನುಸರಿಸುತ್ತಿದ್ದಾರೆ. ನಂಜೇಗೌಡರು ಕೆಎಂಎಫ್ ಕಡೆಗೋ ಹೋಗುತ್ತಾರೋ ಇಲ್ಲವೇ ಇಲ್ಲೇ ಕೋಮುಲ್ ಅಧ್ಯಕ್ಷ ಸ್ಥಾನದ ಚುನಾವಣೆಗೆ ಕಣಕ್ಕಿಳಿಯುತ್ತಾರೋ, ಎಸ್.ಎನ್.ನಾರಾಯಣಸ್ವಾಮಿ ಅವರ ಸ್ಪರ್ಧೆಗೆ ಕೈ ವರಿಷ್ಠರು ಹಸಿರು ನಿಶಾನೆ ತೋರುತ್ತಾರೋ ಎಂಬುದು ಸಹಕಾರ ವಲಯದಲ್ಲಿ ಕುತೂಹಲ ಮೂಡಿಸಿದೆ.





ಉದಯವಾಹಿನಿ ಚಿತ್ರ

**ಕೆಎಂಎಫ್ ಅಧ್ಯಕ್ಷ ಸ್ಥಾನದ ಭರವಸೆ ಇದೆ**



**ಕೆಎಂಎಫ್ ಅಧ್ಯಕ್ಷ ಸ್ಥಾನ ವಿಚಾರದ ಬಗ್ಗೆ ಮುಖ್ಯಮಂತ್ರಿ ಉಪಮುಖ್ಯಮಂತ್ರಿ, ಜಿಲ್ಲಾ ಉಸ್ತುವಾರಿ ಸಚಿವರ ಜೊತೆ ಚರ್ಚೆ ನಡೆಸಿದ್ದೇನೆ. ಭೀಮಾ ನಾಯ್ಕ್ ನಂತರ ಅವಕಾಶ ಮಾಡಿಕೊಡುವುದಾಗಿ ಹಿಂದೆಯೇ ಹೇಳಿದ್ದರು. ಕೆಎಂಎಫ್ ಅಧ್ಯಕ್ಷ ಸ್ಥಾನ ಮಾತ್ರವಲ್ಲ; ಕಾಂಗ್ರೆಸ್‌ನಲ್ಲಿ ಇನ್ನೂ ಹಲವಾರು ಅವಕಾಶಗಳು ಸಿಗಲಿವೆ. ಡಿ.ಕೆ.ಸುರೇಶ್ ದೊಡ್ಡ ನಾಯಕರು. ಅವರು ಸಚಿವ ರಾಜ್ಯಸಭೆ ಸದಸ್ಯರಾಗಬಹುದು. ಅವರ ವಿರುದ್ಧ ಹೋಗುವವರು ನಾವಲ್ಲ. ನಾವು ಕೇಳುವುದು ಕೆಎಂಎಫ್ ನಿಗಮ ಮಂಡಳಿ ಸ್ಥಾನ ಅಷ್ಟೆ**

**–ಕೆ.ವೈ.ನಂಜೇಗೌಡ, ಶಾಸಕ**



**ಕೋಮುಲ್ ಅಧ್ಯಕ್ಷರಾಗಲು ಶಾಸಕರಾದ ಕೆ.ವೈ.ನಂಜೇಗೌಡ ಎಸ್.ಎನ್. ನಾರಾಯಣಸ್ವಾಮಿ ಇಬ್ಬರಿಗೂ ಅರ್ಹತೆಯಿದೆ. ಆಯ್ಕೆ ಮಾಡುವುದು ನಿರ್ದೇಶಕರಿಗೆ ಬಿಟ್ಟಿದ್ದು. ಅವರು ಯಾರ ಕಡೆ ಕೈ ಎತ್ತಿದರೆ ಅವರು ಅಧ್ಯಕ್ಷರಾಗುತ್ತಾರೆ. ನನಗೆ ನಂಜೇಗೌಡರಾದರೂ ಎಎನ್‌ಎನ್ ಆದರೂ ಖುಷಿಯೇ**

**–ಬೈರತಿ ಸುರೇಶ್, ಜಿಲ್ಲಾ ಉಸ್ತುವಾರಿ ಸಚಿವ**

## ಮಿನಿ ನ್ಯೂಸ್

### ಎತ್ತಿನ ಹೊಳೆ ಸತ್ಯಾನ್ವೇಷಣೆಗೆ ಒತ್ತಾಯಿಸಿ ಮೌನ ಪ್ರತಿಭಟನೆ

• ಉದಯವಾಹಿನಿ, ಗೌರಿಬಿದನೂರು

ಎತ್ತಿನ ಹೊಳೆಯ ಯೋಜನೆಯ ಸತ್ಯಾನ್ವೇಷಣೆಯಾಗಬೇಕೆಂದು ಒತ್ತಾಯಿಸಿ ಪ್ರಜಾಸೌಧದ ಆವರಣದಲ್ಲಿ ಪರಿಸರವಾದಿ ಚೌಡಪ್ಪ ಬುಧವಾರ ಬೆಳಗ್ಗೆಯಿಂದ ಸಂಜೆವರೆಗೆ ಒಂದು ದಿನದ ಮೌನ ಪ್ರತಿಭಟನೆ ನಡೆಸಿದರು. ಎತ್ತಿನ ಹೊಳೆ ಎಂಬ ದೋಖಾ ಯೋಜನೆಯಿಂದ ಡಿಜಿಲ್ಲೆಗೆ ಒಂದು ಹಾನಿ ನೀರು ಬರುವುದಿಲ್ಲ. ಈ ಯೋಜನೆಯ ಸತ್ಯಾನ್ವೇಷಣೆ ನಡೆಸಲು, ಜಿಲ್ಲೆಯಲ್ಲಿ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು, ಜಿಲ್ಲೆಯ ಎಲ್ಲಾ ಶಾಸಕರು, ಸಂಸದರು, ನೀರಾವರಿ ತಜ್ಞರು, ನೀರಾವರಿ ಹೋರಾಟಗಾರರು, ಸಂಘ ಸಂಸ್ಥೆಗಳು, ಮಾಧ್ಯಮ ಪ್ರತಿನಿಧಿಗಳನ್ನು ಯೋಜನಾ ಸ್ಥಳಕ್ಕೆ ಕರೆದುಕೊಂಡು ಹೋಗಲು ಜಿಲ್ಲಾಡಳಿತ ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿದರು.

ಸಾವಿರಾರು ಕೋಟಿ ರೂಪಾಯಿಗಳ ಈ ಯೋಜನೆ ಹಲವಾರು ವರ್ಷಗಳಿಂದ ಜನ ಸಾಮಾನ್ಯರಲ್ಲಿ, ಜನ ಪ್ರತಿನಿಧಿಗಳಲ್ಲಿ ಗೊಂದಲ ಮೂಡಿಸಿದೆ. ಎಲ್ಲಾ ಗೊಂದಲಗಳ ನಿವಾರಣೆಗೆ ಈ ಸತ್ಯಾನ್ವೇಷಣೆ ಅಧ್ಯಯನ ಪ್ರವಾಸ ಅನಿವಾರ್ಯವಾಗಿದೆ ಎಂದು ಒತ್ತಾಯಿಸಿದರು.

### ಬಂಡೆ ಸಿಡಿಸುವಾಗ ಗುಡ್ಡ ಕುಸಿದು ಕಾರ್ಮಿಕ ಸಾವು

• ಉದಯವಹಿನಿ, ಕೊರಟಗೆರೆ

ತಾಲ್ಲೂಕಿನ ಜಟ್ಟಿ ಅಗ್ರಹಾರ ಬಳಿಯ ಕ್ರಷರ್‌ನಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಬಂಡೆ ಸಿಡಿಸುವಾಗ ಗುಡ್ಡ ಕುಸಿದು ಕಾರ್ಮಿಕ ಮಧ್ಯಪ್ರದೇಶದ ಡಾಲ್ಮನ್ (25) ಮೃತಪಟ್ಟಿದ್ದಾರೆ. ಸಂಜೆ ಕ್ರಷರ್‌ನಲ್ಲಿ ಕೆಲಸ ಮಾಡುವಾಗ ಏಕಾಏಕಿ ಗುಡ್ಡ ಕುಸಿದಿದೆ. ಈ ವೇಳೆ ಕೆಲಸ ಮಾಡುತ್ತಿದ್ದ ಮೂವರು ಕಾರ್ಮಿಕರಲ್ಲಿ ಇಬ್ಬರಿಗೆ ಸಣ್ಣ ಪುಟ್ಟ ಗಾಯಗಳಾಗಿವೆ. ಕ್ರಷರ್ ಸ್ಥಳ ಅಪಾಯಕಾರಿಯಾಗಿದ್ದು, ಕಾರ್ಮಿಕರಿಗೆ ಯಾವುದೇ ಭದ್ರತಾ ಕ್ರಮ ಕೈಗೊಳ್ಳದ ಕಾರಣ ಘಟನೆ ಸಂಭವಿಸಿದೆ ಎಂದು ಸ್ಥಳೀಯರು ದೂರಿದ್ದಾರೆ. ಜಟ್ಟಿ ಅಗ್ರಹಾರ ಸುತ್ತಮುತ್ತ ಮೂರು ಕ್ರಷರ್‌ಗಳು ಹಲವು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿವೆ. ಕ್ರಷರ್ ಕೆಲಸಕ್ಕಾಗಿ ಮಧ್ಯಪ್ರದೇಶ, ರಾಜಸ್ಥಾನ ಇತರೆಡೆಗಳಿಂದ ಕಾರ್ಮಿಕರನ್ನು ಕರೆಸಲಾಗುತ್ತದೆ. ಕಾರ್ಮಿಕರಿಗೆ ಯಾವುದೇ ಭದ್ರತೆ ಇಲ್ಲದ ಕಾರಣ ಆಗ್ಗಾಗ್ಗೆ ಸಾವು ಸಂಭವಿಸುತ್ತಲೇ ಇರುತ್ತದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

### ಪ್ರಿಯಕರನ ಜೊತೆ ಸೇರಿ ಪತಿಯನ್ನು ಕೊಂದ ಪತ್ನಿಗೆ ಜೀವಾವಧಿ ಶಿಕ್ಷೆ

• ಉದಯವಾಹಿನಿ, ತುಮಕೂರು

ಅನೈತಿಕ ಸಂಬಂಧಕ್ಕೆ ಅಡ್ಡಿಪಡಿಸಿದ ಪತಿಯನ್ನು ಕೊಲೆ ಮಾಡಿದ್ದ ಯಶೋದಾ (32), ಆಕೆಯ ಪ್ರಿಯಕರ ಮಂಜುನಾಥ್ (28) ಎಂಬಾತನಿಗೆ 3ನೇ ಹೆಚ್ಚುವರಿ ಮತ್ತು ವಿಶೇಷ ಸೆಷನ್ಸ್ ನ್ಯಾಯಾಲಯ ಜೀವಾವಧಿ ಶಿಕ್ಷೆ, ತಲಾ 50 ಸಾವಿರ ದಂಡ ವಿಧಿಸಿದೆ. ಆಂಜಿನಪ್ಪ ಮತ್ತು ಯಶೋದಾ ಮಧುಗಿರಿ ತಾಲ್ಲೂಕಿನ ಕೊಡಿಗೇನಹಳ್ಳಿ ನಿವಾಸಿಗಳು. ಮಂಜುನಾಥ್ ಜತೆಗೆ ಯಶೋದಾ ಅಕ್ರಮ ಸಂಬಂಧ ಹೊಂದಿದ್ದರು. ಈ ಬಗ್ಗೆ ಪತಿ, ಪತ್ನಿ ಮಧ್ಯೆ ಆಗಾಗ ಗಲಾಟೆ ನಡೆಯುತ್ತಿತ್ತು.

ಮಂಜುನಾಥ್‌ನಿಂದ ದೂರ ಇರುವಂತೆ ಆಂಜಿನಪ್ಪ ಸೂಚಿಸಿದ್ದರು. ಇದರಿಂದ ಕುಪಿತರಾದ ಯಶೋದಾ, ಮಂಜುನಾಥ್ 2018ರ ಮೇ 12ರ ಮಧ್ಯರಾತ್ರಿ ಆಂಜಿನಪ್ಪ ಅವರನ್ನು ಕೊಲೆ ಮಾಡಿದ್ದರು. ಕೊಡಿಗೇನಹಳ್ಳಿ ಠಾಣೆಯಲ್ಲಿ ಕೊಲೆ ಹಾಗೂ ಎಸ್.ಸಿ, ಎಸ್.ಟಿ ಮೇಲಿನ ದೌರ್ಜನ್ಯ ತಡೆ ಕಾಯ್ದೆಯಡಿ ಪ್ರಕರಣ ದಾಖಲಾಗಿತ್ತು. ಮಧುಗಿರಿ ಡಿವೈಎಸ್‌ಪಿ ಓ.ಬಿ.ಕಲ್ಲೇಶಪ್ಪ ತನಿಖೆ ಪೂರ್ಣಗೊಳಿಸಿ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ನ್ಯಾಯಾಧೀಶರ ವಿಚಾರಣೆ ಸಮಯದಲ್ಲಿ ಆರೋಪ ಸಾಬೀತಾಗಿದ್ದು, ಇಬ್ಬರಿಗೆ ಜೀವಾವಧಿ ಶಿಕ್ಷೆ ವಿಧಿಸಿದ್ದಾರೆ. ಸರ್ಕಾರದ ಪರವಾಗಿ ಜ್ಯೋತಿ ವಾದ ಮಂಡಿಸಿದ್ದರು.

### ವಿಮಾ ಮೊತ್ತ ನೀಡಲು ಗ್ರಾಹಕರ ಆಯೋಗ ಆದೇಶ

• ಉದಯವಾಹಿನಿ, ಮಡಿಕೇರಿ

ವೇಟಿಂಗ್ ಪಿರಿಯಡ್ ನೆಪವೊಡ್ಡಿ ಆರೋಗ್ಯ ವಿಮೆ ನೀಡಲು ನಿರಾಕರಿಸಿದ್ದ ಪ್ರಕರಣದಲ್ಲಿ ಇಲ್ಲಿನ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ವಿಮಾ ಮೊತ್ತ ನೀಡಲು ಆದೇಶಿಸಿದೆ. ಜೈರಸ್ ಥಾಮಸ್ ಅಲೆಕ್ಸಾಂಡರ್, ಅವರ ಪತ್ನಿ ಶಾಲಿನಿ ಅವರು ಆರೋಗ್ಯ ವಿಮಾ ಕಂಪನಿಯೊಂದರಿಂದ 5 ಲಕ್ಷಕ್ಕೆ ಆರೋಗ್ಯ ವಿಮೆಯನ್ನು ಪಡೆದಿದ್ದರು.

ಶಾಲಿನಿ ಅವರಿಗೆ ಕಾಯಿಲೆಯೊಂದು ಕಾಣಿಸಿಕೊಂಡು ಅದರ ಚಿಕಿತ್ಸಾ ವೆಚ್ಚ 3.81 ಲಕ್ಷವನ್ನು ಕ್ಲೈಂ ಮಾಡಲು ಹೋದಾಗ ಕಂಪನಿಯು 2 ವರ್ಷ ವೇಟಿಂಗ್ ಪಿರಿಯಡ್ ಇದೆ ಎಂದು ಹೇಳಿ ವಿಮಾ ಮೊತ್ತ ನೀಡಲು ನಿರಾಕರಿಸಿದರು. ನಂತರ, ಇವರು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಅರ್ಜಿ ಸಲ್ಲಿಸಿದರು. ಅರ್ಜಿಯನ್ನು ಪರಿಗಣಿಸಿದ ಆಯೋಗದ ಪ್ರಭಾರ ಅಧ್ಯಕ್ಷೆ ಡಾ.ಸಿ.ರೇಣುಕಾಂಬ ಮತ್ತು ಸದಸ್ಯೆ ಗೌರಮ್ಮಣ್ಣಿ ಅವರು, ವಿಮಾ ಕಂಪನಿಯ ವ್ಯವಸ್ಥಾಪಕರಿಗೆ ಈ ಕಾಯಿಲೆ ಕಾಣಿಸಿಕೊಂಡಿದ್ದರೆ 2 ವರ್ಷ ಕಳೆದ ನಂತರ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದರೆ ಎಂದು ಪ್ರಶ್ನಿಸಿ ದೂರುದಾರರಿಗೆ ಆಸ್ಪತ್ರೆ ವೆಚ್ಚ 3.81 ಲಕ್ಷ, ಮಾನಸಿಕ ವೇದನೆಗೆ 25 ಸಾವಿರ, ವ್ಯಾಜ್ಯದ ಖರ್ಚು ವೆಚ್ಚಗಳಿಗೆ 10 ಸಾವಿರವನ್ನು ಪರಿಹಾರವಾಗಿ ನೀಡಬೇಕು ಎಂದು ಆದೇಶಿದರು.

### ನಿತ್ಯ ಯೋಗಾಭ್ಯಾಸ ಮಾಡಲು ಮಕ್ಕಳಿಗೆ ಸಲಹೆ

• ಉದಯವಾಹಿನಿ, ಸಂತೇಬಾಚಹಳ್ಳಿ

ಪ್ರತಿನಿತ್ಯ ಯೋಗ ಮಾಡುವ ಮೂಲಕ ವಿದ್ಯಾರ್ಥಿಗಳು, ಪೋಷಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಪಾಂಚಜನ್ಯ ಪಬ್ಲಿಕ್ ಶಾಲೆಯ ಮುಖ್ಯಶಿಕ್ಷಕಿ ಅಕ್ಷತಾ ಕುಮಾರಿ ಹೇಳಿದರು.



ಸಂತೇಬಾಚಹಳ್ಳಿ ಹೋಬಳಿಯ ಆಚಮನಹಳ್ಳಿ ಪಾಂಚಜನ್ಯ ಪಬ್ಲಿಕ್ ಶಾಲೆಯ ಆವರಣದಲ್ಲಿ ಇತ್ತೀಚೆಗೆ ನಡೆದ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು. ಶಾಲೆಯಲ್ಲಿ ಯೋಗ ಕಲಿಸಲು ದೈಹಿಕ ಶಿಕ್ಷಣ ಶಿಕ್ಷಕರನ್ನು ಒದಗಿಸಲಾಗಿದೆ. ಮಕ್ಕಳು ಯೋಗ ಕಲಿಯಬೇಕು. ಯೋಗದಲ್ಲಿ ಸಾಧನೆ ಮಾಡಬಹುದು. ಯೋಗ ಮಾಡುವುದರಿಂದ ಮಾನಸಿಕವಾಗಿ ಹಾಗೂ ದೈಹಿಕವಾಗಿ ಸದೃಢರಾಗಬಹುದು. ಯೋಗದಿಂದ ರೋಗ ಮುಕ್ತ ಸಮಾಜ ನಿರ್ಮಾಣವು ಸಾಧ್ಯ. ಮಕ್ಕಳು ಹಾಗೂ ಪೋಷಕರು ಆರೋಗ್ಯಕ್ಕಾಗಿ ಪ್ರತಿನಿತ್ಯ ಯೋಗ ಮಾಡಬೇಕು ಎಂದರು.

ಅಂತರಾಳದಿಂದ... EDITORIAL

# ಹೃದಯಾಘಾತಗಳ ದಿಢೀರ್ ಹೆಚ್ಚಳ

ಒಂದೂವರೆ ತಿಂಗಳ ಅವಧಿಯಲ್ಲಿ ಹಾಸನ ಜಿಲ್ಲೆಯ ಇಪ್ಪತ್ತೊಂದು ಮಂದಿ ಹೃದಯಾಘಾತದಿಂದ ಸಾವಿಗೀಡಾಗಿರುವುದು ಕಳವಳಕಾರಿ ವಿದ್ಯಮಾನ. ದೈಹಿಕವಾಗಿ ಸದೃಢರಾಗಿ ಇರುವವರೂ ತೀವ್ರ ಹೃದಯಾಘಾತ, ಹೃದಯಸ್ತಂಭನಕ್ಕೆ ತುತ್ತಾಗುತ್ತಿದ್ದಾರೆ. ಕೋರೊನಾ ನಂತರ ಯುವಜನ ಹೆಚ್ಚಿನ ಪ್ರಮಾಣದಲ್ಲಿ ಹೃದಯಾಘಾತಕ್ಕೆ ಒಳಗಾಗುತ್ತಿರುವ ಪ್ರಕರಣಗಳು ದೇಶದ ವಿವಿಧ ಭಾಗಗಳಿಂದ ವರದಿ ಆಗುತ್ತಿರುವುದರ ಹಿನ್ನೆಲೆಯಲ್ಲಿ, ಜಿಲ್ಲೆಯೊಂದರಲ್ಲಿ ದಿಢೀರ್ ಸಂಭವಿಸುತ್ತಿರುವ ಹೃದಯಾಘಾತಗಳು ನಾಗರಿಕರ ಆತಂಕಕ್ಕೆ ಕಾರಣವಾಗಿವೆ.



ಹಾಸನ ಜಿಲ್ಲೆಯೊಂದರಲ್ಲಿಯೇ ಹೆಚ್ಚಿನ ಹೃದಯಾಘಾತಗಳು ಏಕೆ ಸಂಭವಿಸುತ್ತಿವೆ ಎನ್ನುವುದರ ಬಗ್ಗೆ ಅಧ್ಯಯನ ನಡೆಸಲು ಸರ್ಕಾರ ಸಮಿತಿ ರಚಿಸಿರುವುದು ಸ್ವಾಗತಾರ್ಹ, ಅಧ್ಯಯನ ತ್ವರಿತವಾಗಿ ಪೂರ್ಣಗೊಂಡು ಜನರ ಸಂಶಯಗಳಿಗೆ ಉತ್ತರ ದೊರೆಯಲಿ. ಜೀವನಶೈಲಿಗೂ ಆರೋಗ್ಯಕ್ಕೂ ಸಂಬಂಧ ಇದೆ ಎನ್ನುವುದರ ಬಗ್ಗೆ ಯಾರಿಗೂ ಅನುಮಾನವಿಲ್ಲ. ಆದರೆ, ಹಾಸನ ಜಿಲ್ಲೆಯಲ್ಲಿ ಹೃದಯಾಘಾತಗಳ ಸಂಖ್ಯೆ ಹೆಚ್ಚಾಗಿರುವುದಕ್ಕೂ ಅನಾರೋಗ್ಯಕರ ಜೀವನಶೈಲಿಗೂ ಸಂಬಂಧ ಕಲ್ಪಿಸುವುದು ಕಷ್ಟ. ಜೀವನ ಶೈಲಿಯಲ್ಲಿನ ಬದಲಾವಣೆ ನಿರ್ದಿಷ್ಟ ಜಿಲ್ಲೆಗೆ ಸಂಬಂಧಿಸಿದ ಸಮಸ್ಯೆಯಲ್ಲ. ಅದು, ಇಡೀ ವಿಶ್ವವನ್ನು ಬಾಧಿಸುತ್ತಿರುವ ಸಮಸ್ಯೆ. ಹಾಗೆಯೇ, ಕೊರೊನಾ ನಂತರ ಹೃದಯ ಸಂಬಂಧಿ ಸಮಸ್ಯೆಗಳ ಸಂಖ್ಯೆ ಹೆಚ್ಚಾಗಿರುವುದರ ಬಗೆಗಿನ ಆತಂಕವೂ ವಿಶ್ವವ್ಯಾಪಿ ಆದುದೇ ಆಗಿದೆ. 2020ರ ನಂತರ ಭಾರತದಲ್ಲಿ ಹೃದಯಾಘಾತಗಳ ಸಂಖ್ಯೆಯಲ್ಲಿ ದಿಢೀರ್ ಹೆಚ್ಚಳ ಆಗಿದ್ದು, ಶೇ 50ರಷ್ಟು ಹೃದಯಾಘಾತಗಳು 40 ವರ್ಷದೊಳಗಿನ ವಯೋಮಾನದವರಲ್ಲೇ ಸಂಭವಿಸುತ್ತಿವೆ. ಪುಟ್ಟ ಮಕ್ಕಳು ಕೂಡ ಹೃದ್ರೋಗಕ್ಕೆ ಬಲಿಯಾಗಿರುವ ಪ್ರಕರಣಗಳು ವರದಿಯಾಗಿವೆ. ಈ ವರ್ಷದ ಆರಂಭದಲ್ಲಿ, ಚಾಮರಾಜನಗರ ಜಿಲ್ಲೆಯಲ್ಲಿ ಎಂಟು ವರ್ಷದ ಬಾಲಕಿಯೊಬ್ಬಳು ಹೃದಯ ಸ್ತಂಭನದಿಂದ ಸಾವಿಗೀಡಾಗಿದ್ದಳು. ಈ ಅಂಕಿಅಂಶಗಳೆಲ್ಲ, ನಾಗರಿಕರು ತಮ್ಮ ಹೃದಯದ ಆರೋಗ್ಯದ ಬಗ್ಗೆ ಆತಂಕಪಡಲು ಕಾರಣವಾಗಿವೆ.ಹೃದಯಾಘಾತಗಳ ಸಂಖ್ಯೆ ಹೆಚ್ಚಾಗುತ್ತಿರುವುದರ ಬಗ್ಗೆ ಜನರಲ್ಲಿ ಇರುವ ಆತಂಕವನ್ನು ಪರಿಹರಿಸಬೇಕಾದುದು ಸರ್ಕಾರದ ಕರ್ತವ್ಯ. ವೈಜ್ಞಾನಿಕ ಅಧ್ಯಯನಗಳ ಮೂಲಕ ಹೃದಯಾಘಾತಕ್ಕೆ ಕಾರಣಗಳನ್ನು ಕಂಡುಕೊಂಡು, ಸತ್ಯಾಂಶವನ್ನು ಜನರ ಮುಂದಿಡುವ ಕೆಲಸ ಆದಷ್ಟು ತ್ವರಿತವಾಗಿ ನಡೆಯಬೇಕಾಗಿದೆ. 'ಕೋವಿಡ್–19' ಲಸಿಕೆಯ ಅಡ್ಡ ಪರಿಣಾಮದ ರೂಪದಲ್ಲಿ ಹೃದಯಾಘಾತಗಳ ಹೆಚ್ಚಳದ ಸಾಧ್ಯತೆಯನ್ನು ಕೆಲವು ವೈದ್ಯರು ನಿರಾಕರಿಸಿದ್ದಾರೆ. ಆದರೆ, ನಿಖರ ಹಾಗೂ ವೈಜ್ಞಾನಿಕ ಅಧ್ಯಯನದ ಬೆಂಬಲವಿಲ್ಲದ ಸಂಗತಿಗಳು ಅಭಿಪ್ರಾಯಗಳಾಗಿಯಷ್ಟೇ ಉಳಿದಿರುತ್ತವೆ.

**ಹೆಚ್ಚುತ್ತಿರುವ ಹೃದಯಾಘಾತಗಳಿಗೂ ಜೀವನಶೈಲಿಯಲ್ಲಿ ಆಗಿರುವ ಬದಲಾವಣೆಗಳಿಗೂ ಇರಬಹುದಾದ ಸಂಬಂಧದ ಬಗ್ಗೆ ವಿಶ್ಲೇಷಣೆಗಳೂ ನಡೆದಿವೆ. ಈಗಿನ ಜೀವನಶೈಲಿ, ಆಹಾರ ಪದ್ಧತಿ, ಮೊಬೈಲ್ ಫೋನ್ ವ್ಯಸನದಿಂದಲೂ ಅನಾರೋಗ್ಯ ಸಮಸ್ಯೆ ಹೆಚ್ಚಾಗಿದೆ; ಅಧಿಕ ರಕ್ತದೊತ್ತಡ, ಮಧುಮೇಹ ಸಮಸ್ಯೆಗಳು ಕಿರಿಯರಲ್ಲೂ ಕಾಣಿಸಿಕೊಳ್ಳುತ್ತಿವೆ ಎಂದು ಆರೋಗ್ಯ ಸಚಿವರು ಹೇಳಿದ್ದಾರೆ.**

ಅಧ್ಯಯನದ ಜೊತೆ ಜೊತೆಗೇ ಹೃದ್ರೋಗ ಚಿಕಿತ್ಸೆಗೆ ಸಂಬಂಧಿಸಿದ ವೈದ್ಯಕೀಯ ಸವಲತ್ತುಗಳನ್ನು ಬಲಪಡಿಸಬೇಕಾದ ಕೆಲಸವನ್ನೂ ಸರ್ಕಾರ ಮಾಡಬೇಕಾಗಿದೆ. ಹೆಚ್ಚುತ್ತಿರುವ ಹೃದಯಾಘಾತಗಳನ್ನು ನಿಭಾಯಿಸುವ ಮಟ್ಟಿಗೆ ನಮ್ಮ ವೈದ್ಯಕೀಯ ವ್ಯವಸ್ಥೆ ಸದೃಢವಾಗಿಲ್ಲ. ಬಹುತೇಕ ಸರ್ಕಾರಿ ಆಸ್ಪತ್ರೆಗಳು ಹೃದಯಾಘಾತದ ಸಂದರ್ಭದಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಲೂ ಸಾಧ್ಯವಾಗದಷ್ಟು ದುರ್ಬಲವಾಗಿವೆ. ಹೃದಯಾಘಾತಕ್ಕೆ ಒಳಗಾದವರಿಗೆ ತಕ್ಷಣ ಚಿಕಿತ್ಸೆ ದೊರೆಯುವುದು ಅಗತ್ಯ. ಕೆಲವು ಸಂದರ್ಭಗಳಲ್ಲಿ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ದೊರಕದೆಯೇ ಸಾವು ಸಂಭವಿಸುವುದಿದೆ. ಹೃದ್ರೋಗ ಸಂಬಂಧಿತ ಚಿಕಿತ್ಸೆಗಳು ದುಬಾರಿಯಾದುದರಿಂದ, ಜನಸಾಮಾನ್ಯರು ಹೃದಯ ಸಂಬಂಧಿ ಸಮಸ್ಯೆಗಳಿಗೆ ಚಿಕಿತ್ಸೆ ಪಡೆಯಲು ಹಿಂಜರಿಯುವುದೂ ಇದೆ. ಹೃದ್ರೋಗ ಸಮಸ್ಯೆಗಳು ಮತ್ತು ಚಿಕಿತ್ಸೆಯ ಬಗ್ಗೆ ಜನಜಾಗೃತಿ ಮೂಡಿಸುವ ಕೆಲಸವನ್ನು ಸರ್ಕಾರ ವ್ಯಾಪಕವಾಗಿ ಮಾಡಬೇಕಾಗಿದೆ. ಹೃದಯಾಘಾತದ ಸಂದರ್ಭದಲ್ಲಿ ಜನಸಾಮಾನ್ಯರಿಗೆ ಖಾಸಗಿ ಸಹಭಾಗಿತ್ವದಲ್ಲಿ ಸುಲಭ ದರದಲ್ಲಿ ಚಿಕಿತ್ಸೆ ಒದಗಿಸುವ ಮಾರ್ಗೋಪಾಯಗಳನ್ನೂ ಸರ್ಕಾರ ಕಂಡುಕೊಳ್ಳಬೇಕಾಗಿದೆ. ಹಾಸನ ಜಿಲ್ಲೆಯಲ್ಲಿ, ಮೇ 20ರಿಂದ ಜೂನ್ 30ರ ಅವಧಿಯಲ್ಲಿ 21 ಜನರು ಹೃದಯಾಘಾತದಿಂದ ಮೃತಪಟ್ಟಿರುವುದು ವೈದ್ಯಕೀಯ ವ್ಯವಸ್ಥೆ ಎಚ್ಚೆತ್ತುಕೊಳ್ಳಲು ಕಾರಣವಾಗಬೇಕು. ಸರ್ಕಾರ ನೇಮಿಸಿರುವ ಸಮಿತಿಯ ಅಧ್ಯಯನ ಹಾಸನದ ಪ್ರಕರಣಗಳಿಗಷ್ಟೇ ಸೀಮಿತವಾಗದೆ ರಾಜ್ಯದ ಎಲ್ಲಾ ಜಿಲ್ಲೆಗಳನ್ನೂ ಒಳಗೊಳ್ಳುವಂತಾಗಬೇಕು.

---

# ರಾಮಾಯಣ



## ಭರದ್ವಾಜ ಮುನಿಯಿಂದ ಭರತಾದಿಗಳಿಗೆ ಔತಣ

• ಹಿಂದಿನ ಸಂಚಿಕೆಯಿಂದ — 91 ನೆಯ ಅಧ್ಯಾಯ

ಭರದ್ವಾಜಮುನಿಯು ನಗುತ್ತ ಭರತ, ನೀನು ನನ್ನಲ್ಲಿ ಅತ್ಯಂತ ಪ್ರೇಮವುಳ್ಳವನೆಂದು ಬಲ್ಲೆನು. ಅಲ್ಪವಾದ ಸತ್ಕಾರವನ್ನು ಮಾಡಿದರೂ ಅದರಿಂದಲೇ ನೀನು ಸಂತುಷ್ಟ ಚಿತ್ರನಾಗುವೆ. ಆದರೆ ನಿನಗೂ ನಿನ್ನ ಸೇನೆಗೂ ಔತಣವನ್ನು ಮಾಡಬೇಕೆಂದು ನನ್ನ ಮನಸ್ಸು ಉತ್ಸುಕವಾಗಿದೆ. ಆದ್ದರಿಂದ ನನ್ನ ಮನಸ್ಸಿಗೆ ಪ್ರೀತಿಯಾಗುವಂತೆ ನಾನು ಮಾಡುವ ಔತಣವನ್ನು ಸ್ವೀಕರಿಸು. ನೀನು ನಿನ್ನ ಸೇನೆಯನ್ನು ಏಕೆ ದೂರದಲ್ಲಿ ಬಿಟ್ಟು ಬಂದೆ ಸಮಸ್ತ ಸೇನೆಯನ್ನೂ ಕರೆತರಿಸು ಎಂದು ನುಡಿದನು. ಭರತನು ಮಹರ್ಷಿಗಳೆ, ನಾನು ನಿಮಗೆ ಅಂಜಿಕೊಂಡು ಸೇನೆಯನ್ನು ದೂರದಲ್ಲಿ ಬಿಟ್ಟು ಬಂದೆನು. ಆರಸರೂ ರಾಜಪುತ್ರರೂ ಋಷಿಗಳ ಆಶ್ರಮಕ್ಕೆ ಸೇನೆಯನ್ನು ಕರೆದುಕೊಂಡು ಹೋಗಬಾರದು. ಭೂಮಿಯೆಲ್ಲವನ್ನೂ ಆಚ್ಛಾದಿಸಿಕೊಂಡುಬಂದ ಅನೇಕ ಕುದುರೆ ಕಾಲಾಳುಗಳ ಸಮೇತವಾದ ನನ್ನ ಸೇನೆಯು ಈ ಆಶ್ರಮದಲ್ಲಿರುವ ಮರಗಳನ್ನೂ ಉದಕವನ್ನೂ ಪರ್ಣಶಾಲೆಗಳನ್ನೂ ಕೆಡಿಸಿ ಉಪದ್ರವ ಮಾಡುವುದು. ಆದಕಾರಣ ದೂರದಲ್ಲಿ ಬಿಟ್ಟು ಬಂದೆನು ಎಂದು ನುಡಿದನು. ಭರದ್ವಾಜಮುನಿಯು ಭರತ, ನಿನ್ನ ಸೇನೆಯನ್ನು ಕರೆತರಿಸು ಎಂದು ನುಡಿದು ತನ್ನ ಅಗ್ನಿ ಶಾಲೆಯನ್ನು ಪ್ರವೇಶಿಸಿ ಆಚಮನ ಮಾಡಿ ವಿಶ್ವಕರ್ಮನನ್ನೂ ಲೋಕಪಾಲಕರನ್ನೂ ಇಂದ್ರಾದಿ ದೇವತೆಗಳನ್ನೂ ಆಹ್ವಾನಿಸಿದನು. ಔತಣಕ್ಕೆ ತಕ್ಕ ಸನ್ನಾಹವನ್ನು ಮಾಡುವಹಾಗೂ ಮೂಡಲಾಗಿಯೂ ಪಡವಲಾಗಿಯೂ ಪ್ರವಹಿಸುವ ನದಿಗಳನ್ನು ತನ್ನ ಆಶ್ರಮದಲ್ಲಿ ಪ್ರವಹಿಸುವಂತೆ ಮಾಡುವಹಾಗೂ ಪುಷ್ಪರಸಗಳಿಂದ ನಿರ್ಮಿಸಲ್ಪಟ್ಟ ಸುರೆಯನ್ನೂ ಗುಡಧಾನ್ಯಾದಿಗಳಿಂದ ನಿರ್ಮಿಸಲ್ಪಟ್ಟ ಸುರೆಯನ್ನೂ ಅಲ್ಲಿ ಪ್ರವಾಹರೂಪವಾಗಿರುವಂತೆ ಮಾಡುವಹಾಗೂ ಕಬ್ಬಿನ ಹಾಲಿಗೆ ಸಮಾನವಾಗಿ ಶೈತ್ಯ ಪರಿಮಳ ಯುಕ್ತವಾಗಿ ನಿರ್ಮಲವಾದ ನಿರ್ಮಿಸುವಹಾಗೂ ದೇವತೆಗಳನ್ನು ಪ್ರಾರ್ಥಿಸಿದನು. ದೇವಗಂಧರ್ವಾದಿಗಳನ್ನೂ ವಿಶ್ವಾವಸು ಮೊದಲಾದವರನ್ನೂ ಅಪ್ಸರಾ ಯರನ್ನೂ ಗಂಧರ್ವಸ್ತ್ರೀಯರನ್ನೂ ದೇವಲೋಕದಲ್ಲಿರುವ ಘೃತಾಚಿ ವಿಶ್ವಾಚಿ ಅಲಂಬುಸೆ ಹೇಮಾದ್ರಿ ಪುಂಜಿಕಸ್ಥಳೆ ಮೊದಲಾದ ದೇವಸ್ತ್ರೀಯರನ್ನೂ ತುಂಬುರು ಮೊದಲಾದ ಗಾಯಕ ದಿವೋದಕಗಳನ್ನುರನ್ನೂ ಕರೆಕಳುಹಿಸಿ ಅನೇಕ ವಸ್ತ್ರಾಭರಣಗಳನ್ನೂ ಚಿನ್ನದ ಹರಿವಾಣಗಳನ್ನೂ ದೇವತಾಯೋಗ್ಯ ವಾದ ರಸಾಯನ ಪಾಯಸಾದಿಗಳನ್ನೂ ತರುವಹಾಗೆ ದೇವತೆಗಳಿಗೆ ಹೇಳಿದನು. ಕುರು ಉತ್ತರ ದೇಶ ಗಳಲ್ಲಿರುವ ಕೌಬೇರವೆಂಬ ದಿವ್ಯವನವನ್ನು ಅಲ್ಲಿ ತಂದಿರಿಸುವಹಾಗೂ ಭಕ್ಷಣಯೋಗ್ಯವಾದ ಕಜ್ಜಾಯಗಳನ್ನೂ ಅನ್ನಾದಿಗಳನ್ನೂ ಪಾನಯೋಗ್ಯವಾದ ಪಾನಕಾದಿಗಳನ್ನೂ ರಸಾಯನ ಪಾಯಸಾ ದಿಗಳನ್ನೂ ವಿಚಿತ್ರ ತರಪುಷ್ಪ ಮಾಲಿಕೆಗಳನ್ನೂ ನಿರ್ಮಿಸುವಂತೆ ಚಂದ್ರನಿಗೆ ಕಟ್ಟುಮಾಡಿದನು. ಊಳಿಗದವರಿಗೆ ಸುರೆ ಮಾಂಸಾದಿಗಳನ್ನು ತರಹೇಳಿ ತಾನು ಮೂಡಣಮುಖವಾಗಿ ಕುಳಿತು ಕೊಂಡು ಕೈ ಮುಗಿದುಕೊಂಡು ಧ್ಯಾನಮಾಡುತ್ತಿದ್ದನು. ಆಗ ಸಮಸ್ತ ದೇವತೆಗಳೂ ಪ್ರಸನ್ನರಾಗಿ ಆ ವಿನಿಯೋಗಗಳಿಗೆ ಬರತೊಡಗಿದರು.

**ಮುಂದುವರಿಯುವುದು...**

---

ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

# ಹಣೆ ಬರಹದ ಹೆಸರಿನಲ್ಲಿ ನಡೆಯುವ ಆಟಗಳು



ಬಾರದು ಬಪ್ಪದು, ಬಪ್ಪುದು ತಪ್ಪದು. ಬಸವಣ್ಣನವರು ಎಂದೋ ಹೇಳಿದ್ದಾರೆ. ಅದಕ್ಕೂ ಮುನ್ನ ವರಾಹ ಮಿಹಿರನೂ ಹೇಳಿದ್ದ. ವರಾಹ ಮಿಹಿರನ ಕುರಿತಾಗಿ ನನಗೆ ತಿಳಿದ ಒಂದು ಕಥೆ. ವರಾಹ ಮಿಹಿರ ಹುಟ್ಟಿದ್ದು ಉಜ್ಜಯಿನಿಯಲ್ಲಿ ಸುಮಾರು ಐದನೇ ಶತಮಾನದ ಅಂತ್ಯದಲ್ಲಿ. ಈತನ ಜನ್ಮಸ್ಥಳ ಮಧ್ಯಪ್ರದೇಶದ ಉಜ್ಜಯನಿಯಿಂದ 20 ಕಿ.ಮೀ. ದೂರದಲ್ಲಿರುವ ಕಾಯಥಾ (ಕಾಯಿತ್ಥಕಾ). ಅವಂತಿ ದೇಶದ ಮಾಲ್ವ ಎಂಬಲ್ಲಿ ಖಗೋಳ ಶಾಸ್ತ್ರಜ್ಞನಾದ ಆದಿತ್ಯದಾಸ ಹಾಗು ಸತ್ಯವತಿಯ ಮಗನಾಗಿ ಜನಿಸಿದ. ತಂದೆ ಆದಿತ್ಯದಾಸರು ಸೂರ್ಯ ಉಪಾಸಕರಾಗಿದ್ದರು. ಸೂರ್ಯನ ಅನುಗ್ರಹದಿಂದ ಜನಿಸಿದ ಮಗುವಿಗೆ 'ಮಿಹಿರ' ಎಂದು ನಾಮಕರಣ ಮಾಡಿದರು. ಸಂಸ್ಕೃತದಲ್ಲಿ 'ಮಿಹಿರ' ಎಂದರೆ ಸೂರ್ಯ ಎಂದರ್ಥ. ಈ ಮಿಹಿರನ ಜತೆ ವಿಷ್ಣುವಿನ ಅವತಾರ ವರಾಹ ಬಂದುದು ಹೇಗೆ ಎನ್ನುವುದೇ ಸೋಜಿಗ. ಮಿಹಿರ ತಂದೆಯಿಂದ ಜ್ಯೋತಿಷ್ಯ ಅಧ್ಯಯನ ಮಾಡಿ ವಿಕ್ರಮಾದಿತ್ಯನ ಆಸ್ಥಾನದ ನವರತ್ನಗಳಲ್ಲೊಂದಾಗಿದ್ದ. ಒಮ್ಮೆ ವಿಕ್ರಮಾದಿತ್ಯನ ಒಬ್ಬ ಮಗನನ್ನು ನೋಡಿ 'ಈ ಮಗುವಿಗೆ 18 ವರ್ಷವಾದಾಗ ವರಾಹ (ಹಂದಿ) ಈತನನ್ನು ಕೊಲ್ಲುತ್ತದೆ ಎಂದು ಭವಿಷ್ಯ ನುಡಿದಿದ್ದ. ಇದರಿಂದ ಚಿಂತಿತನಾದ ವಿಕ್ರಮಾದಿತ್ಯ ಮಗುವಿಗೆ ಸೂಕ್ತ ರಕ್ಷಣೆಯನ್ನು ಕಲ್ಪಿಸಿದ್ದ. ಅರಮನೆಯಿಂದ ಹೊರಗೆ ಹೋಗದಂತೆ ಎಲ್ಲ ಏರ್ಪಾಡು ಮಾಡಿದ್ದ. ಆಟ, ಪಾಠ, ಊಟ ಎಲ್ಲವೂ ಅರಮನೆಯ ಒಳಗೆಯೇ. ಅರಸನ ಅಪ್ಪಣೆ ಮೀರಿ ಏನೂ ನಡೆಯುವಂತಿಲ್ಲ, ಯಾರೂ ಭೇಟಿ ಆಗುವಂತಿಲ್ಲ. 18 ವಯಸ್ಸು ಆಗುವವರೆಗೂ ಅದೆಂತಹ ಜೋಪಾನ ಮಾಡಿದ್ದ. ಇನ್ನೇನು ಕೆಲವೇ ದಿನಗಳು ಇದ್ದವು. ರಾಜ ಬಹಳ ಸಂತಸದಿಂದ ಇದ್ದ, ಮಿಹಿರನ ಭವಿಷ್ಯ ಸುಳ್ಳು ಮಾಡಿದ ಖುಷಿ ಒಂದೆಡೆಯಾದರೆ ಮಗ ಬದುಕುಳಿದ ಸಂತಸ ಇನ್ನೊಂದೆಡೆ. ಆದರೆ ವಿಧಿ ಲಿಖಿತ ಬೇರೆಯೇ ಇತ್ತು. ಅರಮನೆಯ ಒಳಗೆಯೇ ವರಾಹದ (ಹಂದಿ) ಬೃಹತ್ ವಿಗ್ರಹವೊಂದು ಬಾಲಕನ ತಲೆ ಮೇಲೆ ಬಿದ್ದು ಬಾಲಕ ಹತನಾದ. ಮಿಹಿರನ ಭವಿಷ್ಯ ನಿಜವಾಯಿತು. 18 ವರ್ಷ ತುಂಬಿದ ಬಾಲಕನನ್ನು ವರಾಹ ಕೊಂದಿತ್ತು. ಇದರಿಂದ ಮಿಹಿರ ವರಾಹ ಮಿಹಿರನೆಂದೇ ಪ್ರಸಿದ್ಧನಾದ. ಅದೇನೇ ಇದ್ದರೂ ವರಾಹ ಮಿಹಿರ, ಭಾರತೀಯ ಖಗೋಳ ಶಾಸ್ತ್ರಜ್ಞ, ಗಣಿತ ಶಾಸ್ತ್ರಜ್ಞ ಹಾಗೂ ಜ್ಯೋತಿಷಿ. ಸುಮಾರು 1500 ವರ್ಷಕ್ಕೂ ಮುನ್ನವೇ ಮಂಗಳ ಗ್ರಹದಲ್ಲಿ ನೀರು, ಕಬ್ಬಿಣ ಇದೆ ಎಂದು ಹೇಳಿದ್ದ. ಯಾವುದೇ ಉಪಕರಣಗಳಿಲ್ಲದ ಆ ಕಾಲದಲ್ಲಿ ಸೂರ್ಯ, ಚಂದ್ರ, ಭೂಮಿ, ಗ್ರಹಗಳ ಗತಿಯನ್ನು ಕರಾರುವಾಕ್ಕಾಗಿ ಹೇಳಿದ. 512ನೇ ಇಸವಿಯಲ್ಲಿ ಅಂದರೆ ತನ್ನ 13ನೇ ವಯಸ್ಸಿನಲ್ಲಿ 'ಸೂರ್ಯಸಿದ್ಧಾಂತ' ಉದ್ಗ್ರಂಥ ಬರೆದ. ಇದರಲ್ಲಿ ನಕ್ಷತ್ರ ಮಂಡಲ, ಸೂರ್ಯ ಗ್ರಹಣ ಮತ್ತು ಗ್ರಹಗಳ ಸ್ಥಾನಗಳನ್ನು ಕುರಿತು ವಿವರಿಸಿದ. ಗಣಿತದ ತ್ರಿಕೋನಮಿತಿ ನಿಯಮ ಹಾಗು ಜ್ಯಾ ಮಾನದ ಸರಣಿಯನ್ನೂ ಆರಂಭಿಸಿದ. ಒಮ್ಮೆ ಉಜ್ಜಯನಿಯಲ್ಲೊಂದು ಶಾಸ್ತ್ರಗೋಷ್ಠಿ ನಡೆಯುತ್ತಿತ್ತು.

ವಿದ್ವಾಂಸರು ಸೂರ್ಯೋದಯದ ನಂತರ ನಾಲ್ಕು ಘಂಟೆ 20 ನಿಮಿಷಕ್ಕೆ ಸೂರ್ಯಗ್ರಹಣ ಸಂಭವಿಸಲಿದೆ. ರಾಹು ಅಥವಾ ಕೇತು ಸೂರ್ಯನನ್ನು ನುಂಗಲಿವೆ.



ಆಗ ರಾಹು, ಕೇತುಗಳ ಗಾತ್ರ ಹೇಗಾಗಬಹುದು ಸೂರ್ಯನ ಪರಿಸ್ಥಿತಿ ಹೇಗಾಗಬಹುದು ಎಂಬ ಚರ್ಚೆ ಸಾಗುತ್ತಿತ್ತು. ಆಗ ವರಾಹ ಮಿಹಿರನು ಕಂಚಿನ ಕಂಠದಿಂದ ಹೇಳಿದ. ನಿಜ, ನಾಳೆ ಸೂರ್ಯಗ್ರಹಣ ನಡೆಯಲಿದೆ. ಅದರಲ್ಲಿ ಸಂದೇಹವೇ ಇಲ್ಲ. ಆದರೆ ಗ್ರಹಣದಲ್ಲಿ ರಾಹು,ಕೇತುಗಳ ಪಾತ್ರ ಕಿಂಚಿತ್ತೂ ಇರಲಾರದು. ಗ್ರಹಣವೆಂದರೆ ಆಕಾಶದಲ್ಲಿ ನಡೆಯುವ ಬೆಳಕು ಹಾಗೂ ಕತ್ತಲೆಯ ಕ್ರೀಡೆ. ಈ ಕ್ರೀಡೆಯಲ್ಲಿ ಸೂರ್ಯ, ಚಂದ್ರ ಹಾಗೂ ಭೂಮಿ ಪ್ರಮುಖ ಪಾತ್ರ ವಹಿಸುತ್ತಾರೆ. ಚಂದ್ರಗ್ರಹಣ ಕಾಲದಲ್ಲಿ ಚಂದ್ರ ಭೂಮಿಯ ಛಾಯೆಯನ್ನು ಪ್ರವೇಶಿಸುತ್ತಾನೆ. ಯಾವಾಗ ಭೂಮಿ, ಸೂರ್ಯ, ಚಂದ್ರರು ಸಮಾನ ರೇಖೆಯಲ್ಲಿ ಇರುತ್ತಾರೋ ಆಗ ಚಂದ್ರಗ್ರಹಣ ಸೂರ್ಯಗ್ರಹಣ ಕಾಲದಲ್ಲಿ ಚಂದ್ರ ಸೂರ್ಯನ ಛಾಯೆಯನ್ನು ಪ್ರವೇಶಿಸುತ್ತಾನೆ.

ಯಾವಾಗ ಸೂರ್ಯ, ಚಂದ್ರ ಹಾಗೂ ಭೂಮಿ ಸಮಾನ ರೇಖೆಯಲ್ಲಿರುತ್ತಾರೋ ಆಗ ಸೂರ್ಯಗ್ರಹಣ. ವಿದ್ವಾಂಸರ ಈ ಮಾತನ್ನು ಕೇಳಿದವರೆಲ್ಲಾ ಆಶ್ಚರ್ಯ ಚಕಿತರಾದರು. ಯಾವುದೇ ಆಧುನಿಕ ವಿಜ್ಞಾನೋಪಕರಣಗಳಿಲ್ಲದ ಆ ಸಮಯದಲ್ಲಿ ನಿಖರವಾಗಿ ಸೂರ್ಯ, ಚಂದ್ರ, ಭೂಮಿಯ ಗತಿ, ಗ್ರಹಣ ಇವುಗಳನ್ನೆಲ್ಲಾ ಅನ್ವೇಶಿಸಿದವರು ಪ್ರಾಚೀನ ಭಾರತದ ಖಗೋಳವಿಜ್ಞಾನಿ, ಗಣಿತಜ್ಞ, ತತ್ವಜ್ಞಾನಿ ಹಾಗೂ ಜ್ಯೋತಿಷಿ ವರಾಹ ಮಿಹಿರ. ಇಷ್ಟೆಲ್ಲಾ ಏಕೆಂದರೆ ಅಹಮದಾಬಾದ್‌ನಿಂದ ಲಂಡನ್‌ಗೆ ಹೊರಟಿದ್ದ ಏರ್ ಇಂಡಿಯಾ ವಿಮಾನ ಅಪಘಾತಕ್ಕೀಡಾಗಿ ಅದೆಷ್ಟೋ ಕನಸು ಕಂಡಿದ್ದ 240 ಮಂದಿ ಹತರಾದರು. ಆದರೆ, ಕೆಲವೇ ನಿಮಿಷಗಳ ಮೊದಲು, ಭೂಮಿ ಚೌಹಾಣ್ ಎಂಬ ಮಹಿಳೆ ಟ್ರಾಫಿಕ್‌ನಲ್ಲಿ ಸಿಲುಕಿಕೊಂಡಿದ್ದರಿಂದ ಕೇವಲ 10 ನಿಮಿಷಗಳ ಅಂತರದಲ್ಲಿ ವಿಮಾನ ತಪ್ಪಿಸಿಕೊಂಡರು. ಹಾಸ್ಟೆಲ್‌ನಲ್ಲಿ ಭವಿಷ್ಯತ್ತಿನ ವೈದ್ಯರಾಗಬೇಕಿದ್ದ ಮಂದಿ ವಿಮಾನ ಬಿದ್ದು ಮೃತರಾದರು. ಎಲ್ಲಿಯ ಹಾಸ್ಟೆಲ್, ಎಲ್ಲಿಯ ವಿಮಾನ! ದುರಂತದಲ್ಲಿ ಮಡಿದವರದ್ದು ಒಬ್ಬೊಬ್ಬರದು ಒಂದೊಂದು ಕಥೆ. ಅವರ ಬದುಕುಳಿದ ಪರಿವಾರದವರದು ವ್ಯಥೆ. ಹೀಗೆ ವಿಮಾನ ದುರಂತದಲ್ಲಿ ಮೃತಪಡಬೇಕೆಂದು ವಿಧಿ ಲಿಖಿತ ಇದ್ದರೆ ಅದು ಹೇಗಾದರೂ ಆಗಿಯೇ ಆಗುತ್ತದೆ. ತಪ್ಪಿಸಲು ಸಾಧ್ಯವೇ ಇಲ್ಲ. ವಿಮಾನದಲ್ಲಿದ್ದವರೆಲ್ಲರೂ ಯಮಸದನದ ಪಾಲಾದರೆ ಒಬ್ಬ ಬದುಕುಳಿದಿದ್ದಾನೆ! ವಾಹನದಲ್ಲಿ ಹೋದರೆ ಅಪಘಾತವಾಗುವ ಭಯ ಎಂದು ನಡೆದು ಹೋದರೆ ವಾಹನ ಬಂದು ಢಿಕ್ಕಿಯಾಗಿ ಸಾವು ಸಂಭವಿಸುತ್ತದೆ. ಬ್ರಹ್ಮಣಾಪಿ ಸುರೈರಪಿ ಲಲಾಟ ಲಿಖಿತಾ ರೇಖಾ ಪರಿಮಾಷ್ಟುಂನ ಶಕ್ಯತೇ ಎಂದು ಉಕ್ತಿಯೇ ಇದೆ. ಸಾಯುವವರು ಯಾರು, ಕಾಯುವವರು ಯಾರೆಂದು ತಿಳಿಯದು. ಈ ಕ್ಷಣ ಅಷ್ಟೇ ನಮ್ಮದು. ಈ ಹಿಂದೆ ಅನುಭವಿಸಿದ ಕ್ಷಣ ನಮ್ಮದು. ಮುಂದಿನದು ನಮ್ಮದಲ್ಲ. ನಮ್ಮ ವಶದಲ್ಲಿ ಇಲ್ಲ..

---

# ಕೂದಲು ಚೆನ್ನಾಗಿ ಬೆಳೆಯಬೇಕಾದ್ರೆ ತೆಂಗಿನೆಣ್ಣೆ ಜೊತೆಗೆ ಇವುಗಳನ್ನು ಸೇರಿಸಿ

ಪ್ರತಿ ಹೆಣ್ಮಕ್ಕಳೂ ಉದ್ದನೆಯ ಕೂದಲನ್ನು ಬಯಸುತ್ತಾರೆ. ಆದರೆ ಉದ್ದನೆಯ ಕೂದಲು ಬೆಳೆಯೋದು ಅಷ್ಟೊಂದು ಸುಲಭವಲ್ಲ. ಅದಕ್ಕೆ ಸರಿಯಾದ ಕೂದಲಿನ ಆರೈಕೆಯೂ ಮುಖ್ಯ. ಕೂದಲಿಗೆ ಬಳಸುವ ಎಣ್ಣೆಯೂ ಅಷ್ಟೇ ಪ್ರಾಮುಖ್ಯತೆಯನ್ನು ಪಡೆದಿದೆ. ಕೂದಲು ಉದ್ದ, ದಪ್ಪಗೆ ಬೆಳೆಯಬೇಕಾದರೆ ತಲೆಗೆ ಎಣ್ಣೆ ಹಚ್ಚುವುದು ಪ್ರಯೋಜನಕಾರಿ. ಆದರೆ ನೈಸರ್ಗಿಕ, ಆಯುರ್ವೇದ ಗಿಡಮೂಲಿಕೆಗಳಿಂದ ತಯಾರಿಸಿದ ಎಣ್ಣೆಯನ್ನು ಕೂದಲಿಗೆ ಹಚ್ಚುವುದರಿಂದ ಹಲವಾರು ಪ್ರಯೋಜನಗಳಿವೆ. ಹಾಗಾದ್ರೆ ಯಾವ ಎಣ್ಣೆಗೆ ಯಾವ ವಸ್ತುಗಳನ್ನು ಸೇರಿಸಿ ತಲೆಗೆ ಹಚ್ಚೋದ್ರಿಂದ ಕೂದಲು ಚೆನ್ನಾಗಿ ಬೆಳೆಯುತ್ತದೆ ಎನ್ನುವುದನ್ನು ತಿಳಿಯೋಣ.

**ತೆಂಗಿನೆಣ್ಣೆಯೊಂದಿಗೆ ಮೆಂತ್ಯ ಬೀಜ**

ಮೆಂತ್ಯ ಬೀಜಗಳನ್ನು ತೆಂಗಿನ ಎಣ್ಣೆಯೊಂದಿಗೆ ಬೆರೆಸಿ ಕೂದಲು, ನೆತ್ತಿಗೆ ಹಚ್ಚೋದರಿಂದ ಕೂದಲಿಗೆ ಪೋಷಣೆ ದೊರೆಯುತ್ತದೆ. ಮೆಂತ್ಯ ಮತ್ತು ತೆಂಗಿನ ಎಣ್ಣೆಯನ್ನು ಕೂದಲಿಗೆ ಹಚ್ಚುವುದರಿಂದ ಕೂದಲಿನ ಬೆಳವಣಿಗೆ ಹೆಚ್ಚಾಗುತ್ತದೆ, ಇದು ಕೂದಲನ್ನು ಉದ್ದ ಮತ್ತು ಸುಂದರವಾಗಿಸುತ್ತದೆ. ಈ ಎಣ್ಣೆಯನ್ನು ಹೇಗೆ ತಯಾರಿಸಬಹುದು ಮತ್ತು ಕೂದಲಿಗೆ ತೆಂಗಿನ ಎಣ್ಣೆ ಮೆಂತ್ಯವನ್ನು ಹಚ್ಚುವುದರಿಂದಾಗುವ ಪ್ರಯೋಜನಗಳ ಬಗ್ಗೆ ತಿಳಿಯೋಣ.

**ಈ ಆಯುರ್ವೇದ ಎಣ್ಣೆಯನ್ನು ತಯಾರಿಸುವುದು ಹೇಗೆ:** 100 ಮಿಲಿ ತೆಂಗಿನ ಎಣ್ಣೆಯೊಂದಿಗೆ 2 ಟೀ ಚಮಚ ಮೆಂತ್ಯ ಬೀಜಗಳು ಮತ್ತು ಒಂದು ಹಿಡಿ ಕರಿಬೇವು ಎಲೆಗಳನ್ನು 10 ರಿಂದ 15 ನಿಮಿಷಗಳ ಕಾಲ ಕುದಿಸಿ. ಈ ಎಣ್ಣೆಯನ್ನು ಜ್ವಾಲೆಯಿಂದ ತೆಗೆದು ತಣ್ಣಗಾಗಿಸಿ. ತಣ್ಣಗಾದ ನಂತರ ಎಣ್ಣೆಯನ್ನು ಫಿಲ್ಟರ್ ಮಾಡಿ ಬಾಟಲಿಯಲ್ಲಿ ತುಂಬಿಸಿ. ತಲೆಗೆ ಸ್ನಾನ ಮಾಡುವ ಮೊದಲು ತಲೆಗೆ ಈ ಎಣ್ಣೆಯನ್ನು ಮಸಾಜ್ ಮಾಡಿ ಒಂದೆರಡು ಗಂಟೆ ಬಿಟ್ಟು ಸ್ನಾನ ಮಾಡಿ.



**ಕೂದಲಿನ ಶುಷ್ಕತೆ ಕಡಿಮೆಯಾಗುತ್ತದೆ:** ಒಣ ಕೂದಲಿನ ಶುಷ್ಕತೆಯನ್ನು ಕಡಿಮೆ ಮಾಡಲು, ತೆಂಗಿನ ಎಣ್ಣೆ ಮತ್ತು ಮೆಂತ್ಯ ಬೀಜಗಳಿಂದ ತಯಾರಿಸಿದ ಈ ಎಣ್ಣೆಯನ್ನು ತಲೆಗೆ ಹಚ್ಚಬಹುದು. ಇದು ನಿಮ್ಮ ತಲೆಯ ಚರ್ಮವನ್ನು ಪೋಷಿಸುತ್ತದೆ. ಕೂದಲು ಪೋಷಣೆಯನ್ನು ಪಡೆಯುವುದರಿಂದ, ಕೂದಲು ಮೃದು ಮತ್ತು ರೇಷ್ಮೆಯಂತಾಗುತ್ತದೆ ಮತ್ತು ಕೂದಲಿನ ಬಲವೂ ಹೆಚ್ಚಾಗುತ್ತದೆ.

**ತಲೆಹೊಟ್ಟು ಕಡಿಮೆ ಮಾಡುತ್ತದೆ**

**ಮೆಂತ್ಯವು ಕೂದಲಿನಲ್ಲಿ ತಲೆಹೊಟ್ಟು ಸಮಸ್ಯೆಯನ್ನು ಕಡಿಮೆ ಮಾಡುವಲ್ಲಿ ಪರಿಣಾಮಕಾರಿಯಾಗಿದೆ. ಮೆಂತ್ಯವು ಕೂದಲಿನ ಹೊಳಪನ್ನು ಹೆಚ್ಚಿಸಲು ಕೆಲಸ ಮಾಡುತ್ತದೆ. ಮೆಂತ್ಯವನ್ನು ನೀವು ಎಣ್ಣೆ ಜೊತೆ ಸೇರಿಸಿಯೂ ಬಳಸಬಹುದು ಅಥವಾ ಮೆಂತ್ಯದ ಪ್ಯಾಕ್ ತಯಾರಿಸಿಯೂ ಕೂದಲಿಗೆ ಹಚ್ಚಬಹುದು.**



**ಕೂದಲಿನ ಬೆಳವಣಿಗೆಯನ್ನು ಹೆಚ್ಚಿಸುತ್ತದೆ:** ತೆಂಗಿನ ಎಣ್ಣೆಯಲ್ಲಿ ಲಾರಿಕ್ ಆಮ್ಲವಿದೆ. ಇದು ಕೂದಲಿನ ಬೇರುಗಳನ್ನು ಬಲಪಡಿಸುತ್ತದೆ. ಮೆಂತ್ಯದಲ್ಲಿ ಕಂಡುಬರುವ ಪ್ರೋಟೀನ್ ಮತ್ತು ನಿಕೋಟಿನಿಕ್ ಆಮ್ಲದಂತಹ ಅಂಶಗಳು ಕೂದಲಿನ ಬೆಳವಣಿಗೆಯನ್ನು ಹೆಚ್ಚಿಸುತ್ತವೆ. ಇದು ಕೂದಲಿನ ಉದ್ದವನ್ನು ಹೆಚ್ಚಿಸಲು ಸಹಕಾರಿಯಾಗಿದೆ.

**ಕೂದಲು ಬೂದು ಬಣ್ಣಕ್ಕೆ ತಿರುಗುವುದನ್ನು ತಡೆಯುತ್ತದೆ:** ಕೂದಲು ಅಕಾಲಿಕವಾಗಿ ಬೂದು ಬಣ್ಣಕ್ಕೆ ತಿರುಗುವ ಸಮಸ್ಯೆಯಿಂದ ಪರಿಹಾರ ಪಡೆಯಲು, ತೆಂಗಿನ ಎಣ್ಣೆ, ಮೆಂತ್ಯ ಬೀಜಗಳಿಂದ ತಯಾರಿಸಿದ ಈ ಗಿಡಮೂಲಿಕೆ ಎಣ್ಣೆಯನ್ನು ಕೂದಲಿಗೆ ಹಚ್ಚಬಹುದು.ಇದು ಕೂದಲಿನ ಬಲವನ್ನು ಹೆಚ್ಚಿಸುವುದರ ಜೊತೆಗೆ, ಕೂದಲು ಅಕಾಲಿಕವಾಗಿ ಬೂದು ಬಣ್ಣಕ್ಕೆ ತಿರುಗುವುದನ್ನು ತಡೆಯುತ್ತದೆ.

---

# ರಸ್ತೆ ಗುಂಡಿ ಮುಚ್ಚಲು ಆಗ್ರಹಿಸಿ ಆರೋಹಣ ಫೌಂಡೇಷನ್‌ನಿಂದ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ನಗರದ ರಸ್ತೆಗಳಲ್ಲಿರುವ ಗುಂಡಿಗಳನ್ನು ಮುಚ್ಚಲು ಬಿಬಿಎಂಪಿ ಒಂದು ವಾರದ ಒಳಗೆ ಕ್ರಮ ಕೈಗೊಳ್ಳಬೇಕು. ಇಲ್ಲದೇ ಇದ್ದರೆ ನಾವೇ ಗುಂಡಿಮುಚ್ಚಿ ಪ್ರತಿಭಟನೆ ಆರಂಭಿಸುತ್ತೇವೆ' ಎಂದು 'ಆರೋಹಣ' ಫೌಂಡೇಷನ್ ಸಂಸ್ಥೆಯ ಸದಸ್ಯರು ತಿಳಿಸಿದ್ದಾರೆ.ನಗರದ ಸ್ವಾತಂತ್ರ್ಯ ಉದ್ಯಾನದಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು. ಗುಂಡಿ ಮುಚ್ಚುವಂತೆ ನಾವು ಬಿಬಿಎಂಪಿಗೆ ಎರಡು ಬಾರಿ ಮನವಿ ಸಲ್ಲಿಸಿದ್ದೇವೆ.

ಯಾವುದೇ ಸ್ಪಂದನೆ ದೊರೆಯದ ಕಾರಣ ಸಾಂಕೇತಿಕವಾಗಿ ಪ್ರತಿಭಟನೆ ಹಮ್ಮಿಕೊಂಡಿದ್ದೇವೆ. ಇನ್ನು ಒಂದು ವಾರದಲ್ಲಿ ಬಿಬಿಎಂಪಿ ಕ್ರಮ ಕೈಗೊಳ್ಳಬೇಕು ಎಂದು ಆರೋಹಣ ಫೌಂಡೇಷನ್ ಅಧ್ಯಕ್ಷ ಮಹಮ್ಮದ್ ರಾಯಿದ್ ಝುನ್ ಗಡುವು ನೀಡಿದರು. ವೈಟ್ ಫೀಲ್ಡ್, ಬನ್ನೇರುಘಟ್ಟ ರಸ್ತೆ ಸೇರಿದಂತೆ ನಗರದ ಅನೇಕ ಕಡೆಗಳಲ್ಲಿ ಗುಂಡಿಗಳು ಬಿದ್ದಿವೆ. ಹೊಂಡಗಳಿಂದಾಗಿ ಅಪಘಾತಗಳು ಹೆಚ್ಚಿವೆ ಎಂದು ತಿಳಿಸಿದರು. 'ಆರೋಹಣ' ಫೌಂಡೇಷನ್‌ನ ಶ್ರೀಹರಿ ಶ್ರೀನಿವಾಸ್, ಇಮಾನ್ ಸಯಿದ್ ಉಪಸ್ಥಿತರಿದ್ದರು.





---

# ಮಳೆ ಬರುವಾಗ ಚಹಾ, ಪಕೋಡಾ ತಿನ್ನುವವರು ಇದನ್ನು ಓದಲೇ ಬೇಕು

ತಂಪಾದ ವಾತಾವರಣದಲ್ಲಿ ಬಿಸಿಯಾಗಿರುವ ಪಾನೀಯ, ತಿಂಡಿಗಳನ್ನು ತಿನ್ನುವ ಹಂಬಲ ನಮ್ಮಲ್ಲಿ ಬಹಳಷ್ಟು ಜನರಲ್ಲಿದೆ. ಹಾಗಂತ ನೀವು ನೀವು ಚಹಾ, ಕಾಫಿ, ಪಕೋಡಾವನ್ನು ತಿನ್ನುವ ತಪ್ಪು ಮಾಡದಿರಿ.

ಇದು ನಾಲಗೆಗೆ ರುಚಿ ನೀಡಿದರೂ ಆರೋಗ್ಯಕ್ಕೆ ಹಾನಿಕಾರಕವಾಗಿದೆ. ಮಳೆ ಬರುವಾಗ ಪ್ರತಿಯೊಬ್ಬರಿಗೂ ಬಿಸಿ ಬಿಸಿ ಚಹಾ ಅಥವಾ ಕಾಫಿ ಅದರ ಜೊತೆ ಬಜ್ಜಿ ತಿನ್ನಬೇಕೆನ್ನುವ ಬಯಕೆಯಾಗೋದು ಸಹಜ. ಮಳೆಯ ಚಳಿಗೆ ಮೈಯನ್ನು ಬಿಸಿಯಾಗಿಸಲು ಚಹಾ, ಬಜ್ಜಿ, ಪಕೋಡ ಸಹಾಯ ಮಾಡುತ್ತದೆ. ಇದು ನಮ್ಮ ನಾಲಗೆಗೆ ಎಷ್ಟು ರುಚಿಯನ್ನು ನೀಡುತ್ತದೋ ಆರೋಗ್ಯಕ್ಕೂ ಅಷ್ಟೇ ಹಾನಿಕಾರಕವಾಗಿದೆ ಎನ್ನುವುದನ್ನು ನೀವು



ತಿಳಿಯಲೇ ಬೇಕು. ಮಾನ್ಸೂನ್‌ನಲ್ಲಿ ಚಹಾ, ಪಕೋಡಗಳ ಅತಿಯಾದ ಸೇವನೆಯು ನಿಮ್ಮ ಆರೋಗ್ಯದ ಮೇಲೆ ಏಕೆ ಪರಿಣಾಮ ಬೀರುತ್ತದೆ ಎಂದು ತಿಳಿಯೋಣ.

**ನಿರ್ಜಲೀಕರಣ ಮತ್ತು ಆಮ್ಲೀಯತೆ:** ಚಹಾದಲ್ಲಿರುವ ಕೆಫೀನ್ ದೇಹದಲ್ಲಿನ ನೀರಿನ ಪ್ರಮಾಣವನ್ನು ಕಡಿಮೆ ಮಾಡುತ್ತದೆ. ನೀವು ಅತಿಯಾಗಿ ಚಹಾ ಅಥವಾ ಕಾಫಿಯನ್ನು ಕುಡಿಯುತ್ತಿದ್ದರೆ ಅದು ನಿರ್ಜಲೀಕರಣಕ್ಕೆ ಕಾರಣವಾಗುತ್ತದೆ. ಅಲ್ಲದೆ, ಖಾಲಿ ಹೊಟ್ಟೆಯಲ್ಲಿ ಅಥವಾ ಪದೇ ಪದೇ ಚಹಾ ಕುಡಿಯುವುದರಿಂದ ಆಮ್ಲೀಯತೆ ಹೆಚ್ಚಾಗಬಹುದು, ಇದು ಮಳೆಗಾಲದಲ್ಲಿ ಇನ್ನಷ್ಟು ತೊಂದರೆಯನ್ನುಂಟು ಮಾಡುತ್ತದೆ.



**ಚಹಾ, ಪಕೋಡಾದ ಬದಲಿಗೆ ಏನನ್ನು ಆಯ್ಕೆ ಮಾಡಬೇಕು**

**ಚಹಾದ ಬದಲಿಗೆ ಗಿಡಮೂಲಿಕೆ ಚಹಾ ಅಥವಾ ಗ್ರೀನ್ ಟೀಯನ್ನು ಆರಿಸಿಕೊಳ್ಳಿ. ಡೀಪ್ ಫ್ರೈಡ್ ಬದಲಿಗೆ ತವಾ ಫ್ರೈ ಅಥವಾ ಏರ್ ಫ್ರೈ ನಲ್ಲಿ ಹುರಿದ ಅಥವಾ ಗ್ರಿಲ್ ಮಾಡಿದ ತಿಂಡಿಗಳನ್ನು ಸೇವಿಸಿ. ಋತುಮಾನದ ಹಣ್ಣುಗಳು, ಹುರಿದ ಕಡಲೆ ಅಥವಾ ಹೆಸರು ಬೇಳೆ ಮುಂತಾದ ಆರೋಗ್ಯಕರ ತಿಂಡಿಗಳನ್ನು ಸೇವಿಸಿ.**

**ಎಣ್ಣೆಯಲ್ಲಿ ಕರಿದ ಆಹಾರಗಳು:** ಮನೆಯಲ್ಲಿ ಅಥವಾ ಹೋಟೇಲ್‌ನಲ್ಲಿ ಪಕೋಡಗಳನ್ನು ಒಂದೇ ಎಣ್ಣೆಯಲ್ಲಿ ಹಲವಾರು ಬಾರಿ ಹುರಿಯಲಾಗುತ್ತದೆ. ಇದು ಅದರಲ್ಲಿ ಟ್ರಾನ್ಸ್ ಕೊಬ್ಬನ್ನು ಹೆಚ್ಚಿಸುತ್ತದೆ. ಈ ಟ್ರಾನ್ಸ್ ಕೊಬ್ಬು ದೇಹದಲ್ಲಿ ಕೊಲೆಸ್ಟ್ರಾಲ್ ಮಟ್ಟವನ್ನು ಹೆಚ್ಚಿಸುವ ಮೂಲಕ ಹೃದಯ ಕಾಯಿಲೆಗಳ ಅಪಾಯವನ್ನು ಹೆಚ್ಚಿಸುತ್ತದೆ.

**ಸೋಂಕಿನ ಅಪಾಯ:** ಮಳೆಗಾಲದಲ್ಲಿ ತೇವಾಂಶದಿಂದಾಗಿ, ಬ್ಯಾಕ್ಟೀರಿಯಾ ಮತ್ತು ಶಿಲೀಂಧ್ರಗಳು ಬೇಗನೆ ಬೆಳೆಯುತ್ತವೆ. ರಸ್ತೆಬದಿಯಲ್ಲಿ ಅಥವಾ ತೆರೆದ ಸ್ಥಳದಲ್ಲಿ ಹುರಿದ ಪಕೋಡಗಳನ್ನು ತಿನ್ನುವುದರಿಂದ ಆಹಾರ ವಿಷ, ಅತಿಸಾರ ಮತ್ತು ಇತರ ಸೋಂಕುಗಳ ಅಪಾಯ ಹೆಚ್ಚಾಗುತ್ತದೆ.

**ತೂಕ ಹೆಚ್ಚಾಗುವುದು ಮತ್ತು ಆಲಸ್ಯ**

ಎಣ್ಣೆ ಮತ್ತು ಕಾರ್ಬೋಹೈಡ್ರೇಟ್‌ಗಳಲ್ಲಿ ಸಮೃದ್ಧವಾಗಿರುವ ಪಕೋಡಗಳು ದೇಹದಲ್ಲಿ ಕೊಬ್ಬನ್ನು ಸಂಗ್ರಹಿಸುತ್ತವೆ. ಇದು ತೂಕ ಹೆಚ್ಚಾಗಲು ಕಾರಣವಾಗುತ್ತದೆ ಮತ್ತು ದೇಹವು ಆಲಸ್ಯವನ್ನು ಅನುಭವಿಸುತ್ತದೆ. ಚಹಾದಲ್ಲಿ ಹೆಚ್ಚುವರಿ ಸಕ್ಕರೆ ಕೂಡ ತೂಕ ಹೆಚ್ಚಾಗಲು ಕಾರಣವಾಗುತ್ತದೆ.

---

ಶ್ರೀ. ವಿನೋದ ಕಾಮತ್

# ವಿದ್ಯೆ ಹಾಗೂ ಜ್ಞಾನ ಇದು ಗುರು ಶಿಷ್ಯರಿಂದತೆ

## ಗುರುಗಳ ವೈಶಿಷ್ಟ್ಯಗಳು

ಶಿಷ್ಯನಿಗೆ ಭಗವಂತನ ಅಸ್ತಿತ್ವದ ಮನವರಿಕೆ ಮಾಡಿಕೊಟ್ಟು ಈಶ್ವರಪ್ರಾಪ್ತಿ ಮಾಡಿಸಿಕೊಡುವುದು: ಹೇಗೆ ಅಮಾವಾಸ್ಯೆಯಂದು ಕತ್ತಲಿರುವಾಗ ಪಾಡ್ಯದಿಂದ ಸ್ವಲ್ಪಸ್ವಲ್ಪವೇ ಬೆಳೆಯುತ್ತಾ ಹುಣ್ಣಿಮೆಯಂದು ಪೂರ್ಣ ಚಂದ್ರನು ಪ್ರಕಾಶಿಸುವವನೋ ಹಾಗೆಯೇ ಗುರುಗಳು ಶಿಷ್ಯನನ್ನು ಅವನ ಭ್ರಮೆಯಂತಹ ಮಾಯೆಯ ಅಜ್ಞಾನಮಯ ಅಂಧಃಕಾರಸ್ಥಿತಿಯಿಂದ ಸಾಧನೆಯ ಮೂಲಕ ಮುಕ್ತಗೊಳಿಸಿ ಸತ್ಯ, ಚೈತನ್ಯಮಯ, ಪ್ರಕಾಶಮಯವಾಗಿರುವಂತಹ ಈಶ್ವರನ ಅಸ್ತಿತ್ವವನ್ನು ಮನವರಿಕೆ ಮಾಡಿಕೊಟ್ಟು ಈಶ್ವರಪ್ರಾಪ್ತಿ ಮಾಡಿಸಿಕೊಡುತ್ತಾರೆ.

**ಆ. ಭಗವಂತ ಹಾಗೂ ಶಿಷ್ಯನನ್ನು ಸೇರಿಸುವ ಕೊಂಡಿ :** ಗುರು ಇವರು ಭಗವಂತನನ್ನು ಹಾಗೂ ಶಿಷ್ಯನನ್ನು, ಅಂದರೆ ಜೀವ ಹಾಗೂ ಶಿವನನ್ನು ಸೇರಿಸುವ ಒಂದು ಕೊಂಡಿಯಾಗಿದ್ದಾರೆ. ವಿದ್ಯೆ ಹಾಗೂ ಜ್ಞಾನ ಇದು ಗುರು ಶಿಷ್ಯರ ನಡುವಿನ ಮಾಧ್ಯಮವಾಗಿದೆ, ಹಾಗೂ ಮನಸ್ಸು ಇದು ಶರೀರ ಹಾಗೂ ಆತ್ಮವನ್ನು ಸೇರಿಸುವ ಮಾಧ್ಯಮವಾಗಿದೆ; ಆದ್ದರಿಂದ ಮೊದಲ ನಮಸ್ಕಾರ ಗುರುಗಳಿಗೆ ಸಲ್ಲಿಸಬೇಕು. ಇ. ಎಲ್ಲಾ ಭಾವಗಳಿಂದ ಮುಕ್ತ, ಗುಣಾತೀತ ಹಾಗೂ ಎಲ್ಲಾ ಸದ್ಗುಣಗಳಿಂದ ಯುಕ್ತವಾಗಿರುವ ಗುರುತತ್ತ್ವ ಬ್ರಹ್ಮಾನಂದಂ ಪರಮಸುಖದಂ ಕೇವಲಂ ಜ್ಞಾನಮೂರ್ತಿಮ್ ದ್ವಂದ್ವಾತೀತಂ ಗಗನಸದೃಶಂ ತತ್ತ್ವಮಸ್ಯಾದಿಲಕ್ಷ್ಯಮ್ । ಏಕಂ ನಿತ್ಯಂ ವಿಮಲಮಚಲಮ್ ಸರ್ವಧೀಸಾಕ್ಷಿಭೂತಮ್ ಭಾವಾತೀತಮ್ ತ್ರಿಗುಣರಹಿತಮ್ ಸದ್ಗುರುಮ್ ತಂ ನಮಾಮಿ ॥


**ಅರ್ಥ :** ಬ್ರಹ್ಮಸ್ವರೂಪ, ಆನಂದರೂಪ, ಪರಮೋಚ್ಚ ಸುಖವನ್ನು ನೀಡುವ, ಕೇವಲ ಜ್ಞಾನಸ್ವರೂಪ, ದ್ವಂದ್ವರಹಿತ, ಆಕಾಶದಂತೆ (ನಿರಾಕಾರ), ತತ್ತ್ವಮಸಿ ಎಂಬ ಮಹಾವಾಕ್ಯದ ಲಕ್ಷ್ಯ ಅದು ನೀನಾಗಿದ್ದೀಯ, ಎಂಬ ವೇದವಾಕ್ಯವು ಯಾರನ್ನು ಉದ್ದೇಶಿಸಿ ಹೇಳಲಾಗಿದೆಯೋ ಅವರು ಏಕೈಕ, ನಿತ್ಯ, ಶುದ್ಧ, ಸ್ಥಿರ, ಸರ್ವಜ್ಞ, ಸರ್ವಸಾಕ್ಷಿ, ಭಾವಾತೀತ, ಗುಣಾತೀತವಾಗಿರುವಂತಹ ಸದ್ಗುರುಗಳಿಗೆ ನಾನು ನಮಿಸುತ್ತೇನೆ.

**ವಿವರಣೆ :** ಬ್ರಹ್ಮಾನಂದದಲ್ಲಿ ಮಗ್ನರಾಗಿರುವ, ಆನಂದಮೂರ್ತಿ ಹಾಗೂ ಅಜ್ಞಾನಮಯವಾಗಿರುವಂತಹ ಭವಸಾಗರದಲ್ಲಿನ ಅಡಚಣೆಗಳಿಂದ ಭಯ ಉತ್ಪನ್ನವಾಗಿರುವುದರಿಂದ ಭಯವನ್ನು ದೂರ ಮಾಡಿ ಅವನಿಗೆ ಸತ್ಯದ ಮನವರಿಕೆ ಮಾಡಿಕೊಟ್ಟು ಆಶ್ವಾಸನೆ ನೀಡುವ (ನಿಶ್ಚಿಂತಗೊಳಿಸುವ), ಭಗವಂತನ ಸತ್ಯ ಸ್ವರೂಪವನ್ನು ತಿಳಿದಿರುವ, ಜ್ಞಾನಮೂರ್ತಿ, ಸುಖ–ದುಃಖದ ಮಾಯಾಸ್ವರೂಪವಾಗಿರುವ ಭ್ರಾಮಕ ಭ್ರಮೆಯಿಂದ ದೂರವಿರುವ, ಯಾವಾಗಲೂ ಆನಂದಾವಸ್ಥೆಯಲ್ಲಿರುವ, ಆಕಾಶದಂತೆ ಅಪರಿಮಿತ, ಗಂಭೀರ, ಸತರ್ಕ, ಸ್ವಚ್ಛ ತತ್ತ್ವಮಸಿ ಇತ್ಯಾದಿ ಮಹಾವಾಕ್ಯಗಳ ಅನುಭವವನ್ನು ಪಡೆದುಕೊಳ್ಳುವ; ಎಲ್ಲ ಕಡೆ ಭಗವಂತನ ಅಸ್ತಿತ್ವವಿದೆ, ಎಂಬುದನ್ನು ಒಂದೊಂದು ಕ್ಷಣವೂ ಅನುಭವ ಪಡೆದು ಕೊಳ್ಳುವ, ಯಾವಾಗಲು ನಿತ್ಯವಾಗಿರುವ ಒಂದೇ ತತ್ತ್ವದಿಂದ ಅಸ್ತಿತ್ವದಲ್ಲಿರುವ; ನಿರ್ಮಲ, ದೋಷರಹಿತ, ಶುಭ್ರ, ಸ್ಥಿರ, ಅಚಲ, ಎಂದಿಗೂ ಸಾಕ್ಷೀರೂಪವಾಗಿರುವ, ಎಲ್ಲಾ ಭಾವಗಳಿಂದ ಮುಕ್ತ; ಸತ್ವ, ರಜ, ತಮ, ಗುಣರಹಿತ, ಗುಣಾತೀತ ಹೀಗೆ ಎಲ್ಲಾ ಸದ್ಗುಣಗಳ ಯುಕ್ತವಾಗಿರುವ ಸದ್ಗುರುಗಳಿಗೆ ನಾನು ನಮಸ್ಕರಿಸುತ್ತೇನೆ.

**ಆಚರಣೆ:** ಗುರು ಇವರು ಸ್ವತಃ ಸ್ವಯಂಪೂರ್ಣರು, ಆದರ್ಶರೂ ಆಗಿರುತ್ತಾರೆ. ಅವರ ಜೀವನದಲ್ಲಿನ ಪ್ರತಿಯೊಂದು ಕೃತಿಯೂ ಆದರ್ಶವಾಗಿಯೇ ಇರುತ್ತದೆ. ಅವರು ಯಾವಾಗಲೂ ಎಲ್ಲಾ ಜೀವಗಳ, ಪ್ರಾಣಿಮಾತ್ರರ ಕಲ್ಯಾಣಕ್ಕಾಗಿ ಕಷ್ಟವನ್ನು ಸಹಿಸಿಕೊಳ್ಳುತ್ತಿರುತ್ತಾರೆ. ಆದ್ದರಿಂದ ಸಾಧಕರು ಗುರುಗಳ ಆಜ್ಞೆಯಂತೆ, ಆಚರಣೆಯಂತೆ ನಡೆದುಕೊಳ್ಳಬೇಕು. ಶ್ರೀಮದ್‌ಭಗವದ್ಗೀತಾ, ಅಧ್ಯಾಯ 3, ಶ್ಲೋಕ 21 ರಲ್ಲಿ ಭಗವಂತನು ನುಡಿಯುತ್ತಾನೆ, ಶ್ರೇಷ್ಠ ಮನುಷ್ಯನ ಆಚರಣೆ ಹೇಗಿರುತ್ತದೆಯೋ ಅದರಂತೆ ಇತರರೆಲ್ಲರೂ ಆಚರಿಸುತ್ತಾರೆ.

ಅವನು ಯಾವುದನ್ನು ಪ್ರಮಾಣವೆಂದು ಹೇಳುವನೋ, ಅದರಂತೆ ಮನುಷ್ಯ ಸಮುದಾಯವೆಲ್ಲಾ ವರ್ತಿಸುತ್ತದೆ. ಸಂತ ತುಕಾರಾಮ ಮಹಾರಾಜರು ನುಡಿಯುತ್ತಾರೆ ಬೋಲೆ ತೈಸಾ ಚಾಲೆ, ತ್ಯಾಚೀ ವಂದಾವೀ ಪಾವುಲೆ । ಸಂತರು ಹೇಗೆ ಮಾತನಾಡುತ್ತಾರೋ, ಅದೇರೀತಿ ನಡೆದುಕೊಳ್ಳುತ್ತಾರೆ; ಆದ್ದರಿಂದ ಅವರು ಮಹಾನ್ ಆಗಿದ್ದಾರೆ. ಅಂತಹವರಿಗೆ ನಮಸ್ಕಾರ ಮಾಡಿರಿ. ಇಷ್ಟೇ ಅಲ್ಲ, ಅವರ ಸಾಧನೆಯಿಂದ ಅವರಲ್ಲಿ ಎಷ್ಟು ಶಕ್ತಿಯಿರುತ್ತದೆ ಅಂದರೆ, ಅವರ ಬಲಗಾಲಿನ ಹೆಬ್ಬೆಟ್ಟಿನ ನೀರಿನ ತೀರ್ಥವನ್ನು ಸೇವಿಸಿದರೆ ಪಾಪ ಪರಿಮಾರ್ಜನೆಯಾಗುತ್ತದೆ.

**ಜುಲೈ 10ರಂದು ಗುರುಪೂರ್ಣಿಮೆ**



- ರಸ್ತೆಯಲ್ಲಿ ಬಾಯಿ ತೆರೆದುಕೊಂಡಿರುವ ಗುಂಡಿಗಳನ್ನು ಮುಚ್ಚಲು ಲೋಕೋಪಯೋಗಿ ಮುಂದಾಗುತ್ತಿಲ್ಲ: ಸಾರ್ವಜನಿಕರು ದೂರು


# ಮುಖ್ಯ ರಸ್ತೆಯಲ್ಲಿ ಗುಂಡಿಗಳದ್ದೇ ಪಾರುಪತ್ಯ: ವಾಹನ ಸವಾರರ ಪರದಾಟ

- ಉದಯವಾಹಿನಿ, ಬ್ಯಾಡಗಿ

ಪಟ್ಟಣದ ಮುಖ್ಯ ರಸ್ತೆ ವಿಸ್ತರಣೆಗೆ ಆಗ್ರಹಿಸಿ ವರ್ತಕರ ನೇತೃತ್ವದಲ್ಲಿ 40ಕ್ಕೂ ಹೆಚ್ಚು ವಿವಿಧ ಸಂಘಟನೆಗಳು ನಡೆಸಿದ ಪ್ರತಿಭಟನೆ ವಾಪಸ್ ಪಡೆದು ಹದಿನೈದು ದಿನಗಳಾಗಿದ್ದರೂ ರಸ್ತೆಯಲ್ಲಿ ಬಾಯಿ ತೆರೆದುಕೊಂಡಿರುವ ಗುಂಡಿಗಳನ್ನು ಮುಚ್ಚಲು ಲೋಕೋಪಯೋಗಿ ಮುಂದಾಗುತ್ತಿಲ್ಲ ಎಂದು ಸಾರ್ವಜನಿಕರು ದೂರುತ್ತಿದ್ದಾರೆ.

ಮುಖ್ಯ ರಸ್ತೆ ಪ್ರವೇಶಿಸುವ ವಾಹನ ಸವಾರರಿಗೆ ಟ್ರಾಫಿಕ್ ಕಿರಿಕಿರಿ, ಜೊತೆಗೆ ಜಲ್ಲಿ ಕಲ್ಲು ಚಲ್ಲಾಪಿಲ್ಲಿಯಾಗಿ ಸೃಷ್ಟಿಯಾದ ಹತ್ತಾರು ಗುಂಡುಗಳನ್ನು ದಾಟಿ ಮುಂದೆ ಸಾಗಬೇಕಾದ ಪರಿಸ್ಥಿತಿ ಇದೆ. ಕಾಲಕಾಲಕ್ಕೆ ಗುಂಡಿಗಳನ್ನು ಮುಚ್ಚಬೇಕಾದ ಲೋಕೋಪಯೋಗಿ ಇಲಾಖೆ ಕಣ್ಣು ಮುಚ್ಚಿ ಕುಳಿತಿದೆ. ರಸ್ತೆ ದಾಟುವುದು ವಾಹನ ಸವಾರರಿಗೆ ಸವಾಲಾಗಿ ಪರಿಣಮಿಸಿದೆ. ಮುಖ್ಯ ರಸ್ತೆಯಲ್ಲಿ ಗುಂಡಿಗಳು ಹರಿಡಿಕೊಂಡಿವೆ.

ಮುಖ್ಯ ರಸ್ತೆಗೆ ಬಂದರೆ ಯಾಕಾದರೂ ಪ್ರವೇಶಿಸಿದೆ ಎಂದು ಸವಾರರು ಪಶ್ಚಾತ್ತಾಪ ಪಡುವಂತಾಗಿದೆ. ರಸ್ತೆ ಪಕ್ಕದ ಕೆಲವು ಕಡೆ ಚಿಕ್ಕ ಚರಂಡಿ ನಿರ್ಮಿಸಲಾಗಿದೆ. ಕಸ ಕಡ್ಡಿ ಸಂಗ್ರಹವಾಗಿ ನೀರು ಹರಿಯದೇ ದುರ್ನಾತ ಬೀರುತ್ತಿವೆ. ಸೊಳ್ಳೆಗಳ ವಾಸ ಸ್ಥಳವಾಗಿ ಪರಿವರ್ತನೆಯಾಗಿದ್ದು ಅಲ್ಲಿಯ ಅನೇಕ ಸಾಂಕ್ರಾಮಿಕ ರೋಗಗಳಿಗೆ ತುತ್ತಾಗುವ ಆತಂಕ ಹೆಚ್ಚುತ್ತಿದೆ. ಇಂತಹ ದುಸ್ಥಿತಿಯಲ್ಲಿರುವ ಚರಂಡಿಗಳ ಸ್ವಚ್ಛತೆಗೆ ಪುರಸಭೆ ಮುಂದಾಗುತ್ತಿಲ್ಲ. ಯಾಕೆ ಈ ರೀತಿಯ ವಿಳಂಭವಾಗುತ್ತಿದೆ ಎಂದು ಪಾದಚಾರಿಗಳು ಪ್ರಶ್ನಿಸುವಂತಾಗಿದೆ. ಕಾಲ್ನಡಿಗೆಯಲ್ಲಿ ಸಾಗುವ ವೃದ್ಧರು, ಮಹಿಳೆಯರು, ಮಕ್ಕಳು ಸೇರಿದಂತೆ ರೋಸಿ ಹೋಗಿರುವ ನೂರಾರು ಜನರು ಪುರಸಭೆಗೆ ಹಿಡಿ ಶಾಪ ಹಾಕುತ್ತಿದ್ದಾರೆ. ಬಾಯಿ ತೆರೆದ ಗುಂಡಿಗಳನ್ನಾದರೂ ಮುಚ್ಚಿ ರಸ್ತೆ ಸಂಚಾರಕ್ಕೆ ಅವಕಾಶಮಾಡಿ ಕೊಡಬೇಕಾಗಿದೆ ಎಂದು ಸಾರ್ವಜನಿಕರು ಹೇಳುತ್ತಿದ್ದಾರೆ. ಭೂಸ್ವಾಧೀನಕ್ಕೆ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕಾಗಿದೆ.





ಉದಯವಾಹಿನಿ ಚಿತ್ರ

**ವ್ಯಾಪಾರ ವಹಿವಾಟು ಮಾಡುವುದಾದರೂ ಹೇಗೆ, ನಮ್ಮ ಭವಿಷ್ಯದ ಗತಿ ಏನು..?**

**ಮುಖ್ಯ ರಸ್ತೆಯಲ್ಲಿ 20ಮೀ ರಸ್ತೆ ನಿರ್ಮಾಣಕ್ಕೆ ನಮ್ಮ ಸಂಪೂರ್ಣ ಒಪ್ಪಿಗೆ ಇದೆ. ಆದರೆ, ಮತ್ತೆ ಹೆಚ್ಚುವರಿಯಾಗಿ ಸೆಟ್ ಬ್ಯಾಕ್‌ಗೆ 6 ಮೀ ಜಾಗೆಯನ್ನು ಬಿಟ್ಟು ಮಳಿಗೆ ಕಟ್ಟಿಕೊಳ್ಳಲು ಹೇಳಿದರೆ, ನಮಗಿರುವ ಅತ್ಯಲ್ಪ ಜಾಗೆಯಲ್ಲಿ ಮಳಿಗೆ ಕಟ್ಟಿಕೊಂಡು ವ್ಯಾಪಾರ ವಹಿವಾಟು ಮಾಡುವುದಾದರೂ ಹೇಗೆ, ನಮ್ಮ ಭವಿಷ್ಯದ ಗತಿ ಏನು..? ಎಂದು ಕೆಲ ಭೂಮಾಲೀಕರು ಪ್ರಶ್ನಿಸಿದರು. ಎರಡೂ ಬದಿ ಸೇರಿ 20ಮೀ ರಸ್ತೆಗೆ ಜಾಗೆ ಬಿಟ್ಟು ಮಳಿಗೆ ಕಟ್ಟಿಕೊಳ್ಳಲು ಅನುಮತಿ ನೀಡುವಂತೆ ಮನವಿ ಮಾಡಿಕೊಳ್ಳಲಾಗಿದೆ ಎಂದು ಹೇಳಿದರು.**

**ರಸ್ತೆ ವಿಸ್ತರಣೆ ವಿಳಂಬ**

**ಮುಖ್ಯ ರಸ್ತೆ ವಿಸ್ತರಣೆಗೆ ವಿರೋಧಿಸಿದ ಭೂಮಾಲೀಕರು ಧಾರವಾಡ ಹೈಕೋರ್ಟ್ ಮೆಟ್ಟಿಲೇರಿದ್ದರು. ನ್ಯಾಯಾಲಯ ನೀಡಿದ್ದ ತಡೆಯಾಜ್ಞೆಯನ್ನು ತೆರವುಗಳಿಸಿ ಭೂಸ್ವಾಧೀನ ಪ್ರಕ್ರಿಯೆ ಆರಂಭಿಸಲು ಕೆಲ ಭೂಮಾಲೀಕರು ಇನ್ನೂ ಸಹಕಾರ ನೀಡುತ್ತಿಲ್ಲ. ಪ್ರತಿಭಟನೆ ವಾಪಸ್ ಪಡೆಯುವ ವೇಳೆ ರಸ್ತೆ ವಿಸ್ತರಣೆಗೆ ಒಪ್ಪಿಗೆ ನೀಡಿದ್ದ ಅವರು ಸಂಬಂಧಿಸಿದ ಕಾಗದ ಪತ್ರಗಳಿಗೆ ಸಹಿ ಹಾಕಲು ಹಿಂದೇಟು ಹಾಕುತ್ತಿದ್ದಾರೆ.**

> ಪೈಪ್‌ಲೈನ್ ಅಳವಡಿಕೆಗಾಗಿ ಮಣ್ಣು ಅಗೆದ ಭಾಗದ ಕೃಷಿ ಜಮೀನುಗಳಿಗೆ ಯಾವುದೇ ವಾಹನ ಹೋಗದ ಸ್ಥಿತಿ ಇದೆ.
> -ಶಿವಪ್ಪ, ಕೌಲಾಪುರಿರೈತ

**ಜನರು ಅಳಲು**

**ಮುಖ್ಯ ರಸ್ತೆಯ ಗುಂಡಿಗಳಲ್ಲಿ ಸಂಗ್ರವಾಗಿರುವ ಮಳೆ ನೀರು, ಚಲಿಸುವ ವಾಹನಗಳಿಂದ ಬಟ್ಟೆಗೆ ಸಿಡಿಯುವ ಭಯ ಒಂದಾದರೆ, ಗುಂಡಿಯ ಮೂಲಕ ಹಾಯ್ದು ಹೋಗುವವರು ಕೈಯಲ್ಲಿ ಜೀವ ಹಿಡಿದುಕೊಂಡು ಸಾಗಬೇಕಾದ ಪರಿಸ್ಥಿತಿ ಉಂಟಾಗಿದೆ ಎಂದು ಜನರು ಅಳಲು ತೋಡಿಕೊಂಡಿದ್ದಾರೆ.**

ಹೀಗಾದರೆ ರಸ್ತೆ ವಿಸ್ತರಣೆ ಕಾರ್ಯ ಮತ್ತಷ್ಟು ವಿಳಂಬವಾಗುವ ಸಂಶಯ ವ್ಯಕ್ತಪಡಿಸಿದರು. ಕಾಗದ ಪತ್ರಗಳಿಗೆ ಸಹಿ ಪಡೆಯಲು ಕೆಲ ಮಾಲೀಕರ ಮನೆಗಳಿಗೆ ಅಲೆದರೂ ಅವರು ಸಂಪರ್ಕಕ್ಕೆ ಸಿಗುತ್ತಿಲ್ಲ ಎಂದು ಅಧಿಕಾರಿಯೊಬ್ಬರು ಅಳಲು ತೋಡಿಕೊಂಡರು. ರಾಜ್ಯ ಹೆದ್ದಾರಿ ಹಾಯ್ದು ಹೋಗಿರುವ ನಗರ ಮಿತಿಯಲ್ಲಿ 20 ಮೀ ರಸ್ತೆ ನಿರ್ಮಾಣವಾಗಬೇಕು. ಇನ್ನುಳಿದಂತೆ 6ಮೀ ಜಾಗೆಯನ್ನು ವಾಹನಗಳ ನಿಲುಗಡೆ ಹಾಗೂ ಮತ್ತಿತರ ಕೆಲಸಗಳಿಗೆ ಉಪಯೋಗಿಸಿಕೊಳ್ಳಲು ಬಿಡಬೇಕೆನ್ನುವ ಸರ್ಕಾರದ ನಿಯಮವಿದೆ. ಅದನ್ನು ಯಾವ ನಗರಗಳಲ್ಲಿಯೂ ಪಾಲಿಸಲಾಗಿಲ್ಲ, ಆದರೆ, ಇಲ್ಲಿಯ ಮುಖ್ಯ ರಸ್ತೆಯ ಕೆಲ ಭೂಮಾಲಕರು ಕಟ್ಟಡಗಳನ್ನು ನಿರ್ಮಿಸಿಕೊಳ್ಳಲು 36 ಅಡಿ ಬಿಟ್ಟು ಅನುಮತಿ ನೀಡು ವಂತೆ ಕೇಳುತ್ತಿದ್ದಾರೆ. ಆದರೆ, ಸರ್ಕಾರದ ನಿಯಮದ ವಿರುದ್ಧ ಅದನ್ನು ಬರೆದುಕೊಡಲು ಸಾಧ್ಯವಿಲ್ಲ ಎಂದು ಡಿಸಿ ಸ್ಪಷ್ಟಪಡಿಸಿದ್ದಾರೆ.

ಇದಕ್ಕೆ ಒಪ್ಪದ ಭೂಮಾಲಿಕರು ಸಹಿ ಹಾಕಲು ವಿಳಂಬ ಮಾಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ನಗರ ಮಿತಿಯಲ್ಲಿ 20 ಮೀ ರಸ್ತೆ ನಿರ್ಮಾಣಕ್ಕೆ ಜಿಲ್ಲಾಧಿಕಾರಿಗಳ ಮಧ್ಯಸ್ಥಿಕೆಯಲ್ಲಿ ನಡೆದ ಸಭೆಯಲ್ಲಿ ಎಲ್ಲರೂ ಒಪ್ಪಿಗೆ ನೀಡಿದ್ದಾರೆ. ಇನ್ನೊಮ್ಮೆ ಮುಖಂಡರು ಹಾಗೂ ಜನಪ್ರತಿನಿಧಿಗಳು ಸೇರಿಕೋಡು ಸೌಹಾರ್ದಯುತವಾಗಿ ಬಗೆ ಹರಿಸಬೇಕಾಗಿದೆ ಎನ್ನುವ ಅಭಿಪ್ರಾಯ ವ್ಯಕ್ತವಾಗಿದೆ.

---

# ಉದಯ ವಾಹಿನಿ

## ಪ್ರಾದೇಶಿಕ



## ಮಿನಿ ನ್ಯೂಸ್

### ಭಗತಸಿಂಗ್ ಸರ್ಕಲ್ ವಾಹನ ದಟ್ಟಣೆ

- ಉದಯವಾಹಿನಿ ರಟ್ಟಿಹಳ್ಳಿ

ಪಟ್ಟಣದ ಭಗತಸಿಂಗ್ ಸರ್ಕಲ್ ಬಳಿ ಬೆಳಿಗ್ಗೆ ಮತ್ತು ಸಂಜೆ ಬಹಳಷ್ಟು ಸಂಚಾರ ದಟ್ಟಣೆಯಾಗುತ್ತಿದ್ದು, ನಿತ್ಯ ವಿದ್ಯಾರ್ಥಿಗಳು, ಪಾದಚಾರಿಗಳು ಜೀವ ಕೈಯಲ್ಲಿ ಹಿಡಿದುಕೊಂಡು ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದೇ ವೃತ್ತಕ್ಕೆ ಹೊಂದಿಕೊಂಡು ನೊಬೆಲ್ ಪಬ್ಲಿಕ್ ಶಾಲೆ, ಲಯನ್ಸ್ ಶಾಲೆ, ತರಳುಬಾಳು ಶಾಲೆ, ಸರ್ಕಾರಿ ಪಿ.ಯು. ಕಾಲೇಜು, ತಹಶೀಲ್ದಾರ್ ಕಚೇರಿ, ಕೃಷಿ ಇಲಾಖೆ, ನ್ಯಾಯಾಲಯ ಸಮೀಪವಿರುವುದರಿಂದ ಈ ವೃತ್ತದ ಮೂಲಕವೇ ವಿದ್ಯಾರ್ಥಿಗಳು ತೆರಳಬೇಕಾದ ಅನಿವಾರ್ಯತೆಯಿದೆ. ಅಲ್ಲದೇ ನಿತ್ಯ ಶಾಲೆಗೆ ಮತ್ತು ಕಚೇರಿಗೆ ಬರುವ ವಿದ್ಯಾರ್ಥಿಗಳು ಕಚೇರಿ ಸಿಬ್ಬಂದಿ ಬಸ್ ಮೂಲಕ ಇಲ್ಲಿಂದಲೇ ಪ್ರಯಾಣ ಬೆಳೆಸಬೇಕು.

ರಾಷ್ಟ್ರೀಯ ಹೆದ್ದಾರಿಯಾಗಿರುವ ಕಾರಣ ನಿತ್ಯ ನೂರಾರು ವಾಹನಗಳು ಇಲ್ಲಿ ಸಂಚರಿಸುತ್ತವೆ. ಹೀಗಾಗಿ ಇಲ್ಲಿ ಹಲವಾರು ಬಾರಿ ವಾಹನಗಳು ಅಪಘಾತವಾಗಿವೆ ಸಾವು ನೋವುಗಳಾದ ಉದಾಹರಣೆಗಳಿವೆ. ಹೀಗಾಗಿ ಸಂಬಂಧಪಟ್ಟ ಅಧಿಕಾರಿಗಳು, ಪೊಲೀಸ್ ಇಲಾಖೆಯವರು, ಈ ವೃತ್ತದಿಂದ ಸಂಚರಿಸುವ ವಿದ್ಯಾರ್ಥಿಗಳು, ಪಾದಚಾರಿಗಳ ಸುರಕ್ಷತೆ ದೃಷ್ಟಿಯಿಂದ ಇಲ್ಲಿ ಟ್ರಾಫಿಕ್ ಸಿಗ್ನಲ್ ಅಳವಡಿಸಬೇಕು. ವಾಹನಗಳು ನಿಧಾನವಾಗಿ ಚಲಿಸುವ ಮಾರ್ಗಸೂಚಿಗಳನ್ನು ಅಳವಡಿಸಬೇಕು. ಹಾಗೂ ವೇಗವಾಗಿ ಸಂಚರಿಸುವ ವಾಹನ ಚಾಲಕರಿಗೆ ದಂಡ ವಿಧಿಸಬೇಕು. ಭಗತ್ ಸಿಂಗ್ ಸರ್ಕಲ್ ದಲ್ಲಿ ಟ್ರಾಫಿಕ್ ಪೊಲೀಸ್ ಸಿಬ್ಬಂದಿ ನಿಯೋಜಿಸಬೇಕು.

### ಕೆರೆಗೆ ನೀರು ತುಂಬಿಸಲು ರೈತರ ಆಗ್ರಹ

- ಉದಯವಾಹಿನಿ ಮುಂಡರಗಿ

ತಾಂಬ್ರಗುಂಡಿ ಗ್ರಾಮದ ಕೆರೆಗೆ ತುಂಗಭದ್ರಾ ನದಿಯಿಂದ ನೀರು ಹರಿಸಬೇಕು ಎಂದು ಒತ್ತಾಯಿಸಿ ತಾಲ್ಲೂಕಿನ ವಿವಿಧ ಗ್ರಾಮಗಳ ರೈತರು ಸಸಂಜೆ ಪಟ್ಟಣದ ನೀರಾವರಿ ಇಲಾಖೆಯ ಕಾರ್ಯಾಲಯದ ಮುಂದೆ ಪ್ರತಿಭಟನೆ ನಡೆಸಿದರು.

ತುಂಗಭದ್ರಾ ನದಿಯು ಈಗ ತುಂಬಿ ಹರಿಯುತ್ತಿದ್ದು, ಹಮ್ಮಿಗಿ ಗ್ರಾಮದಲ್ಲಿರುವ ಶಿಂಗಟಾಲೂರ ಏತ ನೀರಾವರಿ ಬ್ಯಾರೇಜು ಭರ್ತಿಯಾಗಿದೆ. ನಿತ್ಯ ಸಾವಿರಾರು ಕ್ಯುಸೆಕ್ ನೀರು ಬ್ಯಾರೇಜಿಗೆ ಹರಿದು ಬರುತ್ತಿದ್ದು, ಹೆಚ್ಚುವರಿ ನೀರನ್ನು ನದಿ ಪಾತ್ರಕ್ಕೆ ಹರಿಸಲಾಗುತ್ತಿದೆ.

ನೀರನ್ನು ವ್ಯರ್ಥವಾಗಿ ನದಿಗೆ ಹರಿಸುವ ಬದಲು 100 ಎಕರೆ ವಿಸ್ತಾರದಲ್ಲಿರಿವ ತಾಂಬ್ರಗುಂಡಿ ಗ್ರಾಮದ ಕೆರೆ ತುಂಬಿಸಬೇಕು. ಇದರಿಂದ ಸುಮಾರು 600 ಎಕರೆ ಜಮೀನಿಗೆ ನೀರು ಹರಿಸಬಹುದಾಗಿದೆ. ತಕ್ಷಣ ಕೆರೆಗೆ ನೀರು ಹರಿಸಬೇಕು ಎಂದು ಆಗ್ರಹಿಸಿದರು.

### ಗಾಂಜಾ ಮಾರಾಟ: ಬಂಧನ

- ಉದಯವಾಹಿನಿ ಶಿವಮೊಗ್ಗ

ಹೊನ್ನಾಳಿ ಸಮೀಪದ ಬುಳ್ಳಾಪುರ-ಸೂಗೂರು ಸರ್ವೀಸ್ ರಸ್ತೆಯ ಬಳಿ ಗಾಂಜಾ ಮಾರಾಟ ಮಾಡುತ್ತಿದ್ದ ವ್ಯಕ್ತಿಯನ್ನು ಬಂಧಿಸಿದ ಪೊಲೀಸರು, ಅಂದಾಜು 25,000 ಮೌಲ್ಯದ 1 ಕೆ.ಜಿ 298 ಗ್ರಾಂ ಗಾಂಜಾ ವಶಕ್ಕೆ ಪಡೆದಿದ್ದಾರೆ. ಭದ್ರಾವತಿಯ ಸೀಗೆ ಬಾಗಿ ಸೈಯದ್ ಫೈಜು (31) ಬಂಧಿತ. ಸಿಇಎನ್ ಕ್ರೈಂ ಪೊಲೀಸ್ ಠಾಣೆ ಡಿವೈಎಸ್‌ಪಿ ಕೆ. ಕೃಷ್ಣಮೂರ್ತಿ ನೇತೃತ್ವದಲ್ಲಿ ಎಎಸ್‌ಐ ಶೇಖರ್, ಎಚ್‌ಸಿ ವಿಭಾಗದ ಬಿ.ಎಸ್. ಕರಿಬಸಪ್ಪ, ಧರ್ಮಾ ನಾಯ್ಕ, ಅವಿನಾಶ, ಡಿ.ಆರ್. ಚಂದ್ರಶೇಖರ್, ಕಾನ್‌ಸ್ಟೆಬಲ್ ಬಿ.ಎಚ್. ಗಿರೀಶ್ ಸ್ವಾಮಿ, ನಾರಾಯಣ ಸ್ವಾಮಿ, ಬಿ. ರವಿ, ಎಲ್.ಬಿ. ಪ್ರಮೋದ್ ಅವರ ತಂಡ ಕಾರ್ಯಾಚರಣೆ ನಡೆಸಿತ್ತು.

### 3 ತಿಂಗಳಲ್ಲಿ ಕಿತ್ತುಹೋದ ಡಾಂಬರ್

- ಉದಯವಾಹಿನಿ ಸಾಸ್ವೆಹಳ್ಳಿ

ರಾಜ್ಯ ಹೆದ್ದಾರಿ 115ರ ಚಿಕ್ಕಬಾಸೂರು ತಾಂಡಾ ಮತ್ತು ಉಜ್ಜನಿಪುರ ಮಧ್ಯದಲ್ಲಿರುವ ಆನೆ ಬಿದ್ದ ಹಳ್ಳ'ದ ಬಳಿ ಇತ್ತೀಚೆಗೆ ನಡೆಸಿದ ರಸ್ತೆ ಡಾಂಬರೀಕರಣ ಕಾಮಗಾರಿ ಕಳಪೆಯಿಂದ ಕೂಡಿದೆ. ಕಾಮಗಾರಿ ನಡೆದ ಮೂರು ತಿಂಗಳಲ್ಲೇ ಡಾಂಬರ್ ಕಿತ್ತುಹೋಗಿದೆ.



ಉದಯವಾಹಿನಿ ಚಿತ್ರ

ರಸ್ತೆ ಹಾಳಾಗಿರುವುದರ ಜೊತೆಗೆ ಹಳ್ಳದ ಬಳಿ ತಡೆಗೋಡೆಯನ್ನು ಸಹ ಸರಿಯಾಗಿ ನಿರ್ಮಾಣ ಮಾಡಿಲ್ಲ. ಇದರಿಂದಾಗಿ ಈ ಮಾರ್ಗದಲ್ಲಿ ಓಡಾಡುವ ಸಾರ್ವಜನಿಕರಿಗೆ ನಿತ್ಯ ತೀವ್ರ ತೊಂದರೆಯಾಗುತ್ತಿದೆ. ಕೂಡಲೇ ಈ ಹಳ್ಳಕ್ಕೆ ಸರಿಯಾದ ಸೇತುವೆ ನಿರ್ಮಿಸಿ, ರಸ್ತೆಯನ್ನು ಎತ್ತರಿಸಬೇಕು.

### ಶೃಂಗೇರಿಯಲ್ಲಿ ಎಡಬಿಡದ ಮಳೆ ಉಕ್ಕಿ ಹರಿದ ತುಂಗಾನದಿ

- ಉದಯವಾಹಿನಿ ಶೃಂಗೇರಿ

ತಾಲ್ಲೂಕಿನಾದ್ಯಾಂತ ಮಳೆಯ ಆರ್ಭಟ ಬುಧವಾರ ಜೋರಾಗಿದೆ. ತಾಲ್ಲೂಕಿನ ಕಿಗ್ಗಾದಲ್ಲಿ 87.6 ಮಿ.ಮೀ, ಶೃಂಗೇರಿಯಲ್ಲಿ 53.2 ಮಿ.ಮೀ, ಕೆರೆಕಟ್ಟೆ 111 ಮಿ.ಮೀ ಮತ್ತು ಇದುವರೆಗೂ ಒಟ್ಟು 1,901 ಮಿ.ಮೀ ಮಳೆಯಾಗಿದೆ. ಎಡೆಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ತಾಲ್ಲೂಕಿನಲ್ಲಿರುವ ಹಳ್ಳ-ಕೊಳ್ಳಗಳು, ನದಿಗಳು ತುಂಬಿ ಹರಿಯುತ್ತಿವೆ. ತಗ್ಗು ಪ್ರದೇಶದ ಭತ್ತದ ಗದ್ದೆಗಳು, ತೋಟಗಳು ನೀರಿನಿಂದ ಆವೃತಗೊಂಡಿದೆ. ತುಂಗಾ ನದಿಯ ನೀರಿನ ಮಟ್ಟ ರಾತ್ರಿ ವೇಳೆ ಏರಿಕೆಯಾಗಿ ಭಾರತೀತೀರ್ಥ ರಸ್ತೆಗೆ ಬರುವ ಸಾಧ್ಯತೆ ಇದೆ.

### ಜನರಿಗೆ ತ್ವರಿತ ಸೇವೆ ಒದಗಿಸಿ: ಮೇಟಿ

- ಉದಯವಾಹಿನಿ ಬಾಗಲಕೋಟೆ

ಲ್ಯಾಪ್‌ಟಾಪ್ ಬಳಸಿಕೊಂಡು ಜನರಿಗೆ ತ್ವರಿತವಾಗಿ ಸೇವೆಗಳನ್ನು ಒದಗಿಸಬೇಕು ಎಂದು ಶಾಸಕ ಎಚ್.ವೈ-ಮೇಟಿ ಹೇಳಿದರು.

ಬಾಗಲಕೋಟೆ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಒಂಬತ್ತು ಗ್ರಾಮ ಆಡಳಿತಾಧಿಕಾರಿಗಳಿಗೆ ಬುಧವಾರ ಶಾಸಕ ಕಚೇರಿಯಲ್ಲಿ ಲ್ಯಾಪ್‌ಟಾಪ್ ವಿತರಿಸಿ ಮಾತನಾಡಿದ ಅವರು, ಇ ಕಚೇರಿ ಅಪ್ಲಿಕೇಷನ್‌ಗಳನ್ನು ಸುಲಭವಾಗಿ ನಿರ್ವಹಿಸಲು ಅನುಕೂಲವಾಗುತ್ತದೆ. ತಂತ್ರಜ್ಞಾನದ ಸರಿಯಾದ ಬಳಕೆ ಮಾಡಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ಸೀತಿಮನಿ ವಲಯದ ಬಿಲ್ಲಕೆರೂರ, ರಾಂಪೂರ, ಸುತಗುಂಡಾರ, ಹಿರೇಗುಳಬಾಳ, ಬಾಗಲಕೋಟೆ ವಲಯದ ಬಾಗಲಕೋಟೆ, ಶಿರೂರ, ಬೇವಿನಮಟ್ಟಿ, ಹಳ್ಳೂರ ಹಾಗೂ ಬೆನಕಟ್ಟಿ ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪ್‌ಟಾಪ್ ವಿತರಿಸಲಾಯಿತು.



ಉದಯವಾಹಿನಿ ಚಿತ್ರ

---

## ಶಹಾಪೂರ ತಾಲ್ಲೂಕಿನ ಹಳಿಸಗರ ಗ್ರಾಮದಲ್ಲಿ ಮೊಹರಂ ಹಬ್ಬದ ಆಚರಣೆ ನಿಷೇಧಕ್ಕೆ ಸೂಚನೆ

- ಉದಯವಾಹಿನಿ, ಯಾದಗಿರಿ

ಶಹಾಪೂರ ತಾಲ್ಲೂಕಿನ ಹಳಿಸಗರ ಗ್ರಾಮದಲ್ಲಿ ಮೊಹರಂ ಹಬ್ಬದ ಆಚರಣೆಯನ್ನು 2025ರ ಜುಲೈ 2 ರಿಂದ 6ರ ವರೆಗೆ ನಿಷೇಧ ಆದೇಶವನ್ನು ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ಹೊರಡಿಸಿದ್ದಾರೆ.

ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 35ರನ್ವಯ ಶಹಾಪೂರ ತಾಲ್ಲೂಕಿನ ಹಳಿಸಗರ ಗ್ರಾಮದಲ್ಲಿ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಹಿತದೃಷ್ಟಿಯಿಂದ 2025ರ ಜುಲೈ 2 ರಿಂದ 6ರವರೆಗೆ ಆಚರಿಸಲಿರುವ ಮೊಹರಂ ಹಬ್ಬವನ್ನು ಸಾರ್ವಜನಿಕವಾಗಿ ಗುಂಪು-ಗುಂಪಾಗಿ ಆಚರಿಸುವುದು ಹಾಗೂ ಈ ಗ್ರಾಮದಲ್ಲಿ ಸಾರ್ವಜನಿಕವಾಗಿ ಮೆರವಣಿಗೆಯನ್ನು ನಡೆಸುವುದನ್ನು ನಿಷೇಧಿಸಿ ಆದೇಶವನ್ನು ಹೊರಡಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಮಧ್ಯಪಾನ, ಮಧ್ಯ ಮಾರಾಟ ನಿಷೇಧಾಜ್ಞೆ ಜಾರಿಗೊಳಿಸಿ ಆದೇಶಕ್ಕೆ ಸೂಚನೆ**



**ಯಾದಗಿರಿ ಜಿಲ್ಲೆಯಾದ್ಯಂತ ಮೊಹರಂ ಹಬ್ಬದ ಆಚರಣೆಯ ಹಿನ್ನೆಲೆ 2025ರ ಜುಲೈ 5ರ ಶನಿವಾರ ರಂದು ಬೆಳಿಗ್ಗೆ 8 ರಿಂದ 2025ರ ಜುಲೈ 8ರ ಮಂಗಳವಾರ ಬೆಳಿಗ್ಗೆ 8 ಗಂಟೆಯ ವರೆಗೆ ಮಧ್ಯಪಾನ ಹಾಗೂ ಮಧ್ಯ ಮಾರಾಟ ನಿಷೇಧಾಜ್ಞೆ ಜಾರಿಗೊಳಿಸಿ ಆದೇಶವನ್ನು ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ಹೊರಡಿಸಿದ್ದಾರೆ. ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21ರ ಪ್ರಕಾರ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಮೊಹರಂ ಹಬ್ಬ ಆಚರಣೆಯ ಅಂಗವಾಗಿ ಕಾನೂನು ಸುವ್ಯವಸ್ಥೆ ಕಾಪಾಡುವ ಹಿನ್ನೆಲೆಯಲ್ಲಿ ಯಾದಗಿರಿ ಜಿಲ್ಲೆಯಾದ್ಯಂತ 2025ರ ಜುಲೈ 5ರ ಶನಿವಾರ ರಂದು ಬೆಳಿಗ್ಗೆ 8 ರಿಂದ 2025ರ ಜುಲೈ 8ರ ಮಂಗಳವಾರ ಬೆಳಿಗ್ಗೆ 8 ಗಂಟೆಯ ವರೆಗೆ ಎಲ್ಲಾ ವೈನ್‌ಶಾಪ್, ಬಾರ್‌ಗಳು ಸಗಟು ಮತ್ತು ಚಿಲ್ಲರೆ ಮಧ್ಯ ಮಾರಾಟ ನಿಷೇಧಿಸಿ ಆದೇಶಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ಹುಂಡಿ ಹಣ ಎಣಿಕೆ ವೇಳೆ ವಂಚನೆ: ಬ್ಯಾಂಕ್ ಸಿಬ್ಬಂದಿ ವಿರುದ್ಧ ಪ್ರಕರಣ

- ಉದಯವಾಹಿನಿ, ಉಜಿರೆ

ಮುಜರಾಯಿ ಇಲಾಖೆಗೆ ಸೇರಿದ ಬೆಳ್ತಂಗಡಿ ತಾಲ್ಲೂಕಿನ ಕೊಕ್ಕಡ ಗ್ರಾಮದ ಸೌತಡ್ಕ ಶ್ರೀಮಹಾಗಣಪತಿ ದೇವಸ್ಥಾನದ ಕಾಣಿಕೆ ಹುಂಡಿಯ ಎಣಿಕೆ ವೇಳೆ ವಂಚಿಸಿದ ಆರೋಪದ ಮೇಲೆ ಕೊಕ್ಕಡ ಕೆನರಾ ಬ್ಯಾಂಕ್ ಶಾಖೆಯ ಸಿಬ್ಬಂದಿ ಗಣೇಶ್ ನಾಯ್ಕ ವಿರುದ್ಧ ಪ್ರಕರಣ ದಾಖಲಾಗಿದೆ.

ಬ್ಯಾಂಕ್ ಸಿಬ್ಬಂದಿಯೊಬ್ಬರ ವಿರುದ್ಧ ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಘಟನೆ ವಿವರ: ದೇವಸ್ಥಾನದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಸುಬ್ರಹ್ಮಣ್ಯ ಶಬರಾಯ ನೇತೃತ್ವದಲ್ಲಿ ಕಾರ್ಯ ನಿರ್ವಹಣಾಧಿಕಾರಿ, ಕೊಕ್ಕಡ ಕೆನರಾ ಬ್ಯಾಂಕ್ ಸಿಬ್ಬಂದಿ ಮ್ಯಾಥ್, ಗಣೇಶ ನಾಯ್ಕ ಹಾಗೂ ಜಿಲ್ಲಾಧಿಕಾರಿ ಕಚೇರಿಯಿಂದ ನಿಯೋಜಿತರಾದ ಸಿಬ್ಬಂದಿ ಹಾಗೂ ದೇವಸ್ಥಾನದ ವತಿಯಿಂದ ಕರೆಸಿದ 42 ಸ್ವಯಂಸೇವಕರು ಮತ್ತು ದೇವಳದ 20 ಸಿಬ್ಬಂದಿ ಸೇರಿ ಜೂನ್ 20ರಂದು ಹುಂಡಿ ಹಣ ಎಣಿಕೆ ಕಾರ್ಯ ನಡೆಸಲಾಗಿತ್ತು.

ಎಣಿಕೆ ವೇಳೆ 500, 200, 100, 50, 20 ಮತ್ತು 10ರ ನೋಟುಗಳನ್ನು ವಿಂಗಡಣೆ ಮಾಡಿ, ಜೋಡಿಸಿ ಇಡಲಾಗಿತ್ತು. ಈ ಸಂದರ್ಭದಲ್ಲಿ ಆರೋಪಿ ಗಣೇಶ ನಾಯ್ಕ ಕೆಲ ನೋಟುಗಳನ್ನು ಬಂಡಲ್‌ಗೆ ಹೆಚ್ಚು ಸೇರಿಸಿದ ಬಗ್ಗೆ ಸಂಶಯ ಬಂದ ಹಿನ್ನೆಲೆಯಲ್ಲಿ ಹಣದ ಒಂದು ಬಂಡಲ್ ತೆಗೆದು ಎಣಿಸಿದಾಗ ಅದರಲ್ಲಿ ಹೆಚ್ಚುವರಿ ನೋಟುಗಳು ಕಂಡು ಬಂದಿದ್ದವು.

**ನೌಕರನ ವಿರುದ್ಧ ಪ್ರಕರಣ**

ಬಳಿಕ ಎಲ್ಲಾ ಬಂಡಲ್‌ಗಳನ್ನು ಮರು ಎಣಿಕೆ ಮಾಡಿದಾಗ ಒಟ್ಟು 40 ಸಾವಿರ ಹೆಚ್ಚುವರಿ ಹಣ ಪತ್ತೆಯಾಗಿತ್ತು. ಈ ಕುರಿತು ಜೂನ್ 26ರಂದು ದೇವಸ್ಥಾನದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಸುಬ್ರಹ್ಮಣ್ಯ ಶಬರಾಯ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಧರ್ಮಸ್ಥಳ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


## ಪೇಟೆಯಲ್ಲಿ ವಾಹನ ದಟ್ಟಣೆ: ಫ್ಲೈಓವರ್ ನಿರ್ಮಾಣಕ್ಕೆ ಬೇಡಿಕೆ

- ಉದಯವಾಹಿನಿ, ಪಡುಬಿದ್ರಿ

ರಾಷ್ಟ್ರೀಯ ಹೆದ್ದಾರಿ 66ರ ಪಡುಬಿದ್ರಿ ಪೇಟೆಯಲ್ಲಿ ನಿತ್ಯ ವಾಹನ ದಟ್ಟಣೆಯಿಂದ ಸಂಚಾರ ವ್ಯತ್ಯಯ ಉಂಟಾಗುತ್ತಿದ್ದು, ಸಾರ್ವಜನಿಕರು ಸಮಸ್ಯೆ ಅನುಭವಿಸುವಂತಾಗಿದೆ. ಹೆದ್ದಾರಿ ವಿಸ್ತರಣೆಯ ವೇಳೆ ಪಡುಬಿದ್ರಿ ಪೇಟೆಯಲ್ಲಿ ಬೈಪಾಸ್ ನಿರ್ಮಾಣಕ್ಕೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಮುಂದಾಗಿತ್ತು. ಆದರೆ ತೀವ್ರ ವಿರೋಧ ಹಾಗೂ ಬೈಪಾಸ್‌ನಿಂದ ಹಲವು ಕುಟುಂಬ ಭೂಮಿ ಕಳೆದುಕೊಳ್ಳಬೇಕಾಗುತ್ತದೆ ಎನ್ನುವ ಕಾರಣಕ್ಕೆ ಹೆದ್ದಾರಿ ಪ್ರಾಧಿಕಾರ ಬೈಪಾಸ್ ಯೋಜನೆ ಕೈಬಿಟ್ಟಿತ್ತು.

ಬೈಪಾಸ್ ಯೋಜನೆ ಕೈಬಿಟ್ಟ ಬಳಿಕ ಪಡುಬಿದ್ರಿಯಲ್ಲಿ ಮೇಲೇತುವೆ ನಿರ್ಮಾಣಕ್ಕೆ ಭಾರೀ ಬೇಡಿಕೆ ವ್ಯಕ್ತವಾಗಿದೆ. ಆದರೆ ಪ್ರಾಧಿಕಾರ ಪಡುಬಿದ್ರಿ ಪೇಟೆಯಲ್ಲಿಯೇ ರಾಷ್ಟ್ರೀಯ ಹೆದ್ದಾರಿಯನ್ನು ವಿಸ್ತರಿಸಿ ಚತುಷ್ಪಥ ಕಾಮಗಾರಿ ಕೈಗೆತ್ತಿಕೊಂಡಿತು. ಪೇಟೆಯ ವರ್ತಕರ ಬೇಡಿಕೆಯಂತೆ ಪಡುಬಿದ್ರಿಯಲ್ಲಿ 60 ಮೀ. ಅಗಲವನ್ನು ಕಿರಿದಾಗಿಸಿ 45 ಮೀ.ಗಳಲ್ಲೇ ಸರ್ವೀಸ್ ರಸ್ತೆಯೂ ಸೇರಿದಂತೆ ಹೆದ್ದಾರಿ ಡಿವೈಡರ್ ರಚನೆಯನ್ನು ಪೂರ್ಣಗೊಳಿಸಿತು.

ಪರಿಣಾಮವಾಗಿ ಈ ಭಾಗದ ಸಾರ್ವಜನಿಕರು ನಿತ್ಯ ಸಮಸ್ಯೆ ಅನುಭವಿಸುತಿದ್ದಾರೆ. ರಜಾ ದಿನಗಳಲ್ಲಿ ಹಾಗೂ ವಿಶೇಷ ಹಬ್ಬ, ಹರಿದಿನಗಳಲ್ಲಿ ಹೊರ ರಾಜ್ಯಗಳಿಂದ ಬರುವ ಪ್ರವಾಸಿಗರಿಂದ ವಾಹನಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಇದರಿಂದ ಕಾರ್ಕಳ-ಮಂಗಳೂರು-ಉಡುಪಿ ಕಡೆ ಸಂಚರಿಸುವ ವಾಹನಗಳು ಪಡುಬಿದ್ರಿ ಪೇಟೆಯ ಮುಖ್ಯ ಜಂಕ್ಷನ್‌ನಲ್ಲಿ ನಿಲುಗಡೆಯಾಗಿ ವಾಹನ ಸವಾರರು ಪರದಾಡುವ ಸ್ಥಿತಿ ಉಂಟಾಗಿದೆ. ಇಲ್ಲಿ ನಿತ್ಯವೂ ಸುಗಮ ಸಂಚಾರಕ್ಕಾಗಿ ಪೊಲೀಸರು ಹಾಗೂ ಗೃಹರಕ್ಷಕ ದಳದ ಸಿಬ್ಬಂದಿ ಹರಸಾಹಸ ಪಡುತ್ತಾರೆ.



ಉದಯವಾಹಿನಿ ಚಿತ್ರ

**ಬೆಳೆಯುತ್ತಿರುವ ಪಟ್ಟಣ**

**ರಾಷ್ಟ್ರೀಯ ಹೆದ್ದಾರಿ 66 ಹಾಗೂ ಕಾರ್ಕಳ-ಪಡುಬಿದ್ರಿ ರಾಜ್ಯ ಹೆದ್ದಾರಿ 1 ಅನ್ನು ಸಂಪರ್ಕಿಸುವ ರಸ್ತೆಯಾಗಿದೆ. ಎರಡೂ ಪ್ರಮುಖ ರಸ್ತೆ ಸೇರುವ ಜಂಕ್ಷನಲ್ಲಿ ನಿತ್ಯವೂ ಸಾರ್ವಜನಿಕರು ಸಮಸ್ಯೆ ಅನುಭವಿಸುತ್ತಿದ್ದಾರೆ.**

## ತಾಲ್ಲೂಕಿನ ಮಂತಗಿ ರಸ್ತೆಯಲ್ಲಿ ಸಂಚಾರ ದುರಸ್ತರ

- ಉದಯವಾಹಿನಿ, ಹಾನಗಲ್

ಪೈಪ್‌ಲೈನ್ ಅಳವಡಿಕೆ ಕಾಮಗಾರಿ ಸೃಷ್ಟಿಸಿರುವ ಅವಾಂತರದಿಂದ ತಾಲ್ಲೂಕಿನ ಮಂತಗಿ ರಸ್ತೆಯಲ್ಲಿ ಸಂಚಾರ ದುರಸ್ತರವಾಗಿದ್ದು, ಇದರಿಂದ ನಿತ್ಯ ಸಣ್ಣಪುಟ್ಟ ಅಪಘಾತಗಳು ಇಲ್ಲಿ ಸಂಭವಿಸುತ್ತಿವೆ. ಕೃಷಿ ಚಟುವಟಿಕೆಗಳಿಗೂ ಹಿನ್ನಡೆಯಾಗುತ್ತಿದೆ.

ಮಳಗಿಯ ಧರ್ಮಾ ಜಲಾಶಯದಿಂದ ಹಾನಗಲ್ ಪಟ್ಟಣಕ್ಕೆ ಕುಡಿಯುವ ನೀರಿನ ಪೂರೈಕೆಯ ಯೋಜನೆ ಅಡಿಯಲ್ಲಿ ಪೈಪ್‌ಲೈನ್ ಅಳವಡಿಕೆ ನಡೆಯುತ್ತಿದ್ದು, ಹಾನಗಲ್‌ನ ಅನಿಕೆರೆ ಸಮೀಪದಿಂದ ಮಂತಗಿ ಗ್ರಾಮದ ತನಕ ರಸ್ತೆಯ ಒಂದು ಬದಿಯಲ್ಲಿ ಮಣ್ಣು ಅಗೆದು ಪೈಪ್ ಅಳವಡಿಸಲಾಗಿದೆ. ರಸ್ತೆಯ ಅಂಚಿಗೆ ಹೊಂದಿಕೊಂಡು ಮಣ್ಣು ಅಗೆದ ಕಾರಣ ಗುಂಡಿಗಳು ಈಗಲೂ ಬಾಯ್ದೆರೆದುಕೊಂಡಿವೆ.

ಪೈಪ್ ಮೇಲೆ ಹರಡಿರುವ ಮಣ್ಣು ಅಲ್ಲಲ್ಲಿ ಸಡಿಲಗೊಂಡು ಮಳೆಗೆ ರಾಡಿಯಾಗಿ ವಾಹನಗಳ ಸಂಚಾರಕ್ಕೆ ಸಂಚಕಾರ ತರುತ್ತಿದೆ. ಕಿರಿದಾದ ಈ ಗ್ರಾಮೀಣ ರಸ್ತೆಯಲ್ಲಿ ಎದುರಿನಿಂದ ಬಂದ ವಾಹನಕ್ಕೆ ಸೈಡ್ ಕೊಡುವಾಗ ವಾಹನಗಳು ಕೆಸರಿನಲ್ಲಿ ಸಿಲುಕಿಕೊಂಡು ಫಜೀತಿ ಆಗುತ್ತಿದೆ. ಇದು ಮಲೆನಾಡಿನ ಹಲವಾರು ಗ್ರಾಮಗಳ ಸಂಪರ್ಕದ ಪ್ರಮುಖ ಮಾರ್ಗವಾಗಿದೆ.

ಕೆಲವು ದಿನಗಳಿಂದ ಈ ರಸ್ತೆಯಲ್ಲಿ ಬಸ್, ಕಾರು, ಟ್ರ್ಯಾಕ್ಟರ್‌ಗಳು ಪಲ್ಟಿಯಾಗಿವೆ. ಕೆಲವು ವಾಹನಗಳು ಕೆಸರಿನಲ್ಲಿ ಸಿಲುಕಿ ಪ್ರಯಾಣಿಕರು ತೊಂದರೆ ಅನುಭವಿಸಿದ್ದಾರೆ. ಮಂಗಳವಾರ ಬೆಳಿಗ್ಗೆ ಅಡಿಕೆ ಸಸಿ ಸಾಗಿಸುತ್ತಿದ್ದ ಟ್ರ್ಯಾಕ್ಟರ್ ಮಣ್ಣಿನಲ್ಲಿ ಸಿಕ್ಕಿಕೊಂಡಿತ್ತು. ಜೆಸಿಬಿ ಬಳಸಿ ಟ್ರ್ಯಾಕ್ಟರ್ ಹೊರಗೆ ತೆಗೆಯಲಾಗಿದೆ. ಪೈಪ್‌ಲೈನ್ ಅಳವಡಿಕೆಗಾಗಿ ಮಣ್ಣು ಅಗೆದ ಭಾಗದ ಕೃಷಿ ಜಮೀನುಗಳಿಗೆ ಯಾವುದೇ ವಾಹನ ಹೋಗದ ಸ್ಥಿತಿ ಇದೆ. ಹೀಗಾಗಿ ಈ ಭಾಗದ ನೂರಾರು ರೈತರಿಗೆ ತೊಂದರೆಯಾಗಿದೆ. ಬಿತ್ತನೆ ಸೇರಿದಂತೆ ಕೃಷಿ ಕೆಲಸಗಳನ್ನು ಕೈಗೊಳ್ಳದ ಪರಿಸ್ಥಿತಿ ಇದೆ ಎಂದು ಈ ಭಾಗದ ರೈತ ಶಿವಪ್ಪ ಕೌಲಾಪುರಿ ಹೇಳಿದ್ದಾರೆ.



ಉದಯವಾಹಿನಿ ಚಿತ್ರ

ನಾಲ್ಕು ಲಕ್ಷ ಅಡಿಕೆ ಸಸಿಗಳನ್ನು ಸಿದ್ದಗೊಳಿಸಿ ಮಾರಾಟಕ್ಕೆ ಸಜ್ಜಾಗಿದ್ದೇವೆ. ಆದರೆ, ಇತ್ತ ವಾಹನಗಳು ಬರುತ್ತಿಲ್ಲ. ಇದು ಅಡಿಕೆ ಸಸಿಗಳು ಮಾರಾಟವಾಗುವ ಸೂಕ್ತ ಸಮಯ. ರಸ್ತೆಯ ಅವಾಂತರ ಗಮನಿಸಿ ಸಸಿ ಕೊಳ್ಳುವ ರೈತರು ಇತ್ತ ಬರುತ್ತಿಲ್ಲ' ಎಂದು ಇಲ್ಲಿನ ರೈತ ಮುತ್ತಣ್ಣ ಪೂಜಾರ ಅಸಹಾಯಕತೆ ತೋಡಿಕೊಂಡಿದ್ದಾರೆ. ಕರ್ನಾಟಕ ನಗರ ನೀರು ಸರಬರಾಜು ಮಂಡಳಿ ಜವಾಬ್ದಾರಿಯಲ್ಲಿ ?38 ಕೋಟಿ ವೆಚ್ಚದಲ್ಲಿ ಹಾನಗಲ್ ಪಟ್ಟಣಕ್ಕೆ ಶಾಶ್ವತ ಕುಡಿಯುವ ನೀರಿನ ಯೋಜನೆಯ ಕಾಮಗಾರಿ ಪ್ರಗತಿಯಲ್ಲಿದೆ. 18 ಕಿ.ಮೀ ಪೈಪ್‌ಲೈನ್ ಅಳವಡಿಕೆ ಕಾಮಗಾರಿ ಭಾಗವಾಗಿ ಸದ್ಯ 5 ಕಿ.ಮೀ ತನಕ ಪೈಪ್ ಹಾಕಲಾಗಿದೆ. ಮಂತಗಿ ರಸ್ತೆಯಲ್ಲಿನ ಸಂಚಾರದ ದುರವಸ್ಥೆಯ ಬಗ್ಗೆ ದೂರುಗಳು ಬಂದಿವೆ. ಮಳೆ ಬಿಡುವು ನೀಡುತ್ತಿದ್ದಂತೆ ತಗ್ಗು, ಗುಂಡಿಗಳನ್ನು ಮುಚ್ಚಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ಗುತ್ತಿಗೆದಾರರಿಗೆ ಸೂಚನೆ ನೀಡಲಾಗಿದೆ' ಎಂದು ಪುರಸಭೆ ಮುಖ್ಯಾಧಿಕಾರಿ ಜಗದೀಶ ವೈ.ಕೆ ತಿಳಿಸಿದ್ದಾರೆ.

> **ಮುತ್ತಣ್ಣನ ತೋಟದಲ್ಲಿ ಉತ್ತಮ ತಳಿಯ ಅಡಿಕೆ ಸಸಿ ಸಿಗುತ್ತದೆ ಎಂದು ಇಲ್ಲಿಗೆ ಬಂದು 700 ಸಸಿ ಹೇರಿಕೊಂಡು ಹೋಗುವಾಗ ನಮ್ಮ ಟ್ರ್ಯಾಕ್ಟರ್ ಮಣ್ಣಿನಲ್ಲಿ ಸಿಲುಕೊಂಡಿತು. ಸಸಿಗಳನ್ನು ಬೇರೆ ವಾಹನಕ್ಕೆ ಹೇರಿಕೊಂಡು ಬರುವಷ್ಟರಲ್ಲಿ ಸುಸ್ತಾಗಿ ಹೋಯಿತು.**
> **-ಪುಟ್ಟಪ್ಪ ಮಲಕಣ್ಣನವರ, ಹಾವೇರಿ ತಾಲ್ಲೂಕು ರಾಮಾಪೂರ ಗ್ರಾಮದ ರೈತ**

## ಆಕಳು, ಆಡು ವ್ಯತ್ಯಾಸ ಗೊತ್ತಿಲ್ಲದ ಪೊಲೀಸರು: ನ್ಯಾಯಾಧೀಶರು ಗರಂ

- ಉದಯವಾಹಿನಿ, ಕೊಪ್ಪಳ

ಜಿಲ್ಲೆಯ ಕುಷ್ಟಗಿ ಪೊಲೀಸರು ಆಕಳು ಹಾಗೂ ಆಡು ಪ್ರಾಣಿಗಳ ವ್ಯತ್ಯಾಸ ಗೊತ್ತಿಲ್ಲದೇ ತಪ್ಪಾಗಿ ಪ್ರಕರಣ ದಾಖಲಿಸಿದ್ದು, ಪೊಲೀಸರ ಮೂರ್ಖತನದ ಪರಮಾವಧಿಗೆ ಈ ಪ್ರಕರಣ ಜ್ವಲಂತ ಉದಾಹರಣೆಯಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸಷನ್ಸ್ ನ್ಯಾಯಾಧೀಶರಾದ ಸಿ.ಚಂದ್ರಶೇಖರ ಅವರು ಗರಂ ಆಗಿದ್ದಾರೆ.

**ಆಗಿದ್ದೇನು:** 2022ರ ಮಾರ್ಚ್ 3ರಂದು ಕುಷ್ಟಗಿ ಪೊಲೀಸರು ಪ್ರಕರಣ ದಾಖಲಿಸಿದ್ದು ಟಾಟಾ ಏಸ್ ವಾಹನದಲ್ಲಿ ಮಂಜುನಾಥ ಹಾದಿಮನಿ ಎಂಬುವವರು ಆಡಿನ ಚರ್ಮವನ್ನು ಸಾಗಿಸುತ್ತಿದ್ದಾಗ ಪೊಲೀಸರು ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ಕಾಯ್ದೆ-2020ರ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಸಾಮಾನ್ಯವಾಗಿ ಗೋ ಹತ್ಯೆ ನಿಷೇಧ ಕಾಯ್ದೆ ಎಂದು ಕರೆಯಲ್ಪಡುವ ಈ ಕಾಯ್ದೆಯಲ್ಲಿ ಆಡಿನ ಹತ್ಯೆಯ ಬಗ್ಗೆಯೂ ಪ್ರಕರಣ ದಾಖಲಿಸಿರುವುದು ವಿಪರ್ಯಾಸ ಎಂದು ನ್ಯಾಯಾಧೀಶರು ಹೇಳಿದ್ದಾರೆ.

ಕಾಯ್ದೆ ಅಡಿಯಲ್ಲಿ ಜಾನುವಾರುಗಳ ಬಗ್ಗೆ ಪರಿಭಾಷೆ ನೀಡಿದ್ದು, ಜಾನುವಾರುಗಳ ಎಂದರೆ ಎಲ್ಲಾ ವಯಸ್ಸಿನ ಆಕಳು, ಕರು, ಎತ್ತು ಹಾಗೂ 13 ವರ್ಷದ ಒಳಗಿನ ಎಮ್ಮೆ ಅಥವಾ ಕೋಣ' ಎಂದು ಸ್ಪಷ್ಟವಾಗಿದೆ. ಆದರೂ ಪೊಲೀಸರು ಕಾನೂನಿನಲ್ಲಿರುವ ಪರಿಭಾಷೆಯನ್ನು ಸರಿಯಾಗಿ ಓದದೇ ತಪ್ಪಾಗಿ ಪ್ರಕರಣ ದಾಖಲಿಸಿದ್ದಾರೆ.

ಕಾನೂನಿನ ಪಂಡಿತರು ಹಾಗೂ ಜಾರಿ ಮಾಡುವವರು ಎಂದು ಹೇಳಲ್ಪಡುವ ಪೊಲೀಸರು ಈ ಕೆಲಸ ಮಾಡಿದ್ದಾರೆ. ಪ್ರಕರಣ ದಾಖಲಿಸುವುದಷ್ಟೇ ಅಲ್ಲದೇ ಅಂತಿಮ ವರದಿಯನ್ನೂ ಇದೇ ಕಾಯ್ದೆಯಡಿ ಸಲ್ಲಿಸಿ ಪೊಲೀಸರು ತಮ್ಮ ಮೂರ್ಖತನ ತೋರಿಸಿದ್ದಾರೆ ಎಂದು ನ್ಯಾಯಾಧೀಶರು ಬೇಸರ ವ್ಯಕ್ತಪಡಿಸಿದ್ದಾರೆ. ಸರಿಯಾದ ಕಾನೂನಿನ ಕಲಂ ಅಡಿಯಲ್ಲಿ ಪ್ರಕರಣ ದಾಖಲಿಸದ ಕಾರಣ ಆರೋಪಿಗೆ ಜಾಮೀನು ಮಂಜೂರು ಮಾಡಲಾಗಿದೆ. ಈ ಪ್ರಕರಣದ ಆದೇಶವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಬಳ್ಳಾರಿ ಐಜಿಪಿ ಅವರಿಗೆ ಕಳುಹಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು, ಪೊಲೀಸರಿಗೆ ತರಬೇತಿಯನ್ನೂ ನೀಡಬೇಕು ಎಂದು ಆದೇಶಿಸಿದ್ದಾರೆ.

## ಕಾಪು ಕ್ಷೇತ್ರಕ್ಕೆ 264.35 ಕೋಟಿ ಅನುದಾನಕ್ಕೆ ಮನವಿ

- ಉದಯವಾಹಿನಿ, ಕಾಪು

ಇಲ್ಲಿನ ವಿಧಾನಸಭಾ ಕ್ಷೇತ್ರದಲ್ಲಿ ಸುಮಾರು 264.35 ಕೋಟಿ ವೆಚ್ಚದಲ್ಲಿ ಸಾಗರ್ ಮಾಲಾ ಯೋಜನೆಯಡಿ ಬಂದರು ಮತ್ತು ವಿವಿಧ ಮೂಲಸೌಕರ್ಯ ಅಭಿವೃದ್ಧಿ ಪಡಿಸುವಂತೆ ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್ ಅವರನ್ನು ಸಂಸದ ಕೋಟ ಶ್ರೀನಿವಾಸ ಪೂಜಾರಿ, ಶಾಸಕ ಗುರ್ಮೆ ಸುರೇಶ್ ಶೆಟ್ಟಿ ದೆಹಲಿಯಲ್ಲಿ ಭೇಟಿಯಾಗಿ ಮನವಿ ಸಲ್ಲಿಸಿದರು. ಕಾಪು ವಿಧಾನಸಭಾ ಕ್ಷೇತ್ರದ ಸ್ಥಳೀಯ ಮೀನುಗಾರರು, ಸಾರ್ವಜನಿಕರು ಮೀನುಗಾರಿಕೆ ಚಟುವಟಿಕೆಯನ್ನು ಅಭಿವೃದ್ಧಿಪಡಿಸುವ ಅಗತ್ಯವಿದೆ. ಮಳೆಗಾಲದಲ್ಲಿ ಮಳೆ, ಪ್ರವಾಹದಿಂದ ಈ ಭಾಗದ ಜನರು ಅನೇಕ ಸಮಸ್ಯೆ ಎದುರಿಸುತ್ತಿದ್ದಾರೆ. ಈ ಬಗ್ಗೆ ಮತ್ತಷ್ಟು ಕ್ರಮ ಕೈಗೊಳ್ಳಲು ಸಾಗರ್ ಮಾಲಾ ಯೋಜನೆಯಡಿ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಮನವಿ ಮಾಡಿದ್ದಾರೆ.



ಉದಯವಾಹಿನಿ ಚಿತ್ರ

ಮೀನುಗಾರಿಕಾ ಬಂದರಿನ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅಂದಾಜು ಪಟ್ಟಿ ಈ ರೀತಿ ನೀಡಿದ್ದಾರೆ. ಕಾಪು ಲೈಟ್ ಹೌಸ್ ಬಳಿ ಸಾಂಪ್ರದಾಯಿಕ ದೋಣಿಗಳಿಗಾಗಿ ಬೀಚ್ ಲ್ಯಾಂಡಿಂಗ್ ಜೆಟ್ಟಿ ನಿರ್ಮಾಣ 75 ಕೋಟಿ, ಕಾಪು ತಾಲ್ಲೂಕು, ಸಮುದ್ರ ರಕ್ಷಣಾ ಗೋಡೆಯ ನಿರ್ಮಾಣ 108 ಕೋಟಿ, ಕಾಮಿನಿ ನದಿಯ ಹೂಳೆತ್ತುವಿಕೆಗೆ 3 ಕೋಟಿ, ಮೀನುಗಾರಿಕಾ ಸಂಪರ್ಕ ರಸ್ತೆಯ ಅಭಿವೃದ್ಧಿಗೆ 15 ಕೋಟಿ, ನಡಿಪಟ್ಟದಲ್ಲಿ ಪ್ರೋಯಿನ್ಸ್ ನಿರ್ಮಾಣ, ಸಮುದ್ರ ತೀರ ಸಂರಕ್ಷಣಾ ಕಾರ್ಯಕ್ಕೆ 58.50 ಕೋಟಿ, ಬ್ಲೂ ಫ್ಲ್ಯಾಗ್ ಬೀಚ್ ಮೀನುಗಾರಿಕೆ ಲಿಂಕ್ ರಸ್ತೆಗೆ ಸಂಪರ್ಕಿಸುವ ಹೊಸ ಸೇತುವೆ ನಿರ್ಮಾಣಕೆ 4.85 ಕೋಟಿ.

---

- ಸುತ್ತಲಿನ ಗ್ರಾಮಗಳನ್ನು ಪಾಲಿಕೆಯ ವ್ಯಾಪ್ತಿಗೆ ಸೇರಿಸಲಾಗಿದ್ದು, ಅಭಿವೃದ್ಧಿ ಇಲ್ಲದೆ ಬಡಾವಣೆಗಳ ಜನರು ಪರಿತಪಿಸುವಂತಾಗಿದೆ

# ಅಭಿವೃದ್ಧಿ ನಿರೀಕ್ಷೆಯಲ್ಲಿ ಬಡಾವಣೆ: ಅಧಿಕಾರಿಗಳು, ಜನಪ್ರತಿನಿಧಿಗಳಿಂದ ನಿರ್ಲಕ್ಷ್ಯ

- ಉದಯವಾಹಿನಿ, ಹಾಸನ

ನಗರಸಭೆಯಾಗಿದ್ದ ಹಾಸನ ಇದೀಗ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೆ ಏರಿದೆ. ಇದಕ್ಕಾಗಿ ಸುತ್ತಲಿನ ಗ್ರಾಮಗಳನ್ನು ಪಾಲಿಕೆಯ ವ್ಯಾಪ್ತಿಗೆ ಸೇರಿಸಲಾಗಿದ್ದು, ಅಭಿವೃದ್ಧಿ ಇಲ್ಲದ ಈ ಗ್ರಾಮಗಳ ಬಡಾವಣೆಗಳ ಜನರು ಪರಿತಪಿಸುವಂತಾಗಿದೆ.

ನಗರಪಾಲಿಕೆ ವ್ಯಾಪ್ತಿಗೆ ಬರುವ ಬಿ.ಕಾಟೀಹಳ್ಳಿಯ ಬಡಾವಣೆಗಳ ಜನರಿಗೆ ಅನಾರೋಗ್ಯ ಕಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಬಡಾವಣೆಗಳಲ್ಲಿ ಬಹುತೇಕ ವಿವಿಧ ಇಲಾಖೆಗಳ ಅಧಿಕಾರಿ ನೌಕರರು, ಆರೋಗ್ಯ ಅಧಿಕಾರಿಗಳು, ವೈದ್ಯರು ವಾಸವಾಗಿದ್ದಾರೆ. ಆದರೆ ಇಲ್ಲಿನ ಬಹುತೇಕ ರಸ್ತೆ, ಚರಂಡಿ ಪರಿಸ್ಥಿತಿಯನ್ನು ನೋಡಿದರೆ ಯಾವ ಕೊಳಚೆ ಪ್ರದೇಶಗಳಿಗೂ ಕಡಿಮೆ ಇಲ್ಲ ಎನ್ನುವಂತಾಗಿದೆ ಎಂದು ಇಲ್ಲಿನ ನಿವಾಸಿಗಳು ಆರೋಪಿಸುತ್ತಿದ್ದಾರೆ. ಗುಂಡಿ, ಕೆಸರುಮಯ ರಸ್ತೆ, ಬಡಾವಣೆಯ ಬಹುತೇಕ ರಸ್ತೆಗಳು ಗುಂಡಿಮಯವಾಗಿದ್ದು, ಮಳೆ ಬಂದರಂತೂ ಕೆಸರುಮಯ ಆಗುತ್ತದೆ. ರಾತ್ರಿ ಸಂಚಾರವಂತೂ ದುಸ್ತರವಾಗಿದ್ದು, ದ್ವಿಚಕ್ರ ವಾಹನದಲ್ಲಿ ಸಂಚಾರ ಮಾಡುವುದೇ ಸರ್ಕಸ್ ಮಾಡಿದಂತಾಗುತ್ತದೆ. ಬೀದಿ ದೀಪಗಳು ಇದ್ದೂ ಇಲ್ಲದಂತಾಗಿದ್ದು, ಕತ್ತಲಲ್ಲಿ ಮಹಿಳೆಯರು, ಮಕ್ಕಳ ಓಡಾಡುವುದೂ ದುಸ್ತರವಾಗಿದೆ. ಬಡಾವಣೆಯ ಪ್ರಮುಖ ಚರಂಡಿಗಳಲ್ಲಿ ಹುಲ್ಲು, ಕುರುಚಲು ಗಿಡಗಳು ಬೆಳೆದಿದ್ದು, ಚರಂಡಿಗೆ ಹರಿಯುವ ಕಲುಷಿತ ನೀರು ತುಂಬಿ ರಸ್ತೆಗೆ ಹರಿಯುವುದರಿಂದ ಸುತ್ತಲಿನ ಪರಿಸರ ಮಲಿನವಾಗುತ್ತಿದೆ. ನಾನಾ ರೋಗಗಳಿಗೆ ದಾರಿ ಮಾಡಿಕೊಡುತ್ತಿವೆ ಎಂದು ಇಲ್ಲಿನ ನಿವಾಸಿ ಸತೀಶ್ ಆರೋಪಿಸಿದ್ದಾರೆ.





ಉದಯವಾಹಿನಿ ಚಿತ್ರ



ಬಡಾವಣೆಗಳ ಪರಿಸ್ಥಿತಿಯ ಬಗ್ಗೆ ಜನಪ್ರತಿನಿಧಿಗಳಾಗಲಿ, ನಗರ ಪಾಲಿಕೆಯ ಅಧಿಕಾರಿಗಳಾಗಲಿ ಗಮನಹರಿಸುತ್ತಿಲ್ಲ ಎಂಬ ಆರೋಪ ವ್ಯಾಪಕವಾಗಿದ್ದು, ಇಲ್ಲಿನ ಸಾವಿರಾರು ನಿವಾಸಿಗಳಿಂದ ಲಕ್ಷಾಂತರ ರೂಪಾಯಿ ಕಂದಾಯ ವಸೂಲಿ ಮಾಡುವುದನ್ನು ಬಿಟ್ಟರೆ, ಬಡಾವಣೆಗೆ ಬೇಕಾದ ಮೂಲಸೌಕರ್ಯ, ಉತ್ತಮ ರಸ್ತೆ, ಚರಂಡಿ ಒದಗಿಸುವಲ್ಲಿ ನಗರಪಾಲಿಕೆ ವಿಫಲವಾಗಿದೆ ಎಂದು ನಿವಾಸಿಗಳು ಆರೋಪ ಮಾಡಿದ್ದಾರೆ.

**ಮಕ್ಕಳ ಓಡಾಟಕ್ಕೂ ತೊಂದರೆ**

**ಈ ಬಡಾವಣೆ ಒಂದೂವರೆ ದಶಕದಿಂದ ಗ್ರಾಮ ಪಂಚಾಯಿತಿ ಆಡಳಿತದಲ್ಲಿದ್ದು ಇದೀಗ ನಗರ ಪಾಲಿಕೆ ವ್ಯಾಪ್ತಿಗೆ ಬಂದಿರುವುದರಿಂದ ಮುಂದಿನ ದಿನಗಳಲ್ಲಿ ಅಗತ್ಯ ಮೂಲಸೌಕರ್ಯ ದೊರೆಯುವ ಆಶಾಭಾವನೆಯಲ್ಲಿ ಇಲ್ಲಿನ ನಿವಾಸಿಗಳು ಇದ್ದಾರೆ. ಉಳಿದಂತೆ ಎಸ್‌ಬಿಎಂ ಶರಾವತಿ ನಂದಿನಿ ಟೀಚರ್ಸ್ ಸೇರಿದಂತೆ ಇತರೆ ಬಡಾವಣೆಗಳ ಪರಿಸ್ಥಿತಿಯು ಹೇಳುತೀರದಾಗಿದ್ದು ಇಲ್ಲಿನ ಸಾವಿರಾರು ಮನೆಗಳಿಗೆ ಸಮರ್ಪಕ ಯುಜಿಡಿ ರಸ್ತೆ ಇತರೆ ಸೌಲಭ್ಯಗಳಿಲ್ಲದೆ ಪರಿತಪಿಸುವಂತಾಗಿದೆ. ಈ ಬಡಾವಣೆಗಳಿಗೆ ನಿತ್ಯ ಸುಮಾರು 10 ರಿಂದ 15 ಶಾಲಾ ವಾಹನಗಳು ಸಂಚರಿಸುತ್ತವೆ. ಇಲ್ಲಿನ ರಸ್ತೆಗಳ ದುಸ್ಥಿತಿಯನ್ನು ಕಂಡು ವಾಹನ ಚಾಲಕರು ಇಲ್ಲಿಗೆ ಬರಲು ಹಿಂದೇಟು ಹಾಕುತ್ತಾರೆ. ಮತ್ತೊಂದೆಡೆ ಮಳೆ ಬಂದರಂತೂ ಶಾಲೆ ಮಕ್ಕಳು ಹಾಗೂ ಪೋಷಕರು ರಸ್ತೆಯಲ್ಲೂ ನಡೆದು ಹೋಗುವಾಗ ಗುಂಡಿಯಲ್ಲಿನ ಬಟ್ಟೆಗೆ ಕೆಸರು ಹಾರಿ ತೊಂದರೆ ಅನುಭವಿಸಿರುವ ಹಲವು ಉದಾಹರಣೆಗಳು ಇವೆ ಎಂದು ಪಾಲಕರು ದೂರುತ್ತಿದ್ದಾರೆ.**

> **ಗ್ರಾಮಗಳ ಅಭಿವೃದ್ಧಿಗೆ ವಿಶೇಷ ಅನುದಾನ ನೀಡುವಂತೆ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ. ಕ್ರಿಯಾಯೋಜನೆ ಸಿದ್ಧಪಡಿಸಿ ಪಾಲಿಕೆಗೆ ಸೇರಿದ ಗ್ರಾಮಗಳ ಅಭಿವೃದ್ಧಿಗೆ ಯೋಜನೆ ರೂಪಿಸಲಾಗುವುದು**
> **-ಸ್ವರೂಪ್ ಪ್ರಕಾಶ್, ಶಾಸಕ**

> **ನಗರೋತ್ಥಾನ ಯೋಜನೆಯಡಿ ಶೀಘ್ರ ಕ್ರಿಯಾಯೋಜನೆ ತಯಾರಿಸುತ್ತಿದ್ದು ಈ ಬಡಾವಣೆಗಳಿಗೆ ರಸ್ತೆ ಚರಂಡಿ ಒಳಚರಂಡಿ ಸೇರಿದಂತೆ ಇತರೆ ಕಾಮಗಾರಿ ಕೈಗೆತ್ತಿ ಕೊಳ್ಳಲಾಗುವುದು -ಆನಂದ್, ಎಂಜಿನಿಯರ್**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ:** ವೈಯಕ್ತಿಕ ಮಾರ್ಗದರ್ಶನ ಸಂಬಂಧವನ್ನು ಸುಧಾರಿಸುತ್ತದೆ. ನಿಮ್ಮ ನಡೆಯಲ್ಲಿ ಪ್ರಾಮಾಣಿಕವಾಗಿರಿ – ನಿಮ್ಮ ಬದ್ಧತೆಯನ್ನು ಹಾಗೂ ನಿಮ್ಮ ಕೌಶಲ್ಯಗಳನ್ನು ಗುರುತಿಸಲಾಗುತ್ತದೆ. ಸಂವಹನ ಬಲವಾಗಿರುತ್ತದೆ.

**ವೃಷಭ:** ನಿಮ್ಮ ಜ್ಞಾನದಾಹ ನಿಮಗೆ ಹೊಸ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ. ಪ್ರಣಯ ಸಂಬಂಧದಲ್ಲಿ ನಿಮ್ಮನ್ನು ತಪ್ಪಾಗಿ ತಿಳಿದುಕೊಳ್ಳುವ ಸಾಧ್ಯತೆಯಿದೆ.

**ಮಿಥುನ:** ಮಕ್ಕಳೊಂದಿಗೆ ಆಟವಾಡುವುದು ನಿಮಗೆ ಅದ್ಭುತ ಚಿಕಿತ್ಸೆಯ ಅನುಭವ ನೀಡುತ್ತದೆ. ಈ ರಾಶಿಚಕ್ರದ ವಿವಾಹಿತ ಜನರಿಗೆ ಇಂದು ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ.

**ಕರ್ಕಾಟಕ:** ವಿಶೇಷವಾಗಿ ಬಿಕ್ಕಟ್ಟಿನ ಸಮಯದಲ್ಲಿ ನಿಮ್ಮ ತಾಳ್ಮೆ ಕಳೆದುಕೊಳ್ಳಬೇಡಿ. ಈ ರಾಶಿಚಕ್ರಕ್ಕೆ ಸಂಬಂಧಿಸಿದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ವಿಷಯದ ಬಗ್ಗೆ ಹಣವನ್ನು ಖರ್ಚು ಮಾಡಬಹುದು.

**ಸಿಂಹ:** ನೆರೆಮನೆಯವರ ಜೊತಗಿನ ಜಗಳ ನಿಮ್ಮ ಮನಸ್ಸು ಕೆಡಿಸುತ್ತದೆ. ಆದರೆ ಸಹನೆ ಕಳೆದುಕೊಳ್ಳಬೇಡಿ, ಏಕೆಂದರೆ ಇದು ಬೆಂಕಿಗೆ ತುಪ್ಪ ಸುರಿಯುತ್ತದೆ. ನೀವು ಸಹಕರಿಸದಿದ್ದಲ್ಲಿ ಯಾರೂ ನಿಮ್ಮ ಜೊತ ಜಗಳ ಮಾಡಲು ಸಾಧ್ಯವಿಲ್ಲ.

**ಕನ್ಯಾ:** ಮೋಸದಿಂದ ನಿಮ್ಮನ್ನು ಕಾಪಾಡಿಕೊಳ್ಳಲು ವ್ಯವಹಾರದಲ್ಲಿ ಎಚ್ಚರದಿಂದಿರಿ. ಜಾಗ್ರತೆಯ ನಡವಳಿಕೆಗಳಿರಬಹುದಾದ ಒಂದು ದಿನ – ಇಲ್ಲಿ ನಿಮ್ಮ ಮನಸ್ಸಿಗಿಂತ ನಿಮ್ಮ ಹೃದಯದ ಅಗತ್ಯ ಹೆಚ್ಚಿರುತ್ತದೆ.

**ತುಲಾ:** ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ಈ ರಾಶಿಚಕ್ರದ ವಿವಾಹಿತ ಜನರಿಗೆ ಅತ್ತೆ ಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ.

**ವೃಶ್ಚಿಕ:** ಯಾರಾದರೂ ನಿಮಗೆ ಅಸಮಾಧಾನವುಂಟು ಮಾಡಬಹುದಾದರೂ ಈ ಕಿರಿಕಿರಿಗಳು ನಿಮ್ಮನ್ನು ಆವರಿಸಲು ಬಿಡಬೇಡಿ. ಅನಾವಶ್ಯಕವಾದ ಚಿಂತೆಗಳು, ಉದ್ವೇಗಗಳು ದೇಹದ ಮೇಲೆ ಪರಿಣಾಮ ಬೀರಬಹುದು.

**ಧನಸ್ಸು:** ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ನೀವು ಅಪರೂಪಕ್ಕೆ ಭೇಟಿ ಮಾಡುವ ಜನರನ್ನು ಸಂಪರ್ಕಿಸಲು ಒಳ್ಳೆಯ ದಿನ.

**ಮಕರ:** ಮಾನಸಿಕ ಸ್ಪಷ್ಟತೆಯನ್ನು ನಿರ್ವಹಿಸಲು ಗೊಂದಲ ಮತ್ತು ಹತಾಶೆಯನ್ನು ತಪ್ಪಿಸಿ ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ.

**ಕುಂಭ:** ಆಕರ್ಷಕವಾದ ಮತ್ತು ನಿಮ್ಮನ್ನು ಶಾಂತವಾಗಿರಿಸುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಿ. ವ್ಯಾಪಾರವನ್ನು ಬಲಪಡಿಸಲು ಇಂದು ನೀವು ಯಾವುದೇ ಪ್ರಮುಖ ಕ್ರಮಗಳನ್ನು ತೆಗೆದುಕೊಳ್ಳಬಹುದು.

**ಮೀನ:** ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ.

### ಮಳೆ ಬಿಡುವು ನೀಡುವ ಸಮಯದಲ್ಲೆ ಶರ ವೇಗದಲ್ಲಿ ಕಾಮಗಾರಿ ನಡೆಸಿದರೂ ಕಾರ್ಯಕ್ರಮ ನಡೆಸುವುದು ಸಾಧ್ಯವೇ ಇಲ್ಲ

# ಬಹುನಿರೀಕ್ಷಿತ ಸಿಗಂದೂರು ಸೇತುವೆ ಉದ್ಘಾಟನೆ ಮುಂದಕ್ಕೆ?

• ಉದಯವಾಹಿನಿ ಶಿವಮೊಗ್ಗ

ಬಹು ನಿರೀಕ್ಷಿತ ಶರಾವತಿ ಹಿನ್ನೀರಿನ ಸಾಗರ ತಾಲ್ಲೂಕು ಕಳಸವಳ್ಳಿ- ಅಂಬಾರಗೋಡ್ಲು ನಡುವಿನ ಸಿಗಂದೂರು ಸೇತುವೆ ಲೋಕಾರ್ಪಣೆ ಸಮಾರಂಭ ಮುಂದಕ್ಕೆ ಹೋಗುವ ಸಾಧ್ಯತೆ ಇದೆ.

ಸೇತುವೆ ಉದ್ಘಾಟನಾ ಸಮಾರಂಭವನ್ನು ಜು.14 ರಂದು ನಡೆಸಲು ನಿರ್ಧರಿಸಲಾಗಿತ್ತು. ಕೇಂದ್ರ ಭೂ ಸಾರಿಗೆ ಸಚಿವ ನಿತಿನ್ ಗಡ್ಕರಿ ಅವರೂ ಸಮಾರಂಭಕ್ಕೆ ಬರಲು ಒಪ್ಪಿಗೆ ಸೂಚಿಸಿದ್ದಾರೆ. ಆದರೆ, ರಾಜ್ಯದ ಪಾಲಿನ ಐತಿಹಾಸಿಕವಾದ ಬೃಹತ್ ಸೇತುವೆ ಉದ್ಘಾಟನೆಗೆ ಲಕ್ಷಾಂತರ ಜನರನ್ನು ಸೇರಿಸಬೇಕು, ಪ್ರಧಾನಿ ನರೇಂದ್ರ ಮೋದಿ ಅವರನ್ನೂ ಕರೆತರಬೇಕು ಎಂಬುದು ಸಂಸದ ಬಿ.ವೈ.ರಾಘವೇಂದ್ರ ಅವರ ಅಪೇಕ್ಷೆಯಾಗಿದೆ.

ಪಶ್ಚಿಮಘಟ್ಟದ ವ್ಯಾಪ್ತಿಯಲ್ಲಿರುವ ಸಿಗಂದೂರು ಪ್ರದೇಶದಲ್ಲಿ ನಿರಂತರ ಮಳೆಯಾಗುತ್ತಿದೆ. ಹೀಗಾಗಿ ಸೇತುವೆ ಕಡೇ ಹಂತದ ಕಾಮಗಾರಿಗಳಿಗೆ ಅಡ್ಡಿಯಾಗಿದೆ. ಕಾಮಗಾರಿಯನ್ನು ಜೂನ್ ಮೊದಲ ವಾರದಲ್ಲಿ ಪೂರ್ಣಗೊಳಿಸಲು ಈ ಹಿಂದೆ ನಿರ್ಧರಿಸಲಾಗಿತ್ತು. ಆದರೆ, ಮೇ 16ರಿಂದ ನಿರಂತರವಾಗಿ ಮಳೆ ಹಿಡಿದುಕೊಂಡಿದ್ದು ಕಾಮಗಾರಿ ವೇಗಕ್ಕೆ ತಡೆಯೊಡ್ಡಿತು.

ಪೈಂಟಿಂಗ್ ಮತ್ತು ರೋಡ್ ಮಾರ್ಕಿಂಗ್ ಸಾಧ್ಯವಾಗುತ್ತಲೆ ಇಲ್ಲ. ಈಗಲೂ ಅಂತಿಮ ಹಂತದ ಕಾಮಗಾರಿಗಳನ್ನು ನಡೆಸಲು ಸಾಧ್ಯವಾಗುತ್ತಿಲ್ಲ. ಮಳೆ ಬಿಡುವು ನೀಡುವ ಸಮಯದಲ್ಲೆ ಶರ ವೇಗದಲ್ಲಿ ಕಾಮಗಾರಿ ನಡೆಸಿದರೂ ಕಾರ್ಯಕ್ರಮ ನಡೆಸುವುದು ಸಾಧ್ಯವೇ ಇಲ್ಲ ಎನ್ನುವಂತಹ ಪರಿಸ್ಥಿತಿ ಸಿಗಂದೂರು ಪ್ರದೇಶದಲ್ಲಿದೆ. ಜೋರು ಮಳೆಯಿಂದಾಗಿ ವಾಹನಗಳು ರಸ್ತೆಯಿಂದ ಕೆಳಗಿಳಿದರೆ ಮಣ್ಣಿನಲ್ಲಿ ಸಿಲುಕುವಂತಹ ಸ್ಥಿತಿ ಇದೆ. ಇಂತಹ ಸಮಯದಲ್ಲಿ ಲಕ್ಷಾಂತರ ಅಲ್ಲ ಸಾವಿರಾರು ಜನ ಬಂದರೂ ಒಂದು ಕಡೆ ಸೇರಿಸಲು ಸಾಧ್ಯವಿಲ್ಲ.ಇದರ ಮಧ್ಯೆ ಜುಲೈನಲ್ಲಿ ಪ್ರಧಾನಿ ಮೋದಿ ಅವರ ಪ್ರವಾಸಗಳು ಈಗಾಗಲೆ ನಿಗದಿಯಾಗಿವೆ. ಮಳೆಗಾಲದ ಸಂಸತ್ ಅಧಿವೇಶನ ಜು.21ರಿಂದ ಆಗಸ್ಟ್ 12ರ ವರೆಗೆ ನಡೆಯಲಿದ್ದು ಆನಂತರದಲ್ಲಿ ಅವರ ದಿನಾಂಕವನ್ನು ಪಡೆಯಬೇಕಾಗುತ್ತದೆ. ಹೀಗಾಗಿ ಆಗಸ್ಟ್ 15ರ ಬಳಿಕ ಪ್ರಧಾನಿ ಮತ್ತು ಭೂ ಸಾರಿಗೆ ಸಚಿವರ ದಿನಾಂಕ ಪಡೆದು ಆನಂತರದಲ್ಲೇ ಬೃಹತ್ ಸಮಾರಂಭ ಏರ್ಪಡಿಸುವ ಚಿಂತನೆ ನಡೆದಿದೆ.

ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷರೂ ಆದ ಶಾಸಕ ಬಿ.ವೈ.ವಿಜಯೇಂದ್ರ, ಶಾಸಕ ಆರಗ ಜ್ಞಾನೇಂದ್ರ, ಮಾಜಿ ಸಚಿವ ಹರತಾಳು ಹಾಲಪ್ಪ, ಎಂಎಡಿಬಿ ಮಾಜಿ ಅಧ್ಯಕ್ಷ ಗುರುಮೂರ್ತಿ ಮತ್ತಿತರರು ಇದ್ದರು.


ಉದಯವಾಹಿನಿ ಚಿತ್ರ

- ಶಿವಮೊಗ್ಗದಲ್ಲಿ ನಿರೀಕ್ಷಿತ ಶರಾವತಿ ಹಿನ್ನೀರಿನ ಸಾಗರ ತಾಳು ಕಳಸವಳ್ಳಿ-ಅಂಬಾರಗೋಡ್ಲು ನಡುವಿನ ಸಿಗಂದೂರು ಸೇತುವೆ ಲೋಕಾರ್ಪಣೆ ಸಮಾರಂಭವು ವಿಪರೀತ ಮಳೆಯ ಕಾರಣದಿಂದ ಮುಂದಕ್ಕೆ ಹೋಗುವ ಸಾಧ್ಯತೆ ಇದೆ.
- ಸೇತುವೆ ಉದ್ಘಾಟನಾ ಸಮಾರಂಭವನ್ನು ಜು.14ರಂದು ನಡೆಸಲು ನಿರ್ಧರಿಸಲಾಗಿತ್ತು, ಆದರೆ ಕೇಂದ್ರ ಭೂ ಸಾರಿಗೆ ಸಚಿವ ನಿತಿನ್ ಗಡ್ಕರಿ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ಹಾಜರಾತಿಯ ನಿರೀಕ್ಷೆ ಇದೆ.
- ಬೃಹತ್ ಸೇತುವೆಯ ಕಾಮಗಾರಿಯ ಅಂತಿಮ ಹಂತದಲ್ಲಿ ಪೈಂಟಿಂಗ್ ಮತ್ತು ರಸ್ತೆ ಮಾರ್ಕಿಂಗ್ ಕೆಲಸಗಳು ನಡೆಯಲು ಸಾಧ್ಯವಾಗುತ್ತಿಲ್ಲ ಏಕೆಂದರೆ ಜೋರು ಮಳೆ ಮುಂದುವರಿಯುತ್ತಿದೆ.

**ಸೇತುವೆ ವೀಕ್ಷಿಸಿದ ರಾಘವೇಂದ್ರ**

ರಾಜ್ಯದ ಇತಿಹಾಸ ಪುಟಗಳಲ್ಲಿ ದಾಖಲಾಗುವಂತಹ 2.25 ಕಿ.ಮೀ. ಉದ್ದದ ಕೇಬಲ್ ಸೇತುವೆಯನ್ನು ಸಂಸದ ಬಿ.ವೈ.ರಾಘವೇಂದ್ರ ಮಂಗಳವಾರ ವೀಕ್ಷಿಸಿದರು. ಸ್ಥಳದಲ್ಲೇ ಅಧಿಕಾರಿಗಳು ಮತ್ತು ತಜ್ಞರೊಂದಿಗೆ ಚರ್ಚೆ ನಡೆಸಿದ ಅವರು, ಅಂತಿಮ ಹಂತದ ಕಾಮಗಾರಿ ಬಗ್ಗೆ ಮಾಹಿತಿ ಪಡೆದುಕೊಂಡರು. ಬಳಿಕ ಶ್ರೀಕ್ಷೇತ್ರ ಸಿಗಂದೂರು ಚೌಡೇಶ್ವರಿ ಸನ್ನಿಧಾನಕ್ಕೆ ಭೇಟಿ ನೀಡಿ ದರ್ಶನ ಪಡೆದುಕೊಂಡರು.

**ಬಾಕಿ ಕಾಮಗಾರಿಗಳು**

- ಟಾಪ್ ಲೇಯರ್ ಬಿ.ಸಿ. ಶೇ.50
- ಪೈಂಟಿಂಗ್ ಕೆಲಸ, ರೋಡ್ ಮಾರ್ಕಿಂಗ್
- ಸೇತುವೆ ಉದ್ದಕ್ಕೂ ಎರಡು ಬದಿಯಲ್ಲಿ ವಿದ್ಯುತ್ ದೀಪ ಕಂಬಗಳ ಅಳವಡಿಕೆ ಶೇ.40

**ಕಡೇ ಹಂತದ ಕಾಮಗಾರಿಗಳಿಗೆ ಮಳೆ ಅಡ್ಡಿ**

## ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಸೇವೆ ಅತ್ಯುತ್ತಮ: ರವಿ ಕೆ.ಅಂಬೇಕರ್


ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಚಿತ್ರದುರ್ಗ, ಜಿಲ್ಲಾ ಆಯುಷ್ ಇಲಾಖೆ ಚಿತ್ರದುರ್ಗ ಇವರು ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ 2025–26ನೇ ಸಾಲಿನ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಯೋಗಬಂಧನ, ಯೋಗೋಧ್ಯಾನ, ಯೋಗ ಧನುಷ್, ಯೋಗ ಪ್ರಭಾವ, Youth connect , ಯೋಗ ಹರಿತ್, Yoga un Plugged, ಯೋಗ ಮಹಾಕುಂಭ, ಯೋಗ ಸಂಗಮ್ ಇನ್ನಿತರ ಹಲವು ಕಾರ್ಯಕ್ರಮಗಳಲ್ಲಿ ಆಯುಷ್ ಇಲಾಖೆಯೊಂದಿಗೆ ಸಕ್ರಿಯವಾಗಿ ಪಾಲ್ಗೊಂಡು ನಗರ ಮತ್ತು ಗ್ರಾಮೀಣ ಭಾಗದಲ್ಲಿ ಜನರಲ್ಲಿ ಯೋಗ ಜಾಗೃತಿ ಮೂಡಿಸುವುದರ ಜೊತೆಗೆ ಸಾರ್ವಜನಿಕರಿಗೆ ಉಚಿತ ಯೋಗ ತರಬೇತಿ ಸೇವೆ ನೀಡಿದ್ದಕ್ಕಾಗಿ ಚಿತ್ರದುರ್ಗ ಭಾರತೀಯ ಯೋಗ ಶಿಕ್ಷಣ ಸಂಸ್ಥೆಗೆ ಅತ್ಯುತ್ತಮ ಯೋಗ ಸಂಸ್ಥೆ ಎಂದು ಅಭಿನಂದನಾ ಪತ್ರ ನೀಡಲಾಯಿತು.

ನಗರದ ಜಿಲ್ಲಾ ಆಯುಷ್ ಕಛೇರಿಯಲ್ಲಿ ಅಭಿನಂದನಾ ಪತ್ರ ನೀಡಲಾಯಿತು. ಸಂಸ್ಥೆಯ ಅಧ್ಯಕ್ಷ ಹಾಗೂ ಯೋಗ ಪ್ರಚಾರಕ ರವಿ ಕೆ.ಅಂಬೇಕರ್ ಪ್ರಮಾಣಪತ್ರ ಸ್ವೀಕಾರ ಮಾಡಿದರು.

ಇದೇ ಸಂಧರ್ಭದಲ್ಲಿ ವೈದ್ಯರ ದಿನದ ಅಂಗವಾಗಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ವತಿಯಿಂದ ಜಿಲ್ಲಾ ಆಯುಷ್ ಅಧಿಕಾರಿ ಚಂದ್ರಕಾಂತ ಎಸ್ ನಾಗಸಮುದ್ರ ಅವರಿಗೆ ಶಾಲು ಹೊದಿಸುವುದರೊಂದಿಗೆ ಅಭಿನಂದಿಸಲಾಯಿತು ಹಾಗೂ ಇಲಾಖೆಯ ಸಿಬ್ಬಂದಿ ವರ್ಗದವರಿಗೆ ಸಿಹಿಹಂಚಲಾಯಿತು.

ಕಾರ್ಯಕ್ರಮದಲ್ಲಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆಯ ಪದಾಧಿಕಾರಿಗಳಾದ ಆರ್. ಸತ್ಯಣ್, ಮಲ್ಲಿಕಾರ್ಜುನಚಾರ್ ಸಂಸ್ಥೆಯ ಯೋಗ ಶಿಕ್ಷಕಿಯರಾದ ಶ್ರೀಮತಿ ವಸಂತಲಕ್ಷ್ಮಿ ಹಾಗೂ ಮಂಜುಳಾ ಟಿ.ಒ. ಹಾಗೂ ಆಯುಷ್ ಅಧಿಕಾರಿಗಳು ಉಪಸ್ಥಿತರಿದ್ದರು

> 2025–26ನೇ ಸಾಲಿನ ಅಂತರಾಷ್ಟ್ರೀಯ ಯೋಗ ದಿನಾಚರಣೆ ಆಯುಷ್ ಇಲಾಖೆಯಿಂದ ಚಿತ್ರದುರ್ಗ ಜಿಲ್ಲೆಯಾದ್ಯಂತ ಅದ್ದೂರಿಯಾಗಿ ಆಚರಿಸಲ್ಪಟ್ಟಿದ್ದು. ಜಿಲ್ಲೆಯ ವಿವಿಧ ಯೋಗ ಸಂಘ-ಸಂಸ್ಥೆಗಳ ಸಹಕಾರ ಹಾಗೂ ಸಾರ್ವಜನಿಕರ ಸಹಭಾಗಿತ್ವ ಉತ್ತಮವಾಗಿತ್ತು ಇವುಗಳಲ್ಲಿ ಚಿತ್ರದುರ್ಗದ ಭಾರತೀಯ ಯೋಗ ಶಿಕ್ಷಣ ಸಂಸ್ಥೆಗೆ ಅತ್ಯುತ್ತಮ ಯೋಗ ಸೇವೆಗಾಗಿ ಅಭಿನಂದಿಸುತ್ತಿರುವುದು ಸಂತಸ ತಂದಿದೆ ಭಾರತೀಯ ಯೋಗ ಶಿಕ್ಷಣ ಸಂಸ್ಥೆಯ ಯೋಗ ಶಿಕ್ಷಕರು ನಗರ ಮತ್ತು ಗ್ರಾಮೀಣ ಭಾಗಗಳಲ್ಲಿ ಸಾರವಜನಿಕರಲ್ಲಿ ಯೋಗ ಜಾಗೃತಿ ಮೂಡಿಸುವುದರ ಜೊತೆಗೆ ಜಿಲ್ಲಾ ಕಾರಾಗೃಹ ಬಂಧಿ ನಿವಾಸಿಗಳಿಗೆ, ಪೋಲಿಸ್ ತರಬೇತಿ ಪ್ರಶಿಕ್ಷಣಾರ್ಥಿಗಳಿಗೆ ಉಚಿತವಾಗಿ ಉತ್ತಮ ಯೋಗ ತರಬೇತಿ ಸೇವೆಯನ್ನು ನೀಡಿರುತ್ತಾರೆ ಮುಂದಿನ ದಿನಗಳಲ್ಲೂ ಆಯುಷ್ ಇಲಾಖೆಯ ಜೊತೆಗಿನ ಸಹಕಾರ ಹೀಗೇ ಮುಂದುವರಿಯಲಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆಯಿಂದ ಇನ್ನೂ ಉತ್ತಮ ಸೇವೆ ಸಮಾಜಕ್ಕೆ ನೀಡುವಂತಾಗಲಿ.
> -ಚಂದ್ರಕಾಂತ ಎಸ್.ನಾಗಸಮುದ್ರ, ಜಿಲ್ಲಾ ಆಯುಷ್ ಅಧಿಕಾರಿ

## ಐನಾಪೂರ ಶಾಲೆಯಲ್ಲಿ ಶಾಲಾ ಸಂಸತ್ ರಚನೆ, ಸಚಿವರ ಪ್ರಮಾಣವಚನ ಕಾರ್ಯಕ್ರಮ

• ಉದಯವಾಹಿನಿ, ಚಿಂಚೋಳಿ

ಶಾಲಾ ಮಕ್ಕಳಿಗೆ ಚುನಾವಣೆ ಬಗ್ಗೆ ಅರಿವು ಮೂಡಿಸಲು ಶಾಲಾಮಕ್ಕಳ ಚುನಾವಣೆ ನಡೆಸಿ ಸಂಸತ್ ರಚಿಸಿ ಸಚಿವ ಸಂಪುಟ ರಚನೆ ಮಾಡಿ ಶಾಲಾಮಕ್ಕಳಿಗೆ ಸರ್ಕಾರ ರಚನೆ ಮತ್ತು ಸರ್ಕಾರ ಮಾಡುವ ಕೆಲಸಗಳ ಬಗ್ಗೆ ಸಮಗ್ರ ಮಾಹಿತಿ ನೀಡಲಾಯಿತು ಎಂದು ಸರ್ಕಾರಿ ಮಾದರಿಯ ಪ್ರಾಥಮಿಕ ಶಾಲೆಯ ಎಸ್ಡಿಎಂಸಿ ಅಧ್ಯಕ್ಷ ಶಿವಾನಂದ ಮಾಲಿ ಪಾಟೀಲ ಹೇಳಿದರು.

ತಾಲ್ಲೂಕಿನ ಐನಾಪೂರ ಗ್ರಾಮದ ಸರ್ಕಾರಿ ಮಾದರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡ 2025–26ನೇ ಸಾಲಿನ ಶಾಲಾಮಕ್ಕಳಿಗೆ ಸಂಸತ್ತ ರಚನೆ ಮತ್ತು ಸಚಿವರ ಪ್ರಮಾಣವಚನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಯಾವುದೇ ಹಣ ಆಮಿಷಕ್ಕೆ ಮಾರು ಹೋಗದೆ ಉತ್ತಮ ಶಾಲೆಯ ವಿದ್ಯಾರ್ಥಿಗಳಿಗೆ ಚುನಾವಣೆಯಲ್ಲಿ ಹೇಗೆ ಗೆಲ್ಲಿಸಿದ್ದೀರಿ ಮುಂದೆಯೂ ಕೂಡ ಗ್ರಾಪಂ. ತಾಪಂ.ಜಿಪಂ ಲೋಕಸಭಾ ವಿಧಾನಸಭಾ ಚುನಾವಣೆಯಲ್ಲಿಯೂ ಸಹ ಯಾವುದೇ ಆಮಿಷಗಳಿಗೆ ಒಳಗಾಗದೆ ಬುದ್ಧಿವಂತರಿಗೆ ಒಳ್ಳೆಯ ಸಮಾಜ ನಿರ್ಮಾಣ ಮಾಡುವ ಅಭ್ಯರ್ಥಿಗಳಿಗೆ ಗೆಲ್ಲಿಸಬೇಕು, ರಾಜ್ಯದ ದೇಶದ ಜನತೆ ಹಾಗೂ ಕ್ಷೇತ್ರದ ಜನತೆ, ರೈತರು ಕೂಡ ನೆಮ್ಮದಿಯಿಂದ ಬದುಕಲು ಸಾಧ್ಯವಾಗುತ್ತದೆ, ಅದರಂತೆ ಶಾಲೆಯಲ್ಲಿಯೂ ಕೂಡ ಒಳ್ಳೆಯ ವಿದ್ಯಾರ್ಥಿಗೆ ತರಗತಿಯಲ್ಲಿ ತರಗತಿ ಪ್ರತಿನಿಧಿವೆಂಬ ಜವಾಬ್ದಾರಿ ಕೊಟ್ಟಿದರೆ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಮಾಡಲು ಹಾಗೂ ಮೂಲಭೂತ ಸೌಲಭ್ಯಗಳನ್ನು ದೊರಕಲು ಸಾಧ್ಯ ಎಂದರು.


ಉದಯವಾಹಿನಿ ಚಿತ್ರ

ಶಾಲೆಯ ಮುಖ್ಯಗುರುಗಳು ಗೋಪುನಾಯಕ ಶಾಲೆಯ ಸಂಸತ್ ಬಗ್ಗೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಐನಾಪೂರ ವಲಯ ಸಿಆರ್.ಸಿ ಜೇಮ್ಸ್, ಬಸಂತಪುರ ಸಿಆರ್ಸಿ ಭೀಮರಾವ ಕುಲಕರ್ಣಿ ಮಾತನಾಡಿದರು.

ಈ ಸಂದರ್ಭದಲ್ಲಿ ಖಾನಾಪುರ ಶಾಲೆಯ ಮುಖ್ಯಗುರುಗಳು, ಭ್ಯೂಂಯರ್ ಶಾಲೆಯ ಮುಖ್ಯಗುರುಗಳು, ಐನಾಪೂರ ಶಾಲೆ ಶಿಕ್ಷಕ ವೃಂದದವರು ಶಾಲಾಮಕ್ಕಳು ಅನೇಕರಿದ್ದರು.

## ಪ್ರತಿಭೆ ಯಾರ ಕೈಗೊಂಬೆಯಲ್ಲ, ಪ್ರತಿಭೆ ಎಂಬುದು ಸಾಧಕನ ಸ್ವತ್ತು

• ಉದಯವಾಹಿನಿ, ಚಿಂಚೋಳಿ

ಪ್ರತಿಭೆ ಯಾರ ಕೈಗೊಂಬೆಯಲ್ಲ ಸಾಧಕನ ಸ್ವತ್ತಾಗಿದ್ದು ಸಾಧನೆಯ ಹಾದಿಯಲ್ಲಿ ದೃಢ ವಿಶ್ವಾಸ ಏಕಾಗ್ರತೆ ಕಠಿಣ ಪರಿಶ್ರಮ ವಹಿಸಿದರೆ ಯಶಸ್ಸು ಕಟ್ಟಿಟ್ಟ ಬುತ್ತಿಯಾಗಿದೆ ಎಂದು ಖ್ಯಾತ ಕೀರ್ತನಕಾರ ಮಲ್ಲಯ್ಯಶಾಸ್ತ್ರಿ ಐನಾಪೂರ ಹೇಳಿದರು. ಪಟ್ಟಣದ ಚಂದಾಪೂರದ ಸರಕಾರಿ ಪಿಯು ಕಾಲೇಜಿನಲ್ಲಿ ತಾಲ್ಲೂಕಾ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ವತಿಯಿಂದ ಹಮ್ಮಿಕೊಂಡ ಎಸ್.ಎಸ್.ಎಲ್.ಸಿ,ಮತ್ತು ಪಿಯುಸಿ,ನೀಟ್, ಸಿಇಟಿಯಲ್ಲಿ ಅಗ್ರಶ್ರೇಣಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಏರ್ಪಡಿಸಿದ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಮೋಬೈಲ್ ಬಿಟ್ಟು ಪುಸ್ತಕವನ್ನು ಕೈಯಲ್ಲಿ ಹಿಡಿದಾಗ ಅವನನ್ನು ಯಶಸ್ಸು ಹಿಂಬಾಲಿಸಿಕೊಂಡು ಬರತ್ತದೆ. ಚಿತ್ತಾಪೂರ ಪದವಿ ಕಾಲೇಜಿನ ಪ್ರಾಧ್ಯಾಪಕ ಡಾ.ಸಂಗಪ್ಪ ಮಾಮನಶೆಟ್ಟಿ ಮಾತನಾಡಿ ವಿದ್ಯಾರ್ಥಿಗಳು ಅತ್ಯುತ್ತಮ ಶಿಕ್ಷಣ ಪಡೆಯಬೇಕಾದರೆ ಹಗಲಿರುಳು ಓದಬೇಕು ಯಾವುದೇ ದುಶ್ಚಟಗಳಿಂದ ದೂರವಿದ್ದು ಪುಸ್ತಕಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದರು. ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಅಧ್ಯಕ್ಷ ಶರಣು ಪಾಟೀಲ ಮೋತಕಪಳ್ಳಿ ಮಾತನಾಡಿದರು, ಶರಣ ಸಾಹಿತ್ಯ ಪರಿಷತ್ತಿನ ಗೌರವಾಧ್ಯಕ್ಷ ಮಲ್ಲಿಕಾರ್ಜುನ ಪಾಲಾಮೂರ್ ಅಧ್ಯಕ್ಷತೆ ವಹಿಸಿದ್ದರು, ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಸವರಾಜ ಐನೋಳಿ ಪ್ರಾಸ್ತಾವಿಕ ಮಾತನಾಡಿದರು. ಎಸ್.ಎಸ್ ಎಲ್.ಸಿ,ಪಿಯುಸಿ,ಸಿಇಟಿ,ನೀಟ್‌ನಲ್ಲಿ ಅಗ್ರಶ್ರೇಣಿಯಲ್ಲಿ ಉತ್ತೀರ್ಣರಾದ ತಾಲ್ಲೂಕಿನ 32 ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ, ನೆನಪಿನ ಕಾಣಿಕೆ ನೀಡಿ ಸನ್ಮಾನಿಸಲಾಯಿತು.


ಉದಯವಾಹಿನಿ ಚಿತ್ರ

## ಸಮಾಜಕ್ಕೆ ಕಂದಾಯ ಇಲಾಖೆ ಸಿಬ್ಬಂದಿಗಳ ಕೊಡುಗೆ ಅಪಾರ: ತಹಶೀಲ್ದಾರ್

• ಉದಯವಾಹಿನಿ ವಡಗೇರಾ

ಪಾರದರ್ಶಕ ಹಾಗೂ ಪ್ರಾಮಾಣಿಕವಾಗಿ ಕೆಲಸ ಮಾಡುವ ಮೂಲಕ ತಾಲ್ಲೂಕಿನ ಅಭಿವೃದ್ಧಿಗೆ ಶ್ರಮಿಸುವುದರ ಜೊತೆಗೆ ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ತಕ್ಷಣವೇ ಸ್ಪಂದಿಸುವಂತೆ ಕಂದಾಯ ಇಲಾಖೆಯ ಅಧಿಕಾರಿಗಳಿಗೂ ಮತ್ತು ಸಿಬ್ಬಂದಿಗಳಿಗೆ ತಹಶೀಲ್ದಾರ್ ಶ್ರೀಮತಿ ಮಂಗಳಾ ಎಂ ಕಿವಿಮಾತು ಹೇಳಿದರು.

ಪಟ್ಟಣದ ತಹಶೀಲ್ದಾರ್ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಕಂದಾಯ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಂದಾಯ ನಿರೀಕ್ಷಕರು ಮತ್ತು ಗ್ರಾಮ ಲೆಕ್ಕಾಧಿಕಾರಿಗಳ ಅಪಾರವಾದದ್ದು ಗ್ರಾಮೀಣ ಪ್ರದೇಶಗಳಿಗೆ ತೆರಳಿ ಪ್ರಾಥಮಿಕ ವರದಿ ಹಾಗೂ ಇನ್ನಿತರ ಕಾರ್ಯ ಚಟುವಟಿಕೆಗಳಲ್ಲಿ ರೈತರೊಂದಿಗೆ ಉತ್ತಮ ಒಡನಾಟವನ್ನು ಹೊಂದಿರುತ್ತಾರೆ ಈಗಾಗಲೇ ನಮ್ಮ ತಾಲ್ಲೂಕಿನಲ್ಲಿ ನಮ್ಮ ಕಂದಾಯ ಅಧಿಕಾರಿ ಸಿಬ್ಬಂದಿಗಳು ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದು ಮುಂದಿನ ದಿನಗಳಲ್ಲಿ ಕೂಡಾ ಉತ್ತಮವಾಗಿ ಕಾರ್ಯನಿರ್ವಹಿಸುವ ಮೂಲಕ ಜನಸ್ನೇಹಿಯಾಗಿ ರೈತರು ಸಾರ್ವಜನಿಕರೊಂದಿಗೆ ಒಳ್ಳೆಯ ಬಾಂಧವ್ಯವನ್ನು ಬೇಳಿಸಿಕೊಳ್ಳಬೇಕು ರೈತರ ಸಾರ್ವಜನಿಕರ ಕೆಲಸಗಳನ್ನು ನೆನೆಗುದಿಗೆ ಬೀಳಿಸದೆ ಸಮಯಕ್ಕೆ ಸರಿಯಾಗಿ ವಿಲೇವಾರಿ ಮಾಡುವಂತೆ ಹೇಳಿದರು. ಪ್ರವೀಣ್, ರಾಜಶೇಖರ್ ಸ್ವಾಮಿ, ಕುಬೇರ್, ಚನ್ನಬಸವ, ರೂಪಾ, ಮರೇಪ್ಪ, ಶಿವಕುಮಾರ್, ಅಂಬಿಕಾ, ಸಿದ್ದಮ್ಮ, ದೇವು ನಾಯಕ್, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

> ಸಮಾಜಕ್ಕೆ ಕಂದಾಯ ಸಿಬ್ಬಂದಿಗಳ ಕೊಡುಗೆ ಅಪಾರ ಪ್ರಾಮಾಣಿಕ ಮತ್ತು ಒಳ್ಳೆಯ ಕೆಲಸಕ್ಕೆ ಪ್ರತಿಯೊಬ್ಬರ ಸಹಕಾರ ಇದ್ದೇ ಇರುತ್ತೆ ಸಮಯ ಪ್ರಜ್ಞೆ ಅತ್ಯಂತ ಮುಖ್ಯವಾದದ್ದು ಪ್ರತಿಯೊಬ್ಬರು ಸಮಯ ಪಾಲನೆ ರೂಡಿಸಿಕೊಳ್ಳಬೇಕು. -ಮಂಗಳಾ ಎಂ

## ಜಿಲ್ಲಾ ಸವಿತಾ ಸಮಾಜದಲ್ಲಿ ಸಂಘರ್ಷ

• ಉದಯವಾಹಿನಿ ಶಿವಮೊಗ್ಗ

ಜಿಲ್ಲಾ ಸವಿತಾ ಸಮಾಜಕ್ಕೆ ಪ್ರಭಾರ ಉಪಾಧ್ಯಕ್ಷರಾಗಿ ನೇಮಕವಾಗಿದ್ದ ಎನ್.ಪರಮೇಶ್ ಎಂಬುವವರು ಕೆಲವು ಜನರನ್ನು ಸೇರಿಸಿಕೊಂಡು ತಾವೇ ಸಮಾಜದ ಜಿಲ್ಲಾಧ್ಯಕ್ಷ ಎಂದು ಘೋಷಿಸಿಕೊಳ್ಳುವ ಮೂಲಕ ಸಮಾಜದಲ್ಲಿ ಗೊಂದಲ ಮೂಡಿಸುತ್ತಿದ್ದಾರೆ ಎಂದು ಸಮಾಜದ ಜಿಲ್ಲಾಧ್ಯಕ್ಷ ಎಂ.ಜಿ.ಬಾಲು ಆರೋಪಿಸಿದರು.

ಜಿಲ್ಲಾ ಸವಿತಾ ಸಮಾಜದ ಅಧ್ಯಕ್ಷರಾಗಿ ತಾವು ಜವಾಬ್ದಾರಿ ನಿರ್ವಹಿಸುತ್ತಿದ್ದೇವೆ. ತಮ್ಮ ಅವಧಿ ಸಹ ಪೂರ್ಣವಾಗಿಲ್ಲ. ಎನ್.ಪರಮೇಶ್ ಅವರನ್ನು ತಾತ್ಕಾಲಿಕವಾಗಿ ಸಮಾಜದ ಪ್ರಭಾರ ಉಪಾಧ್ಯಕ್ಷರನ್ನಾಗಿ ನೇಮಿಸಲಾಗಿತ್ತು. ಆದರೆ ಅವರು ಕೆಲವರನ್ನು ಸೇರಿಸಿಕೊಂಡು ಅನಧಿಕೃತ ಸಭೆ ನಡೆಸಿ, ತಮ್ಮನ್ನೇ ಅಧ್ಯಕ್ಷ ಎಂದು ಘೋಷಿಸಿಕೊಂಡಿದ್ದಾರೆ. ಇದು ಬೈಲಾಗೆ ವಿರುದ್ಧವಾಗಿದೆ. ಈ ಬಗ್ಗೆ ಸಹಕಾರ ಇಲಾಖೆಯ ಉಪ ನಿಬಂಧಕರಿಗೆ ದೂರು ನೀಡಿದ್ದೇವೆ ಎಂದು ತಿಳಿಸಿದರು.

## ಮನೆಯ ಬಾಗಿಲು ಬೀಗ ಮುರಿದು 100 ಗ್ರಾಂ ಚಿನ್ನದ ಒಡವೆ ಕಳವು

• ಉದಯವಾಹಿನಿ, ಹಿರೀಸಾವೆ

ಮನೆಯ ಬಾಗಿಲು ಬೀಗ ಮುರಿದು 100 ಗ್ರಾಂ ಚಿನ್ನದ ಒಡವೆಗಳನ್ನು ಕಳ್ಳತನ ಮಾಡಿರುವ ಘಟನೆ ಹಿರೀಸಾವೆ ಹೋಬಳಿಯ ಜಿನ್ನೇನ ಹಳ್ಳಿಯಲ್ಲಿ ನಡೆದಿದೆ. ಗ್ರಾಮದ ಎಸ್. ರಾಧ ತಮ್ಮ ಮಗ ಪ್ರವೀಣ್ ನೊಂದಿಗೆ ಬೆಳಿಗ್ಗೆ 10.30ರ ಸಮಯದಲ್ಲಿ ಮನೆಗೆ ಬೀಗ ಹಾಕಿ, ಹಿರೀಸಾವೆ ಆಸ್ಪತ್ರೆಗೆ ಬಂದಿದ್ದಾರೆ. ಮಧ್ಯಾಹ್ನ 12 ಗಂಟೆಗೆ ಮನೆಗೆ ಹೋದಾಗ ಕಳ್ಳತನ ನಡೆದಿರುವುದು ಗೊತ್ತಾಗಿದೆ. ಕಳ್ಳರು ಬಾಗಿಲು ಬೀಗ ಮುರಿದು ಒಳಗೆ ಹೋಗಿ, ಕೋಣೆಯಲ್ಲಿ ಇದ್ದ ಬೀರುವಿನ ಬಾಗಿಲನ್ನು ಮೀಟಿ, ಅದರಲ್ಲಿ ಇಟ್ಟಿದ್ದ ಚಿನ್ನದ ಎರಡು ಸರ, ಎರಡು ಉಂಗುರ, ಒಂದು ಜೊತೆ ಓಲೆ, ಎರಡು ಬಳೆಗಳು ಸೇರಿದಂತೆ 100 ಗ್ರಾಂನಷ್ಟು ಒಡವೆಗಳನ್ನು ಮತ್ತು 4 ಸಾವಿರ ನಗದನ್ನು ಕದ್ದು ಪರಾರಿಯಾಗಿದ್ದರೆ. ಕಳ್ಳತನ ಸ್ಥಳಕ್ಕೆ ಬೆರಳಚ್ಚು ತಜ್ಞರು, ಶ್ವಾನದಳ ಮತ್ತು ಹಿರಿಯ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದ್ದಾರೆ. ಹಿರೀಸಾವೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ದೇವಸ್ಥಾನದಲ್ಲಿ ಕಳವು:** ಹೋಬಳಿಯ ಬೂಕನ ಬೆಟ್ಟದಲ್ಲಿರುವ ರಂಗನಾಥಸ್ವಾಮಿ ದೇವಸ್ಥಾನದಲ್ಲಿ ಮಂಗಳವಾರ ರಾತ್ರಿ ಕಳ್ಳತನ ನಡೆದಿದೆ. ಕಳ್ಳರು ದೇವಾಲಯದ ಬಾಗಿಲು ಬೀಗ ಒಡೆದು, ಎರಡು ಹುಂಡಿಯಲ್ಲಿ ಇದ್ದ ಹಣವನ್ನು ಕದ್ದುಕೊಂಡು ಹೋಗಿದ್ದಾರೆ. ದೇವಸ್ಥಾನದ ಸಿಸಿಟಿವಿ ಕ್ಯಾಮೆರಾಗಳನ್ನು ತಿರುಚಿದ್ದಾರೆ. ಮುಜರಾಯಿ ಇಲಾಖೆಗೆ ಸೇರಿದ ಗ್ರೇಡ್ ಬಿ ದೇವಸ್ಥಾನವಾಗಿದ್ದು, ಕಳ್ಳತನದ ವಿಷಯ ತಿಳಿದು, ಕಂದಾಯ ಇಲಾಖೆಯ ಆರ್‌ಐ ಯೋಗೇಶ್, ಗ್ರಾಮ ಲೆಕ್ಕಾಧಿಕಾರಿ ಶೈಲಜಾ ಮತ್ತು ಪೊಲೀಸರು ಸೇರಿದಂತೆ ಇತರೆ ಅಧಿಕಾರಿಗಳು ಬುಧವಾರ ಭೇಟಿ ನೀಡಿದ್ದರು.

## ಯಾಂತ್ರೀಕೃತ ಭತ್ತ ನಾಟಿ ಪ್ರಾತ್ಯಕ್ಷಿಕೆ

• ಉದಯವಾಹಿನಿ ಬ್ರಹ್ಮಾವರ

ಮಂಗಳೂರಿನ ವಿಜಯ ಗ್ರಾಮೀಣಾಭಿವೃದ್ಧಿ ಪ್ರತಿಷ್ಠಾನ, ಇಲ್ಲಿನ ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ, ಕೃಷಿ ವಿಜ್ಞಾನ ಕೇಂದ್ರ, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಹಯೋಗದಲ್ಲಿ ಪ್ರಗತಿಪರ ಕೃಷಿಕ ಯಡ್ತಾಡಿ ಸತೀಶ ಕುಮಾರ್ ಶೆಟ್ಟಿ ಅವರ ಗದ್ದೆಯಲ್ಲಿ 17ನೇ ವರ್ಷದ ಯಾಂತ್ರೀಕೃತ ಭತ್ತ ನಾಟಿ ಪ್ರಾತ್ಯಕ್ಷಿಕೆ ಕಾರ್ಯಕ್ರಮ ನಡೆಯಿತು. ವಿಜಯ ಗ್ರಾಮೀಣಾಭಿವೃದ್ಧಿ ಪ್ರತಿಷ್ಠಾನದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜ್ಯೋತಿರಾಜ್ ಚಾಲನೆ ನೀಡಿ ಶುಭಹಾರೈಸಿದರು. ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಧನಂಜಯ ಕೃಷಿ ಯಾಂತ್ರೀಕರಣ ಬಗ್ಗೆ ಮಾಹಿತಿ ನೀಡಿದರು. ಕೃಷಿ ವಿಜ್ಞಾನಿ ಶಂಕರ್, ಕೃಷಿ ಡಿಪ್ಲೊಮಾ ಕಾಲೇಜು ಪ್ರಾಂಶುಪಾಲ ಸುಧೀರ್ ಕಾಮತ್ ಮಾಹಿತಿ ನೀಡಿದರು.

ತೋಟಗಾರಿಕೆ ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕ ಎಚ್. ಜಯಶೀಲ ಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು. ನಿವೃತ್ತ ಪ್ರಾಂಶುಪಾಲ, ಮಳೆನೀರು ಕೊಯ್ಲು ತಜ್ಞ ಬಾರ್ಕೂರು ದಿ.ಸೀತಾರಾಮ ಶೆಟ್ಟಿ ಅವರ ಸಂಸ್ಮರಣೆ ನಡೆಯಿತು.

## ಮಳೆ ನೀರು ಸಂಗ್ರಹ: ಪರದಾಟ

• ಉದಯವಾಹಿನಿ ಭಾಲ್ಕಿ

ತಾಲ್ಲೂಕಿನ ಖಟಕಚಿಂಚೋಳಿ ಗ್ರಾಮದ ಮುಖ್ಯದ್ವಾರದ ಬಳಿ ಮಳೆ ನೀರು ಸರಾಗವಾಗಿ ಹರಿದು ಹೋಗಲು ಸೂಕ್ತ ಚರಂಡಿ ವ್ಯವಸ್ಥೆ ಇಲ್ಲದ ಕಾರಣ ನೀರು ಸಂಗ್ರಹಗೊಂಡಿದ್ದು ವಿದ್ಯಾರ್ಥಿಗಳು, ಸಾರ್ವಜನಿಕರು, ಹಿರಿಯರು ನಡೆದುಕೊಂಡು ಹೋಗಲು ಪರದಾಡುತ್ತಿದ್ದಾರೆ ಎಂದು ಗ್ರಾಮಸ್ಥ ಕಾಶಿನಾಥ ಚಿಲಶೆಟ್ಟಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಗ್ರಾಮಸ್ಥರ, ಸಾರ್ವಜನಿಕರ ಸುಗಮ ಓಡಾಟದ ಹಿತದೃಷ್ಟಿಯಿಂದ ಸಂಬಂಧಪಟ್ಟ ಅಧಿಕಾರಿಗಳು, ಜನಪ್ರತಿನಿಧಿಗಳು ಕೂಡಲೇ ಈ ಸಮಸ್ಯೆಯತ್ತ ತಮ್ಮ ಚಿತ್ತವನ್ನು ಹರಿಸಿ ಸೂಕ್ತ ಚರಂಡಿ ವ್ಯವಸ್ಥೆ ಮಾಡಬೇಕು ಎಂದು ಎಬಿವಿಪಿ ಮುಖಂಡ ರೇವಣಸಿದ್ದ ಜಾಡರ್ ಒತ್ತಾಯಿಸಿದ್ದಾರೆ.


ಉದಯವಾಹಿನಿ ಚಿತ್ರ

### ಡಾ.ಫ.ಗು.ಹಳಕಟ್ಟಿ ಅವರು ಎಂದಿಗೂ ಹಣ, ಸಂಪತ್ತಿಗಾಗಿ ವಚನಗಳ ಸಂಶೋಧನೆ ಕೈಗೊಳ್ಳಲಿಲ್ಲ: ಡಾ.ಎನ್.ಮಮತಾ

# ವಚನ ಸಾಹಿತ್ಯ ಸಂಶೋಧನೆಗೆ ಜೀವನ ಮುಡುಪಿಟ್ಟ ಡಾ.ಫ.ಗು.ಹಳಕಟ್ಟಿ

• ಉದಯವಾಹಿನಿ ಚಿತ್ರದುರ್ಗ

ವಿಶ್ವಕ್ಕೆ ಮಾದರಿಯಾದ ವಚನ ಸಾಹಿತ್ಯದ ಸಂಶೋಧನೆಗೆ ಡಾ.ಫ.ಗು.ಹಳಕಟ್ಟಿ ಜೀವನವನ್ನೇ ಮುಡುಪಿಟ್ಟರು. ಲಾಭ ತರುವ ವಕೀಲಿ ವೃತ್ತಿಯನ್ನು ಬಿಟ್ಟು, ಸತತ 60 ವರ್ಷಗಳ ಕಾಲ ವಚನ ಸಂಶೋಧನೆ ಹಾಗೂ ಪ್ರಕಟಣೆ ಕಾರ್ಯಕೈಗೊಂಡು 250ಕ್ಕೂ ಅಧಿಕ ವಚನಕಾರರನ್ನು ನಾಡಿಗೆ ಪರಿಚಯಿಸಿಕೊಟ್ಟರು ಎಂದು ಭರಮಸಾಗರ ಬಾಪೂಜಿ ಪದವಿಪೂರ್ವ ಕಾಲೇಜು ಪ್ರಾಂಶುಪಾಲೆ ಡಾ.ಎನ್. ಮಮತಾ ಹೇಳಿದರು.

**ವಚನ ಸಂರಕ್ಷಣಾ ದಿನಾಚರಣೆ**

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರ ಸಭೆ ಸಹಯೋಗದಲ್ಲಿ, ಡಾ.ಫ.ಗು.ಹಳಕಟ್ಟಿ ಜನ್ಮ ದಿನದ ಅಂಗವಾಗಿ ಆಯೋಜಿಸಲಾಗಿದ್ದ, ವಚನ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಡಾ.ಫ.ಗು.ಹಳಕಟ್ಟಿ ಅವರು ಎಂದಿಗೂ ಹಣ ಹಾಗೂ ಸಂಪತ್ತಿಗಾಗಿ ವಚನಗಳ ಸಂಶೋಧನೆ ಕೈಗೊಳ್ಳಲಿಲ್ಲ. ಅವರ ಮಗ ಅಪಘಾತಕ್ಕೆ ತುತ್ತಾಗಿ ಮರಣ ಹೊಂದಿದರು, ಧೃತಿಗೆಡದೆ ವಚನ ಸಂಶೋಧನೆಯನ್ನು ಮುಂದುವರಿಸಿದರು. ಇವರ ವ್ಯಕ್ತಿತ್ವ ನಾಡಿಗೆ ಮಾದರಿಯಾಗಿದೆ. ದುರ್ದೈವದ ಸಂಗತಿಯಂದರೆ, ಡಾ.ಫ.ಗು.ಹಳಕಟ್ಟಿ ಜೀವಿತ ಕಾಲದಲ್ಲಿ ಅವರ ಕಾರ್ಯವನ್ನು ಜನರು ಹೆಚ್ಚಾಗಿ ಗುರುತಿಸಲಿಲ್ಲ. ಆದರೆ ವಿಜಯಪುರದಲ್ಲಿ ವಾಸವಿದ್ದ ಡಾ.ಫ.ಗು. ಹಳಕಟ್ಟಿಯವರ ಮನೆಗೆ ಅಂದಿನ ರಾಜ್ಯಪಾಲರಾದ ಜಯಚಾಮರಾಜೇಂದ್ರ ಒಡೆಯರ್ ಭೇಟಿ ನೀಡಿ ಗೌರವಿಸಿದರು. ಮಠಗಳು ಡಾ.ಫ. ಗು.ಹಳಕಟ್ಟಿಯವರನ್ನು ಸ್ಮರಿಸುವ ಕೆಲಸ ಮಾಡಬೇಕು. ಇಂದಿನ ಪೀಳಿಗೆಗೆ ಅವರ ಕೊಡುಗೆ ಮತ್ತು ವ್ಯಕ್ತಿತ್ವದ ಪರಿಚಯ ಮಾಡಿ ಕೊಡಬೇಕು ಎಂದು ಪ್ರಾಂಶುಪಾಲೆ ಡಾ.ಎನ್. ಮಮತಾ ಹೇಳಿದರು. ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ ಮಾತನಾಡಿ, ಫ.ಗು.ಹಳಕಟ್ಟಿಯವರು ವಚನ ಸಾಹಿತ್ಯದ ಮೂಲ ಪ್ರತಿಗಳ ಸಂಗ್ರಹಕ್ಕೆ ಮನೆ ಮನೆಗಳಿಗೆ ಸೈಕಲ್ ಮೂಲಕ ತೆರಳಿ, ಹುಡುಕಿ, ಸಂಗ್ರಹಿಸಿ ವಚನ ಸಾಹಿತ್ಯದ ಬೆಳಕು ಹರಡಿದ್ದಾರೆ ಎಂದರು.


ಉದಯವಾಹಿನಿ ಚಿತ್ರ

> ಫ.ಗು.ಹಳಕಟ್ಟಿಯವರು ಸ್ವಾತಂತ್ರ್ಯ ಪೂರ್ವದಲ್ಲಿ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದರು. ವಚನ ಸಂಶೋಧನೆ ಜೊತೆಗೆ ನಿಸ್ವಾರ್ಥ ಜನಸೇವೆಯನ್ನು ಮಾಡಿದರು. ಆಕಸ್ಮಿಕವಾಗಿ ದೊರೆತ ವಚನಗಳ ಗಂಟು ಮುಂದೆ ಫ.ಗು. ಹಳಕಟ್ಟಿಯವರ ಜೀವನದ ಮುಖ್ಯ ಉದ್ದೇಶವಾಯಿತು. ಈ ಆಕಸ್ಮಿಕ ಘಟನೆಯ ಹಿಂದೆ ದೇವರ ಇಚ್ಚೆಯಿದೆ.
> -ಎಂ.ಕೆ.ತಾಜ್‌ಪೀರ್
> ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ

> ವಚನ ಸಾಹಿತ್ಯವನ್ನು ಪುನರುಜ್ಜೀವನಗೊಳಿಸಲು ಜನ್ಮಿಸಿದ ಕಾರಣೀಭೂತ ಡಾ. ಫ.ಗು. ಹಳಹಟ್ಟಿಯವರನ್ನು ಸಾಹಿತಿ ಸಿಂಪಗೆ ಲಿಂಗಣ್ಣ 'ಕರ್ನಾಟಕದ ಮ್ಯಾಕ್ಸ್‌ಮಿಲ್ಲರ್' ಎಂದು ಕರೆದಿದ್ದಾರೆ. ಸಾಹಿತಿ ಬಿ.ಎಂ.ಶ್ರೀಕಂಠಯ್ಯನವರು ವಚನಗುಮ್ಮಟ ಎಂದು ಹೊಗಳಿದ್ದಾರೆ. ಉತ್ತರ ಕರ್ನಾಟಕದ ಮನೆಗಳಲ್ಲಿ ದೇವರ ಜಗಲಿಯಲ್ಲಿ ಪೂಜೆಗೆ ಇರಿಸಿದ್ದ ವಚನ ಸಾಹಿತ್ಯದ ತಾಳೆಗರಿಗಳನ್ನು ಸಂಗ್ರಹಿಸಿ, ಸಂರಕ್ಷಿಸಿ, ಅಧ್ಯಯನ ಮಾಡಿ ವಚನಗಳನ್ನು ಪ್ರಕಟಿಸಿ, ವಚನಕಾರರ ಚಿಂತನೆಯನ್ನು ಜಗತ್ತಿಗೆ ತೋರ್ಪಡಿಸಿದರು. 12 ಶತಮಾನದ ವಚನ ಕ್ರಾಂತಿ ವಿಶ್ವಕ್ಕೆ ಮಾದರಿಯಾದ ಸಾಮಾಜಿಕ ಕ್ರಾಂತಿಯಾಗಿದೆ. ಇದನ್ನು ಜಗತ್ತಿಗೆ ಪರಿಚಯಿಸಿದ ಡಾ.ಫ.ಗು.ಹಳಕಟ್ಟಿಯವರನ್ನು 'ವಚನ ಸಾಹಿತ್ಯ ಪಿತಾಮಹ ಎಂದು ಕರೆಯಲಾಗುತ್ತದೆ. -ಡಾ.ಎನ್.ಮಮತಾ, ಪ್ರಾಂಶುಪಾಲೆ

> ವಿಶ್ವ ಸಾಹಿತ್ಯಕ್ಕೆ ಅಮೂಲ್ಯ ಕೊಡುಗೆ ನೀಡಿರುವ ಕನ್ನಡ ವಚನ ಸಾಹಿತ್ಯವನ್ನು ಸಂಗ್ರಹಿಸಿ, ಸಂರಕ್ಷಿಸಿ, ಜನತೆಗೆ ಪರಿಚಯಿಸಿದ ಡಾ.ಫ.ಗು.ಹಳಕಟ್ಟಿಯವರ ಸಾಹಿತ್ಯ ಸೇವೆ ಅವಿಸ್ಮರಣೀಯ. ವಚನ ಸಾಹಿತ್ಯ ಮತ್ತು ವಚನಕಾರರ ಬಗ್ಗೆ ಅಮೂಲಾಗ್ರವಾಗಿ ತಿಳಿಯಲು ಡಾ.ಫ.ಗು. ಹಳಕಟ್ಟಿ ಅವರಿಂದ ಸಾಧ್ಯವಾಗಿದೆ.
> -ಮೆಹಬೂಬ್ ಜಿಲಾನಿ ಖುರೇಷಿ
> ಉಪವಿಭಾಗಾಧಿಕಾರಿ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ. ಶಿವಸ್ವಾಮಿ ಮಾತನಾಡಿ, ಡಾ.ಫ.ಗು ಹಳಕಟ್ಟಿಯವರು ವಿಧಾನ ಪರಿಷತ್ ಸದಸ್ಯರಾಗಿ, ವಕೀಲರಾಗಿ, ಪತ್ರಕರ್ತರಾಗಿಯೂ ಕೆಲಸ ಮಾಡಿದ್ದಾರೆ. ಇಂತಹ ಮಹನೀಯರ ಸ್ಮರಿಸುವ ಅಗತ್ಯವಿದೆ ಎಂದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ. ಗುರುನಾಥ, ಉಪವಿಭಾಗಾಧಿಕಾರಿಗಳ ಕಚೇರಿ ತಹಶೀಲ್ದಾರ್ ನರಸಿಂಹಮೂರ್ತಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಕಾರ್ಯದರ್ಶಿ ಮಳಲಿ ಶ್ರೀನಿವಾಸ್, ನಿಜಲಿಂಗಪ್ಪ ಸ್ಮಾರಕ ಟ್ರಸ್ಟ್ ಕಾರ್ಯದರ್ಶಿ ಷಣ್ಮುಖಪ್ಪ, ಉಪನ್ಯಾಸಕರ ಸಂಘದ ಮಾಜಿ ಅಧ್ಯಕ್ಷ ಎಸ್. ಲಕ್ಷ್ಮಣ್, ಸಾಹಿತಿ ಆನಂದ ಮೂರ್ತಿ ಸೇರಿದಂತೆ ಮತ್ತಿತರರು ಇದ್ದರು. ಶಿಕ್ಷಕಿ ಗೀತಾ ಭರಮಸಾಗರ ನಿರೂಪಿಸಿದರು.

# ಉದಯಪುರದಲ್ಲಿ ಭರ್ಜರಿ ಡೆವಿಲ್ ಮೇಕಿಂಗ್!



**ನಾಯಕಿ ರಚನಾ ರೈ ಕೂಡಾ ಭಾಗಿ**

ಚಾಲೆಂಜಿಂಗ್‌ಸ್ಟಾರ್ ದರ್ಶನ್ ಅಭಿನಯದ ಬಹು ನಿರೀಕ್ಷಿತ ಸಿನಿಮಾ ಡೆವಿಲ್ ಚಿತ್ರೀಕರಣ ಅದ್ದೂರಿಯಾಗಿ ನಡೆಯುತ್ತಿದೆ. ಮಾತಿನ ಭಾಗದ ಶೂಟಿಂಗ್ ಬಹುತೇಕ ಮುಗಿದಿದ್ದು, ಡ್ಯಾನ್ಸ್ ಹಾಗೂ ಫೈಟಿಂಗ್ ಸೀಕ್ವೆನ್ಸ್ ಮಾತ್ರ ಬಾಕಿ ಉಳಿದಿದೆ. ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ದರ್ಶನ್ ಜೈಲು ಸೇರಿದ್ಮೇಲೆ ಅರ್ಧಕ್ಕೆ ನಿಂತಿದ್ದ ಸಿನಿಮಾದ ಶೂಟಿಂಗ್ ಮುಕ್ತಾಯ ಹಂತಕ್ಕೆ ಬಂದು ನಿಂತಿದೆ. ಇದೇ ಹೊತ್ತಿನಲ್ಲೇ ಡೆವಿಲ್ ಸಿನಿಮಾದ ಮೇಕಿಂಗ್ ವಿಡಿಯೋವೊಂದನ್ನ ಬಿಡುಗಡೆ ಮಾಡಿದೆ ಚಿತ್ರತಂಡ. ಈ ಮೊದಲು ಟೀಸರ್ ಹಾಗೂ ಹುಟ್ಟುಹಬ್ಬ ಗ್ಲಿಂಪ್ಸ್ ಬಿಡುಗಡೆ ಮಾಡಿದ್ದ ಡೆವಿಲ್ ಚಿತ್ರತಂಡ, ಉದಯಪುರದಲ್ಲಿ ಚಿತ್ರೀಕರಿಸಿದ ಸಾಹಸ ಸನ್ನಿವೇಶ ಸೇರಿದಂತೆ ಕೆಲ ದೃಶ್ಯಗಳನ್ನು ರಿವೀಲ್ ಮಾಡಿದೆ ಡೆವಿಲ್ ಚಿತ್ರತಂಡ. ರಾಜಸ್ತಾನದ ಉದಯಪುರದಲ್ಲಿ ಚಿತ್ರೀಕರಣದ ವೇಳೆ ದರ್ಶನ್ ಪತ್ನಿ ವಿಜಯಲಕ್ಷ್ಮಿಗೆ ಕೂಡಾ ಭಾಗಿಯಾಗಿದ್ದರು. ಅಲ್ಲದೇ ಈ ಭಾಗದ ಚಿತ್ರೀಕರಣದಲ್ಲಿ ನಟ ಅಚ್ಯುತ್‌ಕುಮಾರ್, ಶರ್ಮಿಳಾ ಮಾಂಡ್ರೆ, ನಾಯಕಿ ರಚನಾ ರೈ ಕೂಡಾ ಭಾಗಿಯಾಗಿದ್ದಾರೆ. ಆ ದೃಶ್ಯವಿರುವ ವಿಡಿಯೋವನ್ನ ರಿಲೀಸ್ ಮಾಡಿದೆ ಡೆವಿ ಚಿತ್ರತಂಡ. ವಿಡಿಯೋ ನೋಡಿ ದರ್ಶನ್ ಫ್ಯಾನ್ಸ್ ಖುಷಿಯಿಂದ ಕುಣಿದಾಡಿದ್ದಾರೆ. ಸಾಂಗ್ ಹಾಗೂ ಕೆಲ ಸಾಹಸ ದೃಶ್ಯಗಳ ಚಿತ್ರೀಕರಣಕ್ಕಾಗಿ ಚಿತ್ರತಂಡ ವಿದೇಶಕ್ಕೆ ಹೋಗಲು ಪ್ಲ್ಯಾನ್ ಕೂಡಾ ಮಾಡಿಕೊಂಡಿದೆ. ಅಲ್ಲದೇ ಕೋರ್ಟ್‌ನಿಂದ ದರ್ಶನ್ ಅನುಮತಿ ಪಡೆದುಕೊಂಡಿದ್ದು, ಸದ್ಯದಲ್ಲಿಯೇ ವಿದೇಶಕ್ಕೆ ಹಾರಲಿದೆ ಡೆವಿಲ್ ಟೀಂ.

# ಹುಟ್ಟು ಹಬ್ಬದ ದಿನ ಆಂಜನೇಯ ಅವತಾರವೆತ್ತ ಗಣೇಶ್



**ನಾನಾ ಕುತೂಹಲ ಪೋಸ್ಟರ್**

ಕನ್ನಡ ಚಿತ್ರರಂಗದ ತ್ಯಾಗರಾಜರು ಅಂತಾನೇ ಖ್ಯಾತಿ ಪಡೆದಿರುವ ರಮೇಶ್ ಅರವಿಂದ್ ಹಾಗೂ ಗೋಲ್ಡನ್ ಸ್ಟಾರ್ ಗಣೇಶ್ ಕಾಂಬೋಗಾಗಿ ಒಂದಾಗಿರುವುದು ಗೊತ್ತೇ ಇದೆ. ಈ ಚಿತ್ರದ ಶೂಟಿಂಗ್ ಭರದಿಂದ ಸಾಗುತ್ತಿದ್ದು, ಇಂದು ಗಣೇಶ್ ಹುಟ್ಟುಹಬ್ಬಕ್ಕೆ ಚಿತ್ರತಂಡ ವಿಶೇಷವಾಗಿ ಶುಭ ಕೋರಿದೆ. ಪೋಸ್ಟರ್ ಬಿಡುಗಡೆ ಮಾಡಿ ಗೋಲ್ಡನ್ ಸ್ಟಾರ್‌ಗೆ ಬರ್ತ್‌ಡೇ ಶುಭಾಶಯ ತಿಳಿಸಿದೆ. ಗಣೇಶ್ ಜನ್ಮದಿನಕ್ಕೆ ಅನಾವರಣಗೊಂಡಿರುವ ಪೋಸ್ಟರ್ ಬಹಳ ವಿಶೇಷವಾಗಿದೆ. ಗಣೇಶ್ ಹಿಂದೆಂದೂ ಕಾಣದ ಗೆಟಪ್ ನಲ್ಲಿ ಕಾಣಿಸಿಕೊಂಡಿದ್ದಾರೆ. ಭಜರಂಗಿ ಅವತಾರದಲ್ಲಿ ಮಳೆ ಹುಡ್ಗ ದರ್ಶನ ಕೊಟ್ಟಿದ್ದಾರೆ. ಹಿಮಾಲಯದ ಬ್ಯಾಕ್ ಡ್ರಾಪ್ ನಲ್ಲಿ ಮೂಡಿ ಬಂದಿರುವ ಪೋಸ್ಟರ್ ನಲ್ಲಿ ರಾಮ ಸೈಕಲ್ ಮೇಲೆ ಕುಳಿತಿದ್ದು, ಭಜರಂಗಿ ಭುಜದಲ್ಲಿ ಪೋಸ್ಟ್‌ಮ್ಯಾನ್ ಬ್ಯಾಗ್ ಕಾಣಿಸುತ್ತದೆ. ಪೋಸ್ಟರ್ ನಾನಾ ಕುತೂಹಲ ಹುಟ್ಟುಹಾಕುವ ಕ್ರಿಯೇಟ್ ಮಾಡುವುದರ ಜೊತೆಗೆ ಚಿತ್ರದ ಮೇಲಿನ ನಿರೀಕ್ಷೆ ಹೆಚ್ಚಿಸಿದೆ.

ಪುಷ್ಪಕ ವಿಮಾನ, ಇನ್ಸ್‌ಪೆಕ್ಟರ್ ವಿಕ್ರಮ್, ಮಾನ್ಸೂನ್ ರಾಗದಂತಹ ಸಿನಿಮಾಗಳನ್ನು ನಿರ್ಮಾಣ ಮಾಡಿರುವ ಸಿನಿಮಾ ಹಸಿವಿರುವ ವಿಖ್ಯಾತ್ ಎ ಆರ್ ಈ ಚಿತ್ರದ ಮೂಲಕ ಡೈರೆಕ್ಟರ್ ಕುರ್ಚಿ ಅಲಂಕರಿಸಿದ್ದಾರೆ. ಐರಾ ಫಿಲ್ಮ್ಸ್ ಮತ್ತು ದಿ ರಾಯಲ ಸ್ಟುಡಿಯೋಸ್ ಬ್ಯಾನರ್ ಅಡಿ ಸತ್ಯ ರಾಯಲ ರಾಮ್ ಚಿತ್ರವನ್ನು ಅದ್ದೂರಿಯಾಗಿ ನಿರ್ಮಾಣ ಮಾಡುತ್ತಿದ್ದಾರೆ.

ನವೀನ್ ಕುಮಾರ್ ಛಾಯಾಗ್ರಹಣ, ಹರೀಶ್ ಕೊಮ್ಮೆ ಸಂಕಲನ, ಜೆ ಅನೂಪ್ ಸೀಳಿನ್ ಸಂಗೀತ, ಗುಣ ಕಲಾ ನಿರ್ದೇಶನ ಈ ಚಿತ್ರಕ್ಕಿದೆ. ಸದ್ಯ ಭರದಿಂದ ಚಿತ್ರೀಕರಣ ಸಾಗುತ್ತಿದ್ದು, ಈ ವರ್ಷಾಂತ್ಯಕ್ಕೆ ತೆರೆಗೆ ಬರಲಿದೆ.

# ಮೋಹನ್‌ಲಾಲ್ ಮಗಳು ವಿಸ್ಮಯ ಚಿತ್ರರಂಗಕ್ಕೆ ಎಂಟ್ರಿ!



ಮಲಯಾಳಂನ ಸೂಪರ್‌ಸ್ಟಾರ್ ಮೋಹನ್‌ಲಾಲ್ ಮಗಳು ವಿಸ್ಮಯಾ ಮೋಹನ್‌ಲಾಲ್ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡುತ್ತಿದ್ದಾರೆ.

ಮೋಹನ್‌ಲಾಲ್ ಪುತ್ರ ಪ್ರಣವ್ ಈಗಾಗ್ಲೇ ಚಿತ್ರರಂಗದಲ್ಲಿ ಗುರುತಿಸಿಕೊಂಡಿದ್ದಾರೆ. ಇದೀಗ ಪುತ್ರಿ ಚಿತ್ರರಂಗದಲ್ಲಿ ನಾಯಕಿಯಾಗಿ ಲಾಂಚ್ ಆಗುತ್ತಿದ್ದಾರೆ. ಈ ಖುಷಿ ವಿಚಾರವನ್ನ ಮೋಹನ್‌ಲಾಲ್ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

ಆಶೀರ್ವಾದ್ ಸಿನಿಮಾಸ್ ಬ್ಯಾನರ್‌ನಲ್ಲಿ ಜ್ಯೂಡ್ ಆಯಂಟನಿ ಜೊಸೆಫ್ ನಿರ್ದೇಶನದ ಸಿನಿಮಾದ ಮೂಲಕ ಮೋಹನ್‌ಲಾಲ್ ಪುತ್ರಿ ಸಿನಿಮಾ ರಂಗಕ್ಕೆ ಪ್ರವೇಶ ಮಾಡ್ತಿದ್ದಾರೆ. ಈ ಮೊದಲು ಸಹಾಯಕ ನಿರ್ದೇಶಕಿಯಾಗಿ ಕೂಡಾ ಕಾರ್ಯ ನಿರ್ವಹಿಸಿರುವ ವಿಸ್ಮಯ ಈ ಚಿತ್ರಕ್ಕಾಗಿ ತಯಾರಿ ನಡೆಸಿದ್ದಾರೆ. ಅಲ್ಲದೇ ಸಿನಿಮಾಗಾಗಿ 22 ಕೆಜಿ ತೂಕ ಇಳಿಸಿದ್ದಾರಂತೆ. ಮೋಹನ್‌ಲಾಲ್ ಪುತ್ರಿ ಈ ಚಿತ್ರಕ್ಕಾಗಿ ಹಾಗೂ ಸಿನಿಮಾ ಇಂಡಸ್ಟ್ರಿಗೆ ಪಾದಾರ್ಪಣೆ ಮಾಡುವುದಕ್ಕಾಗಿ ತೂಕ ಇಳಿಸುವುದರ ಜೊತೆಗೆ ಪೂರಕವಾದ ತರಬೇತಿಯನ್ನ ಥಾಯ್ಲೆಂಡ್‌ನಲ್ಲಿ ಪಡೆದಿದ್ದಾರೆ ಎನ್ನಲಾಗ್ತಿದೆ. ಇನ್ನು ಮೋಹನ್‌ಲಾಲ್ ಪುತ್ರ ಮೊದಲ ಸಿನಿಮಾದಲ್ಲೇ ಜನಮನ ಸೆಳೆದಿದ್ದರು. ಇದೀಗ ಪುತ್ರಿ ಕೂಡಾ ಚಿತ್ರರಂಗದಲ್ಲಿ ಯಶಸ್ವಿಯಾಗಲಿ ಅಂತಾ ಮೋಹನ್‌ಲಾಲ್ ಅಭಿಮಾನಿ ವರ್ಗ ಹಾರೈಸುತ್ತಿದೆ.



# ಇಂಡಸ್ಟ್ರಿಯಲ್ಲಿ ನನಗೆ ಯಾರೂ ಫ್ರೆಂಡ್ಸ್ ಇಲ್ಲ...

ಬಹುಭಾಷಾ ನಟಿ ನಯನತಾರಾ ಇತ್ತೀಚೆಗೆ ಸಂದರ್ಶನವೊಂದರಲ್ಲಿ ಸ್ಫೋಟಕ ಮಾತುಗಳನ್ನ ಆಡಿದ್ದಾರೆ. ನಿಮಗೆ ಇಂಡಸ್ಟ್ರಿಯಲ್ಲಿ ಕ್ಲೋಸ್ ಫ್ರೆಂಡ್ಸ್ ಯಾರಿದ್ದಾರೆ ಅನ್ನೋ ಪ್ರಶ್ನೆಗೆ ಉತ್ತರಿಸಿರುವ ನಟಿ ''ನನಗೆ ಸಿನಿಮಾ ಇಂಡಸ್ಟ್ರಿಯಲ್ಲಿ ಯಾರೂ ಬೆಸ್ಟ್ ಫ್ರೆಂಡ್ ಅಂತಾ ಇಲ್ಲ ಎಂದಿದ್ದಾರೆ. ಯಾಕಂದ್ರೆ, ಸಿನಿಮಾದಿಂದ ಸಿನಿಮಾಗೆ ಎಲ್ಲರೂ ಬೇರೆ ಬೇರೆ ಜನ ಪರಿಚಯ ಆಗ್ತಾರೆ ಎಂದು ಉತ್ತರಿಸಿದ್ದಾರೆ. ಒಂದು ಸಿನಿಮಾ ಮುಗಿದ ಬಳಿಕ ಮತ್ತೊಂದು ಸಿನಿಮಾ ಮಾಡಬೇಕಾದರೆ ಹೊಸ ಜನರ ಪರಿಚಯವಾಗುತ್ತೆ.

ಆ ಸಿನಿಮಾ ಮುಗಿದ್ಮೇಲೆ ಮತ್ತೆ ಹೊಸ ಹೊಸ ಜನರ ಜೊತೆ ಕೆಲಸ ಮಾಡಬೇಕಾಗುತ್ತೆ. ಹೀಗಾಗಿ ಸಿನಿಮಾ ಇಂಡಸ್ಟ್ರಿಯಲ್ಲಿ ನನಗೆ ಬೆಸ್ಟ್ ಫ್ರೆಂಡ್ ಯಾರೂ ಇಲ್ಲ ಎಂದಿದ್ದಾರೆ. ಈ ಮಾತು ಸಾಕಷ್ಟು ಜನರಿಗೆ ಹುಬ್ಬೇರಿಸುವಂತೆ ಮಾಡಿದೆ. ನಟಿ ನಯನತಾರಾ ಯಾವಾಗಲೂ ಸ್ಟ್ರೈಟ್‌ಫಾರ್ವರ್ಡ್ ಹೀಗಾಗಿ ಬೋಲ್ಡ್ ಆಗಿ ಆನ್ಸರ್ ಮಾಡಿದ್ದಾರೆ. ಇನ್ನು ರಾಕಿಂಗ್‌ಸ್ಟಾರ್ ಯಶ್ ನಟನೆಯ ಮಲ್ಟಿಸ್ಟಾರ್ ಸಿನಿಮಾ ಟಾಕ್ಸಿಕ್‌ನಲ್ಲಿ ವಿಭಿನ್ನ ಪಾತ್ರದಲ್ಲಿ ನಟಿಸಿದ್ದಾರೆ. ಚಿರಂಜೀವಿ ಅವರ 157ನೇ ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಜೊತೆಗೆ ಮೋಹನ್ ಲಾಲ್, ಮುಮ್ಮುಟಿ ಅವರ ಚಿತ್ರದಲ್ಲೂ ನಯನತಾರಾ ಅಭಿನಯಿಸುತ್ತಿದ್ದಾರೆ.

# ವೈವಾಹಿಕ ಜೀವನಕ್ಕೆ ಕಾಲಿಟ್ಟ ನಿರ್ದೇಶಕ





ಅಯೋಗ್ಯ ಸಿನಿಮಾ ಮೂಲಕ ಕನ್ನಡ ಚಿತ್ರರಂಗದಲ್ಲಿ ನಿರ್ದೇಶಕರಾಗಿ ಗುರುತಿಸಿಕೊಂಡಿದ್ದ ಮಹೇಶ್‌ಕುಮಾರ್ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದಾರೆ. ಮೈಸೂರು ಮೂಲದ ಚೈತ್ರ ಎಂಬ ಹುಡುಗಿಯ ಕೈಹಿಡಿದಿದ್ದಾರೆ ನಿರ್ದೇಶಕ ಮಹೇಶ್‌ಕುಮಾರ್. ಮಾ.20 ರಂದು ಮೈಸೂರಿನಲ್ಲೇ ಕುಟುಂಬಸ್ಥರು, ಗುರು ಹಿರಿಯರು, ಆಪ್ತರ ಸಮ್ಮುಖದಲ್ಲಿ ವಿವಾಹವಾಗಿದ್ದಾರೆ. ಅಯೋಗ್ಯ, ಹಾಗೂ ಮದಗಜ ಸಿನಿಮಾಗಳ ನಿರ್ದೇಶನ ಮಾಡಿ ಖ್ಯಾತಿ ಪಡೆದಿರುವ ನಿರ್ದೇಶಕ ಮಹೇಶ್‌ಕುಮಾರ್. ತಮ್ಮ ಮೊದಲ ಸಿನಿಮಾದಿಂದಲೇ ಚಿತ್ರರಂಗದಲ್ಲಿ ಹೆಸರು ಗಳಿಸಿದ್ದರು. ಮಹೇಶ್‌ಕುಮಾರ್ ಮದುವೆಯ ಫೋಟೋ ನೋಡಿ ಆಪ್ತರು, ಕನ್ನಡ ಚಿತ್ರರಂಗದ ಗೆಳೆಯರು ಶುಭ ಹಾರೈಸಿದ್ದಾರೆ.

# ಭಾರತ ವಿರುದ್ಧ ಪಾಕಿಸ್ತಾನ್ ಮುಖಾಮುಖಿಗೆ ಡೇಟ್ ಫಿಕ್ಸ್

ಏಷ್ಯಾಕಪ್ ಟೂರ್ನಿಯ 17ನೇ ಆವೃತ್ತಿಗೆ ಸಿದ್ಧತೆಗಳು ಶುರುಆಗಿದೆ. ಅದರ ಮೊದಲ ಹೆಜ್ಜೆಯಾಗಿ ಇದೀಗ ಟೂರ್ನಿ ಆರಂಭಕ್ಕೆ ದಿನಾಂಕ ಫಿಕ್ಸ್ ಮಾಡಲಾಗಿದೆ.

ಅದರಂತೆ ಸೆಪ್ಟೆಂಬರ್ ಮೊದಲ ವಾರದಿಂದ ಏಷ್ಯಾಕಪ್ ಶುರುವಾಗುವುದು ಬಹುತೇಕ ಖಚಿತವಾಗಿದೆ. ಅಲ್ಲದೆ ಈ ಬಾರಿ 6 ತಂಡಗಳನ್ನು ಕಣಕ್ಕಿಳಿಸಲು ಎಸಿಸಿ ನಿರ್ಧರಿಸಿದೆ. ಏಷ್ಯಾಕಪ್ 2025 ಕ್ಕಾಗಿ ಏಷ್ಯನ್ ಕ್ರಿಕೆಟ್ ಕೌನ್ಸಿಲ್ ಕರುಡು ವೇಳಾಪಟ್ಟಿ ಸಿದ್ಧಪಡಿಸಿದೆ. ಈ ವೇಳಾಪಟ್ಟಿಯ ಪ್ರಕಾರ, ಸೆಪ್ಟೆಂಬರ್ 5 ರಿಂದ 17ನೇ ಆವೃತ್ತಿಯ ಏಷ್ಯಾಕಪ್ ಶುರುವಾಗಲಿದೆ. ಅಲ್ಲದೆ ಫೈನಲ್ ಪಂದ್ಯವು ಸೆ. 21 ರಂದು ಆಯೋಜಿಸಲು ನಿರ್ಧರಿಸಲಾಗಿದೆ.

ಇನ್ನು ಈ ಬಾರಿಯ ಟೂರ್ನಿಯನ್ನು ಯುಎಇನಲ್ಲಿ ಆಯೋಜಿಸುವ ಸಾಧ್ಯತೆಯಿದೆ. ಏಷ್ಯಾಕಪ್ 2025ರ ಆಯೋಜನೆಯ ಹಕ್ಕು ಭಾರತೀಯ ಕ್ರಿಕೆಟ್ ಮಂಡಳಿಯ ಕೈಯಲ್ಲಿದೆ. ಹೀಗಾಗಿ ಹೈಬ್ರಿಡ್ ಮಾದರಿಯಲ್ಲಿ ಪಂದ್ಯಾವಳಿಯನ್ನು ಆಯೋಜಿಸಬೇಕಾಗುತ್ತದೆ. ಏಕೆಂದರೆ ಭಾರತದಲ್ಲಿ ಪಂದ್ಯವಾಡಲು ಪಾಕಿಸ್ತಾನ್ ತಂಡ ಆಗಮಿಸುವುದಿಲ್ಲ.

ಈ ಹಿಂದೆ ಚಾಂಪಿಯನ್ಸ್ ಟ್ರೋಫಿ ಆಡಲು ಭಾರತ ತಂಡ ಪಾಕಿಸ್ತಾನಕ್ಕೆ ತೆರಳಿರಲಿಲ್ಲ. ಇದೇ ಕಾರಣದಿಂದಾಗಿ ಚಾಂಪಿಯನ್ಸ್ ಟ್ರೋಫಿ ಟೂರ್ನಿಯನ್ನು ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸಿತ್ತು.



**ಪಾಕ್ ಭಾರತದಲ್ಲಿ ಯಾವುದೇ ಪಂದ್ಯ ಆಡುವುದಿಲ್ಲ**

ಅದರಂತೆ ಟೀಮ್ ಇಂಡಿಯಾ ತನ್ನೆಲ್ಲಾ ಪಂದ್ಯಗಳನ್ನು ದುಬೈನಲ್ಲಿ ಆಡಿತ್ತು. ಚಾಂಪಿಯನ್ಸ್ ಟ್ರೋಫಿಯನ್ನು ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸುವ ಬಗ್ಗೆ ನಡೆದ ಐಸಿಸಿ ಸಭೆಯಲ್ಲಿ ಬಿಸಿಸಿಐ ಹಾಗೂ ಪಿಸಿಬಿ ನಡುವೆ ಒಪ್ಪಂದವಾಗಿ ಉಭಯ ತಂಡಗಳ ಪಂದ್ಯಗಳನ್ನು ಮುಂಬರುವ ದಿನಮಾನಗಳಲ್ಲಿ ತಟಸ್ಥ ಮೈದಾನದಲ್ಲಿ ಆಯೋಜಿಸಲು ಬೇಕಾಗುತ್ತದೆ.

ಅಂದರೆ ಭಾರತ ಪಾಕಿಸ್ತಾನದಲ್ಲಿ ಆಡದೇ ಇರುವ ತನಕ, ಪಾಕಿಸ್ತಾನ್ ತಂಡ ಭಾರತದಲ್ಲಿ ಯಾವುದೇ ಪಂದ್ಯವಾಡುವುದಿಲ್ಲ ಎಂದು ತಿಳಿಸಿದೆ. ಹೀಗಾಗಿ ಈ ಬಾರಿಯ ಏಷ್ಯಾಕಪ್ ಅನ್ನು ಬಿಸಿಸಿಐ ಹೈಬ್ರಿಡ್ ಮಾದರಿಯಲ್ಲೇ ಆಯೋಜಿಸಬೇಕಾಗುತ್ತದೆ.

# ಮೂರನೇ ಬಾರಿ ಪಂದ್ಯ ಗೆಲ್ಲಿಸಿದ ಶಿಮ್ರಾನ್ ಹೆಟ್ಮೆಯರ್



**ಬರೋಬ್ಬರಿ 239 ರನ್**

ಅಮೆರಿಕದಲ್ಲಿ ನಡೆಯುತ್ತಿರುವ ಮೇಜರ್ ಲೀಗ್ ಕ್ರಿಕೆಟ್ ಟಿ20 ಟೂರ್ನಿಯಲ್ಲಿ ಶಿಮ್ರಾನ್ ಹೆಟ್ಮೆಯರ್ ಸಿಡಿಲಬ್ಬರ ಮುಂದುವರೆದಿದೆ. ಕಳೆದ ಎರಡು ಪಂದ್ಯಗಳಲ್ಲಿ ವಿಸ್ಫೋಟಕ ಅರ್ಧಶತಕ ಸಿಡಿಸಿ ಮಿಂಚಿದ್ದ ಹೆಟ್ಮೆಯರ್ ಇದೀಗ ಮತ್ತೊಂದು ಅಜೇಯ ಹಾಫ್ ಸೆಂಚುರಿಯೊಂದಿಗೆ ಸಿಯಾಟಲ್ ಓರ್ಕಾಸ್ ತಂಡಕ್ಕೆ ಭರ್ಜರಿ ಗೆಲುವು ತಂದುಕೊಟ್ಟಿದ್ದಾರೆ. 5 ಮ್ಯಾಚ್ 5 ಸೋಲು ಮೂರು ಪಂದ್ಯ ಮೂರು ಗೆಲುವು ಈ ಗೆಲುವುಗಳ ರೂವಾರಿ ಶಿಮ್ರಾನ್ ಹೆಟ್ಮೆಯರ್.

ಈ ಬಾರಿಯ ಮೇಜರ್ ಲೀಗ್ ಕ್ರಿಕೆಟ್ ಟೂರ್ನಿಯಲ್ಲಿ ಸಿಯಾಟಲ್ ಓರ್ಕಾಸ್ ಆಡಿದ ಮೊದಲ 5 ಪಂದ್ಯಗಳಲ್ಲಿ ಸೋಲನುಭವಿಸಿತ್ತು.

ಆದರೆ ಕೊನೆಯ ಮೂರು ಪಂದ್ಯಗಳಲ್ಲಿ ಬ್ಯಾಕ್ ಟು ಬ್ಯಾಕ್ ಗೆಲುವು ದಾಖಲಿಸುವಲ್ಲಿ ಸಿಯಾಟಲ್ ಪಡೆ ಯಶಸ್ವಿಯಾಗಿದೆ. ಅದು ಕೂಡ ಶಿಮ್ರಾನ್ ಹೆಟ್ಮೆಯರ್ ಅವರ ವಿಸ್ಫೋಟಕ ಬ್ಯಾಟಿಂಗ್ ನೆರವಿನಿಂದ ಎಂಬುದು ವಿಶೇಷ. ಎಂಐ ನ್ಯೂಯಾರ್ಕ್ ವಿರುದ್ಧದ ಪಂದ್ಯದಲ್ಲಿ 238 ರನ್‌ಗಳನ್ನು ಚೇಸ್ ಮಾಡುವ ಮೂಲಕ ಸಿಯಾಟಲ್ ಓರ್ಕಾಸ್ ತಂಡವು ದಾಖಲೆಯ ಜಯ ಸಾಧಿಸಿತ್ತು.

ಈ ಗೆಲುವಿನ ರೂವಾರಿ ಎಡಗೈ ದಾಂಡಿಗ ಶಿಮ್ರಾನ್ ಹೆಟ್ಮೆಯರ್. ಈ ಪಂದ್ಯದಲ್ಲಿ 40 ಎಸೆತಗಳನ್ನು ಎದುರಿಸಿದ ಹೆಟ್ಮೆಯರ್ 9 ಭರ್ಜರಿ ಸಿಕ್ಸ್ ಹಾಗೂ 5 ಫೋರ್‌ಗಳೊಂದಿಗೆ ಅಜೇಯ 97 ರನ್ ಬಾರಿಸಿದ್ದರು. ಈ ಮೂಲಕ ಕೊನೆಯ ಎಸೆತದಲ್ಲಿ ಸಿಕ್ಸ್ ಸಿಡಿಸಿ ಸಿಯಾಟಲ್ ಓರ್ಕಾಸ್ ತಂಡಕ್ಕೆ ರೋಚಕ ಗೆಲುವು ತಂದು ಕೊಟ್ಟಿದ್ದರು. ಇದಾದ ಬಳಿಕ ಲಾಸ್ ಏಂಜಲೀಸ್ ನೈಟ್ ರೈಡರ್ಸ್ ವಿರುದ್ಧದ ಪಂದ್ಯದಲ್ಲಿ ಸಿಯಾಟಲ್ ಓರ್ಕಾಸ್ ತಂಡವು 203 ರನ್‌ಗಳ ಗುರಿ ಬೆನ್ನತ್ತಿ ಭರ್ಜರಿ ಗೆಲುವು ತನ್ನದಾಗಿಸಿಕೊಂಡಿತು. ವಿಶೇಷ ಎಂದರೆ ಈ ಪಂದ್ಯದಲ್ಲೂ ಗೆಲುವಿನ ರೂವಾರಿಯಾಗಿ ಹೊರಹೊಮ್ಮಿದ್ದು ಶಿಮ್ರಾನ್ ಹೆಟ್ಮೆಯರ್.

ಈ ಪಂದ್ಯದಲ್ಲಿ 5ನೇ ಕ್ರಮಾಂಕದಲ್ಲಿ ಬ್ಯಾಟ್ ಬೀಸಿದ ಹೆಟ್ಮೆಯರ್ 26 ಎಸೆತಗಳಲ್ಲಿ 6 ಸಿಕ್ಸ್ ಹಾಗೂ 4 ಫೋರ್‌ಗಳೊಂದಿಗೆ ಅಜೇಯ 64 ರನ್ ಬಾರಿಸಿ ಕೊನೆಯ ಓವರ್‌ನಲ್ಲಿ ಸಿಯಾಟಲ್ ಪಡೆಗೆ ಗೆಲುವು ತಂದುಕೊಟ್ಟಿದ್ದರು. ಇದೀಗ ಬಲಿಷ್ಠ ಪಡೆ ಸ್ಯಾನ್ ಫ್ರಾನ್ಸಿಸ್ಕೋ ಯುನಿಕಾರ್ನ್ಸ್ ವಿರುದ್ಧದ ಪಂದ್ಯದಲ್ಲೂ ಸಿಯಾಟಲ್ ಓರ್ಕಾಸ್ ತಂಡ ಗೆಲುವು ದಾಖಲಿಸಿದೆ. ಈ ಪಂದ್ಯದಲ್ಲೂ ಸ್ಫೋಟಕ ಬ್ಯಾಟಿಂಗ್ ಪ್ರದರ್ಶಿಸಿ ಶಿಮ್ರಾನ್ ಹೆಟ್ಮೆಯರ್ ಗೆಲುವಿನ ರೂವಾರಿ ಎನಿಸಿಕೊಂಡಿದ್ದಾರೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಸ್ಯಾನ್ ಫ್ರಾನ್ಸಿಸ್ಕೋ ಯುನಿಕಾರ್ನ್ಸ್ ತಂಡವು 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 168 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ಸಿಯಾಟಲ್ ಓರ್ಕಾಸ್ ತಂಡವು ಉತ್ತಮ ಆರಂಭ ಪಡೆದಿರಲಿಲ್ಲ. ಆದರೆ ಮಧ್ಯಮ ಕ್ರಮಾಂಕದಲ್ಲಿ ಕಣಕ್ಕಿಳಿದ ಶಿಮ್ರಾನ್ ಹೆಟ್ಮೆಯರ್ ಮತ್ತೊಮ್ಮೆ ಸ್ಫೋಟಕ ಬ್ಯಾಟಿಂಗ್‌ನೊಂದಿಗೆ ಅಬ್ಬರಿಸಿದರು. ಕೇವಲ 37 ಎಸೆತಗಳನ್ನು ಎದುರಿಸಿದ ಹೆಟ್ಮೆಯರ್ 7 ಭರ್ಜರಿ ಸಿಕ್ಸ್ ಹಾಗೂ 4 ಫೋರ್‌ಗಳೊಂದಿಗೆ ಅಜೇಯ 78 ರನ್ ಬಾರಿಸಿದರು.

ಈ ಮೂಲಕ 19.3 ಓವರ್‌ಗಳಲ್ಲಿ ತಂಡವನ್ನು ಗುರಿ ಮುಟ್ಟಿಸುವ ಮೂಲಕ ಶಿಮ್ರಾನ್ ಹೆಟ್ಮೆಯರ್ ಸಿಯಾಟಲ್ ಓರ್ಕಾಸ್ ತಂಡಕ್ಕೆ ಮೂರನೇ ಗೆಲುವು ತಂದುಕೊಟ್ಟರು.

ವಿಶೇಷ ಎಂದರೆ ಈ ಬಾರಿ ಸಿಯಾಟಲ್ ಓರ್ಕಾಸ್ ಗೆದ್ದಿರುವ ಮೂರು ಪಂದ್ಯಗಳಲ್ಲೂ ಪಂದ್ಯ ಶ್ರೇಷ್ಠ ಪ್ರಶಸ್ತಿ ಲಭಿಸಿದ್ದು ಶಿಮ್ರಾನ್ ಹೆಟ್ಮೆಯರ್ ಅವರಿಗೆ. ಅದರಲ್ಲೂ ಕಳೆದ ಮೂರು ಮ್ಯಾಚ್‌ಗಳಲ್ಲಿ 103 ಎಸೆತಗಳನ್ನು ಎದುರಿಸಿರುವ ಹೆಟ್ಮೆಯರ್ 22 ಭರ್ಜರಿ ಸಿಕ್ಸ್ ಹಾಗೂ 13 ಫೋರ್‌ಗಳೊಂದಿಗೆ ಒಟ್ಟು 239 ರನ್ ಕಲೆಹಾಕಿದ್ದಾರೆ. ಈ ಮೂಲಕ ಮೇಜರ್ ಲೀಗ್ ಕ್ರಿಕೆಟ್ ಟೂರ್ನಿಯಲ್ಲಿ ಸಂಚಲನ ಸೃಷ್ಟಿಸಿದ್ದಾರೆ.

# ಐಸಿಸಿ ರ್‍ಯಾಂಕಿಂಗ್‌ನಲ್ಲಿ ಸ್ಮೃತಿ ಮಂಧಾನ 1 ಟು 3



ಇಂಟರ್‌ನ್ಯಾಷನಲ್ ಕ್ರಿಕೆಟ್ ಕೌನ್ಸಿಲ್ (ಐಸಿಸಿ) ಮಹಿಳಾ ಬ್ಯಾಟರ್‌ಗಳ ನೂತನ ಶ್ರೇಯಾಂಕ ಪಟ್ಟಿಯನ್ನು ಪ್ರಕಟಿಸಿದೆ. ಈ ಪಟ್ಟಿಯಲ್ಲಿ ಕಾಣಿಸಿಕೊಂಡ ಟೀಮ್ ಇಂಡಿಯಾದ ಏಕೈಕ ಬ್ಯಾಟರ್ ಸ್ಮೃತಿ ಮಂಧಾನ. ಭಾರತ ತಂಡದ ಆರಂಭಿಕ ಆಟಗಾರ್ತಿ ಟಿ20 ಹಾಗೂ ಏಕದಿನ ಬ್ಯಾಟರ್‌ಗಳ ಪಟ್ಟಿಯಲ್ಲಿ ಸ್ಥಾನ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

ಐಸಿಸಿ ಮಹಿಳಾ ಬ್ಯಾಟರ್‌ಗಳ ನೂತನ ರಯಾಂಕಿಂಗ್‌ಪಟ್ಟಿ ಪ್ರಕಟಿಸಿದೆ.

ಈ ಶ್ರೇಯಾಂಕ ಪಟ್ಟಿಯಲ್ಲಿ ಟೀಮ್ ಇಂಡಿಯಾದ ಸ್ಟಾರ್ ಆಟಗಾರ್ತಿ ಸ್ಮೃತಿ ಮಂಧಾನ ಟಾಪ್-3 ನಲ್ಲಿ ಕಾಣಿಸಿಕೊಂಡಿದ್ದಾರೆ. ಅಂದರೆ ಟಿ20 ಹಾಗೂ ಏಕದಿನ ಬ್ಯಾಟರ್‌ಗಳ ಪಟ್ಟಿಯಲ್ಲೂ ಅಗ್ರ ಮೂರಲ್ಲಿ ಕಾಣಿಸಿಕೊಂಡ ಏಕೈಕ ಆಟಗಾರ್ತಿ ಸ್ಮೃತಿ ಮಂಧಾನ.

ಇಂಗ್ಲೆಂಡ್ ವಿರುದ್ಧದ ಮೊದಲ ಟಿ20 ಪಂದ್ಯದಲ್ಲಿ ಭರ್ಜರಿ ಶತಕ ಸಿಡಿಸಿದ ಸ್ಮೃತಿ ಮಂಧಾನ ಇದೀಗ ಮಹಿಳಾ ಟಿ20 ಬ್ಯಾಟರ್‌ಗಳ ಶ್ರೇಯಾಂಕ ಪಟ್ಟಿಯಲ್ಲಿ ಸ್ಮೃತಿ ಮೂರನೇ ಸ್ಥಾನಕ್ಕೇರಿದ್ದಾರೆ. ಒಟ್ಟು 771 ಅಂಕಗಳನ್ನು ಪಡೆದಿರುವ ಸ್ಮೃತಿ ಮುಂದಿನ ಮ್ಯಾಚ್‌ಗಳಲ್ಲಿ ಭರ್ಜರಿ ಪ್ರದರ್ಶನ ನೀಡಿದರೆ ದ್ವಿತೀಯ ಸ್ಥಾನಕ್ಕೇರಬಹುದು.

ಮತ್ತೊಂದೆಡೆ ಏಕದಿನ ರಯಾಂಕಿಂಗ್ ಪಟ್ಟಿಯಲ್ಲಿ ಸ್ಮೃತಿ ಮಂಧಾನ ಅಗ್ರಸ್ಥಾನದಲ್ಲಿದ್ದಾರೆ. ಒಟ್ಟು 727 ಅಂಕಗಳನ್ನು ಪಡೆದಿರುವ ಟೀಮ್ ಇಂಡಿಯಾ ಆರಂಭಿಕ ಆಟಗಾರ್ತಿ ಅಗ್ರಸ್ಥಾನದಲ್ಲಿದ್ದರೆ, ಸೌತ್ ಆಫ್ರಿಕಾದ ಲಾರಾ ವೋಲ್ವಾರ್ಡ್ 725 ಅಂಕಗಳೊಂದಿಗೆ ದ್ವಿತೀಯ ಸ್ಥಾನದಲ್ಲಿ ಕಾಣಿಸಿಕೊಂಡಿದ್ದಾರೆ.

ವಿಶೇಷ ಎಂದರೆ ಸ್ಮೃತಿ ಮಂಧಾನ ಅವರನ್ನು ಹೊರತುಪಡಿಸಿ ಟೀಮ್ ಇಂಡಿಯಾದ ಯಾವುದೇ ಬ್ಯಾಟರ್ ಏಕದಿನ ಹಾಗೂ ಟಿ20 ಟಾಪ್-10 ಪಟ್ಟಿಯಲ್ಲಿ ಕಾಣಿಸಿಕೊಂಡಿಲ್ಲ. ಈ ಮೂಲಕ ನೂತನ ಶ್ರೇಯಾಂಕ ಪಟ್ಟಿಯಲ್ಲಿ ಪಾರುಪತ್ಯ ಮೆರೆದ ಭಾರತದ ಏಕೈಕ ಬ್ಯಾಟರ್ ಎಂಬ ಹೆಗ್ಗಳಿಕೆಯನ್ನು ಸ್ಮೃತಿ ತಮ್ಮದಾಗಿಸಿಕೊಂಡಿದ್ದಾರೆ. ಸದ್ಯ ಇಂಗ್ಲೆಂಡ್ ವಿರುದ್ಧ ಟಿ20 ಸರಣಿ ಆಡುತ್ತಿರುವ ಸ್ಮೃತಿ ಮಂಧಾನ ಮುಂದಿನ ಮೂರು ಮ್ಯಾಚ್‌ಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದರೆ, ಆಸ್ಟ್ರೇಲಿಯಾದ ಬೆತ್ ಮೂನಿ (794) ಹಾಗೂ ವೆಸ್ಟ್ ಇಂಡೀಸ್‌ನ ಹೇಲಿ ಮ್ಯಾಥ್ಯೂಸ್ (774) ಅನ್ನು ಹಿಂದಿಕ್ಕಿ ಮೊದಲ ಸ್ಥಾನಕ್ಕೇರಬಹುದು.

# ತಿಂಗಳಿಗೆ 4 ಲಕ್ಷ ರೂ. ಜೀವನಾಂಶ ನೀಡಲು ಶಮಿಗೆ ಆದೇಶ



**ಮ್ಯಾಚ್ ಫಿಕ್ಸಿಂಗ್ ಆರೋಪ ಮಾಡಿದ್ದ ಹಸಿನ್**

ಟೀಮ್ ಇಂಡಿಯಾ ಶಮಿ ಫಿಟ್‌ನೆಸ್ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಇದೇ ಕಾರಣದಿಂದಾಗಿ ಇಂಗ್ಲೆಂಡ್ ವಿರುದ್ಧದ 5 ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ಅವರು ಕಾಣಿಸಿಕೊಳ್ಳುತ್ತಿಲ್ಲ. ಅತ್ತ ಫಿಟ್‌ನೆಸ್‌ನತ್ತ ಗಮನ ಕೇಂದ್ರೀಕರಿಸಿರುವ ಶಮಿ ಮುಂಬರುವ ಸರಣಿಗಳ ಮೂಲಕ ಕಂಬ್ಯಾಕ್ ಮಾಡುವ ವಿಶ್ವಾಸದಲ್ಲಿದ್ದಾರೆ.

ಟೀಮ್ ಇಂಡಿಯಾ ವೇಗಿ ಮೊಹಮ್ಮದ್ ಶಮಿ ಮತ್ತೆ ಸುದ್ದಿಯಲ್ಲಿದ್ದಾರೆ. ಆದರೆ ಈ ಬಾರಿ ಅವರು ಸುದ್ದಿಯಲ್ಲಿರುವುದು ಆಟದಿಂದಲ್ಲ ಬದಲಾಗಿ ವೈಯುಕ್ತಿಕ ಕಾರಣಗಳಿಂದ. ಅದು ಕೂಡ ಕೋರ್ಟ್ ಆದೇಶದೊಂದಿಗೆ. ಮೊಹಮ್ಮದ್ ಶಮಿ ತನ್ನ ಪರಿತ್ಯಕ್ತ ಪತ್ನಿ ಹಸಿನ್ ಜಹಾನ್ ಮತ್ತು ಮಗಳು ಐರಾಗೆ ತಿಂಗಳಿಗೆ 4 ಲಕ್ಷ ರೂಪಾಯಿ ಜೀವನಾಂಶ ನೀಡಬೇಕೆಂದು ಕೊಲ್ಕತ್ತಾ ಹೈಕೋರ್ಟ್ ಆದೇಶಿಸಿದೆ. ಮೊಹಮ್ಮದ್ ಶಮಿ 2014 ರಲ್ಲಿ ಹಸಿನ್ ಜಹಾನ್ ಅವರನ್ನು ವಿವಾಹವಾಗಿದ್ದರು. 2015 ರಲ್ಲಿ ಈ ದಂಪತಿಗೆ ಮಗಳು ಜನಿಸಿದ್ದರು.

ಆದರೆ 2018 ರಲ್ಲಿ ಶಮಿ ವಿರುದ್ಧ ಕೌಟುಂಬಿಕ ಹಿಂಸೆ, ವರದಕ್ಷಿಣೆ ಕಿರುಕುಳ ಮತ್ತು ಮ್ಯಾಚ್ ಫಿಕ್ಸಿಂಗ್‌ನಂತಹ ಗಂಭೀರ ಆರೋಪಗಳನ್ನು ಮಾಡುವ ಮೂಲಕ ಹಸಿನ್ ಜಹಾನ್ ಸುದ್ದಿಯಾಗಿದ್ದರು. ಅಷ್ಟೇ ಅಲ್ಲದೆ ಶಮಿ ಮತ್ತು ಅವರ ಕುಟುಂಬದ ವಿರುದ್ಧ ಹಸಿನ್ ಕೋಲ್ಕತ್ತಾದ ಜಾದವ್‌ಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಇದೇ ವೇಳೆ ಮಾಸಿಕ 10 ಲಕ್ಷ ರೂ. ಜೀವನಾಂಶವನ್ನು ಸಹ ಕೋರಿ ಕೋರ್ಟ್ ಮೆಟ್ಟಿಲೇರಿದ್ದರು. ಇದೀಗ ಈ ಪ್ರಕರಣದ ತೀರ್ಪು ಬಂದಿದ್ದು, ತನ್ನಿಂದ ದೂರವಾಗಿರುವ ಪತ್ನಿ ಹಸಿನ್ ಜಹಾನ್ ಮತ್ತು ಅವರ ಮಗಳಿಗೆ ತಿಂಗಳಿಗೆ 4 ಲಕ್ಷ ರೂಪಾಯಿ ಜೀವನಾಂಶ ನೀಡುವಂತೆ ಕೊಲ್ಕತ್ತಾ ಹೈಕೋರ್ಟ್ ಆದೇಶಿಸಿದೆ. ಈ ಮೊತ್ತವು ಕಳೆದ ಏಳು ವರ್ಷಗಳವರೆಗೆ ಅನ್ವಯವಾಗುತ್ತದೆ. ಅಂದರೆ ಶಮಿ ಈ ಅವಧಿಗೆ ಬಾಕಿ ಹಣವನ್ನು ಸಹ ಪಾವತಿಸಬೇಕಾಗುತ್ತದೆ. ಅಂದರೆ ಅವರು ಹಸಿನ್ ಜಹಾನ್ ಗೆ 3 ಕೋಟಿ ರೂಪಾಯಿಗಳಿಗಿಂತ ಹೆಚ್ಚು ಹಣವನ್ನು ಪಾವತಿಸಬೇಕಾಗುತ್ತದೆ. ಕೋಲ್ಕತ್ತಾ ಹೈಕೋರ್ಟ್‌ನ ನ್ಯಾಯಮೂರ್ತಿ ಅಜಯ್ ಕುಮಾರ್ ಮುಖರ್ಜಿ ಅವರ ಪೀಠವು ಜುಲೈ 1, 2025 ರಂದು ಈ ತೀರ್ಪು ನೀಡಿದ್ದು. ಶಮಿ ತನ್ನ ಪತ್ನಿ ಹಸಿನ್ ಜಹಾನ್‌ಗೆ ಪ್ರತಿ ತಿಂಗಳು 1.5 ಲಕ್ಷ ರೂ. ಮತ್ತು ಮಗಳು ಐರಾಗೆ 2.5 ಲಕ್ಷ ರೂ. ಪಾವತಿಸಬೇಕಾಗುತ್ತದೆ ಎಂದು ನ್ಯಾಯಾಲಯ ತನ್ನ ಆದೇಶದಲ್ಲಿ ತಿಳಿಸಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966